


ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಏಪ್ರಿಲ್ 15 ಮಂಗಳವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 355 | ಪುಟಗಳು: 12

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಲಾರಿ ಮುಷ್ಕರ ಆರಂಭ

ಲಾರಿ ಮಾಲೀಕರ ಬೇಡಿಕೆ

- ಡೀಸೆಲ್ ದರ ಇಳಿಕೆ ಮಾಡಬೇಕು
- ಟೋಲ್ ಸಂಗ್ರಹ ಕೈ ಬಿಡಬೇಕು
- ಆರ್‌ಟಿಓ ಬಾರ್ಡರ್ ಚೆಕ್‌ಪೋಸ್ಟ್ ತೆಗೆಯಬೇಕು.
- ಎಫ್‌ಸಿ ಶುಲ್ಕ ಕಡಿಮೆ ಮಾಡಬೇಕು.
- ಸರಕು ಸಾಗಣೆ ವಾಹನ ನಿರ್ಬಂಧ ಹಿಂಪಡೆಯಬೇಕು.



ಮೈಸೂರಿನ ಲಾರಿ ಮಾಲೀಕರು ಮುಷ್ಕರದ ಭಿತ್ತಿಪತ್ರ ಪ್ರದರ್ಶಿಸಿದರು.

ಮುಷ್ಕರದಿಂದ ಏನೇನು ವ್ಯತ್ಯಯ

- ತರಕಾರಿ, ಹಣ್ಣುಗಳ ಪೂರೈಕೆಯಲ್ಲಿ ವ್ಯತ್ಯಯ ಸಾಧ್ಯತೆ.
- ಏರ್‌ಪೋರ್ಟ್ ಟ್ಯಾಕ್ಸಿ ಸಿಗೋದು ಡೌಟ್.
- ಟೂರಿಸ್ಟ್ ಟ್ಯಾಕ್ಸಿ ಸಂಚಾರದಲ್ಲಿ ವ್ಯತ್ಯಯ ಸಾಧ್ಯತೆ.
- ಜಲ್ಲಿ ಕಲ್ಲು, ಮರಳು ಲಾರಿ ಓಡಾಡಲ್ಲ.
- ಡಿಪೋಗಳಿಗೆ ಪಡಿತರ ಆಹಾರ ಧಾನ್ಯಗಳ ಪೂರೈಕೆಯಿಲ್ಲ.
- ಎಲ್‌ಪಿಜಿ ಸಿಲಿಂಡರ್ ಪೂರೈಕೆ ಸಾಧ್ಯತೆ ಅನುಮಾನ.
- ಕೆಲವು ಬಂಕ್‌ಗಳಲ್ಲಿ ಪೆಟ್ರೋಲ್, ಡೀಸೆಲ್ ವ್ಯತ್ಯಯ ಸಾಧ್ಯತೆ.

ಬೆಂಗಳೂರು, ಏ.14– ಡೀಸೆಲ್ ದರ ಏರಿಕೆ, ಟೋಲ್ ಶುಲ್ಕ ಹೆಚ್ಚಳ, ಆರ್‌ಟಿಓ ಅಧಿಕಾರಿಗಳ ಕಿರುಕುಳ ಸೇರಿದಂತೆ ಹಲವು ವಿಚಾರಗಳನ್ನು ಮುಂದಿಟ್ಟುಕೊಂಡು ಇಂದು (ಏ.14) ಮಧ್ಯರಾತ್ರಿಯಿಂದಲೇ ಅನಿರ್ದಿಷ್ಟಾವಧಿ ಮುಷ್ಕರ ಆರಂಭವಾಗಿದೆ.

ಸುಮಾರು 6 ಲಕ್ಷಕ್ಕೂ ಹೆಚ್ಚು ಲಾರಿಗಳು ಸಂಚಾರ ಬಂದ್ ಮಾಡಿದ್ದು, ಹಲವು ಸೇವೆಗಳಿಗೆ ಬಿಸಿ ತಟ್ಟಲಿದೆ. 6 ತಿಂಗಳಲ್ಲಿ ಸರ್ಕಾರ 2 ಬಾರಿ ಡೀಸೆಲ್ ದರ ಹೆಚ್ಚಿಸಿದೆ. ಡೀಸೆಲ್ ದರ ಇಳಿಸಬೇಕು ಹಾಗೂ ಹಲವು ಬೇಡಿಕೆಗಳನ್ನು ಈಡೇರಿಸಬೇಕೆಂದು ಸರ್ಕಾರಕ್ಕೆ ಲಾರಿ ಮಾಲೀಕರು ಏ.14ರ ಗಡುವು ಕೊಟ್ಟಿದ್ದರು. ಆದರೆ ಸರ್ಕಾರ ಇದಕ್ಕೆ ಸ್ಪಂದಿಸಿಲ್ಲ. ಹೀಗಾಗಿ ಇಂದು ಮಧ್ಯರಾತ್ರಿಯಿಂದಲೇ ಮುಷ್ಕರ ಆರಂಭಿಸಲಾಗಿದೆ. ಮುಷ್ಕರದ ಪರಿಣಾಮವಾಗಿ ಮಂಗಳವಾರದಿಂದ ಅನೇಕ ಸೇವೆಗಳಲ್ಲಿ ವ್ಯತ್ಯಯ ಆಗಲಿದೆ. ಜಲ್ಲಿಕಲ್ಲು, ■6ನೇ ಪುಟಕ್ಕೆ

ಮೈಸೂರಲ್ಲಿ ಲಾರಿ ಸಂಚಾರ ಸ್ಥಗಿತ

ಮೈಸೂರು, ಏ.14(ಆರ್‌ಕೆ)–ಡೀಸೆಲ್ ಬೆಲೆ ಏರಿಕೆ ಖಂಡಿಸಿ ಇಂದು ಮಧ್ಯರಾತ್ರಿಯಿಂದ ರಾಜ್ಯದಾದ್ಯಂತ ಅನಿರ್ದಿಷ್ಟಾವಧಿ ಲಾರಿ ಮುಷ್ಕರ ಆರಂಭವಾಗಿದೆ.

ಕರ್ನಾಟಕ ರಾಜ್ಯ ಲಾರಿ ಮಾಲೀಕರು ಮತ್ತು ಏಜೆಂಟರ ಒಕ್ಕೂಟದ ಕರೆ ಮೇರೆಗೆ ರಾಜ್ಯಾದ್ಯಂತ ಎಲ್ಲಾ ಜಿಲ್ಲೆಗಳ ಲಾರಿ ಮಾಲೀಕರ ಸಂಘದ ಪದಾಧಿಕಾರಿಗಳು ಲಾರಿ ಮುಷ್ಕರ ಆರಂಭ ಮಾಡಿದ್ದು, ಎಲ್ಲಾ ಬಗೆಯ ಸರಕು ಸಾಗಣೆ ವಾಹನಗಳು ಸೋಮವಾರ ಮಧ್ಯರಾತ್ರಿಯಿಂದ ಕೆಲಸ ಸ್ಥಗಿತಗೊಳಿಸಿದ್ದಾರೆ.

ಮುಷ್ಕರಕ್ಕೆ ಮೈಸೂರು ಜಿಲ್ಲಾ ಲಾರಿ ಮಾಲೀಕರ ಸಂಘವೂ ಬೆಂಬಲ ನೀಡಿದ್ದು, ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ಒಟ್ಟು 9,000 ಲಾರಿಗಳು ಕಾರ್ಯ ಸ್ಥಗಿತಗೊಳಿಸಿವೆ ಎಂದು ಸಂಘದ ಅಧ್ಯಕ್ಷ ಬಿ. ಕೋದಂಡರಾಮು ತಿಳಿಸಿದ್ದಾರೆ.

ಮುಷ್ಕರದಿಂದಾಗಿ ದೇಶದಾದ್ಯಂತ ವಿವಿಧ ರಾಜ್ಯಗಳಿಂದ ಬರುತ್ತಿದ್ದ ಟ್ರಕ್‌ಗಳು ಕರ್ನಾಟಕ ರಾಜ್ಯ ಪ್ರವೇಶಿಸದಂತೆ ತಡೆಯಲಾಗುವುದು. ನಾಳೆ (ಏ.15) ಮೈಸೂರಿನಲ್ಲಿ ಪ್ರತಿಭಟನೆ ನಡೆಸಿ ಸರ್ಕಾರದ ಬೆಲೆ ಏರಿಕೆ ಕ್ರಮವನ್ನು ಉಗ್ರವಾಗಿ ಖಂಡಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

ಪ್ರತಿಭಟನೆ ಹಿನ್ನೆಲೆಯಲ್ಲಿ ಮದ್ಯ, ಆಹಾರ ಧಾನ್ಯ ಕೈಗಾರಿಕಾ ಉತ್ಪನ್ನ, ಕಟ್ಟಡ ಸಾಮಗ್ರಿ ಸಾಗಣೆ ಮೇಲೆ ವ್ಯತಿರಿಕ್ತ ಪರಿಣಾಮ ಬೀರಲಿದ್ದು, ಸರ್ಕಾರ ಈ ಬಗ್ಗೆ ಗಂಭೀರ ಚಿಂತನೆ ಮಾಡಿ ಸ್ಪಂದಿಸಬೇಕು. ಡೀಸೆಲ್ ಬೆಲೆ ಇಳಿಸುವವರೆಗೂ ಮುಷ್ಕರ ಮುಂದುವರೆಯಲಿದೆ ಎಂದು ಕೋದಂಡರಾಮು ತಿಳಿಸಿದ್ದಾರೆ.

ಚಾಮರಾಜನಗರದಲ್ಲಿ ಮೈಸೂರು ರಾಜಮನೆತನದ ಭೂಮಿ ವಿವಾದ

ಯಾವ ಗ್ರಾಮಸ್ಥರನ್ನೂ ಒಕ್ಕಲೆಬ್ಬಿಸಲ್ಲ

ರಾಜಮಾತೆ ಪ್ರಮೋದಾದೇವಿ ಒಡೆಯರ್ ಅಭಯ



ಮೈಸೂರು ಅರಮನೆಯ ತಮ್ಮ ನಿವಾಸದಲ್ಲಿ ಪ್ರಮೋದಾದೇವಿ ಒಡೆಯರ್ ಅವರು ಸೋಮವಾರ ಸುದ್ದಿಗೋಷ್ಠಿ ನಡೆಸಿದರು.

ಮೈಸೂರು, ಏ.14(ಆರ್‌ಕೆ)– ಚಾಮರಾಜನಗರ ಜಿಲ್ಲೆಯಲ್ಲಿ ತಮ್ಮ ಒಡೆತನದ ಭೂಮಿಯಲ್ಲಿ ಬೇಸಾಯ ಮಾಡುತ್ತಿರುವ ರೈತರು ಹಾಗೂ ಮನೆ ನಿರ್ಮಿಸಿಕೊಂಡು ವಾಸಿಸುತ್ತಿರುವ ಗ್ರಾಮಸ್ಥರನ್ನು ಒಕ್ಕಲೆಬ್ಬಿಸುವುದಿಲ್ಲ ಎಂದು ಮೈಸೂರು ರಾಜಮಾತೆ ಪ್ರಮೋದಾದೇವಿ ಒಡೆಯರ್ ಅವರು ಇಂದಿಲ್ಲಿ ತಿಳಿಸಿದ್ದಾರೆ.

ಮೈಸೂರಿನ ಅರಮನೆಯ ತಮ್ಮ ನಿವಾಸದಲ್ಲಿ ಈ ಕುರಿತು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಾಮರಾಜನಗರ ಜಿಲ್ಲೆಯಲ್ಲಿ ರಾಜಮನೆತನಕ್ಕೆ ಸೇರಿದ ಸುಮಾರು 5,135 ಎಕರೆ ಭೂಮಿಯನ್ನು ರಾಜವಂಶಸ್ಥರು ಮರಳಿ ಪಡೆಯುತ್ತಾರೆಂಬ ಆತಂಕ ಗ್ರಾಮಸ್ಥರು ಹಾಗೂ ರೈತರಲ್ಲಿ ಉಂಟಾಗಿರುವುದರಿಂದ ಸ್ಪಷ್ಟೀಕರಣ ನೀಡಿದರು.

ಗ್ರಾಮಸ್ಥರು ಆತಂಕ ಪಡುವ ಅಗತ್ಯವಿಲ್ಲ. ಚಾಮರಾಜನಗರ ಜಿಲ್ಲಾಧಿಕಾರಿಗಳಿಗೆ ನಾವು 2014ರಲ್ಲೇ ಭೂಮಿಗೆ ಸಂಬಂಧಪಟ್ಟ ದಾಖಲೆಗಳನ್ನು ಕೊಟ್ಟಿದ್ದೆವು. ಈಗಿನ ಜಿಲ್ಲಾಧಿಕಾರಿಗಳಿಗೆ ಮಾಹಿತಿ ಇಲ್ಲದಿರಬಹುದು. 1951ರಲ್ಲಿ ಸರ್ಕಾರದ ಕಾರ್ಯದರ್ಶಿಯಾಗಿದ್ದ ಶ್ರೀನಿವಾಸ್ ಸಹಿ ಇರುವ ಪತ್ರದಲ್ಲಿ ನಮ್ಮ ಆಸ್ತಿ ಪಟ್ಟಿಯಲ್ಲಿ 4,500 ಎಕರೆ ಭೂಮಿ ಇರುವ ಬಗ್ಗೆ ಉಲ್ಲೇಖವಿದೆ ಎಂದು ಅವರು ದಾಖಲೆ ಪ್ರದರ್ಶಿಸಿದರು. ಸದರಿ ಭೂಮಿ ನಮಗೆ ಸೇರಿದ್ದರೂ, ಅಥವಾ ಅಧಿಕೃತವಾಗಿ ಮಂಜೂರು ಮಾಡಿಕೊಟ್ಟಿದ್ದರೂ, ಯಾರನ್ನೂ ಸ್ಥಳಾಂತರಗೊಳಿಸುವುದಾಗಲೀ, ಒಕ್ಕಲೆಬ್ಬಿಸುವ ಕೆಲಸವನ್ನು ನಾವು ಮಾಡುವುದಿಲ್ಲ. ಯಥಾಸ್ಥಿತಿಯಲ್ಲೇ ಮುಂದುವರಿಯಬಹುದು ಎಂದು ಪ್ರಮೋದಾದೇವಿ ಒಡೆಯರ್ ತಿಳಿಸಿದರು.

ಮಾರ್ಚ್ 20ರಂದು ಚಾಮರಾಜನಗರ ಜಿಲ್ಲಾಧಿಕಾರಿ, ಉಪ ವಿಭಾಗಾಧಿಕಾರಿ, ತಹಶೀಲ್ದಾರ್, ಭೂ ದಾಖಲೆ ಉಪ ನಿರ್ದೇಶಕರು ಮತ್ತು ಸಹಾಯಕ ನಿರ್ದೇಶಕರಿಗೆ ಬರೆದ ಪತ್ರದಲ್ಲಿ ಮೈಸೂರು ಮಹಾರಾಜರಿಗೆ ಸೇರಿದ್ದು ಎನ್ನಲಾದ ಈ ಆಸ್ತಿಗಳ ಖಾತೆಗಳನ್ನು ವರ್ಗಾಯಿಸುವಂತೆ ಅವರು ಮನವಿ ಮಾಡಿದ್ದರು.

ಜಿಲ್ಲೆಯ ಹಲವು ಗ್ರಾಮಗಳು ಮತ್ತು ಸರ್ವೆ ನಂಬರ್‌ಗಳ ಜಮೀನುಗಳು ಒಳಗೊಂಡಿದ್ದು, ■6ನೇ ಪುಟಕ್ಕೆ

ನಾಳೆ, ನಾಳಿದ್ದು ಸಿಇಟಿ

ಕ್ಯಾಮರಾ ಕಣ್ಗಾವಲಿನಲ್ಲಿ ಸಿಇಟಿ: ಅಕ್ರಮ ತಡೆಯಲು ವೆಬ್ ಕಾಸ್ಟಿಂಗ್



ಬೆಂಗಳೂರು, ಏ.14– ಎಂಜಿನಿಯರಿಂಗ್ ಸೇರಿದಂತೆ ವಿವಿಧ ವೃತ್ತಿಪರ ಪದವಿ ಕೋರ್ಸ್‌ಗಳ ಪ್ರವೇಶಕ್ಕೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ನಡೆಸುವ 2025ನೇ ಸಾಲಿನ ಸಾಮಾನ್ಯ ಪ್ರವೇಶ ಪರೀಕ್ಷೆ (ಸಿಇಟಿ) ಏ.16 ಮತ್ತು 17ರಂದು ನಡೆಯಲಿದ್ದು, ಬಿಗಿ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಹೊರನಾಡು ಮತ್ತು ಗಡಿನಾಡು ಕನ್ನಡಿಗರಿಗೆ ಏ.15ರಂದು ಕನ್ನಡ ಭಾಷಾ ಪರೀಕ್ಷೆಯು ಬೆಂಗಳೂರು, ಮಂಗಳೂರು, ವಿಜಯಪುರ ಮತ್ತು ಬೆಳಗಾವಿ ನಗರಗಳ ಒಟ್ಟು ಐದು ಕೇಂದ್ರಗಳಲ್ಲಿ ನಡೆಯಲಿದೆ. ಏ.16ರಂದು ಭೌತ ವಿಜ್ಞಾನ ಮತ್ತು ರಸಾಯನ ವಿಜ್ಞಾನ ಹಾಗೂ ಏ.17ರಂದು ಗಣಿತ ಮತ್ತು ಜೀವ ವಿಜ್ಞಾನ ವಿಷಯಗಳ ಪರೀಕ್ಷೆಗಳು ನಡೆಯಲಿದ್ದು, ಹಿಂದೆಂದಿಗಿಂತ ಹೆಚ್ಚು ಬಿಗಿ ಬಂದೋಬಸ್ತ್ ಮಾಡಲಾಗಿದೆ ಎಂದು ■6ನೇ ಪುಟಕ್ಕೆ

ಮುಖ್ಯಾಂಶಗಳು

- ರಾಜ್ಯದ 775 ಕೇಂದ್ರಗಳಲ್ಲಿ ಪರೀಕ್ಷೆ
- ವಸ್ತ್ರ ಸಂಹಿತೆ ಕಡ್ಡಾಯ ಪಾಲನೆ
- ಒಂದೂವರೆ ಗಂಟೆ ಮುಂಚೆ ಪರೀಕ್ಷಾ ಕೇಂದ್ರಕ್ಕೆ ಹೋಗಲು ಸಲಹೆ
- ಪರೀಕ್ಷೆಗೆ 3.31 ಲಕ್ಷ ಅಭ್ಯರ್ಥಿಗಳು ಅರ್ಹ
- ಇಂದು ಕನ್ನಡ ಪರೀಕ್ಷೆ

ಕಾಂಗ್ರೆಸ್ ವೋಟ್ ಬ್ಯಾಂಕ್ ವೈರಸ್ ಹರಡುತ್ತಿದೆ!

ವಕ್ಫ್ ವಿರೋಧ, ಮುಸ್ಲಿಮರಿಗೆ ಶೇ.4ರಷ್ಟು ಮೀಸಲಾತಿಗೆ ಪ್ರಧಾನಿ ಮೋದಿ ಕಿಡಿ



ನವದೆಹಲಿ, ಏ.14– ಇತ್ತೀಚೆಗೆ ಅಂಗೀಕರಿಸಲಾದ ವಕ್ಫ್ (ತಿದ್ದುಪಡಿ) ಕಾಯ್ದೆಯನ್ನು ವಿರೋಧಿಸಿ, ಕಾಂಗ್ರೆಸ್ ಪಕ್ಷ 'ವೋಟ್ ಬ್ಯಾಂಕ್‌ನ ವೈರಸ್' ಅನ್ನು ಹರಡುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಸೋಮವಾರ ಆರೋಪಿಸಿದ್ದಾರೆ. ವಿರೋಧ ಪಕ್ಷ ಎಸ್‌ಸಿ ಮತ್ತು ಎಸ್‌ಟಿ ಸಮುದಾಯವನ್ನು ಎರಡನೇ ದರ್ಜೆಯ ನಾಗರಿಕರು ಎಂದು ಪರಿಗಣಿಸುತ್ತಿದೆ ಎಂದು ಪ್ರಧಾನಿ ಆರೋಪಿಸಿದ್ದಾರೆ.

ಕಾಂಗ್ರೆಸ್ ಸಂವಿಧಾನದ ವಿಧ್ವಂಸಕವಾಗಿದೆ ಡಾ.ಬಿ.ಆರ್. ಅಂಬೇಡ್ಕರ್ ಸಮಾನತೆಯನ್ನು ತರಲು ಬಯಸಿದ್ದರು, ಆದರೆ ಕಾಂಗ್ರೆಸ್ ಮತ ಬ್ಯಾಂಕ್ ರಾಜಕೀಯದ ವೈರಸ್ ಅನ್ನು ಹರಡಿತು. ಬಾಬಾಸಾಹೇಬ್ ಪ್ರತಿಯೊಬ್ಬ ಬಡವರು, ಹಿಂದುಳಿದವರು ಘನತೆಯಿಂದ ಮತ್ತು ತಲೆ ಎತ್ತಿ ಬದುಕಲು ಸಾಧ್ಯವಾಗುತ್ತದೆ, ಕನಸುಗಳನ್ನು ಕಾಣಬೇಕು ಮತ್ತು ಅವುಗಳನ್ನು ಪೂರ್ಣಗೊಳಿಸಬೇಕು ಎಂದು ಬಯಸಿದ್ದರು ಎಂದು ಹಿಸಾರ್‌ನಲ್ಲಿ ಸಾರ್ವಜನಿಕರನ್ನುದ್ದೇಶಿಸಿ ಮಾಡಿದ ಭಾಷಣದಲ್ಲಿ ಪ್ರಧಾನಿ ಮೋದಿ ಹೇಳಿದರು.

ಕಾಂಗ್ರೆಸ್ ಕಾಲದಲ್ಲಿ, ಎಸ್‌ಸಿ, ಎಸ್‌ಟಿ, ಒಬಿಸಿಗಳಿಗೆ ಬ್ಯಾಂಕಿನ ಬಾಗಿಲುಗಳು ತೆರೆದಿರಲಿಲ್ಲ; ಸಾಲ, ಕಲ್ಯಾಣ ಕಾರ್ಯಕ್ರಮಗಳು ಎಲ್ಲವೂ ಕೇವಲ ಕನಸಾಗಿತ್ತು, ಆದರೆ ಈಗ ಜನ ಧನ್ ಖಾತೆಗಳ ದೊಡ್ಡ ಫಲಾನುಭವಿಗಳು ಎಸ್‌ಸಿ, ಎಸ್‌ಟಿ ಸಹೋದರ ಸಹೋದರಿಯರು ಎಂದು ಮೋದಿ ಹೇಳಿದ್ದಾರೆ.

ವಕ್ಫ್ ಮಂಡಳಿಯ ಅಡಿಯಲ್ಲಿ ಲಕ್ಷ ಹೆಕ್ಟೇರ್ ಭೂಮಿ ಇದೆ. ಆದರೆ ಈ ಆಸ್ತಿಗಳನ್ನು ಬಡವರು ಮತ್ತು ನಿರ್ಗತಿಕರಿಗೆ ಸಹಾಯ ಮಾಡಲು ಸರಿಯಾಗಿ ಬಳಸಲಾಗಿಲ್ಲ ಎಂದು ಅವರು ಹೇಳಿದರು. ವಕ್ಫ್ ಹೆಸರಿನಲ್ಲಿ ಲಕ್ಷಾಂತರ ■6ನೇ ಪುಟಕ್ಕೆ

ಸ್ಕೂಟರ್‌ಗೆ ಕಾರು ಡಿಕ್ಕಿ: ಸ್ಥಳದಲ್ಲೇ ಮಗ ಸಾವು

ಸೇತುವೆಯಿಂದ ಕಾವೇರಿಗೆ ಬಿದ್ದ ತಾಯಿ ನಾಪತ್ತೆ



ಪಾರ್ವತಿ ಮತ್ತು ಶಂಕರ್

ತಿ.ನರಸೀಪುರ, ಏ.14– ಸ್ಕೂಟರ್‌ಗೆ ಕಾರು ಡಿಕ್ಕಿ ಹೊಡೆದ ಪರಿಣಾಮ ಮಗ ಸ್ಥಳದಲ್ಲೇ ಸಾವನ್ನಪ್ಪಿ, ಹಿಂಬದಿ ಕುಳಿತಿದ್ದ ತಾಯಿ ಕಾವೇರಿ ನದಿಗೆ ಬಿದ್ದಿದ್ದು, ಇದುವರೆಗೆ ಅವರು ಪತ್ತೆಯಾಗಿಲ್ಲ. ಈ ಘಟನೆ ಸೋಮವಾರ ಮಧ್ಯಾಹ್ನ ಬನ್ನೂರು ಕಾವೇರಿ ಸೇತುವೆ ಮೇಲೆ ನಡೆದಿದೆ.

ಮೈಸೂರು ಮೇಟಗಳ್ಳಿ ನಿವಾಸಿ ಶಂಕರ್(22) ಸ್ಥಳದಲ್ಲೇ ಮೃತಪಟ್ಟರೆ, ಇವರ ತಾಯಿ ಎಂ.ಪಾರ್ವತಿ (50) ಸೇತುವೆ ಮೇಲಿಂದ ಕಾವೇರಿ ನದಿಗೆ ಬಿದ್ದಿದ್ದು, ಅವರ ಹುಡುಕಾಟ ಮುಂದುವರೆದಿದೆ.


ತಾಲೂಕಿನ ಬನ್ನೂರು ಹೋಬಳಿ ಮಲಿಯೂರು ಗ್ರಾಮದ ಬೀರೇಶ್ವರ ದೇವಸ್ಥಾನಕ್ಕೆ ತಾಯಿ ಮತ್ತು ಮಗ, ತಮ್ಮ ಜೂಪಿಟರ್(ಜೆ.09, ಎಇ 7962) ಸ್ಕೂಟರ್‌ನಲ್ಲಿ ಬಂದು, ದೇವರ ದರ್ಶನ ಪಡೆದ ನಂತರ ವಾಪಸ್ಸಾಗುವಾಗ ಈ ದುರ್ಘಟನೆ ಸಂಭವಿಸಿದೆ.

ಮೈಸೂರು ಕಡೆಗೆ ತಾಯಿ, ಮಗ ಹೋಗುತ್ತಿದ್ದ ಜುಪಿಟರ್ ಸ್ಕೂಟರ್‌ಗೆ ವೇಗವಾಗಿ ಬಂದ ಕಾರು (ಜೆ.ಎ.09, ಓಯು. 1627) ಡಿಕ್ಕಿ ಹೊಡೆದು, ಬಳಿಕ ಈ ಸ್ಕೂಟರ್ ಹಿಂದೆ ಬರುತ್ತಿದ್ದ ಕಾರಿಗೂ ಡಿಕ್ಕಿ ಹೊಡೆದಿದೆ. ಈ ವೇಳೆ ತೀವ್ರವಾಗಿ ಗಾಯಗೊಂಡ ಶಂಕರ್ ಸ್ಥಳದಲ್ಲೇ ■6ನೇ ಪುಟಕ್ಕೆ

ಡಾ.ಅಂಬೇಡ್ಕರ್ ಬಯಸಿದ ಸಮ ಸಮಾಜ ನಿರ್ಮಾಣಕ್ಕೆ

ನಮ್ಮ ಸರ್ಕಾರದ ಪ್ರಾಮಾಣಿಕ ಪ್ರಯತ್ನ

- ಮುಖ್ಯಮಂತ್ರಿ ಸಿದ್ದರಾಮಯ್ಯ ವಿಶ್ವಾಸ
- 134ನೇ ಜನ್ಮ ದಿನಾಚರಣೆ ಅಂಗವಾಗಿ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ
- ದೌರ್ಜನ್ಯಕ್ಕೆ ಒಳಗಾದವರ ಮುಕ್ತಿಗೆ ಶ್ರಮಿಸಿದ ಮಹಾನ್ ಚೇತನ; ಬಣ್ಣನೆ



ಬೆಂಗಳೂರಿನಲ್ಲಿ ನಡೆದ ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಡಾ. ಅಂಬೇಡ್ಕರ್, ಬಾಬು ಜಗಜೀವನರಾಂ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಮಾಡಿದರು.

ಬೆಂಗಳೂರು, ಏ.14(ಕೆಎಂಶಿ)– ಡಾ.ಬಿ.ಆರ್. ಅಂಬೇಡ್ಕರ್ ಪ್ರತಿಪಾದಿಸಿದ ಶಿಕ್ಷಣ, ಸಂಘಟನೆ ಮತ್ತು ಹೋರಾಟಮಂತ್ರ ಅನುಸರಿಸುವ ಮೂಲಕ ಅವರು ಬಯಸಿದ ಸಮ ಸಮಾಜ ನಿರ್ಮಾಣಕ್ಕೆ ಸರ್ಕಾರ ಪ್ರಾಮಾಣಿಕ ಪ್ರಯತ್ನ ಮಾಡಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ತಿಳಿಸಿದ್ದಾರೆ.

ಸಂವಿಧಾನಶಿಲ್ಪಿ ಡಾ. ಅಂಬೇಡ್ಕರ್ ಅವರ 134ನೇ ಜನ್ಮ ದಿನಾಚರಣೆ ಸಂದರ್ಭದಲ್ಲಿ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡಾ.ಅಂಬೇಡ್ಕರ್ ಕೇವಲ ದಲಿತರ ನಾಯಕರಾಗದೇ ಸಮಾಜದ ಶೋಷಿತರು, ಅನ್ಯಾಯ ಹಾಗೂ ದೌರ್ಜನ್ಯಕ್ಕೆ ಒಳಗಾದವರಿಗೆ ಅನ್ಯಾಯದಿಂದ ಮುಕ್ತಿ ನೀಡಲು ತಮ್ಮ ಬದುಕನ್ನೇ ಮುಡಿಪಾಗಿಟ್ಟರು ಎಂದರು.

ಎಲ್ಲರಿಗೂ ಆರ್ಥಿಕ, ಸಾಮಾಜಿಕ, ರಾಜಕೀಯ ಸ್ವಾತಂತ್ರ್ಯ ದೊರಕಿಸಲು ಶ್ರಮಿಸಿದರು. ಶೋಷಿತ, ಅಸ್ಪೃಶ್ಯತೆಯಿಂದ ನರಳುತ್ತಿರುವ ಜನರ ವಿಮೋಚನೆಗೆ ಜ್ಞಾನಾರ್ಜನೆ ಮಾಡಿಕೊಂಡರು, ದೇಶದ ಕೆಲವೇ ಮೇಧಾವಿಗಳಲ್ಲಿ ಒಬ್ಬರಾದ ಡಾ.ಅಂಬೇಡ್ಕರ್ ದೇಶ ಕಂಡ ಮಹಾನ್ ನಾಯಕ ಹಾಗೂ ಮಾನವತಾವಾದಿ. ಎಲ್ಲರೂ ಮನುಷ್ಯರಾಗಿ ಬದುಕಬೇಕು, ಸಮಾಜದಲ್ಲಿ ಎಲ್ಲರಿಗೂ ಸಮಾನತೆ ದೊರಕಬೇಕು, ಆರ್ಥಿಕ, ಸಾಮಾಜಿಕ, ರಾಜಕೀಯ ಸ್ವಾತಂತ್ರ್ಯ ದೊರೆತಾಗ ಮಾತ್ರ ದೇಶಕ್ಕೆ ನಿಜವಾದ ಸ್ವಾತಂತ್ರ್ಯ ಸಿಗುತ್ತದೆ. ಮಹಿಳೆಯರು ಆರ್ಥಿಕ, ಸಾಮಾಜಿಕವಾಗಿ ಸಬಲರಾಗಬೇಕು. ಅಸ್ಪೃಶ್ಯತೆ ನಾಶಕ್ಕೆ ಅಂಬೇಡ್ಕರ್ ಶ್ರಮಿಸಿದ್ದರು.

ಮನುವಾದಿಗಳು ಇಂದು ಗಾಂಧಿ ಮತ್ತು ಅಂಬೇಡ್ಕರ್ ಅವರನ್ನು ತಮ್ಮ ಸ್ವಂತ ಎಂಬಂತೆ ಬಿಂಬಿಸಲು ಪ್ರಯತ್ನಿಸುತ್ತಿದ್ದಾರೆ.

ಇತ್ತೀಚೆಗೆ ಕೆಲವರು ಮಹಾತ್ಮ ಗಾಂಧಿ ಹಾಗೂ ಡಾ.ಅಂಬೇಡ್ಕರ್ ತಮಗೆ ಸೇರಿದವರೆಂದು ಬಿಂಬಿಸಲು ಪ್ರಾರಂಭಿಸಿದ್ದಾರೆ. ಗಾಂಧಿಯನ್ನು ಕೊಂದವರು, ಅಂಬೇಡ್ಕರ್ ಸಂವಿಧಾನ ವಿರೋಧಿಸಿದ ಮನುವಾದಿಗಳೇ ಇಂದು ಅವರನ್ನು ತಮ್ಮ ಸ್ವಂತ ಎನ್ನುತ್ತಿದ್ದಾರೆ. ಅಂಬೇಡ್ಕರ್ ಅವರನ್ನು ಕಾಂಗ್ರೆಸ್ ಸೋಲಿಸಿತ್ತು ಎಂಬುದಾಗಿ ಮಾತನಾಡುತ್ತಾರೆ. ನನ್ನನ್ನು ಸೋಲಿಸಿದವರು ಸಾವರ್ಕರ್ ಮತ್ತು ಕಮ್ಯುನಿಸ್ಟ್ ನಾಯಕ ಎಸ್.ಎ.ಡಾಂಗೆ ಎಂಬುದಾಗಿ ಅಂಬೇಡ್ಕರ್ ■6ನೇ ಪುಟಕ್ಕೆ

ಹಾಸನ ಮಿತ್ರ

ಶಾಂತಿ, ಸೌಹಾರ್ದಯುತ ಜಗತ್ತು ನಿರ್ಮಾಣಕ್ಕೆ

ಭಗವಾನ್ ಮಹಾವೀರರ ತತ್ವ, ಆದರ್ಶಗಳು ಅಗತ್ಯ

ಮಹಾವೀರ ಜಯಂತಿಯಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕರೆ



ಶ್ರವಣಬೆಳಗೊಳ ಶ್ರೀ ಕ್ಷೇತ್ರದ ಜೈನಮಠದ ಆವರಣದಲ್ಲಿ ಆಯೋಜಿಸಿದ್ದ ಭಗವಾನ್ ಮಹಾವೀರರ 2624 ನೇ ವರ್ಷದ ಜಯಂತ್ಯೋತ್ಸವ ಕಾರ್ಯಕ್ರಮವನ್ನು ರಾಜ್ಯಪಾಲ ಕರ್ನಾಟಕದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಜ್ಯೋತಿ ಬೆಳಗಿಸಿ ಉದ್ಘಾಟಿಸಿದರು.

ಶ್ರವಣಬೆಳಗೊಳ/ಕೆ.ಆರ್.ಪೇಟೆ, ಏ.14– ಜಗತ್ತು ಅಹಿಂಸಾ ಮಾರ್ಗದಲ್ಲಿ ಸಾಗಬೇಕು. ಹಿಂಸೆಯನ್ನು ತ್ಯಜಿಸಬೇಕು. ಶಾಂತಿ, ಸೌಹಾರ್ದಯುತ ಜಗತ್ತು ನಿರ್ಮಾಣಕ್ಕೆ ಭಗವಾನ್ ಮಹಾವೀರರ ತತ್ವ ಆದರ್ಶಗಳು ಅಗತ್ಯವಾಗಿವೆ. ಅಹಿಂಸಾ ತತ್ವದಿಂದ ಇಡೀ ಪ್ರಪಂಚದಲ್ಲಿ ನೆಮ್ಮದಿಯ ವಾತಾವರಣವನ್ನು ಕಾಣಬಹುದಾಗಿದೆ. ಇಂತಹ ಶ್ರೇಷ್ಠ ಅಹಿಂಸಾ ತತ್ವವನ್ನು ಸಾರುವ ಜೈನ ಧರ್ಮದ ಸಂರಕ್ಷಣೆ ಅಗತ್ಯವಿದೆ ಎಂದು ಕರ್ನಾಟಕದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೇಳಿದರು.

ವಿಶ್ವವಿಖ್ಯಾತ ಶ್ರವಣಬೆಳಗೊಳ ಶ್ರೀಕ್ಷೇತ್ರದ ಜೈನಮಠದ ಆವರಣದಲ್ಲಿ ಆಯೋಜಿಸಿದ್ದ ಭಗವಾನ್ ಮಹಾವೀರರ 2624 ನೇ ವರ್ಷದ ಜಯಂತ್ಯೋತ್ಸವ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸಿ ಉದ್ಘಾಟಿಸಿ ಅವರು ಮಾತನಾಡಿದರು.

ಭಗವಾನ್ ಮಹಾವೀರರು 24ನೇ ತೀರ್ಥಂಕರರಾಗಿದ್ದ ಜೈನಧರ್ಮದ ರಥವನ್ನು ಉತ್ತಮವಾಗಿ ಎಳೆದು ಜೈನ ಧರ್ಮವನ್ನು ಸಮೃದ್ಧವಾಗಿ ಅಭಿವೃದ್ಧಿಗೊಳಿಸಿ, ಅನೇಕ ದೇಶಗಳಿಗೆ ಹರಡಲು ಕಾರಣಕರ್ತರಾದರು. ಭೂಮಿಯ ಸಕಲ ಜೀವಿಗಳನ್ನು ಸಮಾನವಾಗಿ ಕಾಣುವ ಏಕೈಕ ಧರ್ಮ ನಮ್ಮ ಜೈನ ಧರ್ಮವಾಗಿದೆ. ಜಗತ್ತಿನಲ್ಲಿ ಅನೇಕ ಧರ್ಮಗಳಿದ್ದು ಈ ಪೈಕಿ ಜೈನ ಧರ್ಮವು ಎಲ್ಲಾ ಧರ್ಮಕ್ಕಿಂತ ಅತ್ಯಂತ ಪ್ರಾಚೀನ ಧರ್ಮವಾಗಿದೆ ಎಂದು ಅವರು ಹೇಳಿದರು.

ಸದಾ ಸತ್ಯವನ್ನು ನುಡಿಯುವುದು. ಯಾರಿಗೂ ನೋವುಂಟು ಮಾಡದಿರುವುದು. ಕಳ್ಳತನ ಮಾಡದೇ ಇರುವುದು. ನನ್ನದು ಮತ್ತು ನಾನು ಎಂಬ ಭಾವನೆಯನ್ನು ತೊಡೆದುಹಾಕುವುದು. ಆಧ್ಯಾತ್ಮಿಕ ಚಿಂತನೆಯನ್ನು ರೂಢಿಸಿಕೊಳ್ಳುವುದು. ದಾನ–ಧರ್ಮದ ಗುಣಗಳನ್ನು ಬೆಳೆಸಿಕೊಳ್ಳುವುದು. ಮನಸ್ಸನ್ನು ಸದಾ ಶುದ್ಧವಾಗಿಟ್ಟುಕೊಳ್ಳವುದು ಜೈನ ಧರ್ಮ ಮೂಲ ತತ್ವಗಳಾಗಿವೆ. ಈ ತತ್ವಗಳಿಂದ ಉತ್ತಮ ಸಮಾಜ ನಿರ್ಮಿಸುವ ಜೊತೆಗೆ ಶ್ರೇಷ್ಠ ಭಾರತ ಮತ್ತು ಶಾಂತಿ–ಸೌಹಾರ್ದಯುತ ಪ್ರಪಂಚವನ್ನು ನಿರ್ಮಿಸಲು ಸಾಧ್ಯವಾಗುತ್ತದೆ ಎಂದು ರಾಜ್ಯಪಾಲರು ಹೇಳಿದರು.

ಶ್ರವಣಬೆಳಗೊಳ ಶ್ರೀ ಕ್ಷೇತ್ರದ ಪೀಠಾಧಿಪತಿ ಸ್ವಸ್ತಿಶ್ರೀ ಪಂಡಿತಾರಾಧ್ಯ ಭಟ್ಟಾರಕ ಸ್ವಾಮೀಜಿ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದರು. ಬಳಿಕ ಮಾತನಾಡಿದ ಶ್ರೀಗಳು ಸರ್ವೇ ಜನೋ ಸುಖಿನೋ ಭವಂತು ಎಂಬ ನಾಣ್ನುಡಿ ಜೈನ ಧರ್ಮಕ್ಕೆ ಅನ್ವಯವಾಗುತ್ತದೆ. ಧರ್ಮಗಳು ಬೇರೆ ಬೇರೇಯಾದರೂ ಎಲ್ಲಾ ಧರ್ಮಗಳ ಸಾರವು ಒಂದೇ ಆಗಿರುತ್ತದೆ. ಅದು ಮೋಕ್ಷ ಪಡೆಯುವ ಉದ್ದೇಶವನ್ನು ಹೊಂದಿವೆ. ಆದರೆ ಧರ್ಮದ ಆಚರಣೆ ಮಾಡುವ ಜನರ ಮನಸ್ಥಿತಿಯಿಂದ ಅನೇಕ ಕಂದಕಗಳು ಸೃಷ್ಟಿಯಾಗುತ್ತವೆ.

ಶ್ರವಣಬೆಳಗೊಳ ಕ್ಷೇತ್ರದ ಶಾಸಕ ಸಿ.ಎನ್.ಬಾಲಕೃಷ್ಣ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಸರ್ಕಾರದ ಯೋಜನೆ ಮತ್ತು ಸಾಂಖ್ಯಿಕ ಖಾತೆ ಸಚಿವ ಡಿ.ಸುಧಾಕರ್, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ್ ಬಿಳಿಮಲೆ, ಹಾಸನ ಸಂಸದ ಶ್ರೇಯಸ್ ಪಟೇಲ್, ಶ್ರವಣಬೆಳಗೊಳ ಕ್ಷೇತ್ರದ ಶಾಸಕ ಸಿ.ಎನ್.ಬಾಲಕೃಷ್ಣ, ಶ್ರವಣಬೆಳಗೊಳ ಗ್ರಾಮ ಪಂಚಾಯತ್ ಅಧ್ಯಕ್ಷ ಅಖ್ತರ್ ಪಾಷಾ ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಜಮೀನು ವಿವಾದ: ವೃದ್ಧನ ಕೊಲೆ

ಹಾಸನ,ಏ.14–ತಾಲೂಕಿನ ಕೋಡರಾಮನಹಳ್ಳಿಯಲ್ಲಿ ಜಮೀನಿನ ವಿಚಾರಕ್ಕೆ ವೃದ್ಧರೊಬ್ಬರನ್ನು ಹೊಡೆದು ಕೊಲೆ ಮಾಡಲಾಗಿದೆ. ಗ್ರಾಮದ ಕರಿಗೌಡ (75) ಕೊಲೆಯಾದವರು. ಪಕ್ಕದ ಜಮೀನಿನ ಮಾಲೀಕ ಮಂಜೇಗೌಡ ಕೊಲೆ ಮಾಡಿದ ಆರೋಪಿ. ಕರಿಗೌಡರು ಶನಿವಾರ ಜಮೀನಿನ ಬಳಿ ತೆರಳಿದ್ದರು. ಈ ವೇಳೆ ಪಕ್ಕದ ಜಮೀನಿನ ಮಂಜೇಗೌಡ, ಜೆಸಿಬಿಯಿಂದ ಕರಿಗೌಡರ ಜಮೀನಿನ ಬದುವಿನ ಮಣ್ಣು ತೆಗೆಯುತ್ತಿದ್ದ. ಅದಕ್ಕೆ ಕರಿಗೌಡರು ಆಕ್ಷೇಪ ವ್ಯಕ್ತಪಡಿಸಿದ್ದರು. ಇದರಿಂದ ಸಿಟ್ಟಿಗೆದ್ದ ಮಂಜೇಗೌಡ, ಕರಿಗೌಡರನ್ನು ದೊಣ್ಣೆಯಿಂದ ಹೊಡೆದು, ಕಾಲಿನಿಂದ ತುಳಿದಿದ್ದ. ಈ ಬಗ್ಗೆ ಕರಿಗೌಡರು ತಮ್ಮ ಸೊಸೆಗೆ ಕರೆಮಾಡಿ ವಿಷಯ ತಿಳಿಸಿದ್ದರು. ಅವರ ಸೊಸೆ ಜಮೀನಿನ ಹತ್ತಿರ ಹೋಗಿ ಪೊಲೀಸರು ಹಾಗೂ ಊರಿನವರ ಸಹಾಯದಿಂದ ಹಾಸನ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿದ್ದರು. ಆದರೆ, ಅಷ್ಟರಲ್ಲಿಯೇ ಕರಿಗೌಡರು ಮೃತಪಟ್ಟಿರುವುದಾಗಿ ವೈದ್ಯರು ತಿಳಿಸಿದರು.

ಮನೆ ಬೀಗ ಮುರಿದು 2.49 ಲಕ್ಷ ಮೌಲ್ಯದ ಚಿನ್ನಾಭರಣ ಕಳವು



ಅರಸೀಕೆರೆ, ಏ.14–ಅರಸೀಕೆರೆಯ ರೈಲ್ವೆ ಕ್ವಾರ್ಟರ್ಸ್‌ನ ಬೀಗ ಮುರಿದು, ರೂ.2.49 ಲಕ್ಷ ಮೌಲ್ಯದ ಚಿನ್ನಾಭರಣ ಕಳವು ಮಾಡಲಾಗಿದೆ. ಧೀರೇಂದ್ರ ಕುಮಾರ್ ಯಾದವ್ ರೈಲ್ವೆ ಇಲಾಖೆ ನೌಕರರಾಗಿದ್ದು, ಮಾರ್ಚ್ 28ರಂದು ಹೆಂಡತಿ ಹಾಗೂ ಮಗುವನ್ನು ತಮ್ಮ ಊರಾದ ಬಿಹಾರಕ್ಕೆ ಬಿಟ್ಟು ಬರಲೆಂದು ಮನೆಗೆ ಬೀಗ ಹಾಕಿಕೊಂಡು ಹೋಗಿದ್ದರು. ಏ.12ರಂದು ಅರಸೀಕೆರೆಗೆ ಬಂದು ವಸತಿಗೃಹದಲ್ಲಿ ನೋಡಿದಾಗ ಕಳವಾಗಿರುವುದು ಗೊತ್ತಾಗಿದೆ. 12 ಗ್ರಾಂನ ಚಿನ್ನದ ಓಲೆ, 18 ಗ್ರಾಂನ 3 ಚಿನ್ನದ ಉಂಗುರ, 2 ಗ್ರಾಂನ 3 ಚಿನ್ನದ ಮೂಗುತಿ, 2 ಗ್ರಾಂನ ಚಿನ್ನದ ಡಾಲರ್, 16 ಗ್ರಾಂನ ಚಿನ್ನದ ಸರ, 6 ಗ್ರಾಂನ ಓಲೆ) 5 ಗ್ರಾಂನ ಓಲೆ, 20 ಗ್ರಾಂ ಬೆಳ್ಳಿ ಕಾಲು ಚೈನ್, 60 ಗ್ರಾಂನ ಬೆಳ್ಳಿ ನಾಣ್ಯ ಕಳವು ಮಾಡಲಾಗಿದೆ. ಅರಸೀಕೆರೆ ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಎಂ.ಸಮನ್ವಿತಾಗೆ 591 ಅಂಕ



ಮೈಸೂರು,ಏ.14(ಎಂಟಿವೈ)– ಕುವೆಂಪುನಗರದ ಆದಿಚುಂಚನಗಿರಿ ಪಿಯು ಕಾಲೇಜಿನ ವಿದ್ಯಾರ್ಥಿನಿ ಎಂ.ಸಮನ್ವಿತ ದ್ವಿತೀಯ ಪಿಯುಸಿ ಪರೀಕ್ಷೆಯ ವಿಜ್ಞಾನ ವಿಭಾಗದಲ್ಲಿ 591 ಅಂಕ ಪಡೆದು ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ಎಂ.ಸಮನ್ವಿತ ಕನ್ನಡದಲ್ಲಿ 99, ಇಂಗ್ಲೀಷ್–95, ಭೌತಶಾಸ್ತ್ರ–99, ರಸಾಯನಶಾಸ್ತ್ರ–99, ಗಣಿತ–99, ಜೀವಶಾಸ್ತ್ರದಲ್ಲಿ 100 ಅಂಕ ಪಡೆದು ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ಈಕೆ ಎಂ.ಸಿ.ಮಹೇಶ್, ವಕೀಲರಾದ ಬಿ.ಎಸ್.ವಿಜಯಲಕ್ಷ್ಮೀ ದಂಪತಿ ಪುತ್ರಿ.

ನಿಸರ್ಗಗೆ ಶೇ.95.4ರಷ್ಟು ಅಂಕ



ಸದ್ವಿದ್ಯಾ ಕಾಲೇಜಿನ ದ್ವಿತೀಯ ಪಿಯುಸಿ ವಾಣಿಜ್ಯ ವಿಭಾಗದ ವಿದ್ಯಾರ್ಥಿನಿ ನಿಸರ್ಗ ಆರ್.ವಿ., 572 ಅಂಕ ಪಡೆದು ಉತ್ತೀರ್ಣರಾಗಿದ್ದಾರೆ. ಈಕೆ ರಮ್ಮನಹಳ್ಳಿ ಗ್ರಾಪಂ ಮಾಜಿ ಸದಸ್ಯ ವೇಣುಗೋಪಾಲ್ ಅವರ ಪುತ್ರಿ.

ಕೃಷ್ಣ ತಿಪ್ಪೂರು ರಚಿತ ಮೂರು ಕೃತಿಗಳ ಬಿಡುಗಡೆ

ಸಾಹಿತ್ಯ ಕ್ಷೇತ್ರದಲ್ಲಿ ಕೃತಕ ಬುದ್ಧಿಮತ್ತೆ ಅಗತ್ಯತೆ ಬಗ್ಗೆ ಪರಾಮರ್ಶಿಸಬೇಕು

ಹೆಚ್ಚುವರಿ ಅಡ್ವೋಕೇಟ್ ಜನರಲ್ ದೇವದಾಸ್ ಅಭಿಮತ



ಮೈಸೂರಿನ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಭವನದಲ್ಲಿ ರಾಮಕೃಷ್ಣ ಆಶ್ರಮದ ಶ್ರೀ ಗಣೇಶ್ವರಾನಂದ ಸ್ವಾಮೀಜಿ ಮೂರು ಕೃತಿಗಳನ್ನು ಬಿಡುಗಡೆ ಮಾಡಿದರು.

ಮೈಸೂರು,ಏ.14(ಪಿಎಂ)– ಸಾಹಿತ್ಯ ಕ್ಷೇತ್ರದಲ್ಲಿ ಕೃತಕ ಬುದ್ಧಿಮತ್ತೆ (ಎಐ) ಬಳಕೆ ಅಗತ್ಯವೇ ಎಂದು ಅವಲೋಕಿಸಿ ಸೂಕ್ತ ನಿರ್ಧಾರಕ್ಕೆ ಬರಬೇಕಿದೆ ಎಂದು ಹೆಚ್ಚುವರಿ ಅಡ್ವೋಕೇಟ್ ಜನರಲ್ ದೇವದಾಸ್ ಹೇಳಿದರು.

ಮೈಸೂರಿನ ವಿಜಯನಗರದಲ್ಲಿರುವ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ (ಕಸಾಪ) ಭವನದಲ್ಲಿ ಜಿಲ್ಲಾ ಕಸಾಪ ಹಾಗೂ ಚಿತ್ರಕೂಟ ತಿಪ್ಪೂರು ಜಂಟಿ ಆಶ್ರಯದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಕೃಷ್ಣ ತಿಪ್ಪೂರು ಅವರ 'ಕಾವೇರಿ ತಡಿಯಿಂದ ಗಂಗೋತ್ರಿ ಉಡಿಗೆ (ಪ್ರವಾಸ ಸಾಹಿತ್ಯ)', 'ನಾ ನೆಲದ ಬನಿಯಾಗಬೇಕು (ಕವನ ಸಂಕಲನ)' ಹಾಗೂ 'ಕನ್ನಡದ ತೇರು (ರೂಪಕ ಗೀತೆ)' ಎಂಬ ಮೂರು ಕೃತಿಗಳ ಬಿಡುಗಡೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ನನ್ನ ಮನಸ್ಸಿನಲ್ಲಿ ಎಐ ಬಗ್ಗೆ ಆತಂಕ ಕಾಡುತ್ತಿದೆ. ಇತ್ತೀಚಿನ ದಿನಗಳಲ್ಲಿ ಎಐ (ಆರ್ಟಿಫಿಸಿಯಲ್ ಇಂಟೆಲಿಜನ್ಸ್/ಕೃತಕ ಬುದ್ಧಿಮತ್ತೆ) ತಂತ್ರಜ್ಞಾನ ಎಲ್ಲಾ ರಂಗಗಳಿಗೂ ಮುತ್ತಿಗೆ ಹಾಕುತ್ತಿದ್ದು, ಸಾಹಿತ್ಯ ಕ್ಷೇತ್ರಕ್ಕೂ ಲಗ್ಗೆಯಿಟ್ಟಿದೆ. ಮಾನವನಿಗೆ ವಿಶೇಷತೆ ತಂದಿರುವುದೇ ಅವನ ಬುದ್ಧಿಶಕ್ತಿಯಾಗಿದೆ. ಮನದಲ್ಲಿ ಮೂಡುವ ಭಾವನೆಗಳನ್ನು ಮಾತುಗಳಲ್ಲಿ ವ್ಯಕ್ತಪಡಿಸುವಾಗ ಅದೊಂದು ವೈಶಿಷ್ಟ್ಯತೆಯೇ ಸರಿ. ನಮ್ಮ ತಾಯ್ನುಡಿಯಲ್ಲಿ ನುಡಿದಾಗ ಮತ್ತು ಬರೆದಾಗ ಹೊಮ್ಮುವ ಸಾಹಿತ್ಯವೇ ನೈಜ ಹಾಗೂ ರಸಭರಿತ. ಆದರೆ ಎಐಯಿಂದ ಇದು ಅಸಾಧ್ಯ ಎಂದು ಹೇಳಿದರು.

ನಮ್ಮಿಂದ ಸೃಷ್ಟಿಯಾಗುವ ರಸಭರಿತವಾದ ಭಾವನೆಗಳು ಕೃತಕ ಬುದ್ಧಿಮತ್ತೆಯಿಂದ ಯಾಂತ್ರಿಕವಾಗಿ ರಸಹೀನವಾಗಬಾರದು. ಕೃತಕ ಬುದ್ಧಿಮತ್ತೆ ವೇಗವಾಗಿ ಹರಡುತ್ತಿರುವ ವಿಷ. ಇದು ಸಾಹಿತ್ಯ ಕ್ಷೇತ್ರದಲ್ಲಂತೂ ಭಾವನೆಗಳಿಗೆ ಧಕ್ಕೆ ತರಲಿದೆ. ಎಷ್ಟರ ಮಟ್ಟಿಗೆ ಸಾಹಿತ್ಯ ಕ್ಷೇತ್ರದಲ್ಲಿ ಅದನ್ನು ಉಪಯೋಗಿಸಬೇಕೆಂಬುದನ್ನು ಸಾಹಿತಿಗಳು, ಸಾಹಿತ್ಯಾಸಕರು ಪರಾಮರ್ಶಿಸಿ ನಿರ್ಧರಿಸಬೇಕಿದೆ. ಎಐಗೆ ಬಲಿಯಾಗದೇ ಸಹಜ ಭಾವನೆಗಳಿಂದ ಸುಂದರ ಕಾವ್ಯಗಳು ಮೂಡಿಬರುವುದೇ ಸೂಕ್ತ ಎಂದು ಹೇಳಿದರು.

ನಮ್ಮಂಥ ನ್ಯಾಯವಾದಿಗಳಿಗೆ ಭಾಷೆಯೇ ಬಂಡವಾಳ. ನಾವು ವಿಚಾರ ಮಂಡಿಸುವಾಗ ಬಳಸುವ ಪದಗಳು ನಮ್ಮ ವಾದಕ್ಕೆ ಪುಷ್ಟಿ ನೀಡಬಲ್ಲವು. ವಾಕ್ಸಮರದಲ್ಲಿ ನಾವು ಬಳಸುವ ಉತ್ತಮ ಪದಗಳು ನಮ್ಮ ಗೆಲುವಿಗೆ ಸಹಕಾರಿಯಾಗಲಿವೆ. 2008ರಲ್ಲಿ ನಾನು 'ನ್ಯಾಯದೀಪ' ಎಂಬ ಕವನ ರಚಿಸಿದ್ದೆ. ಆ ಮೂಲಕ ಕನ್ನಡದಲ್ಲಿ ನ್ಯಾಯಾಲಯದ ಕಲಾಪಗಳನ್ನು ನಡೆಸಬೇಕೆಂಬ ಇಂಗಿತ ವ್ಯಕ್ತಪಡಿಸಿದ್ದೆ. ಕನ್ನಡ ಪದಗಳು ಸಿಗದೇ ಹೋದಾಗ ಅನಿವಾರ್ಯವಾಗಿ ಮಾತ್ರ ಇಂಗ್ಲಿಷ್ ಪದಗಳನ್ನು ಬಳಸಿಕೊಳ್ಳುವಂತಾಗಬೇಕೆಂಬ ಅಭಿಮತವು ನ್ಯಾಯದೀಪದಲ್ಲಿ ಮೂಡಿಬಂದಿತ್ತು. ಇದು ಸಾಕಷ್ಟು ಸದ್ದು ಮಾಡಿತ್ತು. ಇತ್ತೀಚೆಗೆ ಕನ್ನಡ ಸಾಹಿತ್ಯ ಬಗ್ಗೆ ಒಲವು ಕಡಿಮೆಯಾಗುತ್ತಿದ್ದು, ಓದುವಂತೆ ಒತ್ತಾಯ ಮಾಡುವ ಸನ್ನಿವೇಶ ನಿರ್ಮಾಣವಾಗಿದೆ ಎಂದರು.

ಕೃಷ್ಣ ಅವರು ರಾಮಾಯಣ ಕುರಿತಂತೆ ಅಮೃತಧಾರೆ ಎನ್ನುವಂತೆ ಕೃತಿ ರಚಿಸಿದ್ದಾರೆ. ಸದರಿ ಕೃತಿಯಲ್ಲಿ ಅನೇಕ ಹೊಸ ಶಬ್ದಗಳ ಪ್ರಯೋಗ ಮಾಡಿದ್ದಾರೆ. ಇದು ಅನೇಕ ಓದುಗರ ಮೆಚ್ಚುಗೆಗೆ ಪಾತ್ರವಾಗಿದೆ. ಪಾತ್ರಗಳ ವ್ಯಕ್ತಿತ್ವವನ್ನು ನಮ್ಮ ಮನದಲ್ಲಿ ಮೂಡುವಂತೆ ರಚನೆ ಮಾಡಿದ್ದಾರೆ. ಅವರ ಸಾಹಿತ್ಯ ಕೃಷಿಯು ಕನ್ನಡ ನಾಡು ನುಡಿಗೆ ಸಮೃದ್ಧಿ ತರುವಂತಾಗಲಿ ಎಂದು ಹಾರೈಸಿದರು. ಕೃಷ್ಣ ಅವರು ಮಹತ್ತರ ಸಾಹಿತ್ಯ ಕೃಷಿಯನ್ನು ಕನ್ನಡ ಸಾಹಿತ್ಯಕ್ಕೆ ಕೊಡುಗೆಯಾಗಿ ನೀಡಿದ್ದಾರೆ. ಆದರೆ ಕೃಷ್ಣ ಅವರಿಗೆ ದೊರೆಯಬೇಕಾದ ಮಾನ್ಯತೆ ಸಾಹಿತ್ಯ ಲೋಕದಲ್ಲಿ ಸಿಕ್ಕಿಲ್ಲ. ಕಾರಣ ಆ ಸಾಹಿತ್ಯ, ಈ ಸಾಹಿತ್ಯ ಎಂದು ವಿಂಗಡಿಸಿರುವುದಾಗಿದೆ. ಇಂತಹ ಸನ್ನಿವೇಶದಲ್ಲಿ ನಿಜವಾದ ಸಾಹಿತಿಗಳಿಗೆ ಮನ್ನಣೆ ದೊರೆಯದಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು. ಮೈಸೂರು ರಾಮಕೃಷ್ಣ ಆಶ್ರಮದ ಶ್ರೀ ಗಣೇಶ್ವರಾನಂದ ಸ್ವಾಮೀಜಿ ಮೂರು ಕೃತಿಗಳನ್ನು ಬಿಡುಗಡೆ ಮಾಡಿದರು. ಹಿರಿಯ ವಿದ್ವಾಂಸ ಡಾ.ಸಿ.ಪಿ.ಕೃಷ್ಣಕುಮಾರ್ (ಸಿಪಿಕೆ) ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದರು. ಸಹ ಪ್ರಾಧ್ಯಾಪಕ ಪ್ರೊ.ಮ. ನಂಜುಂಡಯ್ಯ, ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ಡಾ.ವೈ.ಡಿ.ರಾಜಣ್ಣ ಕೃತಿಗಳ ಕುರಿತು ಮಾತನಾಡಿದರು. ಕೃತಿಗಳ ಕರ್ತೃ ಕೃಷ್ಣ ತಿಪ್ಪೂರು, ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಗೌರವ ಕಾರ್ಯದರ್ಶಿ ಲತಾ ಮೋಹನ್ ಮತ್ತಿತರರು ಹಾಜರಿದ್ದರು.

ಅನ್ಯ ರಾಜ್ಯದ ಕೂಲಿಕಾರ ಸಮುದಾಯದಿಂದಲೇ ರಾಜ್ಯದಲ್ಲಿ ಕಾನೂನು–ಸುವ್ಯವಸ್ಥೆಗೆ ಧಕ್ಕೆ

ರಾಜ್ಯ ಗೃಹ ಸಚಿವ ಡಾ.ಪರಮೇಶ್ವರ್ ಆರೋಪ



ಬೆಂಗಳೂರು, ಏ.14(ಕೆಎಂಶಿ)–ಹೊರ ರಾಜ್ಯಗಳಿಂದ ಬಂದವರಿಂದಲೇ ಕರ್ನಾಟಕದಲ್ಲಿ ಹೆಚ್ಚು ಅಪರಾಧ ಕೃತ್ಯಗಳು ಜರುಗುತ್ತಿವೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.


ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೆಲದ ಕಾನೂನಿನ ಅರಿವಿಲ್ಲದೆ, ಹೊರಗಿನವರು ಇಲ್ಲಿ ತಮ್ಮ ರಾಜ್ಯಗಳಲ್ಲಿ ನಡೆದುಕೊಳ್ಳುವ ರೀತಿ ಇಲ್ಲಿಯೂ ನಡೆದುಕೊಳ್ಳುತ್ತಿದ್ದಾರೆ.

ಅದರಲ್ಲೂ ಕಟ್ಟಡ ಕಾಮಗಾರಿ ನಡೆಸುವ ಕಾರ್ಮಿಕರೇ ಹೆಚ್ಚು ಅಪರಾಧ ಕೃತ್ಯಗಳಲ್ಲಿ ತೊಡಗಿರುವುದು ಅಂಕಿ–ಅಂಶಗಳಿಂದ ಬಯಲಾಗಿವೆ. ಲೈಂಗಿಕ ದೌರ್ಜನ್ಯ, ಕೊಲೆ, ಸುಲಿಗೆ ಮತ್ತು ಆಂತರಿಕ ಬಡಿದಾಟಗಳು ಇವರದೇ ಹೆಚ್ಚು, ಇದನ್ನು ತಡೆಗಟ್ಟುವಲ್ಲಿ ಕಾರ್ಮಿಕ ಇಲಾಖೆಯೊಂದಿಗೆ ಸಭೆ ನಡೆಸಿ ಕೆಲವು ಕಠಿಣ ತೀರ್ಮಾನಗಳನ್ನು ಕೈಗೊಳ್ಳುತ್ತೇವೆ.

ಕಟ್ಟಡ ಕಾಮಗಾರಿ ಸೇರಿದಂತೆ ಕೆಳಹಂತದ ಕೆಲಸಗಳಿಗೆ ಹೊರ ರಾಜ್ಯದವರನ್ನು ದೊಡ್ಡ ಸಂಖ್ಯೆಯಲ್ಲಿ ಕರೆತರುತ್ತಿರುವುದೇ ಕಾನೂನು ಸುವ್ಯವಸ್ಥೆ ಹದಗಡಲು ಮೂಲ ಕಾರಣವಾಗಿದೆ.

ಸ್ಥಳೀಯವಾಗಿ ಕಾರ್ಮಿಕರು ದೊರೆಯದ ಕಾರಣ ಗುತ್ತಿಗೆದಾರರು, ಹೋಟೆಲ್ ಮಾಲೀಕರು ಮತ್ತು ಇತರೆ ಉದ್ಯಮಿಗಳು ಹೊರರಾಜ್ಯದವರ ಮೇಲೆ ಅವಲಂಬಿತರಾಗಿದ್ದಾರೆ. ಕಾರ್ಮಿಕರನ್ನು ಕರೆತಂದವರು ಕೆಲವು ಮುಂಜಾಗ್ರತಾ ಕ್ರಮಕೈಗೊಳ್ಳಬೇಕು, ಈ ಕಾರ್ಯವನ್ನು ಅವರು ಮಾಡುತ್ತಿಲ್ಲ, ಬೆಂಗಳೂರು, ಹುಬ್ಬಳ್ಳಿ ಸೇರಿದಂತೆ ರಾಜ್ಯದ ಯಾವುದೇ ಮೂಲೆಯಲ್ಲಿ ನಡೆಯುತ್ತಿರುವ ಅಪರಾಧ ಕೃತ್ಯಗಳಲ್ಲಿ ಇವರದೇ ಪಾತ್ರ ಹೆಚ್ಚು. ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಕಾರ್ಮಿಕ ಇಲಾಖೆಯೊಂದಿಗೆ ಚರ್ಚಿಸಿ ಅಪರಾಧ ಕೃತ್ಯಗಳನ್ನು ತಡೆಗಟ್ಟುವುದಾಗಿ ತಿಳಿಸಿದರು.

ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ



ಡಾ.ಬಿ.ಆರ್.ಅಂಬೇಡ್ಕರ್‌ರವರ 134ನೇ ಜನ್ಮದಿನದ ಪ್ರಯುಕ್ತ ಸೋಮವಾರ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಯಿತು. ಚಿತ್ರದಲ್ಲಿ ಮೈಸೂರು–ಕೊಡಗು ಸಂಸದ ಯದುವೀರ್ ಒಡೆಯರ್, ಮೈಸೂರು ನಗರ ಬಿಜೆಪಿ ಅಧ್ಯಕ್ಷ ಎಲ್.ನಾಗೇಂದ್ರ,ಮೈಸೂರು ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಿ.ಎಂ.ರಘು, ಮುಖಂಡರಾದ ಸಂದೇಶ್‌ಸ್ವಾಮಿ, ದಿನೇಶ್‌ಗೌಡ, ಹೇಮಂತ್‌ಗೌಡ, ಪ್ರತಾಪ್ ದಟ್ಟಗಳ್ಳಿ, ಶಿವಕುಮಾರ್, ರಾಮೇಗೌಡ, ಸಚಿನ್ ಮುಂತಾದವರು ಉಪಸ್ಥಿತರಿದ್ದರು.

ವಿನುತಾಗೆ ಕಾಮರ್ಸ್‌ನಲ್ಲಿ ಶೇ.92ರಷ್ಟು ಫಲಿತಾಂಶ



ಮೈಸೂರು,ಏ.14–ದ್ವಿತೀಯ ಪಿಯು ಪರೀಕ್ಷೆ ವಾಣಿಜ್ಯ ವಿಭಾಗದ ಎನ್.ವಿನುತಾಗೆ ಶೇ.92ರಷ್ಟು ಅಂಕ ಪಡೆದು ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾಳೆ. ಕನ್ನಡದಲ್ಲಿ 99, ಇಂಗ್ಲಿಷ್–85, ಅರ್ಥಶಾಸ್ತ್ರ–91, ವ್ಯಾಪಾರ ಅಧ್ಯಯನ–97, ಲೆಕ್ಕಪತ್ರ ನಿರ್ವಹಣೆ–87, ಗಣಕ ವಿಜ್ಞಾನ–96 ಅಂಕ ಗಳಿಸಿದ್ದಾರೆ. ಈಕೆ ಎಸ್‌ಡಿಎಂ ಕಾಲೇಜಿನಲ್ಲಿ ವಿದ್ಯಾರ್ಥಿನಿ, ಆಟೋ ಚಾಲಕ ಎಸ್.ನಾಗರಾಜು ಮತ್ತು ಶೀಲಾವತಿ ದಂಪತಿ ಪುತ್ರಿ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

15.04.2025 ಮಂಗಳವಾರ, ಮಳೆ ನಕ್ಷತ್ರ: ಅಶ್ವಿನಿ 13.04.2025 ರಿಂದ 26.04.2025 ವಿಶ್ವವಸು ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ಚೈತ್ರ ಮಾಸ, ಕೃಷ್ಣ ಪಕ್ಷ, ತಿಥಿ: ಬಿದಿಗೆ, ನಕ್ಷತ್ರ: ವಿಶಾಖ, ರಾಹುಕಾಲ: ಮಧ್ಯಾಹ್ನ 3 ರಿಂದ 4.30 ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಯಕೃತ್ತಿನ ಸಮಸ್ಯೆಗೆ ಚಿಕಿತ್ಸಾ ಶಿಬಿರ, ಕುತ್ತಿಗೆ ಮತ್ತು ಬೆನ್ನು ನೋವಿಗೆ ಆಕ್ಯೂಪಂಕ್ಚರ್ ಮತ್ತು ಯೋಗ ಶಿಬಿರ, ಬೊಜ್ಜು ನಿವಾರಣಾ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ ಆವರಣ, ಲಲಿತಾದ್ರಿ ರಸ್ತೆ, ಆಲನಹಳ್ಳಿ, ಬೆಳಗ್ಗೆ 9ರಿಂದ

■ **ಕಾವೇರಿ ಆಯುರ್ವೇದ ಆಸ್ಪತ್ರೆ :** ಮಕ್ಕಳ ಆರೋಗ್ಯ ತಪಾಸಣೆ ಮತ್ತು ಚಿಕಿತ್ಸಾ ಶಿಬಿರ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್, ಕೆಬಿಎಲ್ ಲೇಔಟ್, ಬೆಳಗ್ಗೆ 10 ರಿಂದ.

■ **ನವೋದಯ ಫೌಂಡೇಷನ್ :** ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ತರಬೇತಿ ಶಿಬಿರ, ಸ್ಥಳ: ನವೋದಯ ಫೌಂಡೇಷನ್, ಪಂಚಮಂತ್ರ ರಸ್ತೆ, ಕುವೆಂಪುನಗರ, ಬೆಳಗ್ಗೆ 10 ರಿಂದ.

■ **ಜೆಎಸ್‌ಎಸ್ ಮಹಿಳಾ ಕಾಲೇಜು :** ಬೆಳಗ್ಗೆ 10.30ಕ್ಕೆ ಕಲಾ ವೈಭವ–2025, ವರ್ಣಿಕಾ ಪ್ರತಿಭಾ ಪರ್ವ, ಅಂತರ ಕಾಲೇಜು ಸ್ಪರ್ಧೆಗಳು, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಉದ್ಘಾಟನೆ : ಸಾಹಿತಿ ಡಾ. ಎಸ್.ಪಿ. ಉಮಾದೇವಿ, ಅಧ್ಯಕ್ಷತೆ : ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕ ಪ್ರೊ. ಮೊರಬದ ಮಲ್ಲಿಕಾರ್ಜುನ, ಮುಖ್ಯ ಅತಿಥಿಗಳು : ನಿವೃತ್ತ ಪ್ರಾಂಶುಪಾಲ ಪ್ರೊ. ಎಸ್. ಮಲ್ಲಣ್ಣ, ಚಲನಚಿತ್ರ ನಟ ವಿಕ್ಕಿ ವರುಣ್; ಸಂಜೆ 4ಕ್ಕೆ ಸಮಾರೋಪ ಸಮಾರಂಭ, ಅಧ್ಯಕ್ಷತೆ: ಸಂಗೀತ ವಿವಿ ಕುಲಪತಿ ಪ್ರೊ. ನಾಗೇಶ್ ವಿ. ಬೆಟ್ಟಕೋಟೆ, ಸಮಾರೋಪ ಭಾಷಣ : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಎಂ.ಡಿ. ಸುದರ್ಶನ್, ಮುಖ್ಯ ಅತಿಥಿಗಳು : ಪ್ರೊ. ನವಿತ ತಿಮ್ಮಯ್ಯ, ಪ್ರಾಂಶುಪಾಲರಾದ ಡಾ. ರೇಚಣ್ಣ, ಸ್ಥಳ: ಕಾಲೇಜು ಆವರಣ.

■ **ಬಾಸುದೇವ ಸೋಮಾನಿ ಕಾಲೇಜು :** ಡಾ. ಬಿ.ಆರ್. ಅಂಬೇಡ್ಕರ್‌ರವರ 134ನೇ ಜನ್ಮ ದಿನಾಚರಣೆ, ಉದ್ಘಾಟನೆ : ಕಾಲೇಜು ಅಧ್ಯಕ್ಷ ಡಾ. ಎಂ. ಪುಟ್ಟಸ್ವಾಮಿ, ಮುಖ್ಯ ಭಾಷಣಕಾರರು : ಪ್ರೊ. ಎಸ್. ನರೇಂದ್ರಕುಮಾರ್, ಮುಖ್ಯ ಅತಿಥಿಗಳು : ಕಾರ್ಯದರ್ಶಿ ಕುಬೇರ್ ಪಿ. ಗೌಡ, ಆಡಳಿತಾಧಿಕಾರಿ ಪಿ.ಗೀತಾಂಜಲಿ, ಮ್ಯಾನೇಜಿಂಗ್ ಟ್ರಸ್ಟಿ ಶ್ರೀಮತಿ ಎಸ್. ಪ್ರಭಾ, ಅಧ್ಯಕ್ಷತೆ : ಕಾಲೇಜು ಪ್ರಿನ್ಸಿಪಾಲ್ ಡಾ. ಎಂ. ಮಹದೇವಸ್ವಾಮಿ, ಸ್ಥಳ: ಕಾಲೇಜು ಸಭಾಂಗಣ, ಬೆಳಗ್ಗೆ 11ಕ್ಕೆ.

■ **ದಲಿತ ಸಂಘರ್ಷ ಸಮಿತಿ :** ಡಾ. ಬಿ.ಆರ್. ಅಂಬೇಡ್ಕರ್‌ರವರ 134ನೇ ಜನ್ಮ ದಿನಾಚರಣೆ ಅಂಗವಾಗಿ ಸ್ವಾತಂತ್ರ್ಯ ನಂತರ ಭಾರತದ 77 ವರ್ಷಗಳ ನಡೆಯಲ್ಲಿ ಸಂಕಿರಣಗೊಂಡ ಸಂವಿಧಾನದ ಆಶಯಗಳು ಕುರಿತು ಜನಜಾಗೃತಿ ಸಮಾವೇಶ, ಉದ್ಘಾಟನೆ : ದಲಿತ ಸಂಘರ್ಷ ಸಮಿತಿ ರಾಜ್ಯ ಸಂಚಾಲಕ ಗುರುಪ್ರಸಾದ್ ಕೆರಗೋಡು, ಅಧ್ಯಕ್ಷತೆ : ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಬೆಟ್ಟಯ್ಯ ಕೋಟೆ, ಉಪಸ್ಥಿತರು : ಡಾ. ಎಸ್. ತುಕರಾಮ್, ಡಾ. ಪಿ. ಪದ್ಮಶ್ರೀ, ಆಲಗೂಡು ಶಿವಕುಮಾರ್, ಶಂಭುಲಿಂಗಸ್ವಾಮಿ, ಹೆಗ್ಗನೂರು ನಿಂಗರಾಜು, ಬಿ.ಡಿ. ಶಿವಬುದ್ಧಿ, ಸ್ಥಳ: ನಟರಾಜ ಕಲ್ಯಾಣ ಮಂಟಪ, ಗನ್‌ಹೌಸ್ ಹತ್ತಿರ, ಬೆಳಗ್ಗೆ 11ಕ್ಕೆ

■ **ಅರಳಿಕಟ್ಟೆ ಶ್ರೀರಾಮ ದೇವಸ್ಥಾನ ಧಾರ್ಮಿಕ ಮತ್ತು ದಾನದತ್ತಿ:** ಶ್ರೀ ವಿಶ್ವವಸು ನಾಮಸಂವತ್ಸರದ ಶ್ರೀರಾಮ ನವಮಿ, ನಿವೇದಿತನಗರದ ಶ್ರೀಕರ ಹರಿದಾಸ ಭಜನಾ ಮಂಡಳಿಯಿಂದ ಭಜನೆ, ಸ್ಥಳ: ಶ್ರೀರಾಮ ದೇವಸ್ಥಾನ, ಜಯಲಕ್ಷ್ಮೀ ವಿಲಾಸ ರಸ್ತೆ, ಚಾಮರಾಜಪುರಂ, ಸಂಜೆ.

■ **ಭಾರತೀಯ ಚಾರ್ಟರ್ಡ್ ಅಕೌಂಟೆಂಟ್ಸ್ ಸಂಸ್ಥೆ, ಮೈಸೂರು ಶಾಖೆ :** ಚಾರ್ಟರ್ಡ್ ಅಕೌಂಟೆಂಟ್ ವಿ. ಅಭಿಷೇಕ್ ಅವರಿಂದ ಸಿಜಿಎಸ್‌ಟಿ ಕಾಯ್ದೆ 2017ರ ಸೆಕ್ಷನ್ 73–70–ಬೇಡಿಕೆ ಮತ್ತು ವಸೂಲಾತಿ ನಿಬಂಧನೆಗಳ ನಿರ್ಣಯ ಕುರಿತು ಉಪನ್ಯಾಸ, ಸ್ಥಳ: ರೋಟರಿ ಕೇಂದ್ರ, ಜೆಎಲ್‌ಬಿ ರಸ್ತೆ, ಮುಡಾ ಎದುರು, ಸಂಜೆ 5.30ಕ್ಕೆ.

■ **ಶ್ರೀ ರಾಮಾಭ್ಯುದಯ ಸಭಾ ಚಾರಿಟಬಲ್ ಟ್ರಸ್ಟ್:** ಶ್ರೀ ವಿಶ್ವವಸು ನಾಮ ಸಂವತ್ಸರದ 135ನೇ ವರ್ಷದ ಶ್ರೀ ರಾಮೋತ್ಸವ, ವಿದ್ವಾನ್ ಅಮೃತ ಮುರಳಿ ಅವರಿಂದ ಶಾಸ್ತ್ರೀಯ ಸಂಗೀತ, ವಿದ್ವಾನ್ ಆರ್.ಕೆ. ಶ್ರೀರಾಂಕುಮಾರ್–ಪಿಟೀಲು, ವಿದ್ವಾನ್ ಅರುಣ್ ಪ್ರಕಾಶ್–ಮೃದಂಗ, ವಿದ್ವಾನ್ ಭಾರ್ಗವ ಹಾಲಂಬಿ–ಖಂಜೀರ, ಸ್ಥಳ: ಶ್ರೀಮತಿ ಆಲಮ್ಮನವರ ಛತ್ರ, ಕುಂಚಿಟಿಗರ ಸಂಘ, ಶ್ರೀರಾಮ ಪೇಟೆ, ಸಂಜೆ 6.30ರಿಂದ.

■ **ಶ್ರೀರಾಮಮಂದಿರ (ಜಯನಗರ):** ಶ್ರೀ ರಾಮಚಂದ್ರ ಸ್ವಾಮಿಯವರ 50ನೇ ವರ್ಧಂತ್ಯುತ್ಸವ, ಸೀತಾ ಕಲ್ಯಾಣ, ಶ್ರೀ ರಾಮ ಪಟ್ಟಾಭಿಷೇಕ, ಶ್ರೀ ಆದಿತ್ಯಾದಿ ನವಗ್ರಹಗಳ ವಾರ್ಷಿಕೋತ್ಸವ, ಹನುಮಂತೋತ್ಸವ, ಕುಂಭಾಭಿಷೇಕ, 59ನೇ ವಾರ್ಷಿಕೋತ್ಸವ ಕಾರ್ಯಕ್ರಮ, ಬೆಳಗ್ಗೆ 9ಕ್ಕೆ ಶ್ರೀ ಲಲಿತಾ ಹೋಮ, ಸಂಜೆ 6.30ಕ್ಕೆ ವಿದ್ವಾನ್ ಆರ್.ಕೆ. ಪದ್ಮನಾಭ ಅವರಿಂದ ವೀಣಾ ವಾದನ, ಸ್ಥಳ: ರಾಮ ಮಂದಿರ ಆವರಣ, ಜಯನಗರ.

■ **ಶ್ರೀರಾಮ ಸೇವಾ ಮಂಡಲಿ (ಶ್ರೀರಾಮ ಸೇವಾ ಚಾರಿಟಬಲ್ ಟ್ರಸ್ಟ್ ಅಂಗ ಸಂಸ್ಥೆ):** 72ನೇ ವರ್ಷದ ಶ್ರೀ ರಾಮೋತ್ಸವ, ಬೆಂಗಳೂರಿನ ಕುಶಲ್ ಅವರಿಂದ ಪಿಟಿಲು ವಾದನ, ವಿದ್ವಾನ್ ಹೆಚ್.ಎಲ್. ಶಿವಶಂಕರಸ್ವಾಮಿ–ಮೃದಂಗ, ವಿದ್ವಾನ್ ಎಸ್. ಮಂಜುನಾಥ್–ಘಟಂ, ಸ್ಥಳ: ಸೇವಾ ಮಂಡಲಿ ಆವರಣ, ವಿದ್ಯಾರಣ್ಯಪುರಂ, ಸಂಜೆ 6.30ಕ್ಕೆ.

ಕೆ.ಆರ್.ನಗರದಲ್ಲಿ ಇಂದು

■ **ಶ್ರೀರಾಮ ಸೇವಾ ಮಂಡಳಿ:** ಶ್ರೀ ರಾಮೋತ್ಸವ, ಪ್ರವಚನ, ನಂಜನಗೂಡಿನ ಕು. ಇಂಚರ ರವಿ ಮತ್ತು ತಂಡದಿಂದ ಭರತನಾಟ್ಯ, ಸ್ಥಳ: ಮಂಡಳಿ ಆವರಣ, ಚಂದ್ರಮೌಳೇಶ್ವರ ರಸ್ತೆ, ಕೆ.ಆರ್.ನಗರ, ಸಂಜೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಶ್ರದ್ಧೆಯ ಶಿಲ್ಪ–ಕರ್ನಾಟಕದ ಪ್ರಾಚೀನ ದೇವಾಲಯಗಳ ಪರಿಚಯ ಮಾಲಿಕೆ, ಲೇಖನ ಮತ್ತು ಪ್ರಸ್ತುತಿ: ಟಿ.ಎಸ್. ಗೋಪಾಲ್, ಪ್ರಾಯೋಜಕರು: ಅದಮ್ಯ ಚೇತನ ಫೌಂಡೇಶನ್, ಬೆಂಗಳೂರು, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ – ಸಿ.ವಿಶ್ವನಾಥ್, ಕೆ.ಬಿ. ಸುನೀತಾ ಆಚಾರ್ಯ, ವ್ಯಾಖ್ಯಾನ – ಡಾ. ಲತಾ ಮೈಸೂರು, 6.50 ರೈತರಿಗೆ ಸಲಹೆ, 7.15 ಕಾದಂಬರಿ ವಿಹಾರ: ಎಂ. ಆರ್. ಶ್ರೀನಿವಾಸಮೂರ್ತಿಯವರ ರಂಗಣ್ಣನ ಕನಸಿನ ದಿನಗಳು ಕಾದಂಬರಿಯ ಬಾನುಲಿ ಓದು. ಪ್ರಸ್ತುತಿ : ಉಮೇಶ್. ಎಸ್. ಎಸ್., 8.30 ಯೋಗ ಕುರಿತ ವಿಶೇಷ ಸರಣಿ ಮಹಾಯೋಗ, ವಿಷಯ : ಮನೋಯೋಗ, ಭಾಗವಹಿಸುತ್ತಾರೆ–ಡಾ. ವಿಶ್ವನಾಥ್, ನಿರ್ಮಾಣ–ನಂದನ್ ಕುಮಾರ್. ಎಲ್. ಓ., 8.35 ಕರೆಗೊಂದು ಗೀತೆ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ನೇರ ಫೋನ್ ಇನ್ ಕಾರ್ಯಕ್ರಮ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಮಲ್ಲಾಡಿ ಸಹೋದರರು–ಯುಗಳ ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ಕಥೆಯಲ್ಲಿದೆ ಉತ್ತರ, ಪ್ರಸ್ತುತಿ : ಪ್ರಭುಸ್ವಾಮಿ ಮಳಿಮಠ್ ಹಾಗೂ ಕಾರ್ತಿಕ್. ಎಂ. ಎಸ್

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಕನ್ನಡದಲ್ಲಿ ಭಾಷಣ ಇದು ಪತ್ರದ ಕಥೆ ದೀಪಾ ಫಡ್ಕೆ ಅವರಿಂದ ಪ್ರಬಂಧ, 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ ಪ್ರಧಾನ ಮಂತ್ರಿ ಸ್ವಾಸ್ಥ್ಯ ಸುರಕ್ಷಾ ಯೋಜನೆ ಕುರಿತು ಮಾಹಿತಿ, 1.20 ಭಾವಗೀತೆಗಳು – ಬಿ.ಆರ್. ಗೀತಾ, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ: ಹೈದರಾಬಾದ್ ಸಹೋದರಿಯರಾದ ಲಲಿತಾ ಹಾಗೂ ಹರಿಪ್ರಿಯ–ಯುಗಳ ಹಾಡುಗಾರಿಕೆ, 4.00 ಕಥಾಕಾಲಕ್ಷೇಪ – ವಾಲಿಮೋಕ್ಷ, ಪ್ರಸ್ತುತಿ–ಸಂತ ಕೇಶವದಾಸರು, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ – ಕಿಸಾನ್ ವಾಣಿ–ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ. ಭತ್ತದ ಹಾಗೂ ಕಬ್ಬಿನ ಬೇಸಾಯದಲ್ಲಿ ಹಸಿರೆಲೆ ಗೊಬ್ಬರದ ಮಹತ್ವ ಕುರಿತು ಸಂವಾದ. ಭಾಗವಹಿಸುತ್ತಾರೆ–ನಿವೃತ್ತ ಸಹಾಯಕ ಕೃಷಿ ನಿರ್ದೇಶಕರಾದ ಕೆ.ಆರ್.ರವೀಂದ್ರ ಮತ್ತು ಮಂಡ್ಯ ತಾಲ್ಲೂಕು ಬಸರಾಳು ಹೋಬಳಿ ಹಲ್ಲೇಗೆರೆ ಗ್ರಾಮದ ಹೆಚ್.ಕೆ.ದೊಡ್ಡಲಿಂಗಯ್ಯ, ಪ್ರಸ್ತುತಿ :ಎನ್. ಕೇಶವಮೂರ್ತಿ, 7.45 ಮೈಸೂರು ಜಂಕ್ಷನ್–ಸಾಪ್ತಾಹಿಕ ಸಂಚಿಕೆ, ಪ್ರಸ್ತುತಿ : ಜಾಂಪಣ್ಣ ಆಶೀಹಾಳ್, 8.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ಪ್ರವೀಣ್ ಗೋಡ್ಖಿಂಡಿ–ಬಾನ್ಸುರಿ ವಾದನ, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ: ಡಿ. ಪಶುಪತಿ–ಹಾಡುಗಾರಿಕೆ, 10.00 ಚೈತ್ರವನ–ಲಕ್ಷ್ಮೀಶನ ಜೈಮಿನಿ ಭಾರತದ ಸಮಗ್ರ ವಾಚನ ಹಾಗೂ ವ್ಯಾಖ್ಯಾನ, ಪ್ರಸ್ತುತಿ : ಡಾ. ಎ.ಎಸ್. ಶಂಕರನಾರಾಯಣ, 10.30 ಸವಿನೆನಪು–ಹಳೆಯ ಕನ್ನಡ ಚಿತ್ರಗೀತೆಗಳು

ಮೈಸೂರಿನ ಅಶೋಕಪುರಂನಲ್ಲಿ ಹಬ್ಬದಂತೆ ಅಂಬೇಡ್ಕರ್ ಜಯಂತಿ ಆಚರಣೆ



ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 134 ನೇ ಜಯಂತಿ ಆಚರಣೆ ಹಿನ್ನೆಲೆ ಮೈಸೂರಿನ ಅಶೋಕಪುರಂನಿಂದ ಸ್ತಬ್ಧಚಿತ್ರಗಳಿರುವ ಅತ್ಯಾಕರ್ಷಕ ಮೆರವಣಿಗೆ ನಗರದ ಪ್ರಮುಖ ರಸ್ತೆಗಳಲ್ಲಿ ಸಾಗಿತು.

ಮೈಸೂರು, ಏ.14(ಬಿಎಲ್‌ಯು)– ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 134ನೇ ಜಯಂತಿಯನ್ನು ಮೈಸೂರಿನ ಅಶೋಕಪುರಂನಲ್ಲಿ ಇಂದು ಹಬ್ಬದಂತೆ ಆಚರಿಸಲಾಯಿತು.

ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಅಶೋಕ ಪುರಂನಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಉದ್ಯಾನ ವನದಲ್ಲಿ ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು. ನಂತರ ಮೆರವಣಿಗೆಗೆ ಚಾಲನೆ ನೀಡಿ ಅಶೋಕಪುರಂ ಮುಖ್ಯ ರಸ್ತೆಯಲ್ಲಿ ಸಾಗಿದ ಮೆರವಣಿಗೆ ಯಲ್ಲಿ ಜನತೆಯ ಜೊತೆ ಜೊತೆಗೆ ಸಾಗಿದರು. ಬಲ್ಲಾಳ್ ವೃತ್ತದಲ್ಲಿ ಅಭಿಮಾನಿಗಳ ಒತ್ತಾಯದ ಮೇರೆಗೆ ಒಂದಷ್ಟು ಕಾಲ ನೃತ್ಯ ಮಾಡಿದರು.

ಅಶೋಕಪುರಂನ ಹಲವು ರಸ್ತೆಗಳಲ್ಲಿ ಮಂಟಪ ನಿರ್ಮಿಸಿ ಅಂಬೇಡ್ಕರ್ ಅವರ ಹಲವು ಭಾವಚಿತ್ರಗಳನ್ನು ಪ್ರದರ್ಶಿಸಲಾಗಿತ್ತು. ಪ್ರತಿ ರಸ್ತೆಯಲ್ಲಿ ಉಪಾಹಾರ ಹಾಗೂ ಸಿಹಿ ಹಂಚಲಾಯಿತು.

ಸ್ತಬ್ಧಚಿತ್ರಗಳಲ್ಲಿದ್ದ ಅಂಬೇಡ್ಕರ್ ಅವರ ಹಲವು ಅರ್ಥಪೂರ್ಣ ಸಂದೇಶಗಳು

- ನಿಮ್ಮನ್ನು ಬಿಟ್ಟುಕೊಳ್ಳದ ದೇವಸ್ಥಾನಕ್ಕೆ ಹೋಗಿ ಗುಲಾಮರಾಗುವುದಕ್ಕಿಂತ ಗ್ರಂಥಾಲಯಕ್ಕೆ ಹೋಗಿ ವಿದ್ವಾಂಸರಾಗಿ
- ನೀವು ಹೋರಾಟ ಮಾಡದಿದ್ದರೂ ಪರ್ವಾಗಿಲ್ಲ, ಆದರೆ ಮಾರಾಟವಾಗಬೇಡಿ
- ಬದುಕಿದರೆ ಹುಲಿ, ಸಿಂಹದಂತೆ ಬದುಕಿ, ಏಕೆಂದರೆ ಬಲಿ ಕೊಡುವವರು ಕುರಿ ಕೋಳಿಗಳನ್ನೆ ಹೊರತು ಹುಲಿ, ಸಿಂಹಗಳನ್ನಲ್ಲ
- ಶಿಕ್ಷಣ ಪ್ರಬಲ ಮತ್ತು ಪರಿಣಾಮಕಾರಿ ಅಸ್ತ್ರ ಎಂಬುದನ್ನು ಅರಿಯಿರಿ

ಅಶೋಕಪುರಂನ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ನೂರಾರು ಜನರು ಅಂಬೇಡ್ಕರ್ ಅವರು ದೇಶಕ್ಕೆ ನೀಡಿದ ಕೊಡುಗೆಗಳನ್ನು ಸ್ಮರಿಸಿದರು.

ಅಂಬೇಡ್ಕರ್, ಬುದ್ಧ ಹಾಗೂ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಪ್ರತಿಮೆಗಳಿರುವ ಸ್ತಬ್ಧಚಿತ್ರವನ್ನು ಅತ್ಯಾಕರ್ಷಕವಾಗಿ ನಿರ್ಮಿಸಲಾಗಿತ್ತು. ಜೊತೆಗೆ ಅಂಬೇಡ್ಕರ್ ಪರಿಣಿತಿ ಹೊಂದಿದ್ದ ಪುಸ್ತಕಗಳನ್ನು ಜೋಡಿಸಿರುವ ಸ್ತಬ್ಧಚಿತ್ರ ಕೂಡ ಗಮನ ಸೆಳೆಯಿತು. ಜಾನಪದ ಕಲಾತಂಡಗಳೊಂದಿಗೆ ಮೆರವಣಿಗೆ ನಗರದ ಪ್ರಮುಖ ರಸ್ತೆಗಳಲ್ಲಿ ಸಾಗಿತು. ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಮಾಜಿ ಮೇಯರ್‌ಗಳಾದ ಪುರುಷೋತ್ತಮ್, ಸಿದ್ದರಾಜು, ರಾಮಸ್ವಾಮಿ, ವಾಸು ಸೇರಿದಂತೆ ಹಲವರು ಮೆರವಣಿಗೆಯಲ್ಲಿ ಸಾಗಿದರು.

ದೇಶಕ್ಕೆ ಶ್ರೇಷ್ಠ ಸಂವಿಧಾನ ನೀಡಿದ ಅಂಬೇಡ್ಕರ್

ಮಾಜಿ ಮೇಯರ್ ಸಂದೇಶ್ ಸ್ವಾಮಿ



ಬಿಜೆಪಿ ನರಸಿಂಹರಾಜ ವಿಧಾನಸಭಾ ಕ್ಷೇತ್ರ ಎಸ್ಸಿ ಮೋರ್ಚಾ ವತಿಯಿಂದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತ(ಎಫ್‌ಟಿಎಸ್ ಸರ್ಕಲ್)ದಲ್ಲಿ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ 134ನೇ ಜಯಂತ್ಯುತ್ಸವ ಆಚರಿಸಲಾಯಿತು. ಮಾಜಿ ಮೇಯರ್ ಸಂದೇಶ್ ಸ್ವಾಮಿ, ಕ್ಷೇತ್ರದ ಪಕ್ಷದ ಅಧ್ಯಕ್ಷ ಮಂಜುನಾಥ್, ಪ್ರಧಾನ ಕಾರ್ಯದರ್ಶಿ ಪದ್ಮನಾಭ, ಎಸ್ಸಿ ಮೋರ್ಚಾ ಅಧ್ಯಕ್ಷ ಸುಬ್ರಹ್ಮಣ್ಯ, ಪ್ರಧಾನ ಕಾರ್ಯದರ್ಶಿ ಕಾರ್ತಿಕ್, ಓಬಿಸಿ ಮೋರ್ಚಾ ಪ್ರಧಾನ ಕಾರ್ಯದರ್ಶಿ ಮಣಿರತ್ನಂ ನಾಗರಾಜ್, ಕೃಷ್ಣಮೂರ್ತಿ ರಾವತ್, ನಾರಾಯಣ ಲೋಲಪ್ಪ, ನಾರಾಯಣ, ಶಾಂತರಾಜ್, ಶ್ರೀನಿವಾಸ್, ಜಗದೀಶ್, ಸತೀಶ್, ನಂಜುಂಡಸ್ವಾಮಿ, ಸುರೇಂದ್ರ, ಕವಿತಾ ಮತ್ತಿತರರು ಉಪಸ್ಥಿತರಿದ್ದರು.


ಮೈಸೂರು, ಏ.14– ಭಾರತಾಂಬೆ ಮಕ್ಕಳಿಗೆ ಶ್ರೇಷ್ಠ ಸಂವಿಧಾನವನ್ನು ಕೊಡುಗೆ ನೀಡಿದ ಮಹಾ ನಾಯಕ ಡಾ.ಬಿ.ಆರ್.ಅಂಬೇಡ್ಕರ್ ಅವರನ್ನು ನಿತ್ಯ ಸ್ಮರಣೆ ಮಾಡಬೇಕು ಎಂದು ಮಾಜಿ ಮೇಯರ್ ಸಂದೇಶ್‌ಸ್ವಾಮಿ ಹೇಳಿದರು.

ಸಂವಿಧಾನಶಿಲ್ಪಿ ಬಾಬಾ ಸಾಹೇಬ್ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ ಅಂಗವಾಗಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮಾತನಾಡಿದ ಅವರು, ವಿವಿಧತೆಯಲ್ಲಿ ಏಕತೆಗೆ ಹೆಸರಾಗಿರುವ ಭಾರತಕ್ಕೆ ಡಾ.ಬಿ.ಆರ್.ಅಂಬೇಡ್ಕರ್ ಅವರು ಜಗತ್ತಿನಲ್ಲೇ ಅತ್ಯಂತ ಶ್ರೇಷ್ಠ ಸಂವಿಧಾನ ನೀಡಿದ್ದಾರೆ. ಎಲ್ಲಾ ಧಾರ್ಮಿಕ ಗ್ರಂಥಗಳಂತೆ ಸಂವಿಧಾನವೂ ಶ್ರೇಷ್ಠ ಗ್ರಂಥವಾಗಿದ್ದು, ಇದನ್ನು ಪ್ರತಿಯೊಬ್ಬ ಭಾರತೀಯನೂ ಗೌರವಿಸಬೇಕು. ಜೊತೆಗೆ ಸಂವಿಧಾನಶಿಲ್ಪಿ ಡಾ. ಅಂಬೇಡ್ಕರ್ ಸ್ಮರಣೆ ಜಯಂತಿಗಷ್ಟೇ ಸೀಮಿತಗೊಳ್ಳದೆ ನಿತ್ಯ ನಿರಂತರವಾಗಿರಬೇಕು ಎಂದು ಆಶಿಸಿದರು.

ಸರ್ವರಿಗೂ ಸಮಬಾಳು ಮತ್ತು ಸಮಪಾಲು ಎಂಬುದು ಸಂವಿಧಾನದ ಮೂಲ ಆಶಯ. ಧರ್ಮಾಧಾರಿತ ಹಾಗೂ ಪ್ರಾದೇಶಿಕ ನೆಲೆಗಟ್ಟಿನಲ್ಲಿ ಜೀವನಶೈಲಿ, ಸಂಪ್ರದಾಯ, ಆಚರಣೆಗಳಲ್ಲಿ ಭಿನ್ನತೆ ಇರುವ ಭಾರತದಲ್ಲಿ ಏಕತೆಗೆ ಯಾವುದೇ ಧಕ್ಕೆಯಾಗಿಲ್ಲ. ಹಾಗೆಯೇ ಏಕತೆ, ಸಮಾನತೆ ಸಾಧಿಸುವಲ್ಲಿ ಸಂವಿಧಾನ ಮಹತ್ವದ ಪಾತ್ರ ವಹಿಸಿದೆ ಎಂದರು.

ಜಗತ್ತಿನಲ್ಲೇ ಅತೀ ಹೆಚ್ಚು ಜನಸಂಖ್ಯೆ ಹೊಂದಿರುವ ಭಾರತ ದೇಶದ ಮುನ್ನಡೆಗೆ ನಮ್ಮ ಪ್ರಜಾಪ್ರಭುತ್ವ ವ್ಯವಸ್ಥೆ ಹಾಗೂ ಅದಕ್ಕೆ ಮೂಲಕಾರಣವಾಗಿರುವುದು ನಮ್ಮ ಸಂವಿಧಾನ. ಇದು ದೇಶದ ರಕ್ಷೆ ಹಾಗೂ ಅಭಿವೃದ್ಧಿಗೆ ಮಾರ್ಗಸೂಚಿ. ಆದ್ದರಿಂದ ಯಾವುದೇ ರಾಜಕೀಯ ನಾಯಕರು ಸಂವಿಧಾನದ ಬಗ್ಗೆ ಹಗುರವಾದ ಹೇಳಿಕೆ ನೀಡಬಾರದು. ಎಲ್ಲರೂ ಡಾ.ಬಿ.ಆರ್.ಅಂಬೇಡ್ಕರ್ ಅವರ ತತ್ವಾದರ್ಶಗಳನ್ನು ಕಿಂಚಿತ್ತಾದರೂ ಅನುಸರಿಸಿದರೆ ಅದು ಅವರಿಗೆ ನೀಡುವ ಬಹುದೊಡ್ಡ ಗೌರವವಾಗುತ್ತದೆ ಎಂದು ಸಂದೇಶ್ ಸ್ವಾಮಿ ಅಭಿಪ್ರಾಯಿಸಿದ್ದಾರೆ.

ಹುಟ್ಟುಹಬ್ಬ ಸಂಭ್ರಮ...



ಕರ್ನಾಟಕ ಪ್ರದೇಶ ಕುರುಬರ ಸಂಘದ ಮಾಜಿ ಅಧ್ಯಕ್ಷ ಬಿ.ಸುಬ್ರಹ್ಮಣ್ಯ ಅವರಿಗೆ ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡರು ಅಭಿನಂದಿಸಿ, ಹುಟ್ಟುಹಬ್ಬದ ಶುಭಾಶಯ ಕೋರಿದರು. ಈ ವೇಳೆ ಮಾಜಿ ಮೇಯರ್ ಟಿ.ಬಿ.ಚಿಕ್ಕಣ್ಣ, ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷರಾದ ರವಿ, ರಮೇಶ್, ಕೊಲ್ಲಾಪುರದಮ್ಮ ದೇವಸ್ಥಾನದ ಅಧ್ಯಕ್ಷ ನಾಗರಾಜು, ಮುಖಂಡರಾದ ದಿನೇಶ್, ಲೋಕೇಶ್‌ಕುಮಾರ್ ಮಾದಾಪುರ, ಎಸ್‌ಬಿಎಂ ಯೋಗೇಶ್, ವಿಕಾಸ್, ನವೀನ್, ಬಸಪ್ಪ, ರಮೇಶ, ಕಾಂಜಿಗೌಡ ಮತ್ತಿತರರು ಉಪಸ್ಥಿತರಿದ್ದರು.

ಗಾಂಜಾ ಮಾರಾಟ ಯತ್ನ; ವ್ಯಕ್ತಿ ಬಂಧನ

ಮೈಸೂರು, ಏ.14– ಗಾಂಜಾ ಮಾರಾಟಕ್ಕೆ ಯತ್ನಿಸುತ್ತಿದ್ದ ಯುವಕನನ್ನು ಮೈಸೂರಿನ ಸಿಸಿಬಿ ಪೊಲೀಸರು ಬಂಧಿಸಿದ್ದಾರೆ.

ಮಂಡಿ ಮೊಹಲ್ಲಾ ನಿವಾಸಿ ಸಾದಿಕ್ ಪೀರ್(25) ಬಂಧಿತನಾಗಿದ್ದು, ಆತನ ಬಳಿ ಇದ್ದ ಸುಮಾರು 515 ಗ್ರಾಂ ಗಾಂಜಾ ವಶಪಡಿಸಿಕೊಳ್ಳಲಾಗಿದೆ

ಸಿಸಿಬಿ ಇನ್ಸ್‌ಪೆಕ್ಟರ್ ಶಬ್ಬೀರ್ ಹುಸೇನ್, ಸಿಬ್ಬಂದಿ ಪುರುಷೋತ್ತಮ್ ಹಾಗೂ ಅನಿಲ್ ನಿನ್ನೆ ಸಂಜೆ ಸುನ್ನಿಚೌಕದ ಬಳಿ ಗಸ್ತಿನಲ್ಲಿದ್ದಾಗ ಕೆಂಪು ಬಣ್ಣದ ಹ್ಯಾಂಡ್‌ಬ್ಯಾಗ್ ಹಿಡಿದು ಯುವಕ ನಿಂತಿದ್ದ. ಆತ ಪೊಲೀಸ್ ವಾಹನ ಕಂಡಾಕ್ಷಣ ಬ್ಯಾಗ್ ಅನ್ನು ಕಾಂಪೌಂಡ್‌ಗೆ ಒರಗಿಸಿದ್ದ ಕಾರ್ಡ್‌ಬೋರ್ಡ್ ಶೀಟ್ ಸಂದಿಗೆ ಬಿಸಾಡಿ ಓಡಲು ಯತ್ನಿಸಿದ. ಪೊಲೀಸರು ಆತನನ್ನು ಬೆನ್ನತ್ತಿ ಹಿಡಿದು ವಿಚಾರಿಸಿದಾಗ ಆತನ ವಿವರ ಹಾಗೂ ಗಾಂಜಾ ಪತ್ತೆಯಾಗಿದೆ. ಈ ಸಂಬಂಧ ಮಂಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೈಸೂರು ಮಿತ್ರ
ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

–ಜಾಹೀರಾತು ವ್ಯವಸ್ಥಾಪಕರು

PUBLIC NOTICE

Public are hereby notified that my client Mr. H.N.RAMATHIRTHA GPA Holder of Mrs. R.Rama Devi resident of # 4040, "KREEDA", 17th Main, 28th Cross, BSK II Stage, Bengaluru - 560 070, have lost the document bearing No.76/47-48, Book - 1, Volume 73 at Pages 205-209, dated: 05-01-1948 in the Office of the District Registrar, Bengaluru District and Document bearing No.96/70-71, Book - 1, Volume - 2800, Pages 248 to 249 dated: 13-04-1970 in the Office of the Sub-Registrar, Mysuru South in respect of property bearing No.2797, K-14, 2nd Main Road, Chamundipuram, K.R.Mohalla, Mysuru - 570004 Ward No.5 measuring East to West: 80 Feet and North to South: 42 Feet is bounded on the East by: Conservancy lane; West by: Road; North by: Private Property and South by: Private Property. Any person/s finding the same may kindly be hand it over to the undersigned and get suitable rewarded. A Police Complainant bearing GSC Acknowledgement No. PO012S250001832 dated 08-04-2025 & lost report No. 1562151, dated 12.04.2025 has been registered.

Sd/- B.G. Sriram,
Advocate & Notary
No.65, 13th Main Road, 4th Block East, Jayanagar, Bengaluru-560 011
Mob : 080 26536651

ನಕ್ಕರೆ ಅದೇ ಸ್ವರ್ಗ

ಯಾರನ್ನು ಮುಟ್ಟದ ಭಟ್ಟರು ವಿಮಾನದಲ್ಲಿ ಗಗನಸಖಿಯನ್ನು ಮುಟ್ಟಿದರು. ಯಾಕೆಂದು ಕೇಳಿದ್ದಕ್ಕೆ ಅಂತರಿಕ್ಷದಲ್ಲಿ ಹುಡುಗಿಯರು ದೇವಕನ್ಯೆಗೆ ಸಮಾ ಎಂದುಬಿಟ್ಟರು. ಯಾರ ಹತ್ರಾನೂ ನೀರನ್ನು ಮುಟ್ಟದ ಭಟ್ಟರು ವಿಮಾನದಲ್ಲಿ ಒಂದು ಬಿಯರ್ ಕುಡಿದು ಬಿಟ್ಟರು. ಏಕೆಂದು ಕೇಳಿದ್ದಕ್ಕೆ ಭೂ ಸ್ಪರ್ಶವಾಗದ ನೀರು ಅಮೃತಕ್ಕೆ ಸಮಾ ಎಂದು ಬಿಟ್ಟರು.

ಮೈಸೂರು ಮಿತ್ರ

ಮಂಗಳವಾರ, 15 ಏಪ್ರಿಲ್ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ..........

ಎಲ್ಲರನ್ನೂ ಮೆಚ್ಚಿಸುವಂತೆ ಬದುಕುವ ಕಲೆಯನ್ನು ನೀನು ರೂಢಿಸಿಕೊಂಡ ದಿನವೇ ನಿನ್ನ ಕೊನೆಯ ದಿನವಾಗುವುದು. – ಪಿ. ಲಂಕೇಶ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಮಣದಷ್ಟು ಮಾತಿಗಿಂತ ಕಣದಷ್ಟು ಕೆಲಸ ಲೇಸು.

ನಿಮ್ಮ ಪತ್ರಗಳು

ದಟ್ಟಗಳ್ಳಿ ಕಿಂಗ್ಸ್ ಕಾಫಿ ಶಾಪ್‌ನಿಂದ ದ್ವಿಚಕ್ರ ವಾಹನ ಸವಾರರಿಗೆ ತೊಂದರೆ



ಮಾನ್ಯರೆ,

ಮೈಸೂರಿನ ದಟ್ಟಗಳ್ಳಿ ರಿಂಗ್ ರಸ್ತೆಯಲ್ಲಿ ಅಂದರೆ ರಾಮಕೃಷ್ಣನಗರ ಸರ್ಕಲ್‌ನಿಂದ ಕೆಇಬಿ ಸರ್ಕಲ್‌ಗೆ ಹೋಗುವಾಗ ಇತ್ತೀಚೆಗಷ್ಟೇ ಅಂದರೆ 7–8 ತಿಂಗಳಲ್ಲಿ ಹೊಸದಾಗಿ ಕಿಂಗ್ಸ್ ಕಾಫಿ ಶಾಪ್ ಆರಂಭವಾಗಿದೆ.

ಅದೇ ರಸ್ತೆಯಲ್ಲಿ ಕೇಂದ್ರ ಸರ್ಕಾರದ ಯೋಜನೆಯಾದ ಸೈಕಲ್ ಫಾರ್ ಚೇಂಜ್ ಶೀರ್ಷಿಕೆಯಡಿಯಲ್ಲಿ ಸೈಕಲ್ ಟ್ರ್ಯಾಕ್ ಅನ್ನು ನಿರ್ಮಾಣ ಮಾಡಲಾಗಿದೆ.

ಸಮಸ್ಯೆ ಏನು ಅಂದರೆ,

ಕಿಂಗ್ಸ್ ಕಾಫಿ ಶಾಪ್‌ಗೆ ಪಾರ್ಕಿಂಗ್ ವ್ಯವಸ್ಥೆ ಇರುವುದಿಲ್ಲ. ಈ ಕಾಫಿ ಶಾಪ್ ಆರಂಭವಾದಾಗಿನಿಂದಲೂ ದ್ವಿಚಕ್ರ ವಾಹನ ಸವಾರರು ಜೀವವನ್ನು ಬಿಗಿದಿಡಿದು ಚಲಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

ಕಾರಣ, ಮೊದಲೇ ಸೈಕಲ್ ಟ್ರ್ಯಾಕ್ ಇರುವ ಈ ರಸ್ತೆಯಲ್ಲಿ ಅತಿಯಾದ ಭಯಾನಕ ಆಕಾರದ ತಿರುವು ಇದೆ. ಈ ತಿರುವಿನಲ್ಲಿ ಕಾಫಿ ಶಾಪ್‌ಗೆ ಬರುವ ಗ್ರಾಹಕರು ತಮ್ಮ ತಮ್ಮ ದೊಡ್ಡ ದೊಡ್ಡ ಕಾರುಗಳನ್ನು ನಿಲ್ಲಿಸಿ ಕಾಫಿಯನ್ನು ಸವಿಯಲು ಹೋಗುತ್ತಾರೆ. ಇದರಿಂದ ಇವರ ಕಾರುಗಳು ರಸ್ತೆಯ ಒಂದು ಭಾಗವನ್ನು ಸಂಪೂರ್ಣವಾಗಿ ಆವರಿಸಿಕೊಳ್ಳುತ್ತವೆ. ಇಂತಹ ಸಂದರ್ಭದಲ್ಲಿ ದ್ವಿಚಕ್ರ ವಾಹನ ಸವಾರರು ಸಾಗುವಾಗ ಅವರಿಗೆ ಅಡ್ಡಲಾಗಿ ರಸ್ತೆಯ ಎಡಭಾಗವನ್ನು ಆವರಿಸಿ ನಿಂತಿರುವ ದೊಡ್ಡ ದೊಡ್ಡ ವಾಹನಗಳನ್ನು ಸರಿದು ಹೋಗಲು ಬಲಭಾಗಕ್ಕೆ ಬರಬೇಕಾಗುತ್ತದೆ. ಬಲ ಭಾಗಕ್ಕೆ ಸಾಗುವ ಸಮಯದಲ್ಲಿ ಬಲಭಾಗದಿಂದ ವೇಗವಾಗಿ ಬರುವ ಕಾರುಗಳು, ಬಸ್ಸುಗಳಿಗೆ ಎಲ್ಲಿ ಸಿಕ್ಕಿ ಹಾಕಿಕೊಂಡು ಅಪಘಾತವಾಗುವುದೋ ಎಂಬ ಭಯದಿಂದ ಸಾಗಬೇಕಾದ ವಾತಾವರಣ ಸೃಷ್ಟಿಯಾಗಿದೆ.

ಪ್ರತಿದಿನ ಸಂಜೆ ಮಕ್ಕಳನ್ನು ಶಾಲೆಯಿಂದ ಕರೆತರುವ ತಾಯಂದಿರು, ಕೆಲಸ ಮುಗಿಸಿ ಮನೆಗೆ ಹೋಗುವ ಆತುರದಲ್ಲಿ ಬರುವ ಪೋಷಕರು, ಯಾರದೋ ಮಕ್ಕಳು, ಯಾರದೋ ಅಕ್ಕ, ಅಣ್ಣ, ತಮ್ಮ, ತಂಗಿ ಈ ರಸ್ತೆಯಲ್ಲಿ ಸಂಚರಿಸಬೇಕಾದಾಗ ಪಾರ್ಕಿಂಗ್ ವ್ಯವಸ್ಥೆ ಇಲ್ಲದ ಕಿಂಗ್ಸ್ ಕಾಫಿ ಶಾಪ್‌ನಿಂದ ಉದ್ಭವವಾದ ಸಮಸ್ಯೆಗೆ ಸಿಲುಕಿ ಅಪಘಾತ, ಅಪಾಯ ಸಂಭವಿಸಿದಲ್ಲಿ ಯಾರು ಹೊಣೆ? ಈ ಕುರಿತು ಅಲ್ಲಿನ ಟ್ರಾಫಿಕ್ ಪೊಲೀಸರು ಗಂಭೀರವಾಗಿ ಪರಿಗಣಿಸಿ ಸಾರ್ವಜನಿಕರಿಗೆ ಅದರಲ್ಲೂ ದ್ವಿಚಕ್ರ ವಾಹನ ಸವಾರರಿಗೆ ಸುಗಮ ಮತ್ತು ಸುರಕ್ಷಿತ ಸಂಚಾರ ಮಾಡಲು ಶಾಶ್ವತ ಪರಿಹಾರ ಮಾಡಿಕೊಡಬೇಕೆಂದು ಈ ಮೂಲಕ ಮನವಿ.

– ಭಯದಿಂದ ಸಂಚರಿಸುತ್ತಿರುವ ದ್ವಿಚಕ್ರ ವಾಹನ ಸವಾರರು, ದಟ್ಟಗಳ್ಳಿ, ಮೈಸೂರು.

ಮನೆ ಮಾದೇಗೌಡರಿಗೆ ಉಘೇ ಉಘೇ

ಮಾನ್ಯರೆ,



ರಾಮಕೃಷ್ಣ ಹೆಗ್ಗಡೆ ನೇತೃತ್ವದ ಜನತಾ ಪಕ್ಷ ಸರ್ಕಾರದ ಅವಧಿಯಲ್ಲಿ ಮೈಸೂರು ಅಭಿವೃದ್ಧಿ ವಿಶ್ವಸ್ಥ ಮಂಡಳಿ (ಸಿಐಟಿಬಿ) ಅಧ್ಯಕ್ಷರಾಗಿ ಸೂರಿಲ್ಲದವರಿಗೆ ಸೂರು ಕಲ್ಪಿಸಲು ಆಶಾಮಂದಿರ ಯೋಜನೆ ಅನುಷ್ಠಾನಕ್ಕೆ ತಂದು ಸೂರು ಕಲ್ಪಿಸಿ ಅರ್ಹ ಫಲಾನುಭವಿಗಳಿಗೆ ಮೈಸೂರಿನಲ್ಲಿ ಮನೆ ಬಾಗಿಲಿಗೆ ದಾಖಲೆ ತಲುಪಿಸಿ 'ಮನೆ ಮಾದೇಗೌಡ್ರು' ಎಂದು ಖ್ಯಾತ ನಾಮರಾಗಿರುವ ಡಿ ಮಾದೇಗೌಡರಿಗೆ ನಾಗರಿಕ ಸನ್ಮಾನ ಏರ್ಪಡಿಸಿ 'ಉಘೇ ಮಾದೇಗೌಡ್ರುಗೆ' ಶೀರ್ಷಿಕೆಯಡಿ ಸನ್ಮಾನಿಸಿರುವುದು ಶ್ಲಾಘನೀಯ. ಮಾದೇಗೌಡ ಅವರು ಮೈಸೂರಿನಲ್ಲಿ ಹುಡ್ಕೊ ನೆರವಿನಿಂದ 18 ಸಾವಿರ ನಿವೇಶನ ಹಾಗೂ 8 ಸಾವಿರ ಮನೆಗಳನ್ನು ಅರ್ಹ ಫಲಾನುಭವಿಗಳಿಗೆ ನೀಡಲು ನೆರವಾಗಿದ್ದಾರೆ. ಶ್ರೀಯುತರ ಸಮಾಜ ಸೇವಾ ಕಾರ್ಯಗಳನ್ನು ಗುರುತಿಸಿ "ಸ್ವಚ್ಛತಾ –ಇ– ಸೇವಾ" "ಹುಡ್ಕೋ ಸಂಸ್ಥೆ" ಪುರಸ್ಕಾರ, 2022ನೇ ಸಾಲಿನ ಮಂಡ್ಯದ ಜನದನಿ ಸಾಂಸ್ಕೃತಿಕ ಟ್ರಸ್ಟ್ ಕೊಡಮಾಡುವ ಇಂಡವಾಳು ಎಚ್.ಹೊನ್ನಯ್ಯ ಸಮಾಜ ಸೇವಾ ಪ್ರಶಸ್ತಿ ಹಾಗೂ 2022ನೇ ಸಾಲಿನ ಕರ್ನಾಟಕ ರಾಜ್ಯ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕಾರಕ್ಕೂ ಭಾಜನರಾಗಿರುವುದು ಅಭಿನಂದನಾರ್ಹ. ಇದುವರೆಗೂ ಮೈಸೂರಿನ ಜನತೆ ಕಂಡ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಲ್ಲಿ ಅತ್ಯುತ್ತಮ ಅಧ್ಯಕ್ಷರು ಡಿ.ಮಾದೇಗೌಡ ಅವರು ಎಂದರೆ ತಪ್ಪಾಗಲಾರದು. **–ಬೆಸಗರಹಳ್ಳಿ ರವಿ ಪ್ರಸಾದ್, ಮೈಸೂರು.**

ಮರ ಕಡಿದಿರುವುದು ನೋವಿನ ಸಂಗತಿ

ಮಾನ್ಯರೆ,



ಹೈದರಾಲಿ ರಸ್ತೆ ಅಗಲೀಕರಣ ಉದ್ದೇಶದಿಂದ 50 ವರ್ಷಗಳ 40 ಬೃಹತ್ ಮರಗಳನ್ನು ಕಡಿದಿರುವುದು ನಿಜಕ್ಕೂ ನೋವಿನ ಸಂಗತಿ. ಅಭಿವೃದ್ಧಿ ವಿಷಯಕ್ಕೆ ಬಂದರೆ ಅಗಲೀಕರಣ ಆಗಬೇಕಾದ ಯಾವುದೇ ಮರಗಳು ಇಲ್ಲದ ಬಿಷಪ್ ಹೌಸ್ ಮುಂಭಾಗದ ಬಿ ಎನ್ ರಸ್ತೆಯ ಅಗಲೀಕರಣ ಮಾಡಿಲ್ಲ. ಅದೇ ರೀತಿ ಡ್ಯೆರಿ ಸರ್ಕಲ್‌ನಿಂದ ಗೋಪಾಲಗೌಡ ಸರ್ಕಲ್ ತನಕ ಟ್ರಾಫಿಕ್ ಜಾಮ್ ತಪ್ಪಿಸಲು ಅಗಲೀಕರಣ ಮಾಡಿಲ್ಲ. ಪೊಲೀಸ್ ಅಕಾಡೆಮಿ ಮುಂಬಾಗ ಅಗಲೀಕರಣದ ಅವಶ್ಯಕತೆಇಲ್ಲ. ಆದರೆ ಮೌನವಾಗಿರುವ ಮರಗಳ ಮಾರಣ ಹೋಮ ದುರದೃಷ್ಟಕರ. ಮುಂದಾದರೂ ಇಂತಹ ಯೋಜನೆಗಳ ಅನುಷ್ಠಾನ ಮಾಡುವಾಗ ಸಾರ್ವಜನಿಕರ ಅಭಿಪ್ರಾಯ ಪಡೆಯಲು ಮನವಿ ಮಾಡಿದ್ದೇನೆ. ಸದ್ಯ ಕಾಂಗ್ರೆಸ್ ಕಚೇರಿಯ ಹತ್ತಿರ ರಸ್ತೆಬದಿಯ ಎರಡು ಮರಗಳನ್ನು ಉಳಿಸಿದ ಸಮಾಧಾನ ನನಗಿದೆ. **–ಶಂಕರೇಗೌಡ, ನಿವೃತ್ತ ಎಸ್.ಪಿ. ಮೈಸೂರು**



ಆರ್.ಪಿ. ಜಗದೀಶ್
ಹಿರಿಯ ಪತ್ರಕರ್ತರು,
ಮೊ: 98450 48051

ಸಕಾಲಿಕ

ಸಂಘರ್ಷ ಹಾದಿ ಹಿಡಿದ ಕೈ ಸರ್ಕಾರ

ಇಡೀ ದೇಶದಲ್ಲಿ ಭ್ರಷ್ಟಾಚಾರದಲ್ಲಿ ಕರ್ನಾಟಕಕ್ಕೆ ನಂಬರ್ 1 ಸ್ಥಾನ ಎಂದು ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ, ಮಾಜಿ ಸಚಿವ ಬಸವರಾಜ ರಾಯರೆಡ್ಡಿ ರಾಜಾರೋಷವಾಗಿಯೇ ಹೇಳುವ ಧೈರ್ಯ ಮಾಡಿದ್ದು ಮೆಚ್ಚುವಂತಹದ್ದು.

ನೇರ ನುಡಿಗೆ ಹೆಸರಾದ ರಾಯರೆಡ್ಡಿ ಯಾರ ಮುಲಾಜು ಇಲ್ಲದೆ, ಈ ಹೇಳಿಕೆಯಿಂದ ತಮ್ಮ ಕುರ್ಚಿಗೆ ಕುತ್ತು ಬಂದೀತೆಂಬ ಭೀತಿಯೂ ಇಲ್ಲದೆ ಸರ್ಕಾರದ ವಿರುದ್ಧ ಗಂಡೆದೆ ಜೊತೆಗೆ ಗುಂಡಿಗೆ ಪ್ರದರ್ಶಿಸಿದ್ದಾರೆ. ಅಲ್ಲದೆ ಅಧಿಕಾರ ಶಾಶ್ವತವಲ್ಲ ಎಂದು ನಂಬಿರುವ ರೆಡ್ಡಿ ರಾಜ್ಯದಲ್ಲಿ ನಡೆಯುತ್ತಿರುವ ಭ್ರಷ್ಟಾಚಾರಕ್ಕೆ ಕನ್ನಡಿ ಹಿಡಿದಿದ್ದಾರೆ.

'ನನಗೆ ಅನಿಸಿದ್ದನ್ನು ನಾನು ಹೇಳಿದ್ದೇನೆ. ಜನರೂ ನಿತ್ಯ ಇದನ್ನೇ ಮಾತನಾಡುತ್ತಿದ್ದಾರೆ. ಇದರಲ್ಲಿ ಮುಚ್ಚುಮರೆ ಏನಿಲ್ಲ. ಲಂಚಾವತಾರಕ್ಕೆ ಕಡಿವಾಣ ಹಾಕಬೇಕೇ ಹೊರತು ಬಹಿರಂಗವಾಗಿ ಹೇಳಿದವರ ಮೇಲೆ ಬ್ರಹ್ಮಾಸ್ತ್ರ ಪ್ರಯೋಗವಲ್ಲ' ಎಂದು ಕಿವಿಮಾತು ಹೇಳಿದ್ದಾರೆ.

ರಾಯರೆಡ್ಡಿ ಒಂದು ರೀತಿ ಡೋಂಟ್ ಕೇರ್ ಮನುಷ್ಯ. ಬಂದುದ್ದೆಲ್ಲಾ ಬರಲಿ ಎದುರಿಸುವ ಧೈರ್ಯವಿದೆ ಎನ್ನುವಂತಿದೆ ಅವರ ಮಾತಿನ ವರಸೆ. ಅಧಿಕಾರಿಗಳ ಸಭೆಯಲ್ಲಿ ಮುಚ್ಚುಮರೆಯಿಲ್ಲದೆ ಭ್ರಷ್ಟಾಚಾರದ ನಗ್ನತೆಯನ್ನು ಬಿಚ್ಚಿಟ್ಟಿದ್ದಾರೆ. ಕಲ್ಯಾಣ ಕರ್ನಾಟಕದ ಕಳಪೆ ಕಾಮಗಾರಿಗೆ ಸಾಕ್ಷಿ ಸಮೇತ ಅಧಿಕಾರಿಗಳಿಗೆ ಛೀಮಾರಿ ಹಾಕಿದ್ದಾರೆ. ರಾಜ್ಯದಲ್ಲಿ ಭ್ರಷ್ಟಾಚಾರ ಇಲ್ಲವೆಂದೂ ಎದೆ ತಟ್ಟಿ ಹೇಳುವ ರಾಜಕಾರಣಿ ಯಾರಾದರೂ ಇದ್ದರೆ ಮುಂದೆ ಬಂದು ಸಾಬೀತು ಮಾಡಲಿ. ದೇಶಕ್ಕೆ ಮಾದರಿಯಾಗಿದ್ದ ನಮ್ಮ ರಾಜ್ಯ ಅದರಲ್ಲೂ ಬೆಂಗಳೂರಿನ ಕೀರ್ತಿಗೆ ಮಸಿ ಬಳಿದಂತಾಗಿದೆ.

ಭ್ರಷ್ಟಾಚಾರದ ವಿಚಾರದಲ್ಲಿ ಆ ಸರ್ಕಾರ, ಈ ಸರ್ಕಾರ ಎನ್ನುವಂತಿಲ್ಲ. ಆ ಪಕ್ಷ ಈ ಪಕ್ಷ ಎನ್ನುವಂತಿಲ್ಲ. ಆಳುವ ಕಾಂಗ್ರೆಸ್, ವಿರೋಧ ಪಕ್ಷಗಳಾದ ಬಿಜೆಪಿ, ಜೆಡಿಎಸ್ ಮೂರೂ ಒಂದೇ ತಕ್ಕಡಿಯಲ್ಲಿ ತೂಗುವಂತಹವುಗಳು. ಮುಖ್ಯಮಂತ್ರಿ ಸಿದ್ದರಾಮಯ್ಯ ಜನತಾ ಪರಿವಾರದಲ್ಲಿದ್ದಾಗ ಕೈ–ಬಾಯಿ ಶುದ್ಧವಾಗಿತ್ತು. ಕಾಂಗ್ರೆಸ್‌ಗೆ ಬಂದ ಮೇಲೆ ಆರಂಭದಲ್ಲಿ



ಸಿದ್ದರಾಮಯ್ಯ, ಮುಖ್ಯಮಂತ್ರಿ

ಕೈ ಮಾತ್ರ ಮಸಿಯಾಗಿತ್ತು. ಆದರೆ ಬರಬರುತ್ತಾ ಮೈಗೆ ಜಾತಿ ಮಸಿಯೂ ಅಂಟಿಕೊಂಡಿದೆ.

ದಕ್ಷತೆ, ನೇರ ನುಡಿ, ಒರಟು ಭಾಷೆ ಹಾಗೂ ಇದ್ದುದರಲ್ಲಿ 'ಕ್ಲೀನ್ ಮ್ಯಾನ್' ಅನಿಸಿಕೊಂಡಿದ್ದ ಸಿದ್ದರಾಮಯ್ಯನವರು ಬರ ಬರುತ್ತಾ ರಾಯರ ಕುದುರೆ.... ಆಯಿತು ಎಂಬಂತಾಗಿದೆ. ಅಧಿಕಾರ ತ್ಯಾಗ ಮಾಡುವ ಹೊಸ್ತಿನಲ್ಲಿರುವ ಮುಖ್ಯಮಂತ್ರಿ ಕಳಂಕ ತಂದುಕೊಂಡಿದ್ದಾರೆ ಎಂದು ಜನರ ಮನದಾಳದಲ್ಲಿ ಬೇರೂರಿದೆ.

ಈ ನಡುವೆ ಮಾಜಿ ಮುಖ್ಯಮಂತ್ರಿ ಹಾಗೂ ಹಾಲಿ ಉಪ ಮುಖ್ಯಮಂತ್ರಿಗಳ ರಾಜಕೀಯ ದ್ವೇಷ ಅವರ ಬಂಧು ಬಳಗದವರನ್ನೇ ಬಲಿ ತೆಗೆದುಕೊಂಡಿತು. ಪರಸ್ಪರ ಹಗೆ ಸಾಧಿಸುತ್ತಿದ್ದಾರೆ. ಇದು ಇನ್ನೂ ಮುಂದುವರಿದಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಇದೇ ಬೇಕಾಗಿರುವುದು. ಅಂದರೆ 'ಗೌಡ–ಗೌಡರು' ಕಿತ್ತಾಡಲಿ ಎಂಬುದು.

ಇನ್ನು ರಾಜ್ಯದಲ್ಲಿ ಪಂಚಮಸಾಲಿ ಲಿಂಗಾಯಿತರಲ್ಲಿ ಒಡಕು ತರುವಲ್ಲಿ ಸರ್ಕಾರ ಯಶಸ್ವಿಯಾಗಿದೆ. ಒಂದೆಡೆ ಯತ್ನಾಳ್, ಇನ್ನೊಂದೆಡೆ ಶಾಸಕ ಕಾಶಪ್ಪನವರ್ ನಡುವೆ ಜಿದ್ದಾಜಿದ್ದಿ ನಡೆಯುತ್ತಿದೆ. ಈ ಗುದ್ದಾಟದಲ್ಲಿ ಸ್ವಾಮೀಜಿಗಳು ಮಸಿ ಬಳಿದುಕೊಂಡಂತಾಗಿದೆ. ಅಂದರೆ ಒಂದು ಕಡೆ ಒಕ್ಕಲಿಗರು ಬಡಿದಾಡಿದರೆ, ಇನ್ನೊಂದೆಡೆ ಲಿಂಗಾಯತರ ಜಗಳ ತಾರಕ್ಕೇರಿದೆ. ಇದು ಸಾಮಾಜಿಕ ನ್ಯಾಯದ ಹರಿಕಾರ ಮುಖ್ಯಮಂತ್ರಿಗೆ 'ರೋಗಿ ಬಯಸಿದ್ದು ಹಾಲು ಅನ್ನ, ವೈದ್ಯ ಹೇಳಿದ್ದು ಅದನ್ನೇ' ಎನ್ನುವಂತಿದೆ.

> ಭ್ರಷ್ಟಾಚಾರದ ವಿಚಾರದಲ್ಲಿ ಆ ಸರ್ಕಾರ, ಈ ಸರ್ಕಾರ ಎನ್ನುವಂತಿಲ್ಲ. ಆ ಪಕ್ಷ, ಈ ಪಕ್ಷ ಎನ್ನುವಂತಿಲ್ಲ. ಆಳುವ ಕಾಂಗ್ರೆಸ್, ವಿರೋಧ ಪಕ್ಷಗಳಾದ ಬಿಜೆಪಿ, ಜೆಡಿಎಸ್ ಮೂರೂ ಒಂದೇ ತಕ್ಕಡಿಯಲ್ಲಿ ತೂಗುವಂತಹವುಗಳು. ಮುಖ್ಯಮಂತ್ರಿ ಸಿದ್ದರಾಮಯ್ಯ ಜನತಾ ಪರಿವಾರದಲ್ಲಿದ್ದಾಗ ಕೈ–ಬಾಯಿ ಶುದ್ಧವಾಗಿತ್ತು. ಕಾಂಗ್ರೆಸ್‌ಗೆ ಬಂದ ಮೇಲೆ ಆರಂಭದಲ್ಲಿ ಕೈ ಮಾತ್ರ ಮಸಿಯಾಗಿತ್ತು. ಬರ ಬರುತ್ತಾ ಮೈಗೆ ಜಾತಿ ಮಸಿಯೂ ಅಂಟಿಕೊಂಡಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯನವರ ರಾಜಕೀಯ ತಂತ್ರಗಾರಿಕೆ ಬರೀ ಲಿಂಗಾಯತ/ಗೌಡರ ನಡುವೆ ಕಿತ್ತಾಟಕ್ಕೆ ಸೀಮಿತವಾಗಿಲ್ಲ. ದಲಿತ ವರ್ಗದ ನಾಯಕರ ಮೂಗಿಗೂ ತುಪ್ಪ ಹಚ್ಚಿ ಮುಖ್ಯಮಂತ್ರಿ ಗಾದಿ ಆಸೆ ತೋರಿಸುತ್ತಿದ್ದಾರೆ. ಅಂದರೆ ಎಐಸಿಸಿ ಅಧ್ಯಕ್ಷ ಖರ್ಗೆ ಏನಾದರೂ ಸಿಎಂ ಕುರ್ಚಿ ಮೇಲೆ ಕಣ್ಣು ಹಾಕಿದರೆ ಆಗ 'ಡಿಕೆಎಸ್' ಕನಸು ಭಗ್ನ. ಈ ಸಂದರ್ಭದಲ್ಲೇನಾದರೂ ರಾಜಕೀಯ ಮೇಲಾಟಗಳು ನಡೆದರೆ, ತಾವೇ 'ಮುಖ್ಯಮಂತ್ರಿ ಗಾದಿ'ಯಲ್ಲಿ ಮುಂದುವರೆಯುವ ಚಾಣಾಕ್ಷತನ. ಹಾಗಾದರೂ ಒಂದು ರೀತಿಯಲ್ಲಿ 'ಸಿಎಂ' ದಲಿತರನ್ನು ಬುಟ್ಟಿಗೆ ಹಾಕಿಕೊಂಡಂತೆಯೇ ಅಲ್ಲವೇ?

ಲಿಂಗಾಯತರು–ಒಕ್ಕಲಿಗರು ಸಿಎಂ ಆಗಿದ್ದಾಗಿದೆ. ಹಿಂದುಳಿದವರೂ ಅಧಿಕಾರದ ರುಚಿ ನೋಡಿದ್ದಾರೆ. ಬಾಕಿ ಇರುವವರು ಎಂದೇ ದಲಿತರು, ಅಲ್ಪಸಂಖ್ಯಾತರು. ಅವರೂ ಆಗಲಿ ಬಿಡಿ ಎಂಬುದು ಸಿಎಂ ಸಿದ್ದರಾಮಯ್ಯ ಲೆಕ್ಕಾಚಾರ. ಒಂದೆಡೆ ಬಲಿಷ್ಠ ಜಾತಿಗಳನ್ನು ಮಕಾಡೆ ಮಲಗಿಸುವುದು, ಇನ್ನೊಂದೆಡೆ ದಲಿತರು ಮತ್ತು ಅಲ್ಪಸಂಖ್ಯಾತರನ್ನು ಓಲೈಸುವುದು.

ಇಷ್ಟು ಸಾಲದು ಎಂಬಂತೆ, ಜಾತಿ ಜನಗಣತಿ, ಮೀಸಲಾತಿ ಎಂಬ ಎರಡು ಬ್ರಹ್ಮಾಸ್ತ್ರಗಳನ್ನು ಸಮಾಜದ ಮುಂದಿಟ್ಟು, ಸಮಾಜದಲ್ಲಿ ಶಾಂತಿ ಕದಡುವ ಕೆಲಸಕ್ಕೆ 'ಕೈ' ಹಾಕಿದ್ದಾರೆ. ಇದು ಕೊನೆಗೆ ಕಾಂಗ್ರೆಸ್ ಪಕ್ಷವನ್ನೇ ಸುಡುವ ಅಪಾಯವಿದೆ. ವೀರೇಂದ್ರ ಪಾಟೀಲ್ ಸಿಎಂ ಆಗುವ ಮುನ್ನ ಈ ರೀತಿ ಅವಾಂತರ ಮಾಡಿ ಕಾಂಗ್ರೆಸ್ ನೆಲಕಚ್ಚಿತ್ತು. ಆದರೆ ಡಾ.ವೀರೇಂದ್ರ ಪಾಟೀಲ್‌ರಂತಹ ಸಮಚಿತ್ತದ ರಾಜಕಾರಣಿ ಬಂದು ಕಾಂಗ್ರೆಸ್‌ನ್ನು ದಡ ಸೇರಿಸಿದ್ದು ಮಾತ್ರವಲ್ಲ 224ರಲ್ಲಿ 178 ಸ್ಥಾನ ಗಳಿಸಿ ಇತಿಹಾಸ ಸೃಷ್ಟಿಸಿದ್ದರು. ಇತಿಹಾಸ ಪುನರಾವರ್ತನೆ ಆದಂತೆ ಈಗ ಮತ್ತೆ ಕಾಂಗ್ರೆಸ್ ಹಳ್ಳ ಹಿಡಿಯುವ ಸ್ಪಷ್ಟ ಸೂಚನೆಗಳು ಕಾಣುತ್ತಿವೆ.

ಯಾವುದೇ ಪಕ್ಷದ ಸರ್ಕಾರ ಬರಲಿ, ಏನೇ ಮೀಸಲಾತಿ ಹೋರಾಟ ಮಾಡಲಿ, ಯಾರೇ ದೊಂಬರಾಟ ಆಡಲಿ, ಸಮಾಜದಲ್ಲಿರುವ ಬುದ್ಧಿವಂತ ಜನ ಅವರ ಜಾಣತನದಿಂದ ಶಿಕ್ಷಣ ಕ್ಷೇತ್ರ, ಆಡಳಿತ, ಹೋಟೆಲ್, ಪೌರೋಹಿತ್ಯ ಹೀಗೆ ದುಡಿಯುವ ಮಾರ್ಗ ಕಂಡುಕೊಂಡಿದ್ದಾರೆ. ಅಂದರೆ ಯಾವುದೇ ಸರ್ಕಾರ ನೆಚ್ಚಿಕೊಳ್ಳದೆ ಜೀವನ ನಡೆಸುವುದನ್ನು ಕಲಿತುಕೊಂಡಿದ್ದಾರೆ. ಎಲ್ಲಾ ರಂಗಗಳಲ್ಲೂ ಆಡಳಿತ ಕುಸಿಯುತ್ತಿದೆ. ಭ್ರಷ್ಟಾಚಾರ ಬಲವಾಗಿ ಬೇರೂರಿದೆ. ಹೀಗಾಗಿಯೇ ಅಧಿಕಾರ ನಡೆಸುತ್ತಿರುವ ಅಧಿಕಾರಿಗಳಿಗೆ ಅದಕ್ಷ ಅಧಿಕಾರಿಗಳಿಗೆ ದಾರಿ ಕಾಣದೆ ಎಲ್ಲಕ್ಕೂ Outsource ಹುಡುಕುತ್ತಿದ್ದಾರೆ. ಲಕ್ಷಗಟ್ಟಲೇ ಸಂಬಳ ಪಡೆದು ಹೊರಗಿನ ಬುದ್ಧಿವಂತರಿಗೆ ಗುತ್ತಿಗೆ ಕೊಡುವ ಸಂಪ್ರದಾಯ ಸರ್ಕಾರದ ಮುಖಕ್ಕೆ ಕನ್ನಡಿ ಹಿಡಿದಂತೆ.

ಇನ್ನೂ ಈ ಜಾತಿ ಜನಗಣತಿ, ಮೀಸಲಾತಿ ಎಂಬ ಹೆಜ್ಜೇನಿಗೆ ಸಿಎಂ ಕಲ್ಲು ಹೊಡೆಯುವ ಸಾಹಸಕ್ಕೆ ಕೈ ಹಾಕಿದ್ದಾರೆ. ಇದು ಸಮಾಜದ ಶಾಂತಿ ಕದಡುವ ಜತೆಗೆ ಕಾಂಗ್ರೆಸ್ ವಿನಾಶಕ್ಕೆ ಸಾಕ್ಷಿಯೂ ಆಗಬಹುದು.

ಈ ಅಂಥ ದರ್ಬಾರ್‌ನಿಂದ ಸರ್ಕಾರಕ್ಕೆ ಕುತ್ತು ಬಂದರೂ ಆಶ್ಚರ್ಯವಿಲ್ಲ. 'ಸಿದ್ದು' ಹೀರೋ ಆಗಲು ಹೋಗಿ ಝೀರೋ ಆಗುತ್ತಾರೋ ಕಾದು ನೋಡಬೇಕಿದೆ. ಅಲ್ಲದೆ ಇದು ಕಡು ಭ್ರಷ್ಟ ಸರ್ಕಾರದ ಕಥೆ–ವ್ಯಥೆ.

ವಿವಿಧೆಡೆ ಅಂಬೇಡ್ಕರ್ ಜಯಂತಿ ಆಚರಣೆ



ಮೈಸೂರಿನ ಗಾಂಧಿನಗರದ ಶಿವಯೋಗಿ ಸ್ವಾಮಿ 3ನೇ ಮುಖ್ಯ ರಸ್ತೆಯ ಶ್ರೀ ದುರ್ಗಾದೇವಿ ದೇವಸ್ಥಾನದ ಸರ್ಕಲ್‌ನಲ್ಲಿ ಶ್ರೀ ದುರ್ಗಾದೇವಿ ಯುವಕರ ಬಳಗದ ವತಿಯಿಂದ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 134ನೇ ಜನ್ಮ ದಿನಾಚರಣೆಯನ್ನು ಅದ್ದೂರಿಯಾಗಿ ಆಚರಿಸಲಾಯಿತು. ಚಿತ್ರದಲ್ಲಿ ಲಕ್ಷ್ಮಿನಾರಾಯಣ, ಶ್ರೀನಿವಾಸ್, ವಕೀಲ ಶ್ರೀನಿವಾಸ್ ಪ್ರಸಾದ್, ನಾರಾಯಣ, ರಘು, ರಮೇಶ್, ರಂಗಸ್ವಾಮಿ, ಮನು, ಸುಮನ್, ಪ್ರದೀಪ್ ಮುಂತಾದವರು ಉಪಸ್ಥಿತರಿದ್ದರು.



ಮೈಸೂರು ಹೆಬ್ಬಾಳಿನ ಸಂಕ್ರಾಂತಿ ಸರ್ಕಲ್‌ನಲ್ಲಿ ಹಿರಿಯ ನಾಗರಿಕರ ಸೇವಾ ಸಮಿತಿ ವತಿಯಿಂದ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಿಸಲಾಯಿತು. ಈ ವೇಳೆ ಸಮಿತಿ ಅಧ್ಯಕ್ಷ ಸಣ್ಣತಮ್ಮೇಗೌಡ, ಗೌರವ ಅಧ್ಯಕ್ಷ ಗೋಪಾಲ್, ಕಾರ್ಯದರ್ಶಿ ಇಂದರೇಶ್, ಖಜಾಂಚಿ ಬಿ.ಚನ್ನಬಸವಯ್ಯ, ಎ.ವಿ.ರಾಜಶೇಖರ್, ರವಿ (ಡೆಲ್ಲಿ), ವಿಜಿ, ಶಿವಣ್ಣ ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಅಂಬೇಡ್ಕರ್ ಕೊಟ್ಟ ಸಂವಿಧಾನ ಸಮಾನತೆಗೆ ಅವಕಾಶ ನೀಡಿದೆ

ಮುಕ್ತ ವಿವಿ ಕುಲಸಚಿವ ಪ್ರೊ.ಕೆ.ಬಿ.ಪ್ರವೀಣ್



ಕರ್ನಾಟಕ ರಾಜ್ಯ ಮುಕ್ತ ವಿವಿಯಲ್ಲಿ ನಡೆದ ಡಾ.ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಕುಲಸಚಿವ ಪ್ರೊ.ಕೆ.ಬಿ.ಪ್ರವೀಣ್ ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು.

ಮೈಸೂರು, ಏ.14(ಎಂಟಿವೈ)– ಅಂಬೇಡ್ಕರ್ ಅವರು ನೀಡಿದ ಸಂವಿಧಾನ ದೇಶದ ಸಾಮಾಜಿಕ ಮತ್ತು ಆರ್ಥಿಕ ಮೂಲಭೂತ ಸಮಸ್ಯೆಗಳನ್ನು ಹೋಗಲಾಡಿಸಿ, ಸಮಾನತೆಯ ಅವಕಾಶ ಒದಗಿಸಿದೆ ಎಂದು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲ ಸಚಿವ ಪ್ರೊ.ಕೆ.ಬಿ.ಪ್ರವೀಣ್ ತಿಳಿಸಿದ್ದಾರೆ.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಡಾ.ಬಿ.ಆರ್.ಅಂಬೇಡ್ಕರ್ ಅಧ್ಯಯನ ಕೇಂದ್ರದ ವತಿಯಿಂದ ಆಯೋಜಿಸಿದ್ದ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ಅವರು, ಅಂಬೇಡ್ಕರ್ ಅವರು ವಿಶ್ವಜ್ಞಾನಿಯಾಗಿದ್ದು, ಅವರು ರಚಿಸಿರುವ ಸಂವಿಧಾನವು ದೇಶದ ಸಾಮಾಜಿಕ ಮತ್ತು ಆರ್ಥಿಕ ಮೂಲಭೂತ ಸಮಸ್ಯೆಗಳನ್ನು ಹೋಗಲಾಡಿಸಿದೆ. ಆ ಮೂಲಕ ದೇಶದ ಅಸಂಖ್ಯಾತ ಶೋಷಿತ ಸಮುದಾಯಕ್ಕೆ ಬೆಳಕನ್ನು ನೀಡಿದೆ. ಶತ ಶತಮಾನಗಳಿಂದ ಸಾಮಾಜಿಕ, ಆರ್ಥಿಕ ಸೌಲಭ್ಯಗಳಿಂದ ವಂಚಿತರಾಗಿದ್ದ ಮಹಿಳೆಯರು ಇಂದು ಸಾಮಾಜಿಕ, ಆರ್ಥಿಕ ಸಮಾನತೆಯನ್ನು ಕಂಡುಕೊಳ್ಳಲು ಅಂಬೇಡ್ಕರ್ ಅವರ ಸಂವಿಧಾನ ಕಾರಣವಾಗಿದೆ ಎಂದರು.

ಅಸಂಖ್ಯಾತ, ಶೋಷಿತ ಸಮುದಾಯ ಇಂದು ಸ್ವಾಭಿಮಾನ ಬೆಳೆಸಿಕೊಳ್ಳಲು ಸಂವಿಧಾನ ನೀಡಿದ ಅವಕಾಶ ಕಾರಣವಾಗಿದೆ. ಸಂವಿಧಾನವು ಎಲ್ಲಾ ವರ್ಗ, ಜಾತಿಯ ಹಿತರಕ್ಷಣೆ ಮಾಡುತ್ತಿದೆ. ದೇಶದ ಆರ್ಥಿಕ, ಸಾಮಾಜಿಕ ಮತ್ತು ರಾಜಕೀಯ ಅಭಿವೃದ್ಧಿಗೆ ಸಂವಿಧಾನವು ಹಲವು ರೀತಿಯಲ್ಲಿ ನೆರವಾಗಿದೆ. ಅಂಬೇಡ್ಕರ್ ಅವರು ರಚಿಸಿರುವ ಸಂವಿಧಾನವು ಇಂದು ಅತ್ಯಂತ ಮಹತ್ವದೊಂದಿಗೆ ಪ್ರಸ್ತುತತೆಯನ್ನು ಹೊಂದಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮುಕ್ತ ವಿವಿ ಅಧ್ಯಯನ ಕೇಂದ್ರಗಳ ಡೀನ್ ಪ್ರೊ.ರಮನಾಥ್ ನಾಯ್ಡು, ಹಣಕಾಸು ಅಧಿಕಾರಿ ಪ್ರೊ.ನಿರಂಜನ್‌ರಾಜ್, ಅಂಬೇಡ್ಕರ್ ಅಧ್ಯಯನ ಕೇಂದ್ರದ ಸಂಯೋಜನಾಧಿಕಾರಿ ಡಾ.ಶಿವಕುಮಾರಸ್ವಾಮಿ, ವಿವಿಯ ರಾಜ್ಯಶಾಸ್ತ್ರ ಅಧ್ಯಯನ ವಿಭಾಗದ ಮುಖ್ಯಸ್ಥ ಪ್ರೊ.ಶಂಕರ್ ನಾರಾಯಣಪ್ಪ, ಪರಿಸರ ಅಧ್ಯಯನ ವಿಭಾಗದ ಸಹಪ್ರಾಧ್ಯಾಪಕ ಡಾ.ಚಂದ್ರಶೇಖರ್ ಹಾಗೂ ಅಧ್ಯಾಪಕರು ಮತ್ತು ವಿವಿ ಸಿಬ್ಬಂದಿ ಪಾಲ್ಗೊಂಡಿದ್ದರು.



ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 134ನೇ ಜಯಂತಿ ಪ್ರಯುಕ್ತ ಜಿಲ್ಲಾ ಕಾಂಗ್ರೆಸ್ ಜಿಲ್ಲಾ ಕಾರ್ಯದರ್ಶಿ ಬೆಲವತ್ತ ಶಿವಕುಮಾರ್, ವಿವಿಧೋದ್ದೇಶ ಸಹಕಾರ ಸಂಘ ನಿರ್ದೇಶಕ ದಡದಳ್ಳಿ ನಂಜುಂಡ, ಗ್ರಾಪಂ ಸದಸ್ಯರಾದ ನಿಂಗಯ್ಯ, ನಾಗೇಂದ್ರ ಇತರರು ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು.



ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜನ್ಮ ದಿನವನ್ನು ಮಹಾರಾಜ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಆಚರಿಸಲಾಯಿತು. ಮಹಾರಾಜ ಶಿಕ್ಷಣ ಟ್ರಸ್ಟ್ ಅಧ್ಯಕ್ಷ ಡಾ.ನರೇಶ್‌ಕುಮಾರ್, ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ಆಡಳಿತಾಧಿಕಾರಿ ಅನಿರುದ್ಧ ಎ.ಎಂ., ಸಿಎಸ್‌ಇ ಮುಖ್ಯಸ್ಥ ಡಾ.ಶಿವಮೂರ್ತಿ, ಪಿಇಡಿ ಧನ್ಯಸುಂದರ್, ಅಧ್ಯಾಪಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಮೈಸೂರಲ್ಲಿ ಡಾ.ಅಂಬೇಡ್ಕರ್‌ಗೆ ನಮನ...



ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಿಸಲಾಯಿತು. ಮುಖಂಡರಾದ ಎಸ್.ಜಯಪ್ರಕಾಶ್ (ಜೆಪಿ), ಮೈಸೂರು ಜಿಲ್ಲಾ ಗ್ರಾಮಾಂತರ ಎಸ್ಸಿ ಮೋರ್ಚಾ ಅಧ್ಯಕ್ಷ ಅನಿಲ್ ಕುಮಾರ್ ಡಿ.ಮಹೇಶ ನಾಯಕ, ಮೈಸೂರು ಜಿಲ್ಲಾ ಗ್ರಾಮಾಂತರ ಮೀನುಗಾರರ ಪ್ರಕೋಷ್ಟ ಸಂಚಾಲಕ ಮಹದೇವಯ್ಯ, ರೈತ ಮೋರ್ಚಾದ ಗೌಡ್ರು ಪ್ರಕಾಶ್, ಚೇತನ್ ಎಸ್.ರಮೇಶ್, ರಘು, ಹನುಮಂತೇಗೌಡ, ಪಾಪಣ್ಣ, ಎಸ್.ಸೋಮಶೇಖರ್, ಆನಂದ್‌ರಾಜ್ ಮತ್ತಿತರರಿದ್ದರು.




ಸರ್.ಎಂ. ವಿಶ್ವೇಶ್ವರಯ್ಯ ನಲ್ಲಿ ಮತ್ತು ಒಳಚರಂಡಿ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಸಂಘದ ಕಚೇರಿಯಲ್ಲಿ ಭಾರತ ರತ್ನ ಡಾ.ಬಿ.ಆರ್. ಅಂಬೇಡ್ಕರ್ ಅವರ 134ನೇ ಜಯಂತಿ ಹಾಗೂ ಹಸಿರುಕ್ರಾಂತಿ ಹರಿಕಾರ ಭಾರತದ ಮಾಜಿ ಉಪಪ್ರಧಾನಿ ಡಾ.ಬಾಬು ಜಗಜೀವನ್ ರಾಮ್ ಅವರ 118ನೇ ಜಯಂತಿಯನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಅಧ್ಯಕ್ಷ ಜಯನಗರ ಮಹೇಶ್, ಕಾರ್ಯದರ್ಶಿ ರವಿಕುಮಾರ್ ಉಪಾಧ್ಯಕ್ಷ ಸುರೇಶ್‌ಕುಮಾರ್ ಎಂ.ಎಸ್, ನಿರ್ದೇಶಕರಾದ ಚಂದ್ರೇಗೌಡ, ಶಿವರಾಜ್, ರುದ್ರಸ್ವಾಮಿ ಉಪಸ್ಥಿತರಿದ್ದರು.



ಭಾರತದ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ 134ನೇ ಜಯಂತಿ ಪ್ರಯುಕ್ತ ಪುರಭವನದ ಬಳಿ ಇರುವ ಅವರ ಪ್ರತಿಮೆಗೆ ಹರಳಯ್ಯ ಚರ್ಮಕಾರ ಹಾಗೂ ಖಾದಿ ಗ್ರಾಮೋದ್ಯೋಗ ಸಂಘದ ಅಧ್ಯಕ್ಷ ಬಿ.ಪ್ರಸಾದ್ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು. ಈ ವೇಳೆ ಕಾಂಗ್ರೆಸ್ ಮುಖಂಡರಾದ ಪುಟ್ಟರಾಜು, ಲೋಕೇಶ್, ಮಂಜುನಾಥ್, ಸಿದ್ದರಾಜು, ವನಜಾಕ್ಷಿ ಇನ್ನಿತರರು ಉಪಸ್ಥಿತರಿದ್ದರು.



ಮಹಾಜನ ಪ್ರೌಢಶಾಲೆಯಲ್ಲಿ 134ನೇ ವರ್ಷದ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಿಸಲಾಯಿತು. ಈ ವೇಳೆ ಶಾಲೆಯ ಮುಖ್ಯೋಪಾಧ್ಯಾಯಿನಿ ಶ್ರೀಮತಿ ಎಸ್.ಸುಜಾತಾ, ಹಿರಿಯ ಶಿಕ್ಷಕರಾದ ಬೀರೇಗೌಡ, ಸಹಶಿಕ್ಷಕರಾದ ಸಿ.ಜೆ.ವಿಂಧ್ಯಾ, ಯೋಗನರಸಿಂಹ, ಅಜಯ್, ಇಂದ್ರಾಜಲಿ, ಶೃತಿ, ಸುಪ್ರಿಯ, ರಮೇಶ್ ಇದ್ದರು.



ಕರ್ನಾಟಕ ರಾಜ್ಯ ಸರ್ವ ಜನಾಂಗ ಹಿತರಕ್ಷಣಾ ವೇದಿಕೆ ವತಿಯಿಂದ ವೇದಿಕೆ ರಾಜ್ಯಾಧ್ಯಕ್ಷ ವೇಣುಗೋಪಾಲ್ ನೇತೃತ್ವದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಜಯಂತಿಯನ್ನು ಮೈಸೂರು ಟೌನ್‌ಹಾಲ್ ಮುಂಭಾಗದಲ್ಲಿರುವ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡುವುದರ ಮೂಲಕ ಆಚರಿಸಲಾಯಿತು. ಅಲ್ಪಸಂಖ್ಯಾತರ ವಿಭಾಗದ ಅಧ್ಯಕ್ಷ ಸಗೀರ್ ಅಹಮ್ಮದ್, ಪುಟ್ಟಯ್ಯ ಮದೀನ್, ಅಕ್ರಂಪಾಷ, ಅಕ್ಷಯ್ ವೇಣುಗೋಪಾಲ್, ಆರ್.ಮಹದೇವ, ಮುಜಾಯಿದ್, ನಿಸಾರ್ ಅಹಮ್ಮದ್ ಅನ್ಸಾರಿ, ಅಯೂಬ್ ಖಾನ್, ಸರೋಜಮ್ಮ, ತೇಜಾಮಣಿ, ರಾಜಮ್ಮ, ಶಿವಕುಮಾರ್ ಇನ್ನಿತರರಿದ್ದರು.



ಮೈಸೂರಿನ ಹಿನಕಲ್‌ನಲ್ಲಿರುವ ಹಿರಿಯ ಜೀವಿಗಳ ಆಶ್ರಯತಾಣ ವಾತ್ಸಲ್ಯ ಸೇವಾಶ್ರಮದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಿಸಲಾಯಿತು. ಜಿಲ್ಲಾಸ್ಪತ್ರೆಯ ವೈದ್ಯಾಧಿಕಾರಿ ಡಾ.ವೆಂಕಟೇಶ್, ಲೆಕ್ಕಿಗ ನಾಗಭೂಷಣ ಆರಾಧ್ಯ, ಮೂರ್ತಿ, ಸಂಸ್ಥಾಪಕ ರವಿಕುಮಾರ್ ಎ.ಸಿ, ಕಾರ್ಯದರ್ಶಿ ನಾಗರತ್ನ ಹಾಗೂ ಹಿರಿಯ ಜೀವಿಗಳು ಇದ್ದರು.



ಮೈಸೂರಿನ ಜೆ.ಪಿ.ನಗರ ಲಾಸ್ಟ್ ಬಸ್ ಸ್ಟಾಪ್‌ನ ಜೈ ಭೀಮ್ ರಸ್ತೆಬದಿ ವ್ಯಾಪಾರಿಗಳ ಸಂಘದಿಂದ ಅಂಬೇಡ್ಕರ್ ಜಯಂತಿ ಆಚರಿಸಲಾಯಿತು. ಈ ವೇಳೆ ಮೈಸೂರು ನಗರಪಾಲಿಕೆ ವಲಯ–2 ವರ್ಕ್ ಇನ್‌ಸ್ಪೆಕ್ಟರ್ ಪುಷ್ಪನಮನ ಸಲ್ಲಿಸಿದರು. ಜೈ ಭೀಮ್ ರಸ್ತೆಬದಿ ವ್ಯಾಪಾರಿಗಳ ಸಂಘದ ಅಧ್ಯಕ್ಷ ಕೆಂಪಣ್ಣ, ಉಪಾಧ್ಯಕ್ಷ ಮಧುಸೂದನ್, ನಿರ್ದೇಶಕರಾದ ಪರಶಿವ ಪಾನೀಪುರಿ (ಮಂಜಣ್ಣ), ಫಾಸ್ಟ್‌ಫುಡ್ ಗುರು, ಮಹದೇವಣ್ಣ, ಹಣ್ಣಿನ ಅಂಗಡಿ ನಾಗೇಶ್, ಕೆ.ವಿ.ಸಂತು ಮತ್ತಿತರರು ಉಪಸ್ಥಿತರಿದ್ದರು.

ಡಾ.ಅಂಬೇಡ್ಕರ್ ನೀಡಿದ ಸಂವಿಧಾನದ ಆಶಯ ಈಡೇರಿದೆಯೇ ಎಂದು ಆತ್ಮಾವಲೋಕನವಾಗಬೇಕು

ಸಾಹಿತಿ ಪ್ರೊ.ರಹಮತ್ ತರೀಕೆರೆ ಅಭಿಮತ



ಮೈಸೂರು ವಿಶ್ವವಿದ್ಯಾನಿಲಯದ ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರದಲ್ಲಿ ನಡೆದ ಡಾ.ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಪಿಹೆಚ್.ಡಿ ಹಾಗೂ ಸ್ನಾತಕೋತ್ತರ ಪದವಿಯಲ್ಲಿ ರ್‍ಯಾಂಕ್ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಮೈಸೂರು,ಏ.14(ಎಂಟಿವೈ)– ದೇಶಕ್ಕೆ ಡಾ.ಬಿ.ಆರ್.ಅಂಬೇಡ್ಕರ್ ಅವರು ಸಂವಿಧಾನ ಕೊಡುಗೆ ನೀಡಿ 75 ವರ್ಷ ಕಳೆದಿದ್ದರೂ, ಸಂವಿಧಾನದ ಆಶಯ ಈಡೇರಿದೆಯಾ ಎಂದು ಆತ್ಮಾವಲೋಕನ ಮಾಡಿಕೊಳ್ಳಬೇಕು ಎಂದು ವಿದ್ವಾಂಸ, ಸಾಹಿತಿ ಪ್ರೊ.ರಹಮತ್ ತರೀಕೆರೆ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರು ವಿಶ್ವವಿದ್ಯಾನಿಲಯದ ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನ ಮತ್ತು ವಿಸ್ತರಣಾ ಕೇಂದ್ರದ ಮಾನಸಗಂಗೋತ್ರಿಯ ವಿಶ್ವಜ್ಞಾನಿ ಸಭಾಂಗಣದಲ್ಲಿ ಆಯೋಜಿಸಿದ್ದ ಡಾ.ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ 'ಡಾ.ಅಂಬೇಡ್ಕರ್ ಮತ್ತು ಸಮಕಾಲೀನ ಸಮಾಜ' ವಿಷಯ ಕುರಿತು ಮಾತನಾಡಿದ ಅವರು, ಅಂಬೇಡ್ಕರ್ ಶ್ರಮಪಟ್ಟು ಬರೆದ ಸಂವಿಧಾನದ ಆಶಯ ಸಾಕಾರಗೊಂಡಿದೆಯೇ? ಎಂದು ಭಾರತವೇ ಪ್ರಶ್ನೆ ಮಾಡಿಕೊಳ್ಳಬೇಕಾಗಿದೆ. ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲಿ ಸಂವಿಧಾನ ಉಳಿಸಿ ಅಭಿಯಾನ ನಡೆಯುತ್ತಿರುವುದು ವಿಪರ್ಯಾಸ ಎಂದರು.

ಬಾಬಾ ಸಾಹೇಬರನ್ನು ವೈಭವೀಕರಿಸಿ ಅವರ ಕನಸಿನ ಭಾರತದ ಕಲ್ಪನೆಯನ್ನು ಸೋಲಿಸುತ್ತಿದ್ದೇವೆ. ನ್ಯಾ.ಎಚ್.ಎನ್. ನಾಗಮೋಹನ್ ದಾಸ್ ಅವರು ಸಂವಿಧಾನ ಉಳಿಸುವ ಅಭಿಯಾನ ನಡೆಸುತ್ತಿದ್ದಾರೆ. ಯಾಕೇ ಸಂವಿಧಾನ ಉಳಿಸಿಕೊಳ್ಳಬೇಕು?. ಸಂವಿಧಾನ ಉಳಿಸಬೇಕಾದ ಸಂದರ್ಭ ಬಂದಿರುವುದೇ ವಿಚಿತ್ರ ದೇಶದ ಆತ್ಮ, ಕೈಮರವಾಗಿ ಮಾರ್ಗ ತೋರಬೇಕಿದ್ದ ಸಂವಿಧಾನದ ಕೈ ಅನ್ನು ಮುರಿಯುತ್ತಿದ್ದೇವೆ ಎಂದು ಕಿಡಿಕಾರಿದರು.

ಶಿಕ್ಷಣ, ಚಿಂತನೆ, ಸಂಶೋಧನೆ ನಮ್ಮ ಅಸ್ತ್ರವೆಂದು ಬಾಬಾ ಸಾಹೇಬರು ಹೇಳುತ್ತಿದ್ದರು. ಈ ನಿಟ್ಟಿನಲ್ಲಿ ವಿವಿಯ ವಿದ್ಯಾರ್ಥಿಗಳು ಅಧ್ಯಯನ ನಡೆಸಬೇಕು. ಜ್ಞಾನ, ವಿವೇಕ, ಸಂವೇದನಾಶೀಲತೆ, ಮಾನವೀಯತೆ, ಸಾಮಾಜಿಕ ಕಾಳಜಿಯನ್ನು ವಿಶ್ವವಿದ್ಯಾನಿಲಯ ಕಲಿಸಬೇಕು. ಜ್ಞಾನ ವಾಕ್ಯವನ್ನು ಅರ್ಥಮಾಡಿಕೊಳ್ಳಬೇಕೆಂದರೆ ಬಾಬಾ ಸಾಹೇಬರನ್ನು ಓದಬೇಕು. ಭಾರತದ ದೊಡ್ಡ ಅಸ್ತ್ರ ಡಾ.ಬಿ.ಆರ್.ಅಂಬೇಡ್ಕರ್. ಅವರ ಸಮಗ್ರ ಸಂಪುಟಗಳು ಬಂದು ಸಾಕಷ್ಟು ವರ್ಷಗಳಾಗಿವೆ. ಆದರೂ ಭಾರತ ಜ್ಞಾನ ಸಂಪಾದಿಸುವ ದೇಶವಾಗಿಲ್ಲ. ಜ್ಞಾನ ವಿರೋಧಿ ಸಮಾಜ ಆಗುತ್ತಿದೆಯೇ ಎಂಬ ಪ್ರಶ್ನೆ ಕಾಡುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಅಂಬೇಡ್ಕರ್ ಜಯಂತಿ ಯಾಂತ್ರಿಕ ಕಾರ್ಯಕ್ರಮವಾಗಿ ಮಾಡಿದರೆ ಅಪರಾಧವಾಗುತ್ತದೆ. ಅರಿವಿನ ಕಾರ್ಯಕ್ರಮವಾಗಿ ರೂಪುಗೊಳ್ಳಬೇಕು. ದೇಶದಲ್ಲಿ ಸಹನಶೀಲತೆ ಇಲ್ಲವಾಗಿದೆ. ಅಂಬೇಡ್ಕರ್ ಬಯಸಿದ ಭ್ರಾತೃತ್ವ ಕಳೆದು ಹೋಗುತ್ತಿದೆ. ಧರ್ಮದ ಅಸಹನೆ ಬೆಳೆಯುತ್ತಿದೆ. ಚಿಂತಕರನ್ನು ಕೊಲೆ ಮಾಡಲಾಗುತ್ತಿದೆ. ಲೇಖಕರನ್ನು ಹೀಯಾಳಿಸುತ್ತಿದ್ದೇವೆ. ಬಾಬಾ ಸಾಹೇಬರ ಮೌಲ್ಯವನ್ನು ಘಾಸಿಗೊಳಿಸಿದ್ದೇವೆ. ಅಂಬೇಡ್ಕರ್ ಅವರನ್ನು ಸಂವಿಧಾನ, ಮೀಸಲಾತಿಗೆ ಸೀಮಿತ ಮಾಡುವುದು ಮಹಾ ಆತ್ಮಘಾತುಕವಾದದ್ದು. ಅವರ ಜ್ಞಾನ ಇಡೀ ಭಾರತಕ್ಕೆ ಬೇಕಾಗಿದೆ. ಭಾರತಕ್ಕೆ ಎಷ್ಟೊಂದು ಕಾಣಿಕೆ ಇದೆ. ಎಲ್ಲರಿಗೂ ಅಂಬೇಡ್ಕರ್ ಬೇಕಾಗಿದ್ದಾರೆ. ಈಗ ಎಲ್ಲ ಸಮುದಾಯಗಳ ಜನರು ಒಂದು ಛತ್ರಿಯಡಿ ಒಂದಾಗಬೇಕು. ಆ ಛತ್ರಿ ಬಾಬಾ ಸಾಹೇಬರು ಆಗಿರಬೇಕು ಎಂದರು.

ರಾಜಕೀಯ ಪಕ್ಷಗಳು ಭಾರತ ರತ್ನ ಕೊಟ್ಟಿದ್ದು ನಾವು, ಚುನಾವಣೆಯಲ್ಲಿ ಸೋಲಿಸಿದ್ದು ನೀವು ಇತ್ಯಾದಿ ಆರೋಪಗಳಲ್ಲಿ ನಿರತವಾಗಿವೆ. ಆದರೆ, ಈ ಪಕ್ಷಗಳು ಬಾಬಾ ಸಾಹೇಬರ ಕನಸು ಆಶಯ ಈಡೇರಿಸಲು ಮನಸ್ಸು ಮಾಡುತ್ತಿಲ್ಲ ಯಾಕೇ ಎಂದು ಪ್ರಶ್ನಿಸಿದರು.

ಇದಕ್ಕೂ ಮುನ್ನ ಕಾರ್ಯಕ್ರಮಕ್ಕೆ ಕರ್ನಾಟಕ ಹೈಕೋರ್ಟ್ ವಿಶ್ರಾಂತ ನ್ಯಾಯಮೂರ್ತಿ ಎಲ್.ನಾರಾಯಣ ಸ್ವಾಮಿ ಚಾಲನೆ ನೀಡಿದರು. ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಮೈಸೂರು ವಿವಿ ಕುಲಸಚಿವರಾದ ಎಂ.ಕೆ. ಸವಿತಾ, ಪರೀಕ್ಷಾಂಗ ಕುಲಸಚಿವ ಪ್ರೊ.ಎನ್. ನಾಗರಾಜ, ಮೈಸೂರು ವಿವಿ ಡಾ. ಬಿ.ಆರ್. ಅಂಬೇಡ್ಕರ್ ಸಂಶೋಧನಾ ಮತ್ತು ಅಧ್ಯಯನ ಕೇಂದ್ರದ ನಿರ್ದೇಶಕ ಪ್ರೊ.ಸೋಮಶೇಖರ್, ಗಾಂಧಿ ಅಧ್ಯಯನ ವಿಭಾಗದ ಡಾ.ನರೇಂದ್ರ ಕುಮಾರ್ ಇನ್ನಿತರರು ಪಾಲ್ಗೊಂಡಿದ್ದರು.



ಡಾ.ಬಿ.ಆರ್.ಅಂಬೇಡ್ಕರ್‌ರವರ 134ನೇ ಜನ್ಮದಿನದ ಅಂಗವಾಗಿ ಮೈಸೂರಿನ ಅಶೋಕ ಸರ್ಕಲ್‌ನಲ್ಲಿ ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡುವುದರ ಮೂಲಕ ಹುಟ್ಟುಹಬ್ಬ ಆಚರಿಸಲಾಯಿತು. ಈ ಸಂದರ್ಭದಲ್ಲಿ ಕರ್ನಾಟಕ ಸಂವಿಧಾನ ಸಂರಕ್ಷಣಾ ಹೋರಾಟ ಸಮಿತಿ ರಾಜ್ಯಾಧ್ಯಕ್ಷ ಎನ್.ಭಾಸ್ಕರ್, ಮೈಸೂರು ಜಿಲ್ಲಾ ಸತ್ರ ನ್ಯಾಯಾಲಯದ ಅಪರ ಸರ್ಕಾರಿ ವಕೀಲರಾದ ತಿಮ್ಮಯ್ಯ, ಮನೋಣ್ಮಣಿ, ಮೈಸೂರು ವಕೀಲರ ಸಂಘದ ಜಂಟಿ ಕಾರ್ಯದರ್ಶಿ ಚರಣ್‌ರಾಜ್, ವಕೀಲರಾದ ಮಂಜುಳ, ಕೆ.ಗಂಗಾಧರ್, ಬಿಜೆಪಿ ಮುಖಂಡರಾದ ವಿಶ್ವೇಶ್ವರಯ್ಯ, ಭಾರ್ಗವ, ಭರತೇಶ್ ಹಾಜರಿದ್ದರು.



ಮೈಸೂರು ತಾಲೂಕು ಹುಯಿಲಾಳು ಗ್ರಾಮದ ಶ್ರೀ ಮನೆ ಮಂಚಮ್ಮ ದೇವಸ್ಥಾನ ಸೇವಾ ಟ್ರಸ್ಟ್ ವತಿಯಿಂದ ಹಮ್ಮಿಕೊಂಡಿದ್ದ ಡಾ.ಬಿ.ಆರ್.ಅಂಬೇಡ್ಕರ್ ಅವರ ಜಯಂತಿಯಲ್ಲಿ ಅಂಬೇಡ್ಕರ್ ಭಾವಚಿತ್ರಕ್ಕೆ ಕೆಪಿಸಿಸಿ ಕಾರ್ಯದರ್ಶಿ, ನಾಗವಾಲ ಗ್ರಾಪಂ ಮಾಜಿ ಅಧ್ಯಕ್ಷ ಸಿ.ನರೇಂದ್ರ ಪುಷ್ಪಾರ್ಚನೆ ಮಾಡಿದರು. ಈ ವೇಳೆ ಟ್ರಸ್ಟ್ ಅಧ್ಯಕ್ಷ ಹುಯಿಲಾಳು ರಾಮಸ್ವಾಮಿ, ಪಿಡಿಓ ಮಯಪ್ಪ, ಹೆಚ್.ಎಂ. ಮಹದೇವು, ಬಿಡಿಎಂ ಕುಮಾರ್, ಮಾಲೇಗೌಡ, ಶಿವಣ್ಣ, ಬಿ.ಕೆ.ಈಶ್ವರ್, ಚೆಲುವಚಾರಿ, ಶಿವರಾಜು, ಕುಮಾರ್, ಹೆಚ್.ಜಿ.ರಾಘವೇಂದ್ರ ಪಿ.ಮಹದೇವ, ದೊಡ್ಡೇಗೌಡ, ಶಿವಮಲ್ಲು, ರತ್ನಮ್ಮ, ತುಳಸಿ, ಬಿ.ಎಸ್.ರಾಜು, ಮಂಜುನಾಥ್ ಪ್ರಸಾದ್, ಸಂತೋಷ, ಚೆಲುವರಾಜು, ಹುಂಡ್ವಾಡಿ ಕುಮಾರ್, ಬೆಟ್ಟಪ್ಪ, ಪ್ರಮೋದ್, ಉಮೇಶ್, ಸ್ವಾಮಣ್ಣ, ವರದಯ್ಯ, ಮಹಾದೇವ, ವಿಜಿಕುಮಾರ್, ನಾಗರಾಜು, ಸುನಿಲ್, ಸಿದ್ದೇಗೌಡ, ಅಂಗಡಿ ಕೃಷ್ಣಪ್ಪ, ಕುರಂಬೇಗೌಡ, ಮಂಜು, ವೈರಮುಡಯ್ಯ, ದೇವರಾಜು ಉಪಸ್ಥಿತರಿದ್ದರು.



ಮೈಸೂರಿನ ಜೆಡಿಎಸ್ ಕಚೇರಿಯಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಿಸಲಾಯಿತು. ನಗರಾಧ್ಯಕ್ಷ ಕೆ.ಟಿ.ಚೆಲುವೇಗೌಡ, ಪ್ರೇಮಾಶಂಕರೇಗೌಡ, ಆರ್.ಲಿಂಗಪ್ಪ, ಕೃಷ್ಣಪ್ಪ, ಎಸ್.ಬಿ.ಎಂ. ಮಂಜು, ಕೆ.ವಿ.ಶ್ರೀಧರ್, ಎಂ.ಶಿವಣ್ಣ, ರಮೇಶ್, ವಿ.ಎಚ್.ಕೆ.ರಾಮು, ಎಚ್.ಕೆ.ರಮೇಶ್, ಫಾಲ್ಕನ್ ಬೋರೇಗೌಡ, ಪಿ.ಮಂಜುನಾಥ್, ಎಂ.ಎನ್. ರಾಮು, ಶಿವುಗೌಡ, ಸಿದ್ದರಾಜು ಉಪಸ್ಥಿತರಿದ್ದರು.

ಡಾ.ಅಂಬೇಡ್ಕರ್ ಚಿಂತನೆಗಳ ಜೀವನದಲ್ಲಿ ಅಳವಡಿಸಿಕೊಳ್ಳಿ

ಶಾಸಕ ರಮೇಶ್ ಬಂಡಿಸಿದ್ದೇಗೌಡ ಕರೆ



ಮೈಸೂರಿನ ವಿಜಯನಗರದ ಸೆಸ್ಕ್ ಪ್ರಧಾನ ಕಚೇರಿಯಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿಯಲ್ಲಿ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಶಾಸಕ ರಮೇಶ್ ಬಂಡಿಸಿದ್ದೇಗೌಡ ಪುಷ್ಪ ನಮನ ಸಲ್ಲಿಸಿದರು.

ಮೈಸೂರು, ಏ.14(ಎಂಟಿವೈ)– ಸಂವಿಧಾನದ ಮೂಲಕ ದೇಶದ ಎಲ್ಲರಿಗೂ ಸಮಾನತೆ ಅವಕಾಶ ನೀಡಿದ ಡಾ.ಅಂಬೇಡ್ಕರ್ ಅವರ ಚಿಂತನೆಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ (ಸೆಸ್ಕ್) ಅಧ್ಯಕ್ಷ, ಶಾಸಕ ರಮೇಶ್ ಬಂಡಿಸಿದ್ದೇಗೌಡ ಸಲಹೆ ನೀಡಿದ್ದಾರೆ.

ಮೈಸೂರಿನ ವಿಜಯನಗರ ಎರಡನೇ ಹಂತದಲ್ಲಿರುವ ಸೆಸ್ಕ್ ಪ್ರಧಾನ ಕಚೇರಿಯಲ್ಲಿ ಸೋಮವಾರ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ದೇಶದ ಜನರಿಗೆ ಭದ್ರ ಬುನಾದಿ ಹಾಕಿಕೊಡಲು ಪ್ರಪಂಚದಾದ್ಯಂತ ಸಂಚರಿಸಿದ ಅಂಬೇಡ್ಕರ್ ಅವರು ಆಳವಾದ ಅಧ್ಯಯನ ನಡೆಸಿ ಭಾರತೀಯರಿಗೆ ಶ್ರೇಷ್ಠ ಸಂವಿಧಾನ ನೀಡಿದರು. ಆ ಮೂಲಕ ಪ್ರತಿಯೊಬ್ಬರಿಗೂ ಸಮಾನತೆ, ವಾಕ್ ಸ್ವಾತಂತ್ರ್ಯ ಒದಗಿಸಿದ್ದಾರೆ. ಡಾ.ಅಂಬೇಡ್ಕರ್ ಅವರ ದೀರ್ಘ ಕಾಲದ ಅಧ್ಯಯನ, ಅನೇಕ ವಿಚಾರಗಳು ಇಂದಿಗೂ ಜೀವಂತವಾಗಿದ್ದು, ಅವರ ಚಿಂತನೆಗಳು, ವಿಚಾರಗಳನ್ನು ನಾವುಗಳು ನಮ್ಮ ಜೀವನದಲ್ಲಿ ಪಾಲನೆ ಮಾಡಬೇಕು ಎಂದು ಹೇಳಿದರು.

ಸೆಸ್ಕ್ ಪ್ರಭಾರ ವ್ಯವಸ್ಥಾಪಕ ನಿರ್ದೇಶಕ ಕೆ.ಎಂ.ಮುನಿಗೋಪಾಲ್ ರಾಜು ಮಾತನಾಡಿ, ಡಾ.ಬಿ.ಆರ್.ಅಂಬೇಡ್ಕರ್ ಅವರು ಇಡೀ ವಿಶ್ವವೇ ಮೆಚ್ಚುವ ಶ್ರೇಷ್ಠ ಸಂವಿಧಾನವನ್ನು ಭಾರತೀಯರಿಗೆ ನೀಡಿದ್ದಾರೆ. ಅಂಬೇಡ್ಕರ್ ಅವರು ಭಾರತ ಕಂಡ ಅತ್ಯುನ್ನತ ಹಾಗೂ ಮಾನವರಿಗೆ ಸಮಾನತೆ ನೀಡಿದ ದೈವಿಪುರುಷರಾಗಿದ್ದು, ಅವರ ಜನ್ಮದಿನವನ್ನು ವಿಶ್ವ ಜ್ಞಾನ ದಿನವನ್ನಾಗಿಯೂ ಆಚರಿಸಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಸೆಸ್ಕ್ ಮುಖ್ಯ ಆರ್ಥಿಕ ಅಧಿಕಾರಿ ಜಿ.ರೇಣುಕಾ, ಮುಖ್ಯ ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ ಶಾಖೆ) ಶರಣಮ್ಮ ಎಸ್.ಜಂಗಿನ್, ಪ್ರಧಾನ ವ್ಯವಸ್ಥಾಪಕರು ಬಿ.ಆರ್.ರೂಪ, ಮುಖ್ಯ ಪ್ರಧಾನ ವ್ಯವಸ್ಥಾಪಕರು (ಆಂತರಿಕ ಪರಿಶೋಧನೆ) ಲಿಂಗರಾಜಮ್ಮ, ಪ್ರಧಾನ ವ್ಯವಸ್ಥಾಪಕರು (ಖರೀದಿ) ಎಲ್. ಲೋಕೇಶ್ ಸೇರಿದಂತೆ ಇತರೆ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.




ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ 134ನೇ ಜಯಂತಿ ಪ್ರಯುಕ್ತ ಮಾನಸಗಂಗೋತ್ರಿಯಲ್ಲಿರುವ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಲಾಯಿತು. ಈ ವೇಳೆ ವಿವಿ ಕುಲಪತಿ ಪ್ರೊ.ಲೋಕನಾಥ್, ಕುಲಸಚಿವೆ ಶ್ರೀಮತಿ ಸವಿತಾ, ಕುಲಸಚಿವ(ಪರೀಕ್ಷಾಂಗ) ಪ್ರೊ.ನಾಗರಾಜು, ಸಿಂಡಿಕೇಟ್ ಸದಸ್ಯರಾದ ಪ್ರೊ.ಶಬ್ಬೀರ್ ಮುಸ್ತಫಾ, ಮಹದೇಶ್, ಗೋಕುಲ್ ಗೋವರ್ಧನ್, ಕ್ಯಾತನಹಳ್ಳಿ ನಾಗರಾಜು, ಡಾ.ನಟರಾಜ್ ಶಿವಣ್ಣ, ಮಾಜಿ ಸದಸ್ಯ ನಿಂಗರಾಜೇಗೌಡ ಉಪಸ್ಥಿತರಿದ್ದರು.

ಶಾರದಾವಿಲಾಸ ಶಿಕ್ಷಣ ಸಂಸ್ಥೆಯಲ್ಲಿ ಡಾ.ಅಂಬೇಡ್ಕರ್ ಜಯಂತಿ



ಮೈಸೂರು, ಏ.14– ಮೈಸೂರಿನ ಕೃಷ್ಣಮೂರ್ತಿಪುರಂನಲ್ಲಿರುವ ಶಾರದಾವಿಲಾಸ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಿಸಲಾಯಿತು. ಈ ವೇಳೆ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮೈಸೂರು ವಿಶ್ವವಿದ್ಯಾನಿಲಯ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ನಿರ್ದೇಶಕರಾದ ಪ್ರೊ.ಎನ್.ಕೆ. ಲೋಲಾಕ್ಷಿ ಅವರನ್ನು ಆತ್ಮೀಯವಾಗಿ ಅಭಿನಂದಿಸಲಾಯಿತು.

ಆಡಳಿತ ಮಂಡಳಿ ಹಿರಿಯ ಸದಸ್ಯ ಎಸ್.ಎಲ್.ರಾಮಚಂದ್ರ, ಸಂಸ್ಥೆಯ ಗೌರವ ಕಾರ್ಯದರ್ಶಿ ಆರ್.ನರಸಿಂಹ, ಆಡಳಿತ ಮಂಡಳಿ ಸದಸ್ಯರಾದ ಮೋಹನ್‌ಮೂರ್ತಿ ಉಪಸ್ಥಿತರಿದ್ದರು.



ಡಾ.ಅಂಬೇಡ್ಕರ್ ಅವರ 134ನೇ ಜನ್ಮದಿನದ ಅಂಗವಾಗಿ ಟೌನ್‌ಹಾಲ್ ಮುಂಭಾಗ ಇರುವ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಲಾಯಿತು. ಮೈಸೂರು ಗ್ರಾಮಾಂತರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್, ನಗರ ಪ್ರಧಾನ ಕಾರ್ಯದರ್ಶಿ ಎಂ.ಶಿವಣ್ಣ, ನಗರ ಕಾಂಗ್ರೆಸ್ ಸಮಿತಿಯ ಹಿಂದುಳಿದ ವರ್ಗದ ಅಧ್ಯಕ್ಷ ಎನ್.ಆರ್. ನಾಗೇಶ್, ಪರಿಶಿಷ್ಟ ಪಂಗಡದ ಗ್ರಾಮಾಂತರ ಅಧ್ಯಕ್ಷ ಸಿದ್ದರಾಜು, ಸೇವಾದಳ ಸಮಿತಿ ಗ್ರಾಮಾಂತರ ಅಧ್ಯಕ್ಷ ಶಾಮ ಯೋಗೀಶ್, ಕಾಂಗ್ರೆಸ್ ಮುಖಂಡರಾದ ಸಾಕಳ್ಳಿ ಬಸವರಾಜ್, ಮೈಸೂರು ಬಸವಣ್ಣ, ಕನಕಮೂರ್ತಿ ಇನ್ನಿತರರಿದ್ದರು.



ಹೆಚ್.ಡಿ.ಕೋಟೆ ತಾಲೂಕಿನ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ವತಿಯಿಂದ ಕ್ಷೇತ್ರ ಸಮನ್ವಯ ಅಧಿಕಾರಿಗಳ ಕಚೇರಿಯಲ್ಲಿ ಸಂವಿಧಾನ ಶಿಲ್ಪಿ ಡಾ.ಅಂಬೇಡ್ಕರ್‌ರವರ 134ನೇ ಜನ್ಮದಿನ ಆಚರಿಸಲಾಯಿತು. ಕ್ಷೇತ್ರ ಶಿಕ್ಷಣಾಧಿಕಾರಿ ಅನಂತರಾಜು, ಕ್ಷೇತ್ರ ಸಮನ್ವಯ ಅಧಿಕಾರಿ ಕೃಷ್ಣಯ್ಯ, ಕ್ಷೇತ್ರ ಸಂಪನ್ಮೂಲ ವ್ಯಕ್ತಿ ಕುಸುಮ, ಸಮೂಹ ಸಂಪನ್ಮೂಲ ವ್ಯಕ್ತಿಗಳಾದ ಆಯುಷಾ ಸಿದ್ದಿಕಿ, ಅರ್ಷಿಯಾ ಫಾತಿಮಾ, ಪ್ರತಿಭಾರಾಣಿ, ಕಾಮಾಕ್ಷಿ, ಆಶಾ, ಸುನೀತಾ, ಜ್ಞಾನೇಶ್ವರಿದೇವಿ ಮತ್ತಿತರರು ಉಪಸ್ಥಿತರಿದ್ದರು.

ಮೈಸೂರು ಮಿತ್ರ

ವಿಶ್ವವೇ ಒಪ್ಪಿಕೊಂಡ ನಾಯಕ ಅಂಬೇಡ್ಕರ್: ಚಲುವರಾಯಸ್ವಾಮಿ

ಮಂಡ್ಯ,ಏ.14– ಇಡೀ ವಿಶ್ವವೇ ಡಾ. ಬಿ.ಆರ್.ಅಂಬೇಡ್ಕರ್ ಮತ್ತು ಮಹಾತ್ಮ ಗಾಂಧೀಜಿ ಅವರ ಸಾಧನೆ ಗುರುತಿಸಿ ಇಬ್ಬರೂ ವಿಶ್ವನಾಯಕರು ಎಂದು ಒಪ್ಪಿಕೊಂಡಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದರು.

ಸೋಮವಾರ ಜಿಲ್ಲಾಡಳಿತ ಮತ್ತು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ 134ನೇ ಅಂಬೇಡ್ಕರ್ ಜಯಂತಿ ಕಾರ್ಯಕ್ರಮವನ್ನು ಸಂವಿಧಾನ ಪೀಠಿಕೆ ಬೋಧಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಸಮಾಜದ ಉನ್ನತ ವ್ಯಕ್ತಿಯಿಂದ ಹಿಡಿದು ಸಮಾಜದ ಕಟ್ಟಕಡೆಯ ವ್ಯಕ್ತಿಯನ್ನು ಗುರಿಯಾಗಿಸಿಕೊಂಡು ಭಾರತೀಯ ಸಂವಿಧಾನವನ್ನು ಡಾ.ಬಿ.ಆರ್.ಅಂಬೇಡ್ಕರ್ ಅವರು ರಚಿಸಿದ್ದಾರೆ, ಭಾರತೀಯ ಸಂವಿಧಾನ ಯಾವುದೇ ವರ್ಗ ಮತ್ತು ಸಮಾಜಕ್ಕೆ ಸೀಮಿತವಾಗಿಲ್ಲ ಎಂದು ಹೇಳಿದರು.

ವಿಶ್ವಜ್ಞಾನಿ ಡಾ.ಬಿ.ಆರ್.ಅಂಬೇಡ್ಕರ್ ರಚಿಸಿದ ಭಾರತೀಯ ಸಂವಿಧಾನವನ್ನು ಅತ್ಯಂತ ಶ್ರೇಷ್ಠ ಸಂವಿಧಾನವೆಂದು ವಿಶ್ವವೇ ಹೇಳಿತು, ಸೂರ್ಯ ಚಂದ್ರ ಇರುವವರೆಗೂ ಅವರು ನೀಡಿರುವ ಕೊಡುಗೆಗಳು ಮತ್ತು ಸಾಧನೆ ಅಜರಾಮರ, ತುಳಿತಕ್ಕೊಳಗಾದವರಿಗೆ ಶಕ್ತಿ ತುಂಬುವ ಕೆಲಸವನ್ನು ಬಾಬಾ ಸಾಹೇಬ್ ಮಾಡಿದ್ದಾರೆ ಎಂದು ತಿಳಿಸಿದರು.

ವಿಶೇಷ ಉಪನ್ಯಾಸಕರಾಗಿ ಪಾಲ್ಗೊಂಡು ಮಾತನಾಡಿದ ಪತ್ರಕರ್ತ ದೀಪಕ್, ಜಗತ್ತಿನಾದ್ಯಂತ 100ಕ್ಕೂ ಹೆಚ್ಚು ದೇಶಗಳು ಆಚರಿಸುವ ಜಯಂತಿ ಎಂದರೆ ಅದು ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ. ಬಿ. ಆರ್.ಅಂಬೇಡ್ಕರ್ ತಮ್ಮ ಬದುಕಿನುದ್ದಕ್ಕೂ ಶೋಷಿತರ ಏಳಿಗೆಗಾಗಿ ಶ್ರಮಿಸಿದರು, ಅವರ ಹೋರಾಟ ಮತ್ತು ಅವರು ಸಂಪಾದಿಸಿದ ಜ್ಞಾನಕ್ಕಾಗಿ ಜಗತ್ತು ಅವರನ್ನು ಗೌರವಿಸುತ್ತದೆ, ಬಹುಜನರಿಗೆ ಹಸಿವು, ಶಿಕ್ಷಣ, ಸಾಮಾಜಿಕ ಭದ್ರತೆ ಸಿಗದಿರುವ ಕಾಲದಲ್ಲಿ ಎಲ್ಲರೂ ಸಮಾನರು ಎಂದು ಪ್ರತಿಪಾದಿಸಿದವರು ಡಾ.ಬಿ.ಆರ್.ಅಂಬೇಡ್ಕರ್ ಎಂದರು.



ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡುತ್ತಿರುವ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ಹಾಗೂ ಗಣ್ಯರು.

ಜಿಲ್ಲಾ ವಸತಿನಿಲಯದ ವಿದ್ಯಾರ್ಥಿಗಳ ಸಹಾಯವಾಣಿ: ವಿದ್ಯಾರ್ಥಿ ನಿಲಯದ ಕುಂದು ಕೊರತೆಗಳ ತಿಳಿಸಲು ಸಹಾಯವಾಣಿ ಸಂಖ್ಯೆಯನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ಎನ್.ಚಲುವರಾಯಸ್ವಾಮಿ ಬಿಡುಗಡೆಗೊಳಿಸಿದರು. ಜಿಲ್ಲೆಯ ಹಾಸ್ಟೆಲ್ ವಿದ್ಯಾರ್ಥಿನಿಯರು ತಮ್ಮ ಕುಂದು ಕೊರತೆಗಳನ್ನು ತಿಳಿಸಲು ಸಹಾಯವಾಣಿ ತೆರೆಯಲಾಗಿದೆ, ವಿದ್ಯಾರ್ಥಿನಿಯರು ತಮ್ಮ ವಸತಿ ನಿಲಯಗಳಲ್ಲಿ ಯಾವುದೇ ಸಮಸ್ಯೆ ಉಂಟಾದರೆ ದೂ.ಸಂ. 9480872008 ಅನ್ನು ಸಂಪರ್ಕಿಸಬಹುದಾಗಿದೆ.

ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ಗೌರವಿಸಿ ಸನ್ಮಾನಿಸಲಾಯಿತು. ಡಾ.ಬಿ.ಆರ್.ಅಂಬೇಡ್ಕರ್ 134ನೇ ಜಯಂತಿ ಅಂಗವಾಗಿ ಆಯೋಜಿಸಲಾಗಿದ್ದ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ ವಿಜೇತರಾದ ಮಕ್ಕಳಿಗೆ ಬಹುಮಾನ ವಿತರಿಸಲಾಯಿತು.

ಇದಕ್ಕೂ ಮುನ್ನ ಜಿಲ್ಲಾಡಳಿತ, ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಡಾ.ಬಿ.ಆರ್.ಅಂಬೇಡ್ಕರ್‌ರವರ 134ನೇ ಜಯಂತಿ ಅಂಗವಾಗಿ ಜಿಲ್ಲಾಧಿಕಾರಿ ಕಚೇರಿಯ ಮುಂಭಾಗದಲ್ಲಿರುವ ಡಾ. ಬಿ.ಆರ್.ಅಂಬೇಡ್ಕರ್ ಮತ್ತು ಹಸಿರುಕ್ರಾಂತಿ ಹರಿಕಾರ ಬಾಬು ಜಗಜೀವನ ರಾಂ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ವರ್ಣರಂಜಿತ ರಥದಲ್ಲಿ ಇಡಲಾಗಿದ್ದ ಡಾ. ಬಿ.ಆರ್.ಅಂಬೇಡ್ಕರ್‌ರವರ ಭಾವಚಿತ್ರದ ಮೆರವಣಿಗೆಗೆ ಚಾಲನೆ ನೀಡಲಾಯಿತು. ಮೆರವಣಿಗೆಯಲ್ಲಿ ವೀರಗಾಸೆ, ಡೊಳ್ಳುಕುಣಿತ, ತಮಟೆ ಸೇರಿದಂತೆ ಮಹಿಳೆಯರು ಸಂವಿಧಾನ ಪುಸ್ತಕ ಪ್ರದರ್ಶಿಸುವ ಮೂಲಕ ವಿಭಿನ್ನ ರೀತಿಯಲ್ಲಿ ಮೆರವಣಿಗೆಯಲ್ಲಿ ಸಾಗಿದರು.

ಕಾರ್ಯಕ್ರಮದಲ್ಲಿ ಶಾಸಕ ಪಿ.ರವಿಕುಮಾರ್, ಮೈಶುಗರ್ ಅಧ್ಯಕ್ಷ ಸಿ.ಡಿ.ಗಂಗಾಧರ, ಜಿಲ್ಲಾಧಿಕಾರಿ ಡಾ.ಕುಮಾರ, ಜಿ.ಪಂ. ಸಿಇಓ ಕೆ.ಆರ್. ನಂದಿನಿ, ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ, ನಗರಸಭೆ ಅಧ್ಯಕ್ಷ ಎಂ.ವಿ.ಪ್ರಕಾಶ್ (ನಾಗೇಶ್), ಮುಡಾ ಅಧ್ಯಕ್ಷ ನಯೀಂ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಪಾಂಡವಪುರದಲ್ಲಿ ಅಂಬೇಡ್ಕರ್ ಜಯಂತಿ



ಪಾಂಡವಪುರ, ಏ.14– ಸಮಾಜದಲ್ಲಿ ಮಕ್ಕಳ ಮನಸ್ಸಿನಲ್ಲಿ ಜಾತಿ ಎಂಬ ವಿಷಬೀಜ ಬಿತ್ತಲಾಗಿದೆ ಇನ್ನೂ ಜಾತಿ ವ್ಯವಸ್ಥೆ ತೊಲಗಿಸಲು ಸಾಧ್ಯವಾಗಿಲ್ಲ ಎಂದು ಪ್ರತ್ರಕರ್ತ ಡಾ.ಮಹೇಶ್ ಮದೇನಟ್ಟಿ ವಿಷಾದ ವ್ಯಕ್ತಪಡಿಸಿದರು.

ಪಟ್ಟಣದ ತಾಪಂ ಸಭಾಂಗಣದ ಆವರಣದಲ್ಲಿ ತಾಲೂಕು ಆಡಳಿತ ಹಾಗೂ ಪುರಸಭೆ ಮತ್ತು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಿದ್ದ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ 134ನೇ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಎಲ್ಲರಿಗೂ ಸಮಾನವಾಗಿರುವ ನ್ಯಾಯ, ಅವಕಾಶ ಸಿಗಬೇಕು ಎನ್ನುವುದು ಅಂಬೇಡ್ಕರ್ ಕನಸಾಗಿತ್ತು. ಪ್ರಸ್ತುತ ಸಮಾಜದಲ್ಲಿ ಅಂಬೇಡ್ಕರ್ ಅವರ ಕನಸು ನನಸಾಗಿಲ್ಲ. ಇಂದಿಗೂ ದಲಿತರ ಮೇಲೆ ದೌರ್ಜನ್ಯ, ದಬ್ಬಾಳಿಕೆ ದೌರ್ಜನ್ಯಗಳು ನಡೆಯುತ್ತಿವೆ ಎಂದು ವಿಷಾಧ ವ್ಯಕ್ತಡಿಸಿದರು.

ಅಂಬೇಡ್ಕರ್ ಅವರು ಓದಿ ಅಧ್ಯಯನ ಮಾಡಿ ಸಂವಿಧಾನದ ಮೂಲಕ ಸಮಾಜದಲ್ಲಿ ಹಲವಾರು ಸುಧಾರಣೆ ತಂದಿದ್ದಾರೆ. ಹಾಗೆಯೇ ನಾವು ಸಹ ನಮ್ಮ ಕಾಲಘಟ್ಟದಲ್ಲಿ ಓದು ಅರ್ಥೈಸಿಕೊಂಡು ನಮ್ಮ ಸಮುದಾಯಗಳ ಏಳಿಗೆಗೆ ಶ್ರಮಿಸಿದಾಗ ಮಾತ್ರ ಅಂಬೇಡ್ಕರ್ ಅವರ ಆಶಯಗಳಿಗೆ ಬೆಲೆ ಕೊಟ್ಟಂತಾಗುತ್ತದೆ ಎಂದರು.

ತಹಸೀಲ್ದಾರ್ ಸಂತೋಷ್ ಕುಮಾರ್ ಮಾತನಾಡಿ, ಅಂಬೇಡ್ಕರ್ ಅವರು ಕೊಟ್ಟಿರುವ ಸಂವಿಧಾನದಿಂದ ನಾವೆಲ್ಲರು ನೆಮ್ಮದಿಯಿಂದ ಬದುಕುವಂತಾಗಿದೆ ಹಾಗಾಗಿ ಅಂಬೇಡ್ಕರ್ ಅವರಂತಹ ಮಹಾನ್ ನಾಯಕರ ಜಯಂತಿಯನ್ನು ಪ್ರತಿಯೊಬ್ಬರು ಹಬ್ಬದಂತೆ ವರ್ಷವಿಡೀ ಆಚರಣೆ ಮಾಡಬೇಕು ಎಂದರು.

ಡಾ.ಬಿ.ಆರ್.ಅಂಬೇಡ್ಕರ್, ಬಾಬು ಜಗಜೀವನ್‌ರಾಂ ಜಯಂತಿ ಪ್ರಯುಕ್ತ ಚರ್ಚಾ ಸ್ಪರ್ದೆಯಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿಗಳಿಗೆ ಬಹುಮಾನ ನೀಡಿದರು.

ಇದೇ ಸಂದರ್ಭದಲ್ಲಿ ಇ.ಓ.ಲೋಕೇಶ್ ಮೂರ್ತಿ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಪ್ರಭಾಕರ್, ಉಪವಿಭಾಗಧಿಕಾರಿ ಕಚೇರಿಯ ತಹಸಿಲ್ದಾರ್ ಪ್ರಕಾಶ್, ತೋಟಗಾರಿಗೆ ಇಲಾಖೆ ಸಹಾಯಕ ನಿರ್ದೇಶಕ ಪ್ರಸನ್ನ, ಇಳ್ಳೇನಹಳ್ಳಿ ದೇವರಾಜು, ಮುಖಂಡರಾದ ಅಲ್ಪಳ್ಳಿ ಗೋವಿಂದಯ್ಯ, ಅರಳಕುಪ್ಪೆ ದೇವರಾಜು, ಹರಹಳ್ಳಿ ಸಿದ್ದಲಿಂಗಯ್ಯ, ಬಿಇಓ ರವಿಕುಮಾರ್, ಬಿಆರ್‌ಸಿ ಪ್ರಕಾಶ್, ಪಿಎಸ್‌ಐ. ಉಮೇಶ್, ಡಾ.ಅರವಿಂದ್, ಇಲಾಖೆಯ ಮ್ಯಾನೇಜರ್ ಕೋಮಲ, ಲೋಕೇಶ್ ಸೇರಿದಂತೆ ಹಲವರಿದ್ದಾರೆ.

ಅಂಬೇಡ್ಕರ್ ಹೋರಾಟ ಗುಣವನ್ನು ಎಲ್ಲರೂ ಬೆಳೆಸಿಕೊಂಡರೆ ಸಮ ಸಮಾಜ ನಿರ್ಮಾಣ

ಕೆ.ಆರ್.ಪೇಟೆ,ಏ.14– ದೇಶದ ಬಡವರು ಮತ್ತು ಶೋಷಿತ ವರ್ಗಗಳಿಗೆ ಅರಿವು ಮತ್ತು ಹಕ್ಕು ಕೊಟ್ಟ ಮಹಾನ್ ನಾಯಕ ಅಂಬೇಡ್ಕರ್ ಅವರ ಜೀವನದ ಹೋರಾಟದ ಗುಣಗಳನ್ನು ಎಲ್ಲರೂ ಬೆಳೆಸಿಕೊಂಡರೆ ಸಮ ಸಮಾಜ ನಿರ್ಮಾಣ ಸಾಧ್ಯವಾಗುತ್ತದೆ ಎಂದು ನಾಡಿನ ಹೆಸರಾಂತ ಸಾಮಾಜಿಕ ಚಿಂತಕ ಡಾ.ಹೆಚ್.ವಿ.ವಾಸು ಹೇಳಿದರು.

ಕೆ.ಆರ್.ಪೇಟೆ ಪಟ್ಟಣದ ಶತಮಾನದ ಶಾಲಾ ಆವರಣದಲ್ಲಿ ತಾಲೂಕು ಆಡಳಿತ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಡಾ.ಬಿ.ಆರ್.ಅಂಬೇಡ್ಕರ್ ಅವರ 134ನೇ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಧಾನ ಭಾಷಣಕಾರರಾಗಿ ಆಗಮಿಸಿ ಅಂಬೇಡ್ಕರ್ ಅವರು ಸ್ವತಂತ್ರ ಭಾರತದ ದಲಿತರು, ಹಿಂದುಳಿದವರು, ಹಾಗೂ ಶೋಷಿತ ವರ್ಗಗಳಿಗೆ, ಮಹಿಳೆಯರಿಗೆ, ಕಾರ್ಮಿಕರಿಗೆ ಮಾಡಿದ ಕಾನೂನುಗಳು, ಹೋರಾಟಗಳ ಕಾರ್ಯಕ್ರಮಗಳನ್ನು ಕುರಿತು ಮಾತನಾಡಿದರು.

ಪ್ರಾಯಶಃ ಅಂಬೇಡ್ಕರ್ ಅವರು ಸಂವಿಧಾನ ರಚನಾ ಸಮಿತಿಯಲ್ಲಿ ಇಲ್ಲದೇ ಇದ್ದಿದ್ದರೆ ದೇಶದ ದಲಿತ ಬಂಧುಗಳು, ಎಲ್ಲಾ ವರ್ಗದ ಬಡವರು, ಕಾರ್ಮಿಕರು, ಮಹಿಳೆಯರಿಗೆ ಹಕ್ಕುಗಳನ್ನು ಬೇರೆ ಯಾರೂ ಸಹ ಕಾನೂನು ಪ್ರಕಾರ ನೀಡುತ್ತಿರಲಿಲ್ಲ. ಇಂತಹ ಅಪರೂಪದ ಮಾಣಿಕ್ಯ ಡಾ.ಬಿ.ಆರ್.ಅಂಬೇಡ್ಕರ್ ಅವರು ಇಡಿ ವಿಶ್ವವೇ ಮೆಚ್ಚುವಂತಹ ಶ್ರೇಷ್ಠ ಸಂವಿಧಾನವನ್ನು ರಚಿಸಿಕೊಡುವ ಮೂಲಕ ದೇಶದ ಜನತೆಗೆ ಆಧಾರಸ್ತಂಭವಾಗಿದ್ದಾರೆ. ದೇಶ ಸ್ವಾತಂತ್ರ್ಯ ಪಡೆದ ತಕ್ಷಣ 14 ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ಕಡ್ಡಾಯ ಶಿಕ್ಷಣ ನೀಡಿದರು. ಮಹಿಳೆಯರಿಗೂ ಮತದಾನದ ಹಕ್ಕು ನೀಡಿದರು ಎಂದರು.



ವಿವಿಧಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಗಣ್ಯರನ್ನು ಅಂಬೇಡ್ಕರ್ ಪ್ರಶಸ್ತಿ ನೀಡಿ ಗೌರವಿಸಲಾಯಿತು

ಶಾಸಕ ಹೆಚ್.ಟಿ.ಮಂಜು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಪಟ್ಟಣದ ಯಾವುದಾದರೊಂದು ಪ್ರಮುಖ ವೃತ್ತದಲ್ಲಿ ಅಂಬೇಡ್ಕರ್ ಪ್ರತಿಮೆ ನಿರ್ಮಿಸಲು ನನ್ನ ಸಂಪೂರ್ಣ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ವೈ.ಎನ್.ತಿಮ್ಮೇಗೌಡ ಅಂಬೇಡ್ಕರ್ ಅವರ ಸಂವಿಧಾನ ವಿಧಿ ಬೋಧಿಸಿದರು.

ಕಾರ್ಯಕ್ರಮದಲ್ಲಿ ಪುರಸಭಾ ಅಧ್ಯಕ್ಷೆ ಪಂಕಜಾ ಪ್ರಕಾಶ್, ಉಪಾಧ್ಯಕ್ಷೆ ಸೌಭಾಗ್ಯ ಉಮೇಶ್, ಪುರಸಭಾ ಸದಸ್ಯರಾದ ಡಿ. ಪ್ರೇಮಕುಮಾರ್, ಗಿರೀಶ್, ಕಲ್ಪನಾ ದೇವರಾಜು, ಎಸ್‌ಸಿಎಸ್‌ಟಿ. ನೌಕರರ ಸಂಘದ ಅಧ್ಯಕ್ಷ ಹಳೆಯೂರು ಯೋಗೇಶ್, ಆರ್‌ಟಿಓ ಅಧಿಕಾರಿ ಮಲ್ಲಿಕಾರ್ಜುನ್, ಟಿಎಪಿಸಿಎಂಎಸ್ ಅಧ್ಯಕ್ಷ ಬಿ.ಎಲ್.ದೇವರಾಜು, ತಹಸೀಲ್ದಾರ್ ಡಾ.ಎಸ್.ಯು.ಅಶೋಕ್, ತಾ.ಪಂ. ಇಓ ಸುಷ್ಮ, ಪುರಸಭಾ ಮುಖ್ಯಾಧಿಕಾರಿ ನಟರಾಜ್, ಜಿ.ಪಂ ಮಾಜಿ ಸದಸ್ಯರಾದ ಡಾ.ಎಸ್.ಕೃಷ್ಣಮೂರ್ತಿ, ರಾಮ್‌ದಾಸ್, ಬಸ್ತಿ ರಂಗಪ್ಪ, ಎನ್.ಜೆ.ರಮೇಶ್, ತಾಲೂಕು ಛಲವಾದಿ ಮಹಾಸಭಾ ಅಧ್ಯಕ್ಷ ಊಚನಹಳ್ಳಿ ನಟರಾಜು ಇನ್ನಿತರರಿದ್ದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಗಣ್ಯರನ್ನು ಅಂಬೇಡ್ಕರ್ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮಕ್ಕೂ ಮುನ್ನ ಪ್ರವಾಸಿ ಮಂದಿರದಿಂದ ಶತಮಾನದ ಶಾಲೆಯ ಆವರಣದಲ್ಲಿ ಆಯೋಜಿಸಿರುವ ವೇದಿಕೆಯವರೆಗೆ ಬೆಳ್ಳಿ ಸಾರೋಟಿನಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರವನ್ನು ಪ್ರಮುಖ ಬೀದಿಗಳಲ್ಲಿ ಜಾನಪದ ಕಲಾತಂಡಗಳೊಂದಿಗೆ ಮೆರವಣಿಗೆ ಮಾಡಲಾಯಿತು.

ನಾಡಿನ ಮಹಾ ಬೆಳಕು ಅಂಬೇಡ್ಕರ್



ಕಿಕ್ಕೇರಿ ಆರಕ್ಷಕ ಠಾಣೆಯಲ್ಲಿ ಸೋಮವಾರ ವಿಶ್ವಜ್ಞಾನಿ ಡಾ.ಅಂಬೇಡ್ಕರ್ ಜಯಂತಿ ಆಚರಿಸಲಾಯಿತು. ರೇವತಿ, ರಮೇಶ್, ಶಿವಲಿಂಗೇಗೌಡ, ಚಂದ್ರು ಇದ್ದರು.

ಕಿಕ್ಕೇರಿ: ವಿಶ್ವಜ್ಞಾನಿ ಡಾ.ಅಂಬೇಡ್ಕರ್ ಬದುಕಿನ ಸಾರವನ್ನು ತಿಳಿದು ಸಂವಿಧಾನವನ್ನು ಅರಿತರೆ ಸುಖ, ನೆಮ್ಮದಿ ಸಿಗಲಿದೆ ಎಂದು ಕಿಕ್ಕೇರಿ ಪೊಲೀಸ್ ಇನ್‌ಸ್ಪೆಕ್ಟರ್ ರೇವತಿ ಹೇಳಿದರು.

ಪಟ್ಟಣದ ಆರಕ್ಷಕ ಠಾಣೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಡಾ. ಅಂಬೇಡ್ಕರ್ ಅವರ 134ನೇ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡುತ್ತ ಅಂಬೇಡ್ಕರ್ ನಾಡಿನ ಮಹಾ ಬೆಳಕು. ಇವರ ಭೀಮ ಹೆಜ್ಜೆ ಪ್ರಜಾಪ್ರಭುತ್ವದ ಬಲು ದೊಡ್ಡ ಪ್ರಗತಿಯ ಕಿರಣವಾಗಿದೆ ಎಂದರು.

ಶೋಷಿತ ವರ್ಗದಲ್ಲಿ ಹುಟ್ಟಿ ಬಡತನವನ್ನು ಸವಾಲಾಗಿ ಸ್ವೀಕರಿಸಿ ಜಯಶೀಲರಾದ ಧೀಮಂತ ಅಂಬೇಡ್ಕರ್ ನೀಡಿದ ಸಂವಿಧಾನ ದಮನಿತರ ಧ್ವನಿಗೆ ಶಕ್ತಿಯಾಗಿದೆ. ಹುಟ್ಟಿನಿಂದ ಸಾಯುವವರೆಗೆ ನೆಮ್ಮದಿಯಿಂದ ಬದುಕಲು ಇವರು ರೂಪಿಸಿದ ಕಾನೂನು ಬ್ರಹ್ಮಾಸ್ತ್ರವಾಗಿದೆ. ಇದನ್ನರಿತು ಇವರನ್ನು ವಿಶ್ವಜ್ಞಾನಿ ಎನ್ನುವ ಜತೆಯಲ್ಲಿ ಇಡೀ ವಿಶ್ವವೇ ನಮ್ಮ ಸಂವಿಧಾನವನ್ನು ಪೂಜ್ಯನೀಯ ಭಾವನೆಯಲ್ಲಿ ಗೌರವಿಸುತ್ತಿದೆ ಎಂದರು.

ಮಹಿಳೆಯರು ಮತದಾನ ಮಾಡಲು ಪ್ರಮುಖ ಕಾರಣಕರ್ತರು ಬಾಬಾ ಸಾಹೇಬ್ ಅವರು. ಶಿಕ್ಷಣ ಮಾನವನ ಸರ್ವಾಂಗೀಣ ವಿಕಸನಕ್ಕೆ ದಾರಿ ಎಂದು ಸಾರಿದ ಇವರ ತತ್ವ ಸಿದ್ಧಾಂತ, ಆದರ್ಶ, ಚಿಂತನೆ, ಸದೃಢ ಭಾರತ ನಿರ್ಮಾಣಕ್ಕೆ ಬಹು ದೊಡ್ಡ ಕೊಡುಗೆಯಾಗಿದೆ. ಇವರ ಜ್ಞಾನಭಂಡಾರ, ವಿಷಯ ಮಂಡನೆಗೆ ವಿಶ್ವವೇ ಮನಸೋತಿದೆ. ಶ್ರೇಣೀಕೃತ ಸಮಾಜದ ವ್ಯವಸ್ಥೆಯಲ್ಲಿ ಶೋಷಿತ, ದಲಿತ, ದುರ್ಬಲ ಸಮುದಾಯದ ಏಳ್ಗೆಗಾಗಿ ಅಹರ್ನಿಶಿ ದುಡಿದ ಅಂಬೇಡ್ಕರರನ್ನು ಸದಾ ನೆನೆಯಬೇಕಿದೆ ಎಂದು ನುಡಿದರು.

ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಸಿಹಿ ಹಂಚಲಾಯಿತು.

ಎಎಸ್‌ಐ ರಮೇಶ್, ಶಿವಲಿಂಗೇಗೌಡ, ಸಿಬ್ಬಂದಿಗಳಾದ ಸುಪ್ರೀತ್, ಪ್ರಶಾಂತ್, ಸುನೀಲ್‌ಕುಮಾರ್, ಲೋಕೇಶ್, ಕೃಷ್ಣ, ಜಯರಾಮ, ಪ್ರಸನ್ನ, ಲಕ್ಷ್ಮೀಪುರ ಗ್ರಾಪಂ ಮಾಜಿ ಅಧ್ಯಕ್ಷ ಚಂದ್ರೇಗೌಡ ಇದ್ದರು.

ಒಂದನೇ ಪುಟದಿಂದ

ಲಾರಿ ಮುಷ್ಕರ ಆರಂಭ

ಮರಳು ಲಾರಿಗಳು, ಗೂಡ್ಸ್ ವಾಹನಗಳು, ಅಕ್ಕಿ ಸಾಗಿಸುವ ಲಾರಿಗಳ ಸಂಚಾರ ಸ್ಥಗಿತಗೊಂಡಿದೆ. ಜೊತೆಗೆ ಪೆಟ್ರೋಲ್, ಡೀಸೆಲ್ ಸಾಗಿಸುವ ಲಾರಿಗಳೂ ಬಂದ್ ಆಚರಿಸಲಿವೆ. ಇಂದು ಬೆಳಗ್ಗೆ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಫೆಡರೇಷನ್ ಆಫ್ ಕರ್ನಾಟಕ ಲಾರಿ ಓನರ್ಸ್ ಮತ್ತು ಏಜೆಂಟ್ ಅಸೋಸಿಯೇಷನ್ ಅಧ್ಯಕ್ಷ ಜಿ.ಆರ್ ಷಣ್ಮುಗಪ್ಪ, 5 ಪ್ರಮುಖ ಬೇಡಿಕೆಯನ್ನು ಮುಂದಿಟ್ಟು ಮುಷ್ಕರಕ್ಕೆ ಕರೆ ನೀಡುತ್ತಿದ್ದೇವೆ. ಸರ್ಕಾರದಿಂದ ಇದುವರೆಗೂ ಯಾವುದೇ ಮಾತುಕತೆಯಾಗಿಲ್ಲ. ಕರ್ನಾಟಕಕ್ಕೆ ಮಾತ್ರ ಯಾಕೆ ಆರ್‌ಟಿಓ ಚೆಕ್‌ಪೋಸ್ಟ್ ಬೇಕು. ಕಳೆದ ಆರು ವರ್ಷದಿಂದ ನಾವು ಪ್ರತಿಭಟನೆ ಮಾಡಿಲ್ಲ. ಸಿದ್ದರಾಮಯ್ಯ ಸರ್ಕಾರ ಅಧಿಕಾರಕ್ಕೆ ಬಂದ ನಂತರ ನಾವು ಪ್ರತಿಭಟಿಸಿಲ್ಲ. ಎಲ್‌ಪಿಜಿ ಟ್ಯಾಂಕರ್‌ಗಳು ರಾತ್ರಿಯಿಂದ ಭರ್ತಿಯಾಗುವುದಿಲ್ಲ ಎಂದು ತಿಳಿಸಿದ್ದರು. ಏ.27 ಮತ್ತು 28 ರಂದು ಮಾತುಕತೆ ನಡೆಸಿ ದೇಶಾದ್ಯಂತ ಲಾರಿ ಮುಷ್ಕರ ಮಾಡುತ್ತೇವೆ. ಇಂದು ರಾತ್ರಿಯಿಂದಲೇ ಆರು ಲಕ್ಷ ಲಾರಿಗಳು ರಾಜ್ಯಾದ್ಯಂತ ನಿಲ್ಲಲಿವೆ ಎಂದರು.

ಯಾವ ಸಂಘಟನೆಗಳ ಬೆಂಬಲ

- ಆಲ್ ಇಂಡಿಯಾ ಮೋಟರ್ ಟ್ರಾನ್ಸ್‌ಪೋರ್ಟ್ ಕಾಂಗ್ರೆಸ್, ದೆಹಲಿ
- ಸೌಥ್ ಇಂಡಿಯಾ ಮೋಟರ್ ಟ್ರಾನ್ಸ್‌ಪೋರ್ಟ್ ಅಸೋಸಿಯೇಷನ್
- ಕರ್ನಾಟಕ ಗೂಡ್ಸ್ ಟ್ರಾನ್ಸ್‌ಪೋರ್ಟ್ ಅಸೋಸಿಯೇಷನ್
- ಏರ್‌ಪೋರ್ಟ್ ಟ್ಯಾಕ್ಸಿ ಅಸೋಸಿಯೇಷನ್
- ಬೆಂಗಳೂರು ಟೂರಿಸ್ಟ್ ಟ್ಯಾಕ್ಸಿ ಅಸೋಸಿಯೇಷನ್
- ಜಲ್ಲಿ ಕಲ್ಲು, ಮರಳು ಲಾರಿ ಅಸೋಸಿಯೇಷನ್
- ರಾಜ್ಯ ಪಡಿತರ ಆಹಾರ ಧಾನ್ಯಗಳ ಸಾಗಾಣಿಕೆದಾರರ ಸಂಘ
- ಸೌಥ್ ಜೋನ್ ಎಲ್‌ಪಿಜಿ ಅಸೋಸಿಯೇಷನ್

ಸರ್ಕಾರದ ಪ್ರಾಮಾಣಿಕ ಪ್ರಯತ್ನ

ಅವರೇ ಪತ್ರ ಬರೆದಿದ್ದರು. ಡಾ.ಅಂಬೇಡ್ಕರ್, 'ನಾನು ಹಿಂದೂ ಆಗಿ ಹುಟ್ಟಿದೆ, ಆದರೆ ಹಿಂದೂವಾಗಿ ಸಾಯಲಾರೆ' ಎಂದು ಹೇಳಿದ್ದರು. ಅಂತಿಮವಾಗಿ ಹಿಂದೂ ಧರ್ಮ ತ್ಯಜಿಸಿ ಬೌದ್ಧ ಧರ್ಮ ಸ್ವೀಕಾರ ಮಾಡಿದರು, ಹಿಂದೂ ಧರ್ಮದ ಸುಧಾರಣೆಗೆ ಪ್ರಯತ್ನಿಸಿ, ಅದು ಸಾಧ್ಯವಾಗುವುದಿಲ್ಲ ಎಂಬ ಅರಿವಾದ ನಂತರ ಮಾನವೀಯತೆ ಮತ್ತು ಸಮಾನತೆ ಇದ್ದ ಬೌದ್ಧ ಧರ್ಮ ಸ್ವೀಕರಿಸಿದರು.

ಅಂಬೇಡ್ಕರ್ ಅವರನ್ನು ಜವಾಹರ ಲಾಲ್ ನೆಹರು ವಿರೋಧಿಸಲಿಲ್ಲ. ಬಿಜೆಪಿಯವರು ನೆಹರೂರನ್ನು ವಿರೋಧಿಸುತ್ತಾರೆ. ನೆಹರೂ ವಿರೋಧಿಸಿದ್ದರೆ, ಸಂವಿಧಾನ ರಚನೆಗೆ ಅಂಬೇಡ್ಕರ್ ಅವರನ್ನು ಆಯ್ಕೆ ಮಾಡುತ್ತಿರಲಿಲ್ಲ.

ಹಿಂದೂ ಕೋಡ್ ಬಿಲ್ ತಂದಾಗ ನೆಹರೂ ಅದರ ಪರವಾಗಿಯೇ ಇದ್ದರು. ಕೆಲವು ಶಕ್ತಿಗಳು ಅದನ್ನು ಜಾರಿ ಮಾಡಲು ಬಿಡಲಿಲ್ಲ. ಹಿಂದೂ ಕೋಡ್ ಬಿಲ್‌ನಲ್ಲಿರುವ ಅಂಶಗಳನ್ನು ನೆಹರೂ ಅಧಿಕಾರದ ಅವಧಿಯಲ್ಲಿ ಜಾರಿ ಮಾಡುವ ಪ್ರಯತ್ನ ಮಾಡಿದ್ದರು ಎಂದರು.

ರಾಜ್ಯದ ಬಜೆಟ್ ಗಾತ್ರ ಹೆಚ್ಚಾದಂತೆ ಎಸ್‌ಸಿಪಿ/ಟಿಎಸ್‌ಪಿ ಹಣ ಹೆಚ್ಚಾಗಬೇಕು. ಆದರೆ, ಬಿಜೆಪಿ ಸರ್ಕಾರ ಕಡಿಮೆ ಮಾಡಿತು. ನಾವು ಅಧಿಕಾರಕ್ಕೆ ಬಂದ ಬಳಿಕ ಮತ್ತೆ ಯೋಜನಾಗಾತ್ರಕ್ಕೆ ತಕ್ಕಂತೆ ಹೆಚ್ಚಿಸಿದ್ದೇವೆ, ಈ ಬಾರಿ 42,018 ಕೋಟಿ ರೂ. ತೆಗೆದಿಟ್ಟಿದ್ದೇವೆ. ಎಸ್‌ಸಿಪಿ/ಟಿಎಸ್‌ಪಿಯ 8,300 ಕೋಟಿ ರೂ. ದುರುಪಯೋಗ ಪಡಿಸಿಕೊಂಡಿದ್ದು ಬಿಜೆಪಿ, ನಾಚಿಕೆ ಇಲ್ಲದೆ ನಮ್ಮ ಮೇಲೆ ಆರೋಪ ಮಾಡುತ್ತಿದ್ದಾರೆ.

ಅಂಬೇಡ್ಕರ್ ಆಶಯಗಳ ಅನುಷ್ಠಾನಕ್ಕೆ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದು ಜನರ ಕೊಳ್ಳುವ ಶಕ್ತಿಯನ್ನು ಹೆಚ್ಚಿಸಿದ್ದೇವೆ. ವಿದ್ಯಾವಂತರೇ ಹೆಚ್ಚು ಜಾತಿವಾದಿ ಆಗುತ್ತಿರುವುದು ಸರಿಯಲ್ಲ, ಶಿಕ್ಷಣದ ಉದ್ದೇಶ ಜಾತಿವಾದಿ ಆಗುವುದಲ್ಲ .

ಮುಸಲ್ಮಾನರು ಶಿಕ್ಷಣದಿಂದ, ಅವಕಾಶಗಳಿಂದ ವಂಚಿತರಾಗಬಾರದು ಎಂಬುದಕ್ಕೆ ಸಂವಿಧಾನ ಹೇಳಿದಂತೆ ಎಲ್ಲಾ ಜಾತಿ, ಧರ್ಮದ ಬಡವರಿಗೆ ಅವಕಾಶ ಕಲ್ಪಿಸುತ್ತಿದ್ದೇವೆ. ಇಷ್ಟಕ್ಕೇ ಕಾಂಗ್ರೆಸ್ ಬರೀ ಮುಸಲ್ಮಾನರನ್ನು ಓಲೈಸುತ್ತಿದೆ ಎಂಬ ಅಪಪ್ರಚಾರ ಮಾಡುತ್ತಿದ್ದಾರೆ.

ಸಾರಾಯಿ ಬೇಡ, ಶಾಲೆ ಬೇಕು ಎನ್ನುವುದು ದಲಿತ ಸಂಘರ್ಷ ಸಮಿತಿ ಹೋರಾಟದ ಘೋಷಣೆಯಾಗಿತ್ತು. ನಾನು ಉಪಮುಖ್ಯಮಂತ್ರಿ ಆದ ತಕ್ಷಣ ಊರು–ಊರಲ್ಲಿ ವಸತಿ ಶಾಲೆ ಆರಂಭಿಸಿದೆ. ಮುಂದಿನ ಆರ್ಥಿಕ ವರ್ಷದ ಕೊನೆ ವೇಳೆಗೆ ರಾಜ್ಯದ ಎಲ್ಲಾ ಹೋಬಳಿಗಳಲ್ಲೂ ವಸತಿ ಶಾಲೆ ತೆರೆದಿರುತ್ತವೆ.

ಇಂದಿನಿಂದ ರಾಜ್ಯದ 32 ಜಿಲ್ಲೆಗಳಲ್ಲಿ ಒಟ್ಟು 33 ಡಿಸಿಆರ್‌ಇ ಪೊಲೀಸ್ ಠಾಣೆಗಳು ಕಾರ್ಯಾರಂಭ ಮಾಡಲಿವೆ. ಸಾಂಕೇತಿಕವಾಗಿ ಒಂದು ಕೇಂದ್ರ ಡಿಸಿಆರ್‌ಇ ಠಾಣೆಯನ್ನು ಉದ್ಘಾಟಿಸಿರುವುದಾಗಿ ತಿಳಿಸಿದರು. ಮೈಸೂರು ವಿಶ್ವವಿದ್ಯಾಲಯದಲ್ಲಿ ಸಂವಿಧಾನ ಪೀಠ ಮತ್ತು ಬೆಂಗಳೂರಿನಲ್ಲಿ ಆಂಧ್ರ ಮಾದರಿ, ಅದಕ್ಕೂ ಮೀರಿದ ಡಾ.ಅಂಬೇಡ್ಕರ್ ಪ್ರತಿಮೆ ಸ್ಥಾಪಿಸಲಾಗುವುದು ಎಂದರು.

ನಾಳೆ, ನಾಳಿದ್ದು ಸಿಇಟಿ

ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಪರೀಕ್ಷಾ ಅಕ್ರಮಗಳನ್ನು ತಡೆಯುವ ಉದ್ದೇಶದಿಂದ ನೇಮಕಾತಿ ಪರೀಕ್ಷೆಗಳಿಗೆ ಮಾಡುವ ಹಾಗೆ ಈ ಪರೀಕ್ಷೆಗೂ ಕ್ಯಾಮರಾ ಕಣ್ಗಾವಲು ಇರುತ್ತದೆ. ವೆಬ್ ಕಾಸ್ಟಿಂಗ್ ಮೂಲಕ ಎಲ್ಲ 775 ಪರೀಕ್ಷಾ ಕೇಂದ್ರಗಳ ಮೇಲೆ ನಿಗಾ ಇಡುವ ವ್ಯವಸ್ಥೆ ಮಾಡಿದ್ದು, ಕಟ್ಟೆಚ್ಚರ ವಹಿಸಲಾಗಿದೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಮೇಲುಸ್ತುವಾರಿ ನಡೆಸಲಿದ್ದಾರೆ ಎಂದು ವಿವರಿಸಿದ್ದಾರೆ.

ಒಂದೂವರೆ ಗಂಟೆ ಮುಂಚೆ ಬನ್ನಿ: ಪೊಲೀಸ್, ಗೃಹ ರಕ್ಷಕ ದಳದ ಸಿಬ್ಬಂದಿ ಅಭ್ಯರ್ಥಿಗಳನ್ನು ತೀವ್ರ ತಪಾಸಣೆ ಮಾಡಿಯೇ ಪರೀಕ್ಷಾ ಕೇಂದ್ರದೊಳಗೆ ಬಿಡುವುದು. ಹೀಗಾಗಿ ಕನಿಷ್ಠ ಒಂದೂವರೆ ಗಂಟೆ ಮುಂಚೆಯೇ ಪರೀಕ್ಷಾ ಕೇಂದ್ರಕ್ಕೆ ಅಭ್ಯರ್ಥಿಗಳು ಬಂದು ತಪಾಸಣೆಗೆ ಒಳಗಾಗಬೇಕು. ಅಭ್ಯರ್ಥಿಯ ಮುಖ ಚಹರೆ ಮತ್ತು ಕ್ಯೂಆರ್ ಕೋಡ್ ವ್ಯವಸ್ಥೆ ಮೂಲಕ ಅಭ್ಯರ್ಥಿಯ ನೈಜತೆ ಪರಿಶೀಲನೆ ಮಾಡಲಾಗುತ್ತದೆ. ಯಾರದ್ದೊ ಪರೀಕ್ಷೆಯನ್ನು ಇನ್ಯಾರೊ ಬರೆಯುವುದನ್ನು ತಡೆಯುವ ಉದ್ದೇಶದಿಂದ ಈ ವ್ಯವಸ್ಥೆ ಜಾರಿ ಮಾಡಿದ್ದು, ಸೀಟು ಹಂಚಿಕೆಯಾಗಿ ಕಾಲೇಜುಗಳಿಗೆ ಪ್ರವೇಶ ಆಗುವ ಸಂದರ್ಭದಲ್ಲಿ ಕೂಡ ಅಭ್ಯರ್ಥಿಯ ಭಾವಚಿತ್ರವನ್ನು ಹೋಲಿಕೆ ಮಾಡಿಯೇ ಪ್ರವೇಶ ನೀಡುವ ವ್ಯವಸ್ಥೆ ಮಾಡಿದ್ದು, ನಕಲಿ ಅಭ್ಯರ್ಥಿಗಳಿಗೆ ಸಂಪೂರ್ಣ ಕಡಿವಾಣ ಹಾಕಲಾಗಿದೆ ಎಂದು ಪ್ರಸನ್ನ ತಿಳಿಸಿದ್ದಾರೆ. ಹೀಗಾಗಿ ಕಷ್ಟಪಟ್ಟು ಓದಿದ ಅಭ್ಯರ್ಥಿಗಳಿಗೆ ಯಾವುದೇ ಮೋಸ ಆಗಲು ಬಿಡುವುದಿಲ್ಲ. ಅತ್ಯಂತ ಪಾರದರ್ಶಕ ವಾಗಿ ಪರೀಕ್ಷೆ ನಡೆಸಲು ಎಲ್ಲ ರೀತಿಯ ತಯಾರಿ ಮಾಡಿಕೊಂಡಿದ್ದ, ನಿಶ್ಚಿಂತೆಯಿಂದ ಪರೀಕ್ಷೆ ಬರೆಯಬಹುದು ಎಂದು ಅವರು ಅಭಯ ನೀಡಿದ್ದಾರೆ.

ದ್ವಿತೀಯ ಪಿಯುಸಿ ಮೊದಲ ಪರೀಕ್ಷೆಯಲ್ಲಿ ಕಡಿಮೆ ಅಂಕ ಬಂದಿರುವ ಅಥವಾ ಅನುತ್ತೀರ್ಣರಾಗಿರುವವರಿಗೆ ಇನ್ನೂ ಫಲಿತಾಂಶವನ್ನು ಉತ್ತಮ ಮಾಡಿಕೊಳ್ಳಲು ಅವಕಾಶ ಇರುವ ಕಾರಣ ಯಾರೂ ಸಿಇಟಿ ಬರೆಯುವುದನ್ನು ತಪ್ಪಿಸಿಕೊಳ್ಳಬಾರದು. ಹೀಗಾಗಿ ಯಾರೆಲ್ಲ ಶುಲ್ಕ ಪಾವತಿಸಿದ್ದೀರೊ ಅವರೆಲ್ಲರೂ ಪ್ರವೇಶ ಪತ್ರ ಡೌನ್ ಲೋಡ್ ಮಾಡಿಕೊಂಡು ಪರೀಕ್ಷೆ ಬರೆಯಬೇಕು. ದ್ವಿತೀಯ ಪಿಯುಸಿಯ 3ನೇ ಪರೀಕ್ಷೆಯ ಅಂಕಗಳನ್ನು ಪಡೆದು ರಾಂಕ್ ಕೊಡುವ ವ್ಯವಸ್ಥೆ ಕೂಡ ಇದ್ದು, ಯಾರೂ ಇದರಿಂದ ಅವಕಾಶ ವಂಚಿತರಾಗಬಾರದು ಎಂದು ಪ್ರಸನ್ನ ಅವರು ಸಲಹೆ ನೀಡಿದ್ದಾರೆ.

ವಸ್ತ್ರ ಸಂಹಿತೆ: ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಗೆ ಪ್ರತ್ಯೇಕ ವಸ್ತ್ರ ಸಂಹಿತೆ ಮಾಡಿದ್ದು, ಕಡ್ಡಾಯವಾಗಿ ಎಲ್ಲರೂ ಪಾಲಿಸಬೇಕು ಎಂದು ಪ್ರಸನ್ನ ಸೂಚಿಸಿದ್ದಾರೆ.

ಪುರುಷ, ಮಹಿಳಾ ಅಭ್ಯರ್ಥಿಗಳು ಅರ್ಧ ತೋಳಿನ ಬಟ್ಟೆ ಧರಿಸಬೇಕು. ಸಾಧ್ಯವಾದಷ್ಟು ಕಾಲರ್ ಇಲ್ಲದಿರುವುದನ್ನು ಹಾಕಿಕೊಂಡು ಬಂದರೆ ಉತ್ತಮ. ಪುರುಷರು, ಜೇಬು ಇಲ್ಲದ, ಕಡಿಮೆ ಜೇಬುಗಳಿರುವ ಸರಳ ಪ್ಯಾಂಟ್ ಧರಿಸಬೇಕು. ಕುರ್ತಾ ಪೈಜಾಮ/ಜೀನ್ಸ್ ಪ್ಯಾಂಟ್ಗೆ ಅವಕಾಶ ಇರುವುದಿಲ್ಲ. ಶೂ ಕೂಡ ನಿಷೇಧಿಸಲಾಗಿದೆ. ಮೊಬೈಲ್, ಪೆನ್‌ಡ್ರೈವ್, ಇಯರ್ ಫೋನ್, ಮೈಕ್ರೋ ಫೋನ್ ಇತ್ಯಾದಿ ಎಲೆಕ್ಟ್ರಾನಿಕ್ ವಸ್ತುಗಳನ್ನು ಸಂಪೂರ್ಣ ನಿಷೇಧಿಸಲಾಗಿದೆ. ಒಮ್ಮೆ ಕೆಇಎ ವೆಬ್ ಸೈಟ್ ನಲ್ಲಿ ಇರುವ ವಸ್ತ್ರ ಸಂಹಿತೆಯ ವಿವರಗಳನ್ನು ಓದಿಕೊಂಡು, ಆ ಪ್ರಕಾರ ಪರೀಕ್ಷೆಗೆ ಬರಬೇಕು ಎಂದು ಅವರು ಸಲಹೆ ನೀಡಿದ್ದಾರೆ.

ವೋಟ್ ಬ್ಯಾಂಕ್ ವೈರಸ್ ಹರಡುತ್ತಿದೆ!

ಹೆಕ್ಟೇರ್ ಭೂಮಿ ಇದೆ. ವಕ್ಫ್ ಆಸ್ತಿಗಳ ಪ್ರಯೋಜನಗಳನ್ನು ಅಗತ್ಯವಿರುವವರಿಗೆ ನೀಡಿದ್ದರೆ, ಅದು ಅವರಿಗೆ ಪ್ರಯೋಜನವಾಗುತ್ತಿತ್ತು ಆದರೆ ಭೂ ಮಾಫಿಯಾ ಈ ಆಸ್ತಿಗಳಿಂದ ಲಾಭ ಪಡೆದಿದೆ ಎಂದು ಪ್ರಧಾನಿ ಹೇಳಿದ್ದಾರೆ.

ಮುಸ್ಲಿಂ ಮೀಸಲಾತಿಗೆ ಮೋದಿ ಕೆಂಡ!: ಕರ್ನಾಟಕದ ಕಾಂಗ್ರೆಸ್ ಸರ್ಕಾರ ಧರ್ಮದ ಆಧಾರದ ಮೇಲೆ ಟೆಂಡರ್‌ಗಳಲ್ಲಿ ಮೀಸಲಾತಿ ನೀಡುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಆರೋಪಿಸಿದ್ದಾರೆ. ಈ ಕ್ರಮವು ಪರಿಶಿಷ್ಟ ಜಾತಿಗಳು, ಪರಿಶಿಷ್ಟ ಪಂಗಡಗಳು ಮತ್ತು ಇತರ ಹಿಂದುಳಿದ ವರ್ಗಗಳ ಹಕ್ಕುಗಳನ್ನು ಕಸಿದುಕೊಳ್ಳುತ್ತದೆ ಎಂದು ಆರೋಪಿಸಿದ್ದಾರೆ.

ಇಂತಹ ನಿಬಂಧನೆಗಳು ಸಂವಿಧಾನ ಬಾಹಿರ ಮಾತ್ರವಲ್ಲದೆ ಭಾರತೀಯ ಸಂವಿಧಾನದ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಆದರ್ಶಗಳಿಗೆ ದ್ರೋಹವಾಗಿದೆ ಎಂದು ಮೋದಿ ಕಿಡಿಕಾರಿದ್ದಾರೆ.

ಅಂಬೇಡ್ಕರ್ ಧರ್ಮದ ಆಧಾರದ ಮೇಲೆ ಮೀಸಲಾತಿ ಇರುವುದಿಲ್ಲ ಎಂದು ಹೇಳಿದ್ದರು, ಮತ್ತು ಸಂವಿಧಾನದಲ್ಲಿ ಧರ್ಮದ ಆಧಾರದ ಮೇಲೆ ಮೀಸಲಾತಿ ನೀಡುವುದಕ್ಕೆ ನಿರ್ಬಂಧವಿದೆ ಎಂದು ಪ್ರಧಾನಿ ಮೋದಿ ಹೇಳಿದರು.

ಮಗ ಸಾವು

ಸಾವನ್ನಪ್ಪಿದರೆ, ಕಾರು ಡಿಕ್ಕಿ ಹೊಡೆದ ರಭಸಕ್ಕೆ ಹಿಂಬದಿ ಕುಳಿತಿದ್ದ ಪಾರ್ವತಿ ಅವರು ಕಾವೇರಿ ನದಿಗೆ ಬಿದ್ದಿದ್ದಾರೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಪೊಲೀಸರು ಪರಿಶೀಲನೆ ನಡೆಸಿ, ಶಂಕರ್ ಶವವನ್ನು ಬನ್ನೂರು ಸಾರ್ವಜನಿಕ ಆಸ್ಪತ್ರೆ ಶವಾಗಾರಕ್ಕೆ ರವಾನಿಸಿದರು. ಬಳಿಕ ಸೇತುವೆ ಮೇಲಿಂದ ನದಿಗೆ ಬಿದ್ದ ಪಾರ್ವತಿ ಅವರ ಪತ್ತೆಗೆ ಶೋಧ ಕಾರ್ಯ ನಡೆಸಿದರಾದರೂ, ಇನ್ನೂ ಪತ್ತೆಯಾಗಿಲ್ಲ ಈ ಸಂಬಂಧ ಬನ್ನೂರು ಠಾಣೆ ಎಸ್‌ಐ ಎಂ.ಆರ್. ಸುದರ್ಶನ್ ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

ವಕೀಲರ ಸಂಘದಲ್ಲಿ ಅಂಬೇಡ್ಕರ್ ಜಯಂತಿ ಆಚರಣೆ



ಮೈಸೂರು ವಕೀಲರ ಸಂಘದಲ್ಲಿ ಇಂದು ಅಂಬೇಡ್ಕರ್ ಜಯಂತಿಯನ್ನು ಆಚರಿಸಲಾಯಿತು. ಚಿತ್ರದಲ್ಲಿ ನ್ಯಾಯಾಧೀಶರಾದ ಪುಟ್ಟಸ್ವಾಮಿ, ದಿನೇಶ್, ವಕೀಲ ಸಂಘದ ಅಧ್ಯಕ್ಷ ಎಸ್.ಲೋಕೇಶ್, ಕಾರ್ಯದರ್ಶಿ ಸುಧೀರ್, ಉಪಾಧ್ಯಕ್ಷ ಚಂದ್ರಶೇಖರ್, ವಕೀಲರುಗಳಾದ ಉಮೇಶ್, ಗಿರೀಶ್ ಮುಂತಾದವರನ್ನು ಕಾಣಬಹುದು

ಗ್ರಾಮಸ್ಥರನ್ನೂ ಒಕ್ಕಲೆಬ್ಬಿಸಲ್ಲ

ಅದರ ಪ್ರಕಾರ ಮೈಸೂರು ಮಹಾರಾಜರು ಮತ್ತು ಕೇಂದ್ರ ಸರ್ಕಾರದ ನಡುವೆ 1950ರ ಜನವರಿ 23ರಂದು ಸಹಿ ಹಾಕಿದ ಒಪ್ಪಂದದಡಿಯಲ್ಲಿ ರಾಜಮನೆತನದ ಖಾಸಗಿ ಹಿಡುವಳಿಗಳ ಭಾಗವಾಗಿದೆ ಎಂದು ಅವರು ತಿಳಿಸಿದರು. ಅದರ ಸಂಬಂಧ ಎಲ್ಲಾ ದಾಖಲೆಗಳನ್ನೂ ಸಲ್ಲಿಸಿದ್ದೇನೆ. ಒಂದು ವೇಳೆ ಭೂಮಿಯನ್ನು ಮಹಾರಾಜರು ದಾನ ಮಾಡಿದ್ದರೆ ಅದರ ದಾಖಲೆ ಪತ್ರಗಳನ್ನು ತನ್ನಿ, ದಾನ ಮಾಡದಿದ್ದರೂ, ಸ್ವಾಧೀನಾನುಭವದಲ್ಲಿದ್ದರೂ ಅರಮನೆಗೆ ಬಂದು ನನ್ನ ಬಳಿ ಸಮಸ್ಯೆ ಹೇಳಿಕೊಳ್ಳಿ ಅಥವಾ ಸರ್ಕಾರ ಸಾಗುವಳಿ ಚೀಟಿ ನೀಡಿದ್ದರೂ, ಮೂಲ ದಾಖಲೆಗಳನ್ನು ತಂದು ತೋರಿಸಿ. ನಾವು ನಿಮ್ಮ ಜೀವನಕ್ಕೆ ತೊಂದರೆ ಕೊಡುವುದಿಲ್ಲ ಎಂದು ಅಭಯ ನೀಡಿದ ಪ್ರಮೋದಾದೇವಿ ಒಡೆಯರ್, ನಮ್ಮ ಒಡೆತನದಲ್ಲಿರುವ ಜಮೀನುಗಳಿಗೆ ಸರ್ಕಾರ ಸಾಗುವಳಿ ಚೀಟಿ ನೀಡಿರುವುದು ಸರಿಯಲ್ಲ ಎಂದರು.

ನಮ್ಮ ಜಮೀನನ್ನು ರೈತರಿಗೆ ನೀಡಲು ಸರ್ಕಾರ ಯಾರು? ಒಂದು ವೇಳೆ ಜನರಿಗೆ ಭೂಮಿ ನೀಡಬೇಕೆಂದರೆ ಸರ್ಕಾರಿ ಭೂಮಿ ನೀಡಬೇಕು. ಹಾಗೆ ಕೊಡಬೇಕೆಂದರೆ ನಾವೇ ರೈತರಿಗೆ ನೇರವಾಗಿ ಕೊಡುತ್ತೇವೆ ಎಂದ ಅವರು, ಈ ಕುರಿತಂತೆ ಗ್ರಾಮಸ್ಥರು, ರೈತರು ಮೈಸೂರಿಗೆ ಬಂದು ಅರಮನೆಯಲ್ಲಿ ನೇರವಾಗಿ ನನ್ನನ್ನು ಭೇಟಿ ಮಾಡಲಿ ಎಂದರು. ಭೂಮಿ ವಿಚಾರದಲ್ಲಿ ಚಾಮರಾಜನಗರ ಜಿಲ್ಲಾಧಿಕಾರಿಗಳಿಗೆ ಕಚೇರಿ ದೂರವಾಣಿ ಮೂಲಕ ಮಾತನಾಡಲು ಪ್ರಯತ್ನಿಸಿ ದರೂ ಸಂಪರ್ಕಕ್ಕೆ ಸಿಕ್ಕಿಲ್ಲ. ನನ್ನ ಮೆಸೇಜ್ ಗೂ ರಿಪ್ಲೈ ಮಾಡಿಲ್ಲ. ಗ್ರಾಮಸ್ಥರು, ಆಸ್ತಿಯಲ್ಲಿ ತಾವು ಸ್ವಾಧೀನದಲ್ಲಿರುವುದಕ್ಕೆ ಯಾವುದೇ ಪೂರಕ ದಾಖಲೆಗಳಿದ್ದರೆ, ಅಥವಾ ಇಲ್ಲದಿದ್ದರೂ ನಮ್ಮನ್ನು ಸಂಪರ್ಕಿಸಿ ಮಾತನಾಡಲಿ ಎಂದ ಅವರು, ಆದರೆ ಯಾರೂ ಆತಂಕ ಪಡಬೇಕಾಗಿಲ್ಲ ಎಂದರು.

ಆತಂಕ ಬೇಡ: ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ 'ನಮ್ಮ ಆಸ್ತಿ ರಕ್ಷಿಸುವುದು ನಮ್ಮ ಹಕ್ಕು. ನಮ್ಮ ತಾಯಿಯವರು ಅದನ್ನೇ ಮಾಡುತ್ತಿದ್ದಾರೆ. ಅದರಿಂದ ಗ್ರಾಮಸ್ಥರಿಗೆ, ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗುವುದಿಲ್ಲ ಎಂದರು. ಆದರೆ ಯಾರೂ ಇದರಿಂದ ಆತಂಕಪಡಬೇಕಿಲ್ಲ ಎಂದರು.

ಪರಿಶಿಷ್ಟರ ಮೇಲಿನ ದೌರ್ಜನ್ಯ ತಡೆಗೆ 33 ಡಿಸಿಆರ್‌ಇ ಪೊಲೀಸ್ ಠಾಣೆ ಕಾರ್ಯಾರಂಭ

ಬೆಂಗಳೂರು, ಏ.14– ರಾಜ್ಯದಲ್ಲಿ ವರದಿಯಾದ ಪರಿಶಿಷ್ಟ ಜಾತಿ (SCs) ಮತ್ತು ಪರಿಶಿಷ್ಟ ಪಂಗಡಗಳ (STs) ಮೇಲಿನ ಎಲ್ಲಾ ದೌರ್ಜನ್ಯ ಪ್ರಕರಣಗಳನ್ನು ತನಿಖೆ ಮಾಡಲು ಕರ್ನಾಟಕದಲ್ಲಿ ಮೀಸಲಾದ ಡಿಸಿಆರ್‌ಇ (ನಾಗರಿಕ ಹಕ್ಕುಗಳ ಜಾರಿ ನಿರ್ದೇಶನಾಲಯ) ಪೊಲೀಸ್ ಠಾಣೆ ಸೋಮವಾರದಿಂದ ತನ್ನ ಕಾರ್ಯಾಚರಣೆಯನ್ನು ಪ್ರಾರಂಭಿಸಿದೆ. ಎಸ್‌ಸಿ ಮತ್ತು ಎಸ್‌ಟಿಗಳ ನಾಗರಿಕ ಹಕ್ಕುಗಳನ್ನು ರಕ್ಷಿಸಲು 1974ರಲ್ಲಿ ರಾಜ್ಯದಲ್ಲಿ ಡಿಸಿಆರ್‌ಇಯನ್ನು ಸ್ಥಾಪಿಸಲಾಗಿತ್ತು. ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಗೆ ಬರುವ ಕೆಲವು ವಿಷಯಗಳಲ್ಲಿ ವಿಚಾರಣೆ ನಡೆಸಿ, ಸರ್ಕಾರಕ್ಕೆ ವರದಿ ಸಲ್ಲಿಸುವ ಅಧಿಕಾರ ವನ್ನು ಇದು ಹೊಂದಿತ್ತು.

ದೌರ್ಜನ್ಯಕ್ಕೆ ಒಳಗಾದ ಸಂತ್ರಸ್ತರು ಸ್ಥಳೀಯ ಪೊಲೀಸ್ ಠಾಣೆಗಳಲ್ಲಿ ಪ್ರಕರಣ ದಾಖಲು ಮಾಡುತ್ತಿಲ್ಲವೆಂದು ಆರೋಪಿಸಿ ಡಿಸಿಆರ್‌ಇ ಘಟಕದ ಬಾಗಿಲು ತಟ್ಟುತ್ತಿದ್ದರು. ಆದರೆ, ಪೊಲೀಸ್ ಠಾಣೆ ಮಾನ್ಯತೆಯಿಲ್ಲದೇ ಕಾನೂನು ಪ್ರಕ್ರಿಯೆ ಕಾರ್ಯಗತ ಮಾಡುವುದು ಡಿಸಿಆರ್‌ಇ ಘಟಕಕ್ಕೆ ಅಸಾಧ್ಯವಾಗಿತ್ತು. ಅಧಿಕಾರಿಗಳು ಕೇವಲ ವಿಚಾರಣೆ ನಡೆಸಿ, ಕ್ರಮ ಜರುಗಿಸುವಂತೆ ಸ್ಥಳೀಯ ಠಾಣೆ ಗೆ ಶಿಫಾರಸು ಮಾಡಿ, ನೊಂದ ವರನ್ನು ಮತ್ತೆ ಸ್ಥಳೀಯ ಠಾಣೆಗಳಿಗೇ ಕಳುಹಿ ಸುತ್ತಿದ್ದರು.

ಸ್ಥಳೀಯ ಠಾಣೆಗಳಲ್ಲಿರುವ ಇತರ ಕೆಲಸಗಳ ಒತ್ತಡದಿಂದ ದಲಿತರ ಮೇಲಿನ ದೌರ್ಜನ್ಯ ಪ್ರಕ ರಣಗಳಲ್ಲಿ ಎಫ್ ಐಆರ್ ದಾಖಲಾತಿ ಪ್ರಕ್ರಿಯೆ, ತನಿಖೆ, ದೋಷಾರೋಪ ಪಟ್ಟಿ ಸಲ್ಲಿಸುವುದು ವಿಳಂಬ ಆಗುತ್ತಿತ್ತು. ತನಿಖಾಧಿಕಾರಿಗಳು, ತನಿಖೆಯನ್ನು 60 ದಿನಗಳಲ್ಲಿ ಪೂರ್ಣಗೊಳಿಸಿ ಕೋರ್ಟ್‌ಗೆ ಆರೋಪ ಪಟ್ಟಿ ಸಲ್ಲಿಸಬೇಕಿತ್ತು. ಅದೂ ಸಾಧ್ಯವಾಗುತ್ತಿರಲಿಲ್ಲ. ಹೀಗಾಗಿ ರಾಜ್ಯ ಸರ್ಕಾರ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಮೇಲೆ ನಡೆಯುತ್ತಿರುವ ದೌರ್ಜನ್ಯ ತಡೆಯಲು, ತಪ್ಪಿತಸ್ಥರಿಗೆ ಶಿಕ್ಷೆ ಆಗುವಂತೆ ಮಾಡಲು, ಅನ್ಯಾಯಕ್ಕೆ ಒಳಗಾದವರಿಗೆ ತ್ವರಿತವಾಗಿ ನ್ಯಾಯ ಕಲ್ಪಿಸಲು ಬೆಂಗಳೂರಿ ನಲ್ಲಿ ಎರಡು, ಪ್ರತಿ ಜಿಲ್ಲೆಗೆ ಒಂದರಂತೆ ಒಟ್ಟು 33 ವಿಶೇಷ ಪೊಲೀಸ್ ಠಾಣೆ ಸ್ಥಾಪಿ ಸಲು ಆದೇಶಿಸಿತ್ತು. ಈ ಠಾಣೆಗಳ ಕಾರ್ಯಾ ಚರಣೆ ಇಂದಿನಿಂದ ಆರಂಭ ವಾಗುತ್ತಿದೆ. ಬೆಂಗಳೂರಿನಲ್ಲಿ ಪೂರ್ವ ಮತ್ತು ಪಶ್ಚಿಮ ಎರಡೂ ಭಾಗಗಳಲ್ಲಿ ಡಿಸಿಆರ್‌ಇ ಠಾಣೆಗಳಿವೆ. ಏಪ್ರಿಲ್ 14 ರಿಂದ ಡಿಸಿಆರ್‌ಇ ಅಧಿಕಾರಿಗಳು ಎಲ್ಲಾ ದೌರ್ಜನ್ಯ ಪ್ರಕರಣಗಳ ತನಿಖೆಗೆ ಹೆಚ್ಚುವರಿ ಅಧಿಕಾರಿಗಳೊಂದಿಗೆ ಕಾರ್ಯ ನಿರ್ವಹಿಸುತ್ತಾರೆ ಎಂದು ಡಿಸಿಆರ್‌ಇಯ ಹಿರಿಯ ಅಧಿಕಾರಿಯೊಬ್ಬರು ಹೇಳಿದ್ದಾರೆ.

ಅಂಬೇಡ್ಕರ್ ಜಯಂತಿಯನ್ನು ಹಬ್ಬದಂತೆ ಆಚರಿಸಬೇಕು

ಮೈಸೂರು-ಕೊಡಗು ಸಂಸದ ಯದುವೀರ್ ಒಡೆಯರ್ ಸಲಹೆ




ಮೈಸೂರಿನ ಬಿಜೆಪಿ ಕಚೇರಿಯಲ್ಲಿ ನಡೆದ ಡಾ.ಬಿ.ಆರ್.ಅಂಬೇಡ್ಕರ್ ಅವರ 134ನೇ ಜಯಂತಿ ಕಾರ್ಯಕ್ರಮದಲ್ಲಿ ಮೈಸೂರು-ಕೊಡಗು ಸಂಸದ ಯದುವೀರ್, ಪೌರಕಾರ್ಮಿಕರು, ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಿದರು. ಶಾಸಕ ಟಿ.ಎಸ್.ಶ್ರೀವತ್ಸ, ನಗರ ಬಿಜೆಪಿ ಅಧ್ಯಕ್ಷ ಎಲ್.ನಾಗೇಂದ್ರ, ಎಸ್‌ಸಿ ಮೋರ್ಚಾ ಅಧ್ಯಕ್ಷ ಬಿ.ಶೈಲೇಂದ್ರ, ಮಾಜಿ ಮೇಯರ್ ಸಂದೇಶ್ ಸ್ವಾಮಿ ಇತರರು ಚಿತ್ರದಲ್ಲಿದ್ದಾರೆ.

ಮೈಸೂರು,ಏ.14(ಬಿಎಲ್‌ಯು)- ಪ್ರತಿಯೊಬ್ಬರು ಮತ ಚಲಾಯಿಸುವ ದಿನವನ್ನು ಹೇಗೆ ಹಬ್ಬದಂತೆ ಆಚರಿಸುತ್ತೇವೆಯೊ ಹಾಗೆಯೇ ಅಂಬೇಡ್ಕರ್ ಜಯಂತಿಯನ್ನು ಕೂಡ ಹಬ್ಬದಂತೆ ಆಚರಣೆ ಮಾಡಬೇಕು ಎಂದು ಮೈಸೂರು-ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಸಲಹೆ ನೀಡಿದರು.

ಮೈಸೂರಿನ ಬಿಜೆಪಿ ಕಚೇರಿಯಲ್ಲಿ ನಗರ ಎಸ್‌ಸಿ ಮೋರ್ಚಾ ಆಯೋಜಿಸಿದ್ದ ಅಂಬೇಡ್ಕರ್ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಅಂಬೇಡ್ಕರ್ ಅವರು ಸಂವಿಧಾನ ನೀಡುವ ಮೂಲಕ ಸಮಾನತೆ ಸಾರಿದ್ದಾರೆ. ಶೋಷಿತರಿಗೆ ಧ್ವನಿ ನೀಡಿದ್ದಾರೆ ಎಂದು ಹೇಳಿದರು.

ಡಾ.ಅಂಬೇಡ್ಕರ್ ಅವರು ಯಾವುದೇ ಒಂದು ಜಾತಿ, ಧರ್ಮಕ್ಕೆ ಸೀಮಿತವಲ್ಲ. ಅಂಬೇಡ್ಕರ್ ಅವರ ವಿಚಾರಧಾರೆಗಳು ಎಲ್ಲರಿಗೂ ಒಪ್ಪುವಂತಹುಗಳಾಗಿವೆ. ಈ ಹಿನ್ನೆಲೆಯಲ್ಲಿ ದೇಶಕ್ಕೆ ಸಂವಿಧಾನ ನೀಡಿರುವ ಅಂಬೇಡ್ಕರ್ ಅವರನ್ನು ಪ್ರತಿಯೊಬ್ಬರು ಸ್ಮರಿಸಬೇಕು ಎಂದು ಯದುವೀರ್ ಹೇಳಿದರು.

ಈ ವೇಳೆ ಮಾತನಾಡಿದ ಬಿಜೆಪಿ ಎಸ್‌ಸಿ ಮೋರ್ಚಾ ಅಧ್ಯಕ್ಷ ಬಿ.ಶೈಲೇಂದ್ರ ಅವರು, ತಾನು ನೀಡಿರುವ ಸಂವಿಧಾನವನ್ನು ಚಾಚೂ ತಪ್ಪದೆ ಜಾರಿಗೊಳಿಸಿದರೆ 20 ವರ್ಷದಲ್ಲಿ ಭಾರತದ ಅಭಿವೃದ್ಧಿ ವಿಶ್ವದಲ್ಲೆ ಅಗ್ರಸ್ಥಾನ ಪಡೆಯುತ್ತದೆ ಎಂದು ಡಾ.ಅಂಬೇಡ್ಕರ್ ಹೇಳಿದ್ದರು. ಆದರೆ ಸ್ವಾತಂತ್ರ್ಯ ನಂತರ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ಸಂವಿಧಾನದ ಅಂಶಗಳನ್ನು ಜಾರಿಗೊಳಿಸದೆ ನಿರ್ಲಕ್ಷ್ಯ ವಹಿಸಿತು ಎಂದು ಆರೋಪಿಸಿದರು.

ಆದರೆ ಈಗ ಪ್ರಧಾನಿ ನರೇಂದ್ರ ಮೋದಿ ಅವರು ಸಂವಿಧಾನದ ವಿಚಾರಧಾರೆಗಳನ್ನು ಜಾರಿಗೊಳಿಸಿ ಭಾರತವನ್ನು ಅಭಿವೃದ್ಧಿ ಪಥದತ್ತ ಕೊಂಡೊಯ್ಯುತ್ತಿದ್ದಾರೆ ಎಂದು ಹೇಳಿದರು.

ಅಂಬೇಡ್ಕರ್ ಅವರು ನೀಡಿರುವ ಸಂವಿಧಾನದಿಂದ ಮಹಿಳೆಯರು ಪೌರಕಾರ್ಮಿಕ ವೃತ್ತಿಯಿಂದ ರಾಷ್ಟ್ರಪತಿ ಸ್ಥಾನದವರೆಗೆ ಅಧಿಕಾರದ ಗದ್ದುಗೆಗೇರಿದ್ದಾರೆ. ಇದು ಅಂಬೇಡ್ಕರ್ ಅವರು ನೀಡಿದ ಸಂವಿಧಾನಕ್ಕೆ ಇರುವ ಶಕ್ತಿ ಎಂದು ಶೈಲೇಂದ್ರ ಅಭಿಪ್ರಾಯಪಟ್ಟರು.

ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದ ನಂತರ ಪೌರಕಾರ್ಮಿಕರಿಗೆ ಸೀರೆ ಹಾಗೂ ಬಟ್ಟೆ ವಿತರಣೆ ಮಾಡಲಾಯಿತು. ಅಲ್ಲದೆ ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ ನೀಡಲಾಯಿತು. ಶಾಸಕ ಟಿ.ಎಸ್.ಶ್ರೀವತ್ಸ, ನಗರ ಬಿಜೆಪಿ ಅಧ್ಯಕ್ಷ ಎಲ್.ನಾಗೇಂದ್ರ, ಜಿಲ್ಲಾಧ್ಯಕ್ಷ ಎಲ್.ಆರ್. ಮಹದೇವಸ್ವಾಮಿ, ಮಾಜಿ ಮೇಯರ್ ಸಂದೇಶ್ ಸ್ವಾಮಿ, ಅಲ್ಪಸಂಖ್ಯಾತ ಮೋರ್ಚಾ ರಾಜ್ಯಾಧ್ಯಕ್ಷ ಡಾ.ಅನಿಲ್ ಥಾಮಸ್, ಮಹದೇವಯ್ಯ, ಪ್ರಧಾನ ಕಾರ್ಯದರ್ಶಿ ರಘು, ಕೇಬಲ್ ಮಹೇಶ್, ಗಿರಿಧರ್, ಪರಮಾನಂದ, ಡಾ.ಪ್ರಫುಲ್ಲಾ, ಮಂಗಳಾ ಸೋಮಶೇಖರ್, ವೇದಾವತಿ, ಹೇಮಾ ನಂದಿನಿ, ಕಾರ್ತಿಕ್ ಸ್ವಾಮಿ, ಸೋಮಸುಂದರ್, ದಿನೇಶ್ ಗೌಡ, ಮಂಜು, ಗೋಪಾಲರಾಜ್ ಅರಸ್ ಸೇರಿದಂತೆ ಹಲವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಕುರ್ಚಿಗೆ ಕುತ್ತು ಬಂದಿರುವ ಸಂದರ್ಭದಲ್ಲಿ ಸಿದ್ದರಾಮಯ್ಯ ಜಾತಿಗಣತಿ ಹೆಲ್ಮೆಟ್ ಧರಿಸಿದ್ದಾರೆ!

ರಾಜ್ಯ ಬಿಜೆಪಿ ಕಟುಟೀಕೆ

ಬೆಂಗಳೂರು, ಏ.14 (ಕೆಎಂಶಿ)-ನಾಯಕತ್ವ ಬದಲಾವಣೆ, ಹನಿಟ್ರ್ಯಾಪ್, ಬೆಲೆ ಏರಿಕೆಯಂತಹ ವಿಚಾರಗಳು ತಮ್ಮ ಕುರ್ಚಿಗೆ ಧಕ್ಕೆ ತಂದಿರುವ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಜಾತಿ ಗಣತಿ ಹೆಲ್ಮೆಟ್ ಧರಿಸಿದ್ದಾರೆಂದು ರಾಜ್ಯ ಬಿಜೆಪಿ ಕಟುವಾಗಿ ಟೀಕಿಸಿದೆ.

ಮುಸ್ಲಿಮರು ರಾಜ್ಯದಲ್ಲಿ ಅತಿದೊಡ್ಡ ಸಮುದಾಯ ಎಂಬುದಾಗಿ ಬಿಂಬಿಸಿ, ಹಿಂದೂಗಳನ್ನು ಜಾತಿ ಹೆಸರಲ್ಲಿ ಛಿದ್ರಗೊಳಿಸಿ, ಮುಸ್ಲಿಮರನ್ನು ಪೋಷಿಸಿ, ಕಾಂಗ್ರೆಸ್ ಮತಬ್ಯಾಂಕ್ ಭದ್ರಗೊಳಿಸುವ ಕೆಲಸಕ್ಕೆ ವ್ಯವಸ್ಥಿತ ಸಂಚು ನಡೆದಿದೆ.

ಈಗಿನ ಲೆಕ್ಕಾಚಾರ ಗಮನಿಸಿದರೆ, ಸಿದ್ದರಾಮಯ್ಯ ಅವರಿಗೆ ಸಮೀಕ್ಷಾ ವರದಿ ಅನುಷ್ಠಾನಗೊಳಿಸುವ ಯಾವ ಬದ್ಧತೆಯೂ ಇದ್ದಂತಿಲ್ಲ. ಜಾತಿಗಳ ಸಂಖ್ಯಾಬಲ ಪ್ರದರ್ಶನಕ್ಕೆ ಇಡುವ ಮೂಲಕ ಮೀಸಲಾತಿ ವಂಚಿತರು, ಅದನ್ನು ಅತಿಯಾಗಿ ಭಕ್ಷಿಸಿದ ಹಿಂದುಳಿದ ಜಾತಿಗಳು, ಮೀಸಲಾತಿ ಹೆಚ್ಚಳದ ಅನಿವಾರ್ಯತೆ ಇತ್ಯಾದಿ ವಿಚಾರಗಳು ಚರ್ಚೆ ಆಗುವುದು ಮುಖ್ಯಮಂತ್ರಿ ಅವರಿಗೆ ಬೇಕಿಲ್ಲ ಎಂದಿದೆ.

ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಹಾಗೂ ಶಾಸಕ ಸುನೀಲ್ ಕುಮಾರ್ ಈ ಕುರಿತು ಸರಣಿ ಟ್ವೀಟ್ ಮಾಡಿ, ಜಾತಿ ಗಣತಿ ವರದಿ ಹೆಸರಲ್ಲಿ ವಿಶೇಷ ಕ್ಯಾಬಿನೆಟ್, ಸಂಪುಟ ಉಪ ಸಮಿತಿ ರಚಿಸಿ ಒಂದಷ್ಟು ಕಾಲಹರಣ ಮಾಡುವುದು ಸಿದ್ದರಾಮಯ್ಯ ಅವರ ಸದ್ಯದ ಲೆಕ್ಕಾಚಾರವಾಗಿದೆ. ಸ್ವಯಂ ಘೋಷಿತ ಹಿಂದುಳಿದ ವರ್ಗಗಳ ಚಾಂಪಿಯನ್ ಸಿದ್ದ ರಾಮಯ್ಯನವರೇ, ಜಾತಿ ಗಣತಿ ವರದಿಯಿಂದ ಹಿಂದುಳಿದ ವರ್ಗದರಿಗೆ ಆಗುವ ಲಾಭ ಏನೆಂಬ ಬಗ್ಗೆ ಮೊದಲು ಚರ್ಚೆ ಮಾಡಿ.

ವರದಿಯಿಂದ ಸಮಾಜದ ಮೇಲೆ ಉಂಟಾಗುವ ಪರಿಣಾಮ ಏನೆಂಬುದು ವಿಶ್ಲೇಷಣೆಗೆ ಒಳಪಡಬೇಕು, ವರದಿಯ ವೈಜ್ಞಾನಿಕತೆ ಹಾಗೂ ಪ್ರಸ್ತುತತೆಯ ತುರ್ತು ಅಧ್ಯಯನಕ್ಕೆ ವಿಧಾನಮಂಡಲದ ಉಭಯ ಸದನಗಳ ಜಂಟಿ ಸದನ ಸಮಿತಿ ರಚನೆ ಮಾಡಿ, ಸುಮ್ಮನೇ ಗಾಳಿಯಲ್ಲಿ ಗುಂಡು ಹೊಡೆಯಬೇಡಿ ಎಂದಿದ್ದಾರೆ.



ಡಾ.ಅಂಬೇಡ್ಕರ್ ಅವರ 134ನೇ ಜಯಂತಿ ಪ್ರಯುಕ್ತ ಆದಿಚುಂಚನಗಿರಿ ಮುಖ್ಯ ರಸ್ತೆಯಲ್ಲಿರುವ ಅಂಬೇಡ್ಕರ್ ಪ್ರತಿಮೆಗೆ ಕೃಷ್ಣರಾಜ ಯುವ ಬಳಗ, ಅಪೂರ್ವ ಸ್ನೇಹ ಬಳಗದಿಂದ ಮಾಲಾರ್ಪಣೆ ಮಾಡಲಾಯಿತು. ಈ ವೇಳೆ ಕೆ.ಆರ್. ಬ್ಯಾಂಕ್ ಅಧ್ಯಕ್ಷ ಬಸವರಾಜ್ ಬಸಪ್ಪ, ಪಾಲಿಕೆ ಮಾಜಿ ಸದಸ್ಯ ಎಂ.ಡಿ. ಪಾರ್ಥಸಾರಥಿ, ಕರ್ನಾಟಕ ಹಿತರಕ್ಷಣಾ ವೇದಿಕೆ ಅಧ್ಯಕ್ಷ ವಿನಯ್‌ಕುಮಾರ್, ಜಿ.ರಾಘವೇಂದ್ರ, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಅಪೂರ್ವ ಸುರೇಶ್, ರಾಜೇಶ್, ಮಂಜು, ಪಾಂಡು, ಶಂಭು ಹೊಸಮಠ ಇನ್ನಿತರರಿದ್ದರು.



ಮೈಸೂರು ತಾಲೂಕು ಶ್ರೀರಾಂಪುರದ ನವಚೇತನ ಬಸವೇಶ್ವರ ಟ್ರಸ್ಟ್ ವಿಶೇಷ ಮಕ್ಕಳ ಶಾಲೆಯಲ್ಲಿ ನಡೆದ ಅಂಬೇಡ್ಕರ್‌ರವರ 134ನೇ ಜಯಂತಿ ಪ್ರಯುಕ್ತ ಅಂಬೇಡ್ಕರ್ ಭಾವಚಿತ್ರಕ್ಕೆ ಸಮಾಜ ಸೇವಕ ಎಸ್.ಶ್ರೀಕಾಂತ್ ಪುಷ್ಪಾರ್ಚನೆ ಮಾಡಿದರು. ವಿಶೇಷ ಮಕ್ಕಳ ಶಾಲೆ ಸಂಸ್ಥಾಪಕ ಅಧ್ಯಕ್ಷ ಮರೀಗೌಡ, ಗೌರವಾಧ್ಯಕ್ಷ ಅಮೀನಬೇಗಂ ಖಾಲೆಖಾನ್, ಮಂಜುನಾಥ್, ಜ್ಯೋತಿ, ಮಹದೇವ್, ಪ್ರದೀಪ್, ರವಿಶಂಕರ್, ಶಾಲಾ ಮುಖ್ಯಶಿಕ್ಷಕ ಸುಗಂಧನಾಯಕ್ ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.



ಮೈಸೂರಿನ ಮಹರ್ಷಿ ವಿದ್ಯಾಸಂಸ್ಥೆಯಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಜನ್ಮದಿನ ಆಚರಿಸಲಾಯಿತು. ಮಹರ್ಷಿ ವಿದ್ಯಾಸಂಸ್ಥೆ ವ್ಯವಸ್ಥಾಪಕ ವಿಶ್ವಸ್ಥರಾದ ಡಾ.ಭವಾನಿ ಶಂಕರ್, ಸಂಸ್ಥೆಯ ಹಿರಿಯ ಪ್ರಾಚಾರ್ಯ ಗೋಪಾಲಸ್ವಾಮಿ, ಪ್ರಾಚಾರ್ಯ ಎ.ಕುಮಾರ್, ಕಾಲೇಜು ವಿಭಾಗದ ಪ್ರಾಚಾರ್ಯ ಮಹದೇವಸ್ವಾಮಿ ಉಪಸ್ಥಿತರಿದ್ದರು.

ಭಾರತೀಯ ವಾಯುಪಡೆಯ ವಿಮಾನದ ಮೇಲೆ ಸೈಬರ್ ಅಟ್ಯಾಕ್; ಸೈನಿಕರು ಜಸ್ಟ್ ಮಿಸ್

ಮ್ಯಾನ್ಮಾರ್: ಮ್ಯಾನ್ಮಾರ್‌ಗೆ ಪರಿಹಾರ ಒದಗಿಸುತ್ತಿದ್ದ ಐಎಎಫ್ ಭಾರತೀಯ ವಾಯುಪಡೆಯ ವಿಮಾನದ ಮೇಲೆ ಸೈಬರ್ ದಾಳಿ ನಡೆದಿದೆ. ಮ್ಯಾನ್ಮಾರ್ ಭೂಕಂಪದಲ್ಲಿ ಮನೆ ಮಠ ಕಳೆದುಕೊಂಡ ನಿರಾಶ್ರಿತರ ನೆರವಿಗೆ ಭಾರತೀಯ ವಾಯುಪಡೆಯ ವಿಮಾನವು ಪರಿಹಾರ ಸಾಮಗ್ರಿಗಳನ್ನು ಹೊತ್ತು ಮ್ಯಾನ್ಮಾರ್‌ಗೆ ಹೋಗುತ್ತಿತ್ತು. ಈ ವೇಳೆ ದಾಳಿ ನಡೆದಿದ್ದು, ಅದಾಗಿಯೂ ಇದು ವಾಯುಪಡೆಯ ಕೆಚ್ಚೆದೆಯ ಸೈನಿಕರ ಮೇಲೆ ಯಾವುದೇ ಪರಿಣಾಮ ಬೀರಲಿಲ್ಲ ಮತ್ತು ಅವರ ಬುದ್ಧಿವಂತಿಕೆಯಿಂದ ಹೊರಬರಲು ಒಂದು ಮಾರ್ಗವನ್ನು ಕಂಡುಕೊಂಡರು, ಅಲ್ಲದೇ ತಮ್ಮ ಪ್ರಯಾಣವನ್ನು ಪೂರ್ಣಗೊಳಿಸಿದರು ಎಂದು ತಿಳಿದುಬಂದಿದೆ.



ಮೈಸೂರು ತಾಲೂಕು ಕಡಕೊಳ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ ಆಚರಿಸಲಾಯಿತು. ಈ ವೇಳೆ ಸಾಮಾಜಿಕ ಹೋರಾಟಗಾರ ಕಡಕೊಳ ಕುಮಾರಸ್ವಾಮಿ, ಗ್ರಾಪಂ ಮಾಜಿ ಅಧ್ಯಕ್ಷ ಜೆ.ರಮೇಶ್, ಜಿಲ್ಲಾ ವಿಪ್ರ ಮುಖಂಡ ಆರ್.ಹರೀಶ್, ಬಿಜೆಪಿ ಮಹೇಶ್, ಮುಖ್ಯೋಪಾಧ್ಯಾಯ ದುಂಡಯ್ಯ, ಎಸ್‌ಡಿಎಂ.ಸಿ ಅಧ್ಯಕ್ಷ ರವಿ, ದೈಹಿಕ ಶಿಕ್ಷಕ ಸಂಘದ ಅಧ್ಯಕ್ಷ ಕುಮಾರ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಉಪಾಧ್ಯಕ್ಷೆ ಸುಮತಿ, ಉರ್ದು ಶಾಲೆ ಶಿಕ್ಷಕರಾದ ಶ್ರೀಮತಿ ಸಿದ್ದಿಕಿ, ಶಿಕ್ಷಕರಾದ ನಾಗರತ್ನ, ಅನಿತಾ ಮತ್ತಿತರರಿದ್ದರು.



ಮೈಸೂರಿನ ವಿದ್ಯಾರ್ಥಿನಿಲಯದ ವಿದ್ಯಾರ್ಥಿಗಳಿಗೆ ನೋಟ್ ಬುಕ್, ಹಣ್ಣು-ಹಂಪಲು ವಿತರಿಸುವ ಮೂಲಕ ಅಂಬೇಡ್ಕರ್ ಜಯಂತಿ ಆಚರಿಸಲಾಯಿತು. ಶೋಬನ ಬಂತೆಜಿ, ವಿಶುದ್ಧ ಶೀಲ ಬಂತೇಜಿ, ಮೈಸೂರು ನಗರ ಜೆಡಿಎಸ್ ಕಾರ್ಯಾಧ್ಯಕ್ಷ ಎಸ್.ಪ್ರಕಾಶ್ ಪ್ರಿಯದರ್ಶನ್, ಬಿ.ನಾಗರಾಜು (ಬಿಲ್ಲಯ್ಯ), ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಹೋಮದೇವ್, ಮಹದೇವ್, ವೆಂಕಟೇಶ್, ಸ್ವಾಮಿ, ಸುಬ್ರಮಣಿ, ರಾಜೇಶ್‌ಕುಮಾರ್, ಮಹೇಶ್, ವೀರಭದ್ರಸ್ವಾಮಿ, ಶ್ರೀಧರ್, ಎಸ್.ಪಿ.ಅಕ್ಷಯ್ ಪ್ರಿಯಾದರ್ಶನ್, ಹರ್ಷಿತ್ ನಾಗೇಶ್, ದತ್ತ ಇತರರು ಹಾಜರಿದ್ದರು.

ಚಿಕ್ಕ ಗಡಿಯಾರದ ಬಳಿ ಪತ್ರಿಕಾ ವಿತರಕರಿಂದ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಣೆ



ಮೈಸೂರು, ಏ.14(ಆರ್‌ಕೆ)-ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಇಂದು ಮೈಸೂರಿನ ಚಿಕ್ಕ ಗಡಿಯಾರದ ಬಳಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್.ಅಂಬೇಡ್ಕರ್ ಜಯಂತಿಯನ್ನು ಭಕ್ತಿಭಾವದಿಂದ ಆಚರಿಸಲಾಯಿತು.

ಮುಂಜಾನೆ 6 ಗಂಟೆಗೆ ಡಾ. ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಸಂಘದ ಅಧ್ಯಕ್ಷ ಜೆ.ಎಸ್. ಹೋಮದೇವ್, ಜೆಡಿಎಸ್ ನಗರ ಕಾರ್ಯಾಧ್ಯಕ್ಷ ಎಸ್.ಪ್ರಕಾಶ್ ಪ್ರಿಯದರ್ಶನ್ ಹಾಗೂ 'ಮೈಸೂರು ಮಿತ್ರ' ಮತ್ತು 'ಸ್ಟಾರ್ ಆಫ್ ಮೈಸೂರ್' ಪತ್ರಿಕೆಗಳ ಮುಖ್ಯ ವರದಿಗಾರ ಎಸ್.ಟಿ.ರವಿಕುಮಾರ್, ಸಂವಿಧಾನ ಶಿಲ್ಪಿಗೆ ಗೌರವ ಸಮರ್ಪಿಸಿದರು.

ಈ ಸಂದರ್ಭ ಮಾತನಾಡಿದ ಪ್ರಕಾಶ್, ಈ ದೇಶಕ್ಕೆ ವಿಶ್ವ ಮೆಚ್ಚುವಂತಹ ಸಂವಿಧಾನ ನೀಡಿ, ಆರೋಗ್ಯ, ಶಿಕ್ಷಣ, ಸಮಾನತೆಗೆ ಅಡಿಗಲ್ಲು ಹಾಕಿಕೊಟ್ಟ ವಿಶ್ವಜ್ಞಾನಿ ಅಂಬೇಡ್ಕರ್, ಸಾಮಾಜಿಕ ಹಕ್ಕು ಮತ್ತು ಅವಕಾಶಕ್ಕಾಗಿ ಹೋರಾಡುವ ಪ್ರಶ್ನಿಸಬೇಕೆಂದು ಸಲಹೆ ನೀಡಿದ್ದಾರೆ ಎಂದರು. ವಿಜಯ ಕರ್ನಾಟಕ ಪತ್ರಿಕೆ ಪ್ರಸರಣ ವ್ಯವಸ್ಥಾಪಕರಾದ ಪ್ರತಾಪ್, ಲೋಕೇಶ್, 'ಮೈಸೂರು ಮಿತ್ರ' ಮತ್ತು 'ಸ್ಟಾರ್ ಆಫ್ ಮೈಸೂರ್' ಪತ್ರಿಕೆಗಳ ಪ್ರಸರಣ ವ್ಯವಸ್ಥಾಪಕ ಟಿ.ಎಸ್.ಗೋಪಿನಾಥ್, ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳಾದ ಶಿವಣ್ಣ, ಸಿ.ಎಂ.ನಾಗರಾಜ್, ಗಣೇಶ್, ನಂಜುಂಡಯ್ಯ, ದತ್ತಾತ್ರೇಯ, ಗೋವಿಂದ, ಈಶ್ವರ ಪ್ರಸಾದ್, ಜವರಪ್ಪ, ದೇವರಾಜ ಮಾರುಕಟ್ಟೆ ನಾಗರಾಜ್, ಜಯರಾಂ ಇತರರಿದ್ದರು. ಈ ವೇಳೆ ಎಲ್ಲರಿಗೂ ಸಿಹಿ ವಿತರಿಸಲಾಯಿತು.



ಮೈಸೂರಿನ ಅಶೋಕಪುರಂನ ಅಂಬೇಡ್ಕರ್ ಪಾರ್ಕ್‌ನಲ್ಲಿ ಡಾ.ಅಂಬೇಡ್ಕರ್ ಜಯಂತಿ ಆಚರಿಸಲಾಯಿತು.ಶಾಸಕ ಟಿ.ಎಸ್.ಶ್ರೀವತ್ಸ, ಮಾಜಿ ಮೇಯರ್ ಪುರುಷೋತ್ತಮ್, ಪಿ.ಸಿದ್ದರಾಜು (ಸುನಿಲ್), ಉಪಾಧ್ಯಕ್ಷ ಶಿವಸ್ವಾಮಿ, ಕಾರ್ಯದರ್ಶಿ ರಾಜ್‌ಮೊಗ, ಚಿಕ್ಕಗರಡಿ ಸಂಘದ ಅಧ್ಯಕ್ಷ ನಾಗರಾಜ್, ಪೈಲ್ವಾನ್ ಕೃಷ್ಣ, ಮುಖಂಡರಾದ ಧನಗಳ್ಳಿ ಸ್ವಾಮಿ, ಚಂದ್ರಶೇಖರ್ ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.



ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 134ನೇ ಜಯಂತಿ ಅಂಗವಾಗಿ ನಂಜನಗೂಡು ತಾಲೂಕು ಬದನವಾಳು ಗ್ರಾಮದಲ್ಲಿನ ಅಂಬೇಡ್ಕರ್ ಅವರ ಪ್ರತಿಮೆಗೆ ರಾಜ್ಯ ರೈತ ಕಲ್ಯಾಣ ಸಂಘದ ಸಂಸ್ಥಾಪಕ ರಾಜ್ಯಾಧ್ಯಕ್ಷ ಭೂಮಿಪುತ್ರ ಸಿ.ಚಂದನ್ ಗೌಡ ಮಾಲಾರ್ಪಣೆ ಮಾಡಿದರು. ಈ ಸಂದರ್ಭದಲ್ಲಿ ರಾಜ್ಯ ಪತ್ರಿಕಾ ಕಾರ್ಯದರ್ಶಿ ಹರೀಶ್.ಪಿ.ಗೌಡ, ಮೈಸೂರು ಜಿಲ್ಲಾಧ್ಯಕ್ಷ ಅನಿಲ್‌ಕುಮಾರ್, ನಂಜನಗೂಡು ತಾಲೂಕು ಅಧ್ಯಕ್ಷ ಆನಂದ್, ಗೌರವಾಧ್ಯಕ್ಷ ನಾಗರಾಜು, ಆದರ್ಶಕುಮಾರ್ ಉಪಸ್ಥಿತರಿದ್ದರು.



ಕರ್ನಾಟಕ ದಲಿತ ಸಂಘರ್ಷ ಸಮಿತಿ (ದಾದಾ ಸಾಹೇಬ್ ಡಾ.ಎನ್.ಮೂರ್ತಿ ಸ್ಥಾಪಿತ) ಮೈಸೂರು ಜಿಲ್ಲಾ ಸಮಿತಿ ವತಿಯಿಂದ ಡಾ.ಅಂಬೇಡ್ಕರ್ ಅವರ 134ನೇ ಜಯಂತಿ ಅಂಗವಾಗಿ ಪುರಭವನ ಆವರಣದಲ್ಲಿರುವ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಲಾಯಿತು. ಚಿತ್ರದಲ್ಲಿ ಜಿಲ್ಲಾಧ್ಯಕ್ಷ ಶಂಕರ್, ಬಿಲ್ಲಯ್ಯ, ಸ್ವಾಮಿ ಹಡಜನ, ಶ್ರೀನಿವಾಸ್ ಹುಣಸೂರು, ಮಾದೇಶ್ ದುದ್ದಗೆರೆ, ಗಿರೀಶ್‌ಕುಮಾರ್, ರಾಜು, ಕರಿಯಪ್ಪ, ನಾಗರಾಜು, ಶ್ರೀನಿವಾಸ್, ಸಿದ್ದರಾಜು, ಚೆನ್ನಾಜಮ್ಮ, ರವಿ, ರಾಚಪ್ಪ, ಹೇಮಂತು, ಸಿದ್ದರಾಜು ಇದ್ದರು.

ದೇಶ - ವಿದೇಶ

ಸುಡಾನ್‌ನ ನಿರಾಶ್ರಿತರ ಶಿಬಿರಗಳ ಮೇಲೆ ಆರ್‌ಎಸ್‌ಎಫ್ ದಾಳಿ; 114ಕ್ಕೂ ಹೆಚ್ಚು ಮಂದಿ ಹತ್ಯೆ



ಸುಡಾನ್: ಸುಡಾನ್‌ನ ಕುಖ್ಯಾತ ಅರೆಸೈನಿಕ ಗುಂಪು ಡಾರ್ಫರ್ ಪ್ರದೇಶದಲ್ಲಿ ಸ್ಥಳಾಂತರಗೊಂಡ ಜನರ ಶಿಬಿರಗಳ ಮೇಲೆ 2 ದಿನಗಳು ದಾಳಿ ನಡೆಸಿ 20 ಮಕ್ಕಳು ಮತ್ತು 9 ನೆರವು ಕಾರ್ಯಕರ್ತರು ಸೇರಿದಂತೆ 114ಕ್ಕೂ ಹೆಚ್ಚು ಜನರನ್ನು ಕೊಂದು ಹಾಕಿದೆ ಎಂದು ವಿಶ್ವಸಂಸ್ಥೆಯ ಅಧಿಕಾರಿಯೊಬ್ಬರು ಹೇಳಿದ್ದಾರೆ. ಸುಡಾನ್‌ನಲ್ಲಿ ವಿಶ್ವಸಂಸ್ಥೆಯ ನಿವಾಸಿ ಮತ್ತು ಸಂಯೋಜಕರಾಗಿರುವ ಕ್ಲೆಮೆಂಟೈನ್ ನ್ಕ್ವೆಟಾ-ಸಲ್ಮಿ, ರಾಪಿಡ್ ಸಪೋರ್ಟ್ ಫೋರ್ಸ್, ಮಿಲಿಟಿಯಾಗಳು ಝುಮ್‌ಜಮ್ ಮತ್ತು ಅಬು ಶೋರೂಕ್ ಶಿಬಿರಗಳು ಮತ್ತು ಉತ್ತರ ಡಾರ್ಫರ್ ಪ್ರಾಂತ್ಯದ ಪ್ರಾಂತೀಯ ರಾಜಧಾನಿಯಾದ ಅಲ್-ಫಶರ್ ಪಟ್ಟಣದ ಮೇಲೆ ದಾಳಿ ಮಾಡಿದ್ದಾರೆ ಎಂದರು. ವಿಶ್ವಸಂಸ್ಥೆ ಪ್ರಕಾರ, ಅಲ್-ಫಶರ್ ಸೇನೆಯ ನಿಯಂತ್ರಣದಲ್ಲಿದೆ. 2 ವರ್ಷಗಳ ಹಿಂದೆ ಸುಡಾನ್‌ನಲ್ಲಿ ಅಂತರ್ಯುದ್ಧ ಆರಂಭವಾದಾಗಿನಿಂದ ಸೇನೆಯು ಆರ್‌ಎಸ್‌ಎಫ್ ವಿರುದ್ಧ ಹೋರಾಡುತ್ತಿದೆ. ಈ ಸಂಘರ್ಷದಲ್ಲಿ 24 ಸಾವಿರಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದಾರೆ. ಆದಾಗ್ಯೂ, ಕಾರ್ಯಕರ್ತರು ಈ ಸಂಖ್ಯೆ ಇನ್ನೂ ಹೆಚ್ಚಿರಬಹುದು ಎಂದು ಹೇಳುತ್ತಾರೆ

1,800 ಕೋಟಿ ಮೌಲ್ಯದ ಡ್ರಗ್ಸ್ ವಶಕ್ಕೆ ಪಡೆದ ಕರಾವಳಿ ರಕ್ಷಣಾ ಪಡೆ, ಎಸ್‌ಟಿಎಸ್



ಅಹಮದಾಬಾದ್: ಗುಜರಾತ್ ಭಯೋತ್ಪಾದನಾ ನಿಗ್ರಹ ದಳ ಮತ್ತು ಕರಾವಳಿ ಕಾವಲು ಪಡೆಗಳು 1,800 ಕೋಟಿ ರೂ. ಮೌಲ್ಯದ 300 ಕೆಜಿ ಮಾದಕ ದ್ರವ್ಯಗಳನ್ನು ವಶಪಡಿಸಿಕೊಂಡಿದ್ದು, ಇವುಗಳನ್ನು ಕಳ್ಳಸಾಗಣೆದಾರರು ಅಂತರರಾಷ್ಟ್ರೀಯ ಗಡಿ ರೇಖೆಯನ್ನು ದಾಟಿ ಪರಾರಿಯಾಗುವ ಮೊದಲು ಅರೇಬಿಯನ್ ಸಮುದ್ರಕ್ಕೆ ಎಸೆದಿದ್ದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ವಶಪಡಿಸಿಕೊಂಡ ಅಕ್ರಮ ಮಾದಕ ವಸ್ತುವು ಮೆಥಾಂಫೆಟಮೈನ್ ಆಗಿರಬಹುದು ಎಂದು ಶಂಕಿಸಲಾಗುತ್ತಿದೆ. ಹೆಚ್ಚಿನ ತನಿಖೆಗಾಗಿ ಎಟಿಎಸ್‌ಗೆ ಹಸ್ತಾಂತರಿಸಲಾಗಿದೆ ಎಂದು ಭಾರತೀಯ ಕರಾವಳಿ ಕಾವಲು ಪಡೆ (ಐಸಿಜಿ) ಬಿಡುಗಡೆ ಮಾಡಿರುವ ಪ್ರಕಟಣೆ ತಿಳಿಸಿದೆ. ಏಪ್ರಿಲ್ 12 ಮತ್ತು 13ರ ಮಧ್ಯರಾತ್ರಿ ಗುಜರಾತ್‌ನ ಅರೇಬಿಯನ್ ಸಮುದ್ರದಲ್ಲಿರುವ ಅಂತರರಾಷ್ಟ್ರೀಯ ಸಾಗರ ಗಡಿ ರೇಖೆ (ಐಎಂಬಿಎಲ್) ಬಳಿ ಎಟಿಎಸ್ ಮತ್ತು ಕರಾವಳಿ ಕಾವಲು ಪಡೆ ಜಂಟಿ ಕಾರ್ಯಾಚರಣೆ ನಡೆಸಿದೆ ಎಂದು ಪ್ರಕಟಣೆ ತಿಳಿಸಿದೆ. ಸಮೀಪಿಸುತ್ತಿರುವ ಕೋಸ್ಟ್ ಗಾರ್ಡ್ ಹಡಗನ್ನು ನೋಡಿದ ನಂತರ, ದೋಣಿಯಲ್ಲಿದ್ದ ಕಳ್ಳಸಾಗಣೆದಾರರು ಕಳ್ಳಸಾಗಣೆ ವಸ್ತುವನ್ನು ಸಮುದ್ರಕ್ಕೆ ಎಸೆದು ಐಎಂಬಿಎಲ್ ಮೂಲಕ ಪರಾರಿಯಾಗಿದ್ದಾರೆ.

ಬೆಲ್ಜಿಯಂನಲ್ಲಿ ಭಾರತದ ದೇಶಭ್ರಷ್ಟ ವಜ್ರೋದ್ಯಮಿ ಮೆಹುಲ್ ಚೋಕ್ಸಿ ಬಂಧನ



ಬೆಲ್ಜಿಯಂ: ಪಂಜಾಬ್ ನ್ಯಾಷನಲ್ ಬ್ಯಾಂಕ್ ಸಾಲ ಹಗರಣದಲ್ಲಿ ಪ್ರಮುಖ ಆರೋಪಿಯಾಗಿರುವ ದೇಶಭ್ರಷ್ಟ ವಜ್ರೋದ್ಯಮಿ ಮೆಹುಲ್ ಚೋಕ್ಸಿಯನ್ನು ಬೆಲ್ಜಿಯಂನಲ್ಲಿ ಬಂಧಿಸಲಾಗಿದೆ. ಕೇಂದ್ರ ತನಿಖಾ ದಳದ ಮೇಲ್ಮನವಿ ಮೇರೆಗೆ 65 ವರ್ಷದ ಚೋಕ್ಸಿಯನ್ನು ಬಂಧಿಸಲಾಗಿದೆ. ಮೆಹುಲ್ ಚೋಕ್ಸಿ ಪಂಜಾಬ್ ನ್ಯಾಷನಲ್ ಬ್ಯಾಂಕಿನಿಂದ 13,500 ಕೋಟಿ ರೂ. ಸಾಲ ವಂಚನೆ ಮಾಡಿದ್ದ ಮತ್ತು ಬಂಧನವನ್ನು ತಪ್ಪಿಸಲು ಭಾರತದಿಂದ ಬೆಲ್ಜಿಯಂಗೆ ಪರಾರಿಯಾಗಿದ್ದ. ಇಲ್ಲಿ ಅವರು ತಮ್ಮ ಪತ್ನಿ ಪ್ರೀತಿ ಚೋಕ್ಸಿ ಅವರೊಂದಿಗೆ ಆಂಟ್ವೆರ್ಪ್‌ನಲ್ಲಿ ವಾಸಿಸುತ್ತಿದ್ದ. ಪ್ರೀತಿ ಚೋಕ್ಸಿ ಬೆಲ್ಜಿಯಂ ಪೌರತ್ವ ಹೊಂದಿದ್ದಾರೆ. ಚೋಕ್ಸಿ ಬೆಲ್ಜಿಯಂನಲ್ಲಿ 'ಎಫ್ ರೆಸಿಡೆನ್ಸಿ ಕಾರ್ಡ್' ಹೊಂದಿದ್ದಾರೆ. ಅವರು ಚಿಕಿತ್ಸೆಗಾಗಿ ಆಂಟಿಗುವಾದಿಂದ ಬೆಲ್ಜಿಯಂಗೆ ಬಂದಿದ್ದಾರೆ ಎಂದು ಹಲವಾರು ವರದಿಗಳಲ್ಲಿ ಬಹಿರಂಗವಾಗಿದೆ. ಮೆಹುಲ್ ಚೋಕ್ಸಿಯನ್ನು ಬಂಧಿಸುವಾಗ ಬೆಲ್ಜಿಯಂ ಪೊಲೀಸರು ಮುಂಬೈ ನ್ಯಾಯಾಲಯವು ಅವರ ವಿರುದ್ಧ ಹೊರಡಿಸಿದ 2 ಬಂಧನ ವಾರಂಟ್‌ಗಳನ್ನು ಉಲ್ಲೇಖಿಸಿದರು.

ಎಸ್‌ಸಿ ಒಳ ಮೀಸಲಾತಿ ಜಾರಿಗೊಳಿಸಿದ ದೇಶದ ಮೊದಲ ರಾಜ್ಯ ತೆಲಂಗಾಣ



ಹೈದರಾಬಾದ್: ಪರಿಶಿಷ್ಟ ಜಾತಿ(ಎಸ್‌ಸಿ) ಉಪ-ವರ್ಗೀಕರಣ ಅಥವಾ ಎಸ್‌ಸಿ ಒಳ ಮೀಸಲಾತಿ ಜಾರಿಗೊಳಿಸಿ ತೆಲಂಗಾಣ ಸರ್ಕಾರ ಆದೇಶ ಹೊರಡಿಸಿದೆ. ಈ ಮೂಲಕ ಎಸ್‌ಸಿ ಒಳ ಮೀಸಲಾತಿಯನ್ನು ಅಧಿಕೃತವಾಗಿ ಜಾರಿಗೆ ತಂದ ದೇಶದ ಮೊದಲ ರಾಜ್ಯವಾಗಿದೆ ಎಂದು ತೆಲಂಗಾಣ ನೀರಾವರಿ ಸಚಿವ ಎನ್.ಉತ್ತಮ್‌ಕುಮಾರ್ ರೆಡ್ಡಿ ಹೇಳಿದ್ದಾರೆ. ಎಸ್‌ಸಿ ಒಳ ಮೀಸಲಾತಿ ಕುರಿತು ವರದಿ ನೀಡಲು ತೆಲಂಗಾಣ ಸರ್ಕಾರವು ಈ ಹಿಂದೆ ನಿವೃತ್ತ ಹೈಕೋರ್ಟ್ ನ್ಯಾಯಾಧೀಶ ಶಮೀಮ್ ಅಕ್ತರ್ ನೇತೃತ್ವದಲ್ಲಿ ಆಯೋಗ ರಚಿಸಿತ್ತು. ಈ ಆಯೋಗ ತೆಲಂಗಾಣದಲ್ಲಿ ಪರಿಶಿಷ್ಟ ಜಾತಿಗಳಲ್ಲಿ 59 ಉಪಜಾತಿಗಳನ್ನು ಸಮಿತಿ ಗುರುತಿಸಿದೆ ಮತ್ತು ಅಸ್ತಿತ್ವದಲ್ಲಿರುವ ಶೇ.15ರಷ್ಟು ಮೀಸಲಾತಿಯೊಳಗೆ ಅವುಗಳನ್ನು I, II ಮತ್ತು III ಎಂಬ ಮೂರು ಗುಂಪುಗಳಾಗಿ ವಿಂಗಡಿಸಲು ಶಿಫಾರಸುಗಳನ್ನು ಮಾಡಿತ್ತು. ಈ ಸಂಬಂಧ ತೆಲಂಗಾಣ ಸರ್ಕಾರ, ತೆಲಂಗಾಣ ಪರಿಶಿಷ್ಟ ಜಾತಿಗಳ ಮೀಸಲಾತಿ ಮಸೂದೆಯನ್ನು ವಿಧಾನಸಭೆಯಲ್ಲಿ ಮಂಡಿಸಿ ಅಂಗೀಕರಿಸಿದ್ದು, ಇದಕ್ಕೆ ಏ.8, 2025ರಂದು ರಾಜ್ಯಪಾಲರು ಅಂಕಿತ ಹಾಕಿದ್ದಾರೆ. ಇಂದು ಈ ಸಂಬಂಧ ಗೆಜೆಟ್ ಅಧಿಸೂಚನೆ ಪ್ರಕಟಿಸಲಾಗಿದೆ ಎಂದು ಉತ್ತಮ್‌ಕುಮಾರ್ ರೆಡ್ಡಿ ತಿಳಿಸಿದ್ದಾರೆ.

ವಕ್ಫ್ ಕಾಯ್ದೆ ಪ್ರಶ್ನಿಸಿ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ ವಿಜಯ್



ಚೆನ್ನೈ: ವಕ್ಫ್ (ತಿದ್ದುಪಡಿ) ಕಾಯ್ದೆಯ ಸಾಂವಿಧಾನಿಕ ಸಿಂಧುತ್ವವನ್ನು ಪ್ರಶ್ನಿಸಿ ತಮಿಳಗ ವೆಟ್ರಿ ಕಳಗಂ ಅಧ್ಯಕ್ಷ ದಳಪತಿ ವಿಜಯ್ ಸುಪ್ರೀಂಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ನಟ ವಿಜಯ್ ಸಲ್ಲಿಸಿರುವ ಅರ್ಜಿಯು ಏಪ್ರಿಲ್ 16ರಂದು ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ನೇತೃತ್ವದ ತ್ರಿಸದಸ್ಯ ಪೀಠದ ಮುಂದೆ ವಿಚಾರಣೆಗೆ ಬರಲಿದೆ. ಈ ಕಾಯ್ದೆಯನ್ನು ಪ್ರಶ್ನಿಸಿ ಸುಪ್ರೀಂಕೋರ್ಟ್‌ನಲ್ಲಿ ಹಲವಾರು ಅರ್ಜಿಗಳನ್ನು ಸಲ್ಲಿಸಲಾಗಿದೆ. ಇದು ಮುಸ್ಲಿಂ ಸಮುದಾಯದ ಬಗ್ಗೆ ತಾರತಮ್ಯವನ್ನು ಹೊಂದಿದ್ದು, ಅವರ ಮೂಲಭೂತ ಹಕ್ಕುಗಳನ್ನು ಉಲ್ಲಂಘಿಸುತ್ತದೆ ಎಂದು ಅರ್ಜಿಗಳಲ್ಲಿ ಉಲ್ಲೇಖಿಸಲಾಗಿದೆ. ತಮಿಳುನಾಡಿನ ಆಡಳಿತ ಪಕ್ಷ ಡಿಎಂಕೆ ಕೂಡ ಕಾನೂನು ಹೋರಾಟದಲ್ಲಿ ಕೈ ಜೋಡಿಸಿದೆ. ವಕ್ಫ್ ಮಸೂದೆಗೆ ಸಂಬಂಧಿಸಿದ ಜಂಟಿ ಸಂಸದೀಯ ಸಮಿತಿಯ ಸದಸ್ಯರಾಗಿದ್ದ ಸಂಸದ ಎ ರಾಜಾ ಅವರು ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಈ ಮಧ್ಯೆ, ಕೇಂದ್ರ ಸರ್ಕಾರ ಸುಪ್ರೀಂಕೋರ್ಟ್‌ನಲ್ಲಿ ಕೇವಿಯಟ್ ಸಲ್ಲಿಸಿದ್ದು, ವಕ್ಫ್ ಕಾಯ್ದೆ ವಿಚಾರದಲ್ಲಿ ಯಾವುದೇ ಆದೇಶ ಹೊರಡಿಸುವ ಮುನ್ನ ವಿಚಾರಣೆ ನಡೆಸುವಂತೆ ಕೋರಿದೆ.

ವಕ್ಫ್ ಕಾಯ್ದೆ ವಿರೋಧಿಸಿ ನಾಳೆ ಬೃಹತ್ ಪ್ರತಿಭಟನೆ

ಮಡಿಕೇರಿ,ಏ.14– ಕೇಂದ್ರ ಸರ್ಕಾರದ ವಕ್ಫ್ ತಿದ್ದುಪಡಿ ಕಾಯ್ದೆಯನ್ನು ವಿರೋಧಿಸಿ ಕೊಡಗು ಜಿಲ್ಲಾ ಸುನ್ನಿ ಸಮನ್ವಯ ಸಮಿತಿ ಏ.16 ಬೃಹತ್ ಪ್ರತಿಭಟನಾ ಮೆರವಣಿಗೆ ಆಯೋಜಿಸಿದೆ ಎಂದು ಸಮಿತಿಯ ಅಧ್ಯಕ್ಷ ಕೆ.ಎ.ಯಾಕುಬ್ ತಿಳಿಸಿದ್ದಾರೆ.

ಇಬ್ಬರು ಖಾಝಿಗಳ ನೇತೃತ್ವದಲ್ಲಿ ಜಿಲ್ಲಾ ಸುನ್ನಿ ಸಮನ್ವಯ ಸಮಿತಿಯನ್ನು ರಚಿಸಲಾಗಿದ್ದು, ಬುಧವಾರ ಬೆಳಿಗ್ಗೆ 10 ಗಂಟೆಗೆ ನಗರದ ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಬೃಹತ್ ಮೆರವಣಿಗೆಯಲ್ಲಿ ತೆರಳಿ ಜಿಲ್ಲಾಧಿಕಾರಿಗಳ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಲಾಗುವುದು ಎಂದು ಸುದ್ದಿಗೋಷ್ಠಿಯಲ್ಲಿ ಹೇಳಿದರು.



ಕೊಡಗು ಜಿಲ್ಲಾ ಸುನ್ನಿ ಸಮನ್ವಯ ಸಮಿತಿಯ ಅಧ್ಯಕ್ಷ ಕೆ.ಎ.ಯಾಕುಬ್ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಕೇಂದ್ರ ಸರ್ಕಾರ ಇತ್ತೀಚೆಗೆ ಮಂಡಿಸಿರುವ ತಿದ್ದುಪಡಿ ಕಾಯ್ದೆ ಹಳೆಯ ನಿಯಮಗಳಿಗೆ ವ್ಯತಿರಿಕ್ತವಾಗಿದೆ ದೇವರ ಹೆಸರಿಗೆ ದಾನವಾಗಿ ನೀಡಿದ ಆಸ್ತಿ ದೇವರ ಹೆಸರಿನಲ್ಲೇ ಇರಬೇಕೆನ್ನುವ ನಿಯಮವಿದೆ. ಕೇವಲ ರಾಜಕೀಯಕ್ಕಾಗಿ ಮತ್ತು ಹಿಂದೂ ಹಾಗೂ ಮುಸಲ್ಮಾನರ ನಡುವೆ ಭೇದ ಉಂಟು ಮಾಡುವುದಕ್ಕಾಗಿ ಕಾಯ್ದೆಗೆ ತಿದ್ದುಪಡಿ ತರಲಾಗಿದೆ ಎಂದು ಕೆ.ಎ.ಯಾಕುಬ್ ಆರೋಪಿಸಿದರು.

ಸಮಿತಿಯ ಉಪಾಧ್ಯಕ್ಷ ಪಿ.ಎಂ.ಲತೀಫ್ ಮಾತನಾಡಿ, ಹಿಂದೆಯೂ 3 ಬಾರಿ ವಕ್ಫ್ ಕಾಯ್ದೆಗೆ ತಿದ್ದುಪಡಿ ತರಲಾಗಿದ್ದು, ಇದು ವಕ್ಫ್ ಆಸ್ತಿಯ ಸಂರಕ್ಷಣೆಗೆ ತೆಗೆದುಕೊಂಡ ಕಠಿಣ ನಿಲುವಾಗಿತ್ತು. ಆದರೆ ಈಗಿನ ತಿದ್ದುಪಡಿ ಹಿಂದಿನ ನಿಯಮಗಳಿಗೆ ವಿರುದ್ಧವಾಗಿದೆ ಎಂದು ಟೀಕಿಸಿದರು.

ಮಾಧ್ಯಮ ಸಂಚಾಲಕ ಸಿ.ಎಂ.ಹಮೀದ್ ಮೌಲವಿ ಮಾತನಾಡಿ, ವಕ್ಫ್ ಕಾಯ್ದೆ ತಿದ್ದುಪಡಿಯ ಹಿಂದೆ ದೊಡ್ಡ ಷಡ್ಯಂತ್ರವಿದೆ. ಇದು ದೇಶದ ಸಂವಿಧಾನ ಮತ್ತು ಕಾನೂನಿಗೆ ವಿರುದ್ಧವಾಗಿದೆ. ಇದರಿಂದ ಧಾರ್ಮಿಕ ಸ್ವಾತಂತ್ರ್ಯಕ್ಕೆ ಧಕ್ಕೆಯಾಗುವುದಲ್ಲದೆ ಆಸ್ತಿ ಕಬಳಿಸುವ ಹುನ್ನಾರವೂ ಅಡಗಿದೆ ಎಂದು ಆರೋಪಿಸಿದರು. ಕಾರ್ಯದರ್ಶಿ ಅಬ್ದುಲ್ ಹಫೀಜ್ ಹಾಜಿ ಮಾತನಾಡಿ, ಕೇಂದ್ರ ಸರ್ಕಾರದ ಧೋರಣೆಯನ್ನು ತೀವ್ರವಾಗಿ ಖಂಡಿಸಿದರು.

ಸುದ್ದಿಗೋಷ್ಠಿಯಲ್ಲಿ ಸಮಿತಿಯ ಖಜಾಂಚಿ ಮಹಮ್ಮದ್ ಹಾಜಿ ಕುಂಜಿಲ ಹಾಗೂ ಕಾರ್ಯದರ್ಶಿ ಉಮ್ಮರ್ ಫೈಝಿ ಉಪಸ್ಥಿತರಿದ್ದರು.

ಮೂಲಭೂತ ಹಕ್ಕುಗಳನ್ನು ಎಲ್ಲರಿಗೂ ನೀಡಿದ ಅಂಬೇಡ್ಕರ್ : ಪೊನ್ನಣ್ಣ

ವಿರಾಜಪೇಟೆ, ಏ.14–ಬ್ರಿಟಿಷರ ಕಾಲದ ಕಾನೂನಿನಲ್ಲಿ ಮೂಲಭೂತ ಹಕ್ಕುಗಳೇ ಇರಲಿಲ್ಲ ಅದನ್ನು ಸಂವಿಧಾನದ ಮೂಲಕ ಎಲ್ಲಾ ವರ್ಗದ ಜನರಿಗೆ ನೀಡಿದ ಹೆಗ್ಗಳಿಕೆ ಅಂಬೇಡ್ಕರ್‌ಗೆ ಸಲ್ಲುತ್ತದೆ ಎಂದು ಶಾಸಕ ಎ ಎಸ್ ಪೊನ್ನಣ್ಣ ಹೇಳಿದರು.

ತಾಲೂಕು ಆಡಳಿತ ತಾಲೂಕು ಪಂಚಾಯತ್ ಸಮಾಜ ಕಲ್ಯಾಣ ಇಲಾಖೆ ಸಂಯುಕ್ತ ಆಶ್ರಯದಲ್ಲಿ ನಡೆದ ಅಂಬೇಡ್ಕರ್ ಜನ್ಮ ದಿನಾಚರಣೆ ಹಾಗೂ ಪಟ್ಟಣದ ಅಂಬೇಡ್ಕರ್ ಭವನದ ಎದುರು ನೂತನವಾಗಿ ಸ್ಥಾಪಿಸಲಾಗಿರುವ ಅಂಬೇಡ್ಕರ್ ಪುತ್ಥಳಿ ಅನಾವರಣಗೊಳಿಸಿ ಮಾತನಾಡಿದ ಅವರು, ಸಂವಿಧಾನದಲ್ಲಿ ಅಭಿವೃದ್ಧಿ ಕಾನೂನು ರಚನೆಗಳ ಬಗ್ಗೆ ತಿಳಿಸಿದೆ. ಇಲ್ಲಿ ದೇಶದ ಸಂಪತ್ತು ಎಲ್ಲರಿಗೂ ಸೇರಬೇಕು. ಇದನ್ನೇ ನಮ್ಮ ಸರಕಾರ ಪಂಚ ಗ್ಯಾರಂಟಿ ಮೂಲಕ ಬಡವರಿಗೆ ವಿವಿಧ ವರ್ಗದವರಿಗೆ ಹಂಚುತ್ತಿದೆ. ಅಭಿವೃದ್ಧಿ ಇಲ್ಲ ಎಂದು ಟೀಕಿಸುವವರು ಇದನ್ನು ಅಭಿವೃದ್ಧಿಯ ಒಂದು ಮುಖ ಎಂದು ಅರಿತುಕೊಳ್ಳಲಿ ಎಂದರು.



ಅಂಬೇಡ್ಕರ್ ಪುತ್ಥಳಿ ಅನಾವರಣಗೊಳಿಸಿದ ಶಾಸಕ ಪೊನ್ನಣ್ಣ

ಪುರಸಭಾಧ್ಯಕ್ಷೆ ಮನೆಯಪಂಡ ದೇಚಮ್ಮ ಉಪಾಧ್ಯಕ್ಷೆ ಫಸಿಹಾ ತಬುಸಂ ಮತ್ತು ಸದಸ್ಯ ಜೂನ, ಪೊನ್ನಂಪೇಟೆ ಪಪಂ ಉಪಾಧ್ಯಕ್ಷ ಅಲೀರ ರಶೀದ್, ತಹಶೀಲ್ದಾರ್ ಅನಂತ ಶಂಕರ, ಪೊನ್ನಂಪೇಟೆ ತಾಲೂಕು ತಹಶೀಲ್ದಾರ್ ಮೋಹನ್ ಕುಮಾರ್, ಶಾಸಕರ ಅಪ್ತ ಕಾರ್ಯದರ್ಶಿ ರಾಮಚಂದ್ರ, ಅಂಬೇಡ್ಕರ್ ಭವನ ನಿರ್ವಹಣಾ ಸಮಿತಿ ಸದಸ್ಯ ವಿ.ಕೆ. ಸತೀಶ್. ಎನ್. ವೀರಭದ್ರಯ್ಯ, ಹೆಚ್ ಮಹದೇವ ತಾಲೂಕು ಪಂಚಾಯಿತ್ ಕಾರ್ಯನಿರ್ವಾಹಣಾಧಿಕಾರಿ ಕೆ.ಸಿ. ಅಪ್ಪಣ್ಣ, ಪೊನ್ನಂಪೇಟೆ ತಾಲೂಕು ಅಕ್ರಮ ಸಕ್ರಮ ಸಮಿತಿ ಅಧ್ಯಕ್ಷ ಲಾಲಅಪ್ಪಣ್ಣ, ವಿ.ಪೇ ತಾಲೂಕು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಪ್ರೀತಿ ಚಿಕ್ಕಮಾದಯ್ಯ, ಪುರಸಭೆಯ ಮುಖ್ಯಾಧಿಕಾರಿ ಪಿ.ಕೆ. ನಾಚಪ್ಪ, ಜನಪದ ಸಾಹಿತ್ಯ ಪರಿಷತ್ ಸದಸ್ಯ ಮುನ್ನೀರ್ ಅಹ್ಮದ್ ಉಪಸ್ಥಿತರಿದ್ದರು.

ಕೊಡಗಿನ ವಿವಿದೆಡೆ ಭಾರೀ ಗಾಳಿ–ಮಳೆ



ಕಾರಿನ ಮೇಲೆ ಅಡಿಕೆ ಮರ ಬಿದ್ದು ಕಾರು ಜಖಂಗೊಂಡಿರುವುದು.

ಮಡಿಕೇರಿ ಏ.14–ಜಿಲ್ಲೆಯ ವಿವಿಧೆಡೆ ಸಂಜೆ ಭಾರೀ ಗಾಳಿ ಮಳೆಯಾಗಿ ಅನಾಹುತಗಳಾಗಿವೆ.

ತಾಲೂಕಿನ ಆವಂದೂರು ಗ್ರಾಮದಲ್ಲಿ ಭಾರೀ ಮಳೆಗೆ ದೇವಾಯಿರ ಸಂತೋಷ್ ಎಂಬುವರಿಗೆ ಸೇರಿದ ಕಾರಿನ ಮೇಲೆ ಅಡಿಕೆ ಮರ ಬಿದ್ದು ಕಾರು ಜಖಂಗೊಂಡಿದೆ.

ಕುಶಾಲನಗರ ಸಮೀಪ ಗುಡ್ಡೆಹೊಸೂರಿನಲ್ಲಿ ಭಾರೀ ಮಳೆಗೆ ಮರ ವಿದ್ಯುತ್ ತಂತಿಯ ಮೇಲೆ ಬಿದ್ದು, ರಸ್ತೆಗೆ ಬಿದ್ದಿತ್ತು. ವಿದ್ಯುತ್ ತಂತಿ ತುಳಿದು ಹಸುವೊಂದು ಬಲಿಯಾಗಿದೆ. ರವಿ ಎಂಬುವವರಿಗೆ ಸೇರಿದ ಹಸು ಇದಾಗಿದೆ. ಪಟ್ಟಣ ಮತ್ತು ಕೊಪ್ಪ ಭಾಗದಲ್ಲಿ ಮಳೆಯ ನೀರು ಕೆಲವು ಅಂಗಡಿಗಳಿಗೆ ನುಗ್ಗಿದೆ

ಮಡಿಕೇರಿ ನಗರ ಮತ್ತು ಗ್ರಾಮೀಣ ಭಾಗದಲ್ಲಿ ಗುಡುಗು, ಸಿಡಿಲು, ಗಾಳಿ ಸಹಿತ ಮಳೆಯಾಗಿದ್ದು, ವಿದ್ಯುತ್ ಮಾರ್ಗಗಳಿಗೆ ಹಾನಿಯಾಗಿದೆ. ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಿದೆ.

ಸೋಮವಾರಪೇಟೆ, ವಿರಾಜಪೇಟೆ ಮತ್ತು ಪೊನ್ನಂಪೇಟೆ ತಾಲೂಕಿನಲ್ಲೂ ಮಳೆಯಾಗಿದೆ.

ಕೂರ್ಗ್ ಕ್ರಿಕೆಟ್ : ವೆಸ್ಟರ್ನ್ ಘಾಟ್ ವಾರಿಯರ್ಸ್ ತಂಡಕ್ಕೆ ಗೆಲುವು



ಮಡಿಕೇರಿ,ಏ.14– ಕೂರ್ಗ್ ಕ್ರಿಕೆಟ್ ಫೌಂಡೇಶನ್ ಪಾಲಿಬೆಟ್ಟದಲ್ಲಿ ನಡೆಸಿದ ಕೊಡವ ಕ್ರಿಕೆಟ್ ಲೆದರ್‌ಬಾಲ್ ಪ್ರೀಮಿಯರ್ ಲೀಗ್ ಸೀಸನ್–2ರ ಫೈನಲ್ ಪಂದ್ಯದಲ್ಲಿ ಟೀಮ್ ವೆಸ್ಟರ್ನ್ ಘಾಟ್ ವಾರಿಯರ್ಸ್ ತಂಡ ಭರ್ಜರಿ ಗೆಲುವು ದಾಖಲಿಸಿತು. ಎದುರಾಳಿ ತಂಡ ಟೀಮ್ ಲಿವರೇಜ್ 2ನೇ ಸ್ಥಾನಕ್ಕೆ ತೃಪ್ತಿ ಪಟ್ಟುಕೊಂಡಿತು.

ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಟೀಮ್ ವೆಸ್ಟರ್ನ್ ಘಾಟ್ ವಾರಿಯರ್ಸ್ ತಂಡ 20 ಓವರ್‌ಗಳಲ್ಲಿ 9 ವಿಕೆಟ್ ನಷ್ಟಕ್ಕೆ 126 ರನ್‌ಗಳನ್ನು ಸೇರಿಸಿತು. ಇದನ್ನು ಬೆನ್ನಟ್ಟಿದ ಟೀಮ್ ಲಿವರೇಜ್ ತಂಡ 17.2 ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡು 96 ರನ್‌ಗಳನ್ನಷ್ಟೇ ಗಳಿಸಿ ಸೋಲೊಪ್ಪಿಕೊಂಡಿತು. ವೆಸ್ಟರ್ನ್ ಘಾಟ್ ವಾರಿಯರ್ಸ್ ತಂಡದ ಅಪ್ಪನೆರವಂಡ ಲೋಚನ್ ಅಪ್ಪಣ್ಣ ಮ್ಯಾನ್ ಆಫ್ ದಿ ಮ್ಯಾಚ್ ಪ್ರಶಸ್ತಿ ಪಡೆದರು.

ಸೀಸನ್–2ರ ವಿಜೇತರಿಗೆ ಪ್ರಥಮ ಬಹುಮಾನ 2 ಲಕ್ಷ, ದ್ವಿತೀಯ 1 ಲಕ್ಷ, ತೃತೀಯ 50 ಸಾವಿರ ನಗದು ಮತ್ತು ಆಕರ್ಷಕ ಟ್ರೋಫಿ ನೀಡಲಾಯಿತು. ಕೊಡವ ರೈಸಿಂಗ್ ಸ್ಟಾರ್ಸ್ ತಂಡ ತೃತೀಯ ಬಹುಮಾನವನ್ನು ಪಡೆದುಕೊಂಡಿತು. 13 ದಿನಗಳ ಕಾಲ ನಡೆದ ಪಂದ್ಯಾವಳಿಯಲ್ಲಿ 10 ಫ್ರಾಂಚೈಸಿ ತಂಡಗಳ 175ಕ್ಕೂ ಹೆಚ್ಚು ಕ್ರೀಡಾಪಟುಗಳು ಪಾಲ್ಗೊಂಡಿದ್ದರು.

ಮುದ್ದಂಡ ಕಪ್ ಹಾಕಿ ಉತ್ಸವ : ಇಂದಿನ ಪಂದ್ಯಾವಳಿ

ಮಡಿಕೇರಿ,ಏ.14–ಮುದ್ದಂಡ ಕಪ್ ಹಾಕಿ ಉತ್ಸವದಲ್ಲಿ ಏ.15ರಂದು ನಡೆಯಲಿರುವ ಪಂದ್ಯಾವಳಿಯ ವಿವರ

ಮೈದಾನ–1 : ಬೆಳಿಗ್ಗೆ 10 ಗಂಟೆಗೆ ಚೆರುವಾಳಂಡ–ಸಣ್ಣುವಂಡ, 11 ಗಂಟೆಗೆ ಸೋಮೆಯಂಡ–ಅಲ್ಲಾರಂಡ, ಮಧ್ಯಾಹ್ನ 1 ಗಂಟೆಗೆ ಓಡಿಯಂಡ–ಕಲಿಯಂಡ, 2 ಗಂಟೆಗೆ ಕರಿನೆರವಂಡ–ಕರವಂಡ, 3ಕ್ಕೆ ಬಯವಂಡ–ಮುಕ್ಕಾಟಿರ(ಹರಿಹರ)

ಮೈದಾನ–2 : ಬೆಳಿಗ್ಗೆ 9 ಗಂಟೆಗೆ ಕಾಯಪಂಡ–ಮಾಳೇಟಿರ(ಕೂಕ್ಲೂರು), 11 ಗಂಟೆಗೆ ನಂಬುಡುಮಾಡ–ಚೊಟ್ಟೆಯಂಡಮಾಡ, ಮಧ್ಯಾಹ್ನ 1 ಗಂಟೆಗೆ ಅಯ್ಯನೆರವಂಡ–ಅಂಜಪರವಂಡ, 2 ಗಂಟೆಗೆ ಬಲ್ಲಚಂಡ–ಮೇಕೇರಿರ ತಂಡಗಳ ನಡುವೆ ಪಂದ್ಯಾಟ ನಡೆಯಲಿದೆ.



ಪುದಿಯೊಕ್ಕಡ ಮತ್ತು ಚೇರಂಡ ತಂಡಗಳ ನಡುವಿನ ಪೈಪೋಟಿ.

ಕುಡಿಬೇಡ ಎಂದಿದ್ದಕ್ಕೆ ಪುತ್ರ ಆತ್ಮಹತ್ಯೆಗೆ ಶರಣು

ವಿರಾಜಪೇಟೆ,ಏ.14– ಕುಡಿತದ ಚಟಕ್ಕೆ ದಾಸನಾಗಿದ್ದ ಪುತ್ರನಿಗೆ ಕುಟುಂಬವರ್ಗ ಬುದ್ದಿವಾದ ಹೇಳಿದ್ದಕ್ಕಾಗಿ ಬೇಸರದಿಂದ ಆತ ನೇಣಿಗೆ ಶರಣಾಗಿರುವ ಘಟನೆ ಅಯ್ಯಪ್ಪ ಬೆಟ್ಟದಲ್ಲಿ ನಡೆದಿದೆ.



ವಿರಾಜಪೇಟೆ ನಗರದ ಅಯ್ಯಪ್ಪ ಬೆಟ್ಟದ ನಿವಾಸಿ ಪಿ.ರಾಮು ಎಂಬುವವರ ಪುತ್ರ ಆಟೋ ಚಾಲಕ ಸುಬ್ರಮಣಿ ಪಿ.ಅರ್. ಪ್ರಾಯ(41) ನೇಣಿಗೆ ಶರಣಾದ ವ್ಯಕ್ತಿ.

ಘಟನೆ ವಿವರ : ಮೃತ ಸುಬ್ರಮಣಿ ಸುಮಾರು 20 ವರ್ಷಗಳಿಂದ ನಗರದಲ್ಲಿ ಆಟೋ ಚಾಲಕನಾಗಿ ಕರ್ತವ್ಯ ನಿರ್ವಹಿಸುತ್ತಿದ್ದ. ಮದುವೆಯಾಗಿ ಪತ್ನಿ ಹಾಗೂ ಈರ್ವರು ಮಕ್ಕಳಿದ್ದಾರೆ. ಸುಬ್ರಮಣಿಗೆ ಕುಡಿತದ ಚಟವಿತ್ತು. ಇದರಿಂದ ಪತ್ನಿ ಹಾಗೂ ಕುಟುಂಬವರ್ಗವು ಕುಡಿತ ಬಿಡುವಂತೆ ಬುದ್ದಿವಾದ ಹೇಳತೊಡಗಿದ್ದರು. ನಿನ್ನೆ ಮಧ್ಯಾಹ್ನ ಊಟ ಮುಗಿಸಿ ಮನೆಯಿಂದ ಆಟೋ ಚಾಲನೆಗಾಗಿ ಹೋಗಿದ್ದು, ರಾತ್ರಿಯಾದರು ಮನೆಗೆ ಹಿಂತಿರುಗಿ ಬಂದಿರಲಿಲ್ಲವೆನ್ನಲಾಗಿದೆ. ಮುಂಜಾನೆಯಿಂದ ಹುಡುಕಾಟದಲ್ಲಿ ತೊಡಗಿದ ಕುಟುಂಬದ ಸದಸ್ಯರಿಗೆ ಬೆಳಿಗ್ಗೆ 7 ಗಂಟೆ ಸಮಯದಲ್ಲಿ ಮನೆಯ ಸನಿಹದ ತೋಟ ಒಂದರಲ್ಲಿ ಮರದ ಕೊಂಬೆಗೆ ಎಲೆಕ್ಟ್ರಿಕ್ ಸರ್ವಿಸ್ ವಯರ್‌ನಿಂದ ಕೊರಳಿಗೆ ಸುತ್ತಿಕೊಂಡು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವುದು ಬೆಳಕಿಗೆ ಬಂದಿದೆ. ಮೃತನ ಪತ್ನಿ ಸರೋಜ ಅವರು ನೀಡಿದ ದೂರಿನ ಮೇರೆಗೆ ವಿರಾಜಪೇಟೆ ನಗರ ಠಾಣೆಯಲ್ಲಿ ಆತ್ಮಹತ್ಯೆ ಪ್ರಕರಣ ದಾಖಲಾಗಿದೆ.

ಶ್ರದ್ಧಾಭಕ್ತಿಯಿಂದ ನಡೆದ ನೇಮೋತ್ಸವ

ಸುಂಟಿಕೊಪ್ಪ,ಏ.14– ಹರದೂರು ಗ್ರಾಮದ ಆದಿನಾಗಬ್ರಹ್ಮ ಮೊಗೇರ್ಕಳ ಸೇವಾ ಸಮಿತಿ ವತಿಯಿಂದ ಆದಿನಾಗ ಬ್ರಹ್ಮ ಮೊಗೇರ ದೈವ, ಕೊರಗ ತನಿಯ ದೈವದ ಹಾಗೂ ಮಂತ್ರವಾದಿ ಗುಳಿಗನ 85ನೇ ನೇಮೋತ್ಸವ ಶ್ರದ್ಧಾಭಕ್ತಿಯಿಂದ ನಡೆಯಿತು.

ಆಯುಧಾ ಪೂಜೆ, ಸಂಜೆ ನಿತ್ಯ ಪೂಜೆ ಮತ್ತು ಭಂಡಾರ ಹೊರಡುವುದರ ಮೂಲಕ ನೇಮೋತ್ಸವಕ್ಕೆ ಚಾಲನೆ ದೊರೆಯಿತು. ಮಂತ್ರವಾದಿ ಗುಳಿಗನ ನೇಮ ನಡೆದು ಭಕ್ತರಲ್ಲಿ ಭಯ ಭಕ್ತಿ ಮೂಡಿಸಿತು. ಮುಂಜಾನೆ ತಾವು ನಂಬಿದ ಕಾರಣಿಕ ದೈವಗಳಿಗೆ ಭಕ್ತರು ಹರಕೆ ಮತ್ತು ಕಾಣಿಕೆ ಅರ್ಪಿಸಿದರು.

2 ಕೊರಗ ತನಿಯ ದೈವದ ಕಾರಣಿಕ ನೇಮೋತ್ಸವದಲ್ಲಿ 'ತಾನು ನಂಬಿದವರಿಗೆ ಇಂಬು ನೀಡುವೆ. ನನಗೆ ಮೋಸ ಮಾಡಿದರೆ ಕೆಲವೇ ದಿನದಲ್ಲಿ ತಪ್ಪಿನ ಮನವರಿಕೆ ಮಾಡಿಕೊಡುವೆ' ಎಂದು ನುಡಿ ನೀಡಿದ ಕೊರಗಜ್ಜ, ತನ್ನ ಭಕ್ತರಲ್ಲಿ ತನ್ನ ಶಕ್ತಿ ಕಾರಣಿಕವನ್ನು ತೋರಿಸಿತು. ನೆರೆದಿದ್ದ ಭಕ್ತರಿಗೆ ಅನ್ನಸಂತರ್ಪಣೆ ಮಾಡಲಾಯಿತು. ಸುಂಟಿಕೊಪ್ಪ, ಹರದೂರು, ಮಾದಾಪುರ, ಮಡಿಕೇರಿ, ಕುಶಾಲನಗರ, ಮೈಸೂರು, ಮಂಗಳೂರು, ಸುಳ್ಯ, ಪುತ್ತೂರು, ಸಕಲೇಶಪುರ ಸೇರಿದಂತೆ ವಿವಿಧ ಕಡೆಗಳಿಂದ ಸಾವಿರಾರು ಸಂಖ್ಯೆಯಲ್ಲಿ ನೆರೆದಿದ್ದ ಭಕ್ತರು ನೇಮೋತ್ಸವ ವೀಕ್ಷಿಸಿದರು.



ಕೈ ತೋರಿದರು ಬಸ್ ನಿಲ್ಲಿಸದ ಚಾಲಕನ ಮೇಲೆ ಮಚ್ಚಿನಿಂದ ಹಲ್ಲೆ

ಚಾಮರಾಜನಗರ, ಏ.14–ಬಸ್ ನಿಲ್ಲಿಸಲಿಲ್ಲ ಎಂಬ ಕಾರಣಕ್ಕಾಗಿ ಕೆಎಸ್‌ಆರ್‌ಟಿಸಿ ಬಸ್ ಚಾಲಕನ ಮೇಲೆ ಇಬ್ಬರು ವ್ಯಕ್ತಿಗಳು ಮಚ್ಚಿನಿಂದ ಮಾರಣಾಂತಿಕವಾಗಿ ಹಲ್ಲೆ ನಡೆಸಿರುವ ಘಟನೆ ಜಿಲ್ಲೆಯ ಯಳಂದೂರು ತಾಲೂಕಿನ ಇರಸವಾಡಿ ಗ್ರಾಮದ ಬಳಿ ನಡೆದಿದೆ.



ಹಲ್ಲೆ ಮಾಡಿದ ಆರೋಪಿಗಳಾದ ಇರಸವಾಡಿ ಗ್ರಾಮದ ಕೃಷ್ಣಶೆಟ್ಟಿ ಮತ್ತು ಪುಟ್ಟಸ್ವಾಮಿಶೆಟ್ಟಿಯನ್ನು ಪೊಲೀಸರು ಬಂಧಿಸಿದ್ದಾರೆ. ಹಲ್ಲೆಗೊಳಗಾಗಿರುವ ಸಾರಿಗೆ ಸಂಸ್ಥೆ ಬಸ್ ಚಾಲಕ ವಿಜಯಕುಮಾರ್ ತೀವ್ರವಾಗಿ ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿದ್ದಾರೆ.

ಘಟನೆಯ ವಿವರ : ಚಾಮರಾಜನಗರದಿಂದ ಆಲೂರು, ಕಾಗಲವಾಡಿ, ಹೊಂಗನೂರು, ಇರಸವಾಡಿ ಮಾರ್ಗವಾಗಿ ಯಳಂದೂರಿಗೆ ತೆರಳುತ್ತಿದ್ದ ಬಸ್‌ನಲ್ಲಿ ನಿಗದಿಗಿಂತ ಹೆಚ್ಚು ಪ್ರಯಾಣಿಕರು ಇದ್ದರು. ಹೀಗಾಗಿ, ಚಾಲಕ ಇರಸವಾಡಿ ಗ್ರಾಮದಲ್ಲಿ ಬಸ್ ನಿಲ್ಲಿಸದೆ ತೆರಳಿದ್ದಾರೆ. ಇದರಿಂದ ಕೋಪಗೊಂಡ ಕೃಷ್ಣಶೆಟ್ಟಿ ಹಾಗೂ ಪುಟ್ಟಸ್ವಾಮಿಶೆಟ್ಟಿ ಅವರು ಬಸ್ ಅನ್ನು ಹಿಂಬಾಲಿಸಿಕೊಂಡು ಹೋಗಿ ಬಸ್ ತಡೆದು ಚಾಲಕನ ಮೇಲೆ ಮಚ್ಚಿನಿಂದ ಮಾರಣಾಂತಿಕವಾಗಿ ಹಲ್ಲೆ ಮಾಡಿದ್ದಾರೆ.

ಈ ವೇಳೆ ಬಸ್‌ನಲ್ಲಿದ್ದ ಪ್ರಯಾಣಿಕರು ಯಳಂದೂರು ಠಾಣೆಯ ಪೊಲೀಸರಿಗೆ ಮಾಹಿತಿ ನೀಡಿ, ಕೃಷ್ಣಶೆಟ್ಟಿ ಹಾಗೂ ಪುಟ್ಟಸ್ವಾಮಿಶೆಟ್ಟಿಯನ್ನು ಹಿಡಿದುಕೊಟ್ಟಿದ್ದಾರೆ. ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

ಅರಕಲವಾಡಿಯಲ್ಲಿ ಮಳೆಗೆ ನೇಂದ್ರ ಬಾಳೆ ನಾಶ

ಚಾಮರಾಜನಗರ: ತಾಲೂಕಿನ ಅರಕಲವಾಡಿ, ಲಿಂಗನಪುರ, ಹೊಸಹಳ್ಳಿ ಸೇರಿದಂತೆ ಸುತ್ತಮುತ್ತಲ ಗ್ರಾಮಗಳಲ್ಲಿ ಬಿರುಗಾಳಿ ಸಹಿತ ಮಳೆ ಸುರಿಯಿತು.

ಅರಕಲವಾಡಿ ಗ್ರಾಮದ ಎ.ಎಂ. ನಾಗಮಲ್ಲಪ್ಪ ಅವರ ಲಿಂಗನಪುರ ಸಮೀಪ ಇರುವ ಚೌಡಳ್ಳಿ ಜಮೀನಿನಲ್ಲಿ ಮೂರು ಎಕರೆ ಪ್ರದೇಶದಲ್ಲಿ ಬೆಳೆಯಲಾಗಿದ್ದ ನೇಂದ್ರ ಬಾಳೆ ಬಿರುಗಾಳಿಗೆ ನೆಲಕಚ್ಚಿದೆ. ಇದರಲ್ಲಿ 1800 ನೇಂದ್ರ ಬಾಳೆಯಲ್ಲಿ ಗೊನೆ ಬಂದು ಕಟಾವಿಗೆ ಒಂದು ತಿಂಗಳು ಇರುವಂತಹ ಸುಮಾರು 450ಕ್ಕೂ ಹೆಚ್ಚು ಬಾಳೆ ನಾಶವಾಗಿದೆ.



ಬಾಳೆ ಬೆಳೆ ಹಾಳಾಗಿರುವ ಸಂಬಂಧಪಟ್ಟ ಇಲಾಖೆಯವರು ಸೂಕ್ತ ಪರಿಹಾರ ವಿತರಿಸಬೇಕು ಎಂದು ರೈತರು ಒತ್ತಾಯಿಸಿದ್ದಾರೆ.

ಕೌಟುಂಬಿಕ ಕಲಹ : ಮಕ್ಕಳೊಂದಿಗೆ ತಾಯಿ ಆತ್ಮಹತ್ಯೆ

ಚಾಮರಾಜನಗರ: ಕೌಟುಂಬಿಕ ಕಲಹದಿಂದ ಬೇಸತ್ತು ಎರಡು ಮಕ್ಕಳೊಂದಿಗೆ ತಾಯಿ ಬಾವಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಜಿಲ್ಲೆಯ ಹನೂರು ತಾಲೂಕಿನ ಮಹದೇಶ್ವರಬೆಟ್ಟ ಸಮೀಪದ ಕಾಡುಹೊಲ ಗ್ರಾಮದಲ್ಲಿ ನಡೆದಿದೆ.

ಸುಶೀಲ (30), ಆಕೆಯ ಮಕ್ಕಳಾದ ಚಂದ್ರು (8), ದಿವ್ಯ (11) ಬಾವಿಗೆ ಹಾರಿ ಆತ್ಮಹತ್ಯೆಗೆ ಶರಣಾದವರಾಗಿದ್ದಾರೆ. ಬಾವಿಯ ದಡದಲ್ಲಿ ಚಪ್ಪಲಿ ಹಾಗೂ ತಾಳಿ ಇಟ್ಟು ತಾಯಿ ತನ್ನ ಮಕ್ಕಳೊಂದಿಗೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಜಮೀನಿನ ಮಾಲೀಕ ನೀರು ತರಲು ಬಾವಿ ಬಳಿ ಹೋದಾಗ ಪ್ರಕರಣ ಬೆಳಕಿಗೆ ಬಂದಿದೆ.

ಸ್ಥಳಕ್ಕೆ ಮಹದೇಶ್ವರಬೆಟ್ಟ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.



ಗುಂಡ್ಲುಪೇಟೆ ತಾಲೂಕಿನ ಬೇಗೂರು ಗ್ರಾಮದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಣೆಯಲ್ಲಿ ಬೇಗೂರು ಗ್ರಾಮ ಪಂಚಾಯತಿ ಸದಸ್ಯ ಎಂ.ಮಹೇಶ್,ಯಜಮಾನರಾದ ಜವರಯ್ಯ ಕೃಷ್ಣಯ್ಯ, ಶಾಂತರಾಜು, ವಿಶ್ವಜ್ಞಾನಿ ಡಾ.ಬಿ.ಆರ್.ಅಂಬೇಡ್ಕರ್ ಸಂಘದ ಯುವಕರು ಮತ್ತು ಗ್ರಾಮಸ್ಥರು ಇದ್ದರು.

ಸ್ವಾಭಿಮಾನದ ಬದುಕು ಕಟ್ಟಿಕೊಟ್ಟವರು ಅಂಬೇಡ್ಕರ್: ಬೋಸ್

ಚಾಮರಾಜನಗರ, ಏ.14– ಅಕ್ಷರ ಕಲಿಯುವುದು ಅಪರಾಧ ಎನ್ನುವ ಕಾಲದಲ್ಲಿಯೇ ಕಷ್ಟಪಟ್ಟು ವಿದ್ಯಾಭ್ಯಾಸ ಮಾಡಿ ಹಲವು ದೇಶಗಳಲ್ಲಿ ಉನ್ನತ ವ್ಯಾಸಾಂಗ ಮಾಡಿ ವಿಶ್ವಜ್ಞಾನಿ ಎನಿಸಿಕೊಂಡ ಡಾ. ಅಂಬೇಡ್ಕರ್‌ಗೆ ಸರಿ ಸಮಾನರಾದವರು ಯಾರೂ ಇಲ್ಲ ಎಂದು ಸಂಸದ ಸುನೀಲ್ ಬೋಸ್ ತಿಳಿಸಿದ್ದಾರೆ.

ನಗರದ ಪೇಟೆ ಪ್ರೈಮರಿ ಶಾಲಾ ಆವರಣದಲ್ಲಿ ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜಕಲ್ಯಾಣ ಇಲಾಖೆ ಹಾಗೂ ನಗರಸಭೆ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಸಂವಿಧಾನ ಶಿಲ್ಪಿ ಡಾ. ಬಿ.ಆರ್.ಅಂಬೇಡ್ಕರ್ ಅವರ 134ನೇ ಜನ್ಮ ದಿನಾಚರಣೆ ಸಮಾರಂಭ ಉದ್ಘಾಟಿಸಿ ಮಾತನಾಡಿ, ಅಪಾರ ಜ್ಞಾನದಿಂದ ಇಡೀ ವಿಶ್ವದಲ್ಲೇ ಶ್ರೇಷ್ಠವಾಗಿರುವ ಅಂಬೇಡ್ಕರ್ ಲಿಖಿತ ಸಂವಿಧಾನವನ್ನು ದೇಶಕ್ಕೆ ಕೊಟ್ಟರು ಎಂದರು.

ಅಧ್ಯಕ್ಷತೆ ವಹಿಸಿದ್ದ ಶಾಸಕ ಸಿ.ಪುಟ್ಟರಂಗಶೆಟ್ಟಿ ಮಾತನಾಡಿ ಶಾಂತಿ ಸಹನೆ ತಾಳ್ಮೆಯಿಂದ ಸಮಾಜದ ಶ್ರೇಯೋಭಿವೃದ್ಧಿಗಾಗಿ ಜನರ ಬದುಕು ಹಸನು ಮಾಡಲು ನಿರಂತರವಾಗಿ ಶ್ರಮಿಸಿದರು ಅವರ ಆದರ್ಶ, ತ್ಯಾಗ, ಹೋರಾಟದ ಗುಣಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡಾಗ ಮಾತ್ರ ಅವರಿಗೆ ಗೌರವ ಸಲ್ಲಿಸಿದಂತಾಗುತ್ತದೆ ಎಂದರು.



ಅಂಬೇಡ್ಕರ್ ಜಯಂತಿಯನ್ನು ಸಂಸದ ಸುನೀಲ್‌ಬೋಸ್ ಉದ್ಘಾಟಿಸಿದರು. ಶಾಸಕ ಸಿ.ಪುಟ್ಟರಂಗಶೆಟ್ಟಿ ಮತ್ತಿತರರು ಉಪಸ್ಥಿತರಿದ್ದರು.

ಸಮಾರಂಭದ ಸಾನಿಧ್ಯ ವಹಿಸಿದ್ದ ಟಿ.ನರಸೀಪುರದ ನಳಂದ ಬುದ್ಧವಿಹಾರದ ಬೋಧಿರತ್ನ ಬಂತೇಜಿ ಮಾತನಾಡಿ ಶಿಸ್ತು ಸಂಯಮಕ್ಕೆ ಹೆಸರಾದ ಅಂಬೇಡ್ಕರ್ ಆದರ್ಶಗಳ ಪರಿಪಾಲನೆ ಮಾಡುವುದು ಮುಖ್ಯವಾಗಿದೆ. ನೈತಿಕ ಭಯ, ನಾಚಿಕೆ ಇದ್ದಾಗ ಒಳ್ಳೆಯದನ್ನು ಮಾಡುವ ಗುಣಗಳು ಮೈಗೂಡಿ ಸುಧಾರಣೆ ಸಾಧ್ಯವಾಗಲಿದೆ ಎಂದರು.

ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಕಳುಹಿಸಿದ್ದ ಸಂದೇಶವನ್ನು ಜಿಲ್ಲಾಧಿಕಾರಿ ಶಿಲ್ಪನಾಗ್ ವಾಚಿಸಿ 30 ವರ್ಷಗಳ ಕಾಲ ಅಧ್ಯಯನ ಮಾಡಿ ಅಪಾರ ಪಾಂಡಿತ್ಯ ಗಳಿಸಿದ್ದ ಅಂಬೇಡ್ಕರ್ ಅವರು ಹಾಕಿಕೊಟ್ಟ ಹಾದಿಯಲ್ಲಿ ಮುನ್ನಡೆಯಬೇಕು. ಅವರ ಹೋರಾಟ ಬದುಕು ನಮ್ಮೆಲ್ಲರಿಗೆ ಮಾದರಿ ಎಂದರು.

ವೇದಿಕೆ ಏರಿದ ಅಪರಿಚಿತ ಮಹಿಳೆ

ಇನ್ನೂ ಕಾರ್ಯಕ್ರಮ ಉದ್ಘಾಟನೆಯಾಗುತ್ತಿದ್ದಂತೆ ಅಪರಿಚಿತ ಮಹಿಳೆಯೊಬ್ಬಳು ವೇದಿಕೆ ಹತ್ತಿ ಕೆಲಕಾಲ ಗೊಂದಲ ಉಂಟು ಮಾಡಿದಳು. ಬಳಿಕ ಎಸ್‌ಪಿ ಡಾ.ಕವಿತಾ ಹಾಗೂ ಪೊಲೀಸರು ಆಕೆಯನ್ನು ವೇದಿಕೆಯಿಂದ ಇಳಿಸಿದರು.

ಭೋಗಾಪುರದ ಸರ್ಕಾರಿ ಪ್ರಥಮ ದರ್ಜೆ ವಸತಿ ಕಾಲೇಜಿನ ಪ್ರಾಂಶುಪಾಲ ಡಾ.ಪಿ. ದೇವರಾಜು ಮುಖ್ಯ ಭಾಷಣ ಮಾಡಿದರು. ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ, ಚೂಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಹೆಚ್.ವಿ.ಚಂದ್ರು, ನಗರಸಭೆ ಸದಸ್ಯೆ ಎಂ.ಕಲಾವತಿ, ಎಸ್ಪಿ ಡಾ.ಬಿ.ಟಿ.ಕವಿತಾ, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಎನ್. ಮುನಿರಾಜು, ನಗರಸಭೆ ಪೌರಾಯುಕ್ತ ಎಸ್.ವಿ.ರಾಮದಾಸ್, ಜಿಪಂ ಮುಖ್ಯ ಯೋಜನಾಧಿಕಾರಿ ದೀಪಾ, ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ರಾಜು ಇತರರು ಉಪಸ್ಥಿತರಿದ್ದರು. ಇದಕ್ಕೂ ಮೊದಲು ಶಾಸಕ ಪುಟ್ಟರಂಗಶೆಟ್ಟಿ ಇತರೆ ಗಣ್ಯರು ಡಾ.ಅಂಬೇಡ್ಕರ್ ಭವನದ ಆವರಣದಲ್ಲಿ ಡಾ.ಅಂಬೇಡ್ಕರ್ ಅವರ ಭಾವಚಿತ್ರದ ಮೆರವಣಿಗೆಗೆ ಚಾಲನೆ ನೀಡಿದರು.

ಅದ್ದೂರಿ ಮೆರವಣಿಗೆ : ಅಂಬೇಡ್ಕರ್ ಭಾವಚಿತ್ರವನ್ನು ವಿವಿಧ ಜಾನಪದ ಕಲಾತಂಡಗಳೊಂದಿಗೆ ಅದ್ದೂರಿಯಾಗಿ ಮೆರವಣಿಗೆ ಅಂಬೇಡ್ಕರ್ ಭವನದಿಂದ ಹೊರಟು ಸತ್ತಿ ರಸ್ತೆ, ಗುಂಡ್ಲುಪೇಟೆ ವೃತ್ತ, ದೊಡ್ಡಂಗಡಿ, ಚಿಕ್ಕಂಗಡಿ ಬೀದಿ, ಸಂತೇಮರಹಳ್ಳಿ ವೃತ್ತ, ಡಿವಿಯೇಷನ್ ರಸ್ತೆ ಮೂಲಕ ತೆರಳಿ ವೇದಿಕೆ ಕಾರ್ಯಕ್ರಮ ನಡೆಯುತ್ತಿದ್ದ ಪೇಟೆ ಪ್ರೈಮರಿ ಶಾಲೆಯಲ್ಲಿ ಅಂತ್ಯಗೊಂಡಿತು.

ಮೆರವಣಿಗೆಯಲ್ಲಿ ಗೊರವರ ಕುಣಿತ, ಕಂಸಾಳೆ, ಡೊಳ್ಳು ಕುಣಿತ, ವೀರಗಾಸೆ, ಹುಲಿ ವೇಷಧಾರಿಗಳ ಕುಣಿತ, ಗಾರುಡಿಗೊಂಬೆ, ಬ್ಯಾಂಡ್‌ಸೆಟ್, ಮಂಗಳವಾದ್ಯ ಸೇರಿದಂತೆ ನಾನಾ ಜನಪದ ಕಲಾತಂಡಗಳು ಪಾಲ್ಗೊಂಡು ಮೆರವಣಿಗೆಗೆ ಮೆರಗು ನೀಡಿತು.

ಕಲಾತಂಡಗಳ ಮೊಟಕು, ಪ್ರತಿಭಟನೆ

ಸಂತೇಮರಹಳ್ಳಿ ವೃತ್ತದ ಬಳಿ ಮೆರವಣಿಗೆ ಬರುತ್ತಿದ್ದಂತೆ ಜಾನಪದ ಕಲಾ ತಂಡಗಳ ಕಲಾವಿದರು ತಮ್ಮೂರುಗಳತ್ತ ಹೊರ ನಡೆದರು. ದಸಂಸ ಕಾರ್ಯಕರ್ತರು ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಪ್ರತಿಭಟನೆ ನಡೆಸಿದರು. ವಿಷಯ ತಿಳಿದು ಸ್ಥಳಕ್ಕೆ ಸಂಸದ ಸುನಿಲ್‌ಬೋಸ್, ಡಿಸಿ ಶಿಲ್ಪಾನಾಗ್, ಎಡಿಸಿ ಗೀತಾಹುಡೇದ, ಎಸ್‌ಪಿ ಡಾ.ಬಿ.ಟಿ. ಕವಿತಾ ಭೇಟಿ ನೀಡಿ, ಕಲಾ ತಂಡಗಳನ್ನು ಮತ್ತೆ ಕರೆಸಿ ಪ್ರತಿಭಟನಾಕಾರರ ಮನವೊಲಿಸುವಲ್ಲಿ ಯಶಸ್ವಿಯಾದರು.

ಮೀಸಲಾತಿ ಜಾರಿಯಲ್ಲಿ ಸರ್ಕಾರಗಳ ನಿರಾಸಕ್ತಿ : ಎಆರ್‌ಕೆ



ಅಂಬೇಡ್ಕರ್ ಜಯಂತಿ ಸಮಾರಂಭವನ್ನು ಶಾಸಕ ಕೃಷ್ಣಮೂರ್ತಿ ಉದ್ಘಾಟಿಸಿದರು. ಮನೋರಕ್ಷಿತ ಬಂತೇಜಿ, ಡಾ. ಬಂಜಗೆರೆ ಜಯಪ್ರಕಾಶ್ ಇತರರು ಉಪಸ್ಥಿತರಿದ್ದರು

ಕೊಳ್ಳೇಗಾಲ. ಏ.14–ಮೀಸಲಾತಿ ಅನುಗುಣವಾಗಿ ಉದ್ಯೋಗಕ್ಕೆ ನಾವು ನ್ಯಾಯಾಲಯದ ತೀರ್ಮಾನಕ್ಕೆ ಕಾಯಬೇಕಿದೆ. ಈ ನಿಟ್ಟಿನಲ್ಲಿ ಕೇಂದ್ರ, ರಾಜ್ಯ ಸರ್ಕಾರಗಳು ಸಮರ್ಪಕ ರೀತಿಯಲ್ಲಿ ಗಮನಹರಿಸುತ್ತಿಲ್ಲ ಎಂದು ಶಾಸಕ ಕೃಷ್ಣಮೂರ್ತಿ ವಿಷಾದ ವ್ಯಕ್ತಪಡಿಸಿದ್ದಾರೆ.

ತಾಲೂಕು ಆಡಳಿತ, ತಾಲೂಕು ಸಂಘಟನೆಗಳ ವತಿಯಿಂದ ಆಯೋಜಿಸಲಾಗಿದ್ದ ಡಾ. ಅಂಬೇಡ್ಕರ್ ಜಯಂತಿ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಅಂಬೇಡ್ಕರ್ ನೀಡಿದ ಮೀಸಲಾತಿ ಎಲ್ಲಾ ಧರ್ಮ, ವರ್ಗಕ್ಕೂ ಅನುಕೂಲವಾಗಿದ್ದರೂ ಇಂದು ಉದ್ಯೋಗ ಗಿಟ್ಟಿಸಿಕೊಳ್ಳಲು ನ್ಯಾಯಾಲಯದ ತೀರ್ಮಾನಕ್ಕೆ ಕಾಯುವಂತಾಗಿದೆ ಎಂದರು.

ಅಂಬೇಡ್ಕರ್ ಎಂದರೆ ಜ್ಞಾನ ಸರೋವರ, ಅವರ ಚಿಂತನೆಗಳನ್ನು, ಗೌರವಿಸಿ, ಸಂವಿಧಾನ ರಕ್ಷಿಸುವ ಮೂಲಕ ಬಾಬಾ ಸಾಹೇಬರ ತತ್ವಾದರ್ಶಗಳನ್ನು, ಗೌರವಿಸೋಣ ಎಂದು ನುಡಿದ ಅವರು, ದಲಿತ ಸಮಾಜದಲ್ಲಿ ನೂರಕ್ಕೂ ಅಧಿಕ ಉಪಜಾತಿಗಳನ್ನು ಕಾಣುತ್ತಿದ್ದೇವೆ ಎಲ್ಲರೂ ಒಂದಾಗುವ ಅಗತ್ಯ ವಿದೆಯೆಂದು ಹೇಳಿದರು.

ಪುಸ್ತಕ ಪ್ರಾಧಿಕಾರದ ಮಾಜಿ ಅಧ್ಯಕ್ಷ ಡಾ. ಬಂಜಗೆರೆ ಜಯಪ್ರಕಾಶ್ ಮಾತನಾಡಿದರು.

ಚೇತವನ ಬೌದ್ಧ ವಿಹಾರದ ಮನೋರಕ್ಷಿತ ಬಂತೇಜಿ, ತಹಸಿಲ್ದಾರ್ ಬಸವರಾಜು, ನಗರಸಭೆ ಅಧ್ಯಕ್ಷೆ ರೇಖಾ ರಮೇಶ್, ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ರಾಜೇಂದ್ರ ಕುಂತೂರು ಮೋಳೆ, ಉಪವಿಭಾಗಾಧಿಕಾರಿ ಬಿ.ಆರ್.ಮಹೇಶ್, ತಾಪಂ ಇಒ ಗುರುಶಾಂತಪ್ಪ ಬೆಳ್ಳುಂಡಗಿ, ಡಿವೈಎಸ್ಪಿ ಧರ್ಮೇಂದ್ರ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಕೇಶವಮೂರ್ತಿ, ದಲಿತ ಸಮಾಜದ ಮುಖಂಡರು, ಅಭಿಮಾನಿಗಳು ಪಾಲ್ಗೊಂಡಿದ್ದರು.

ಕಲಾತಂಡಗಳ ಪ್ರದರ್ಶನ: ಭೀಮನಗರದಿಂದ ವಿವಿಧ ಕಲಾತಂಡಗಳೊಂದಿಗೆ ಹೊರಟ ಮೆರವಣಿಗೆ ಆನಂದಜ್ಯೋತಿ ಕಾಲೋನಿ ರಸ್ತೆ, ಬೆಂಗಳೂರು ರಸ್ತೆ, ಡಾ.ಅಂಬೇಡ್ಕರ್ ಪ್ರತಿಮೆ ವೃತ್ತ, ಅಂಬೇಡ್ಕರ್ ರಸ್ತೆ ಗುರುಕಾರ್ ವೃತ್ತ, ಎಂ.ಜಿ.ಎಸ್.ವಿ ಕಾಲೇಜು ರಸ್ತೆ ಮೂಲಕ ಸಾಗಿ ನ್ಯಾಷನಲ್ ಶಾಲಾ ಮೈದಾನಕ್ಕೆ ತಲುಪಿತು. ಕಲಾತಂಡಗಳು ಮೆರವಣಿಗೆಗೆ ಕಳೆ ತಂದರೆ, ಪಾಲ್ಗೊಂಡಿದ್ದ ಅಂಬೇಡ್ಕರ್ ಅನುಯಾಯಿಗಳು ನೀಲಿ ಶಲ್ಯ ಧರಿಸಿ ಗಮನ ಸೆಳೆದರು.

ಕೆಸ್ತೂರಲ್ಲಿ ಅದ್ದೂರಿ ಅಂಬೇಡ್ಕರ್ ಜಯಂತಿ ಆಚರಣೆ



ಯಳಂದೂರು: ತಾಲೂಕಿನ ಕೆಸ್ತೂರು ಗ್ರಾಮದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ 134ನೇ ಜನ್ಮ ದಿನಾಚರಣೆಯನ್ನು ಅಂಬೇಡ್ಕರ್ ಯುವಕ ಸಂಘದ ವತಿಯಿಂದ ಅರ್ಥಪೂರ್ಣವಾಗಿ ಆಚರಿಸಿತು.

ಗ್ರಾಮದ ವಿವಿಧ ಸಮುದಾಯದ ಮುಖಂಡರು ಸೌಹಾರ್ದ ಮನೋಭಾವನೆಯಿಂದ ಭಾಗವಹಿಸಿ, ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ಸರ್ವಜನಾಂಗದ ಮುಖಂಡರು ಭಾಗವಹಿಸಿ ನಾವೆಲ್ಲರೂ ಭಾರತೀಯರು ಎಂಬ ತತ್ವವನ್ನು ತೋರಿಸಿದ್ದೇವೆ. ಈ ಭಾವನೆಯನ್ನು ಎಲ್ಲಾ ಗ್ರಾಮದವರು ತಾಳಿದರೆ ಜಾತೀಯತೆ ಅನ್ನೋದು ಅವನತಿ ಹೊಂದುತ್ತದೆ ಎಂದರು. ಅಂಬೇಡ್ಕರ್ ಭಾವಚಿತ್ರವನ್ನು ಘೋಷಣೆಯನ್ನು ಕೂಗುತ್ತಾ ಗ್ರಾಮದ ಎಲ್ಲಾ ಸಮುದಾಯದ ಬೀದಿಗಳಲ್ಲಿ ಮೆರವಣಿಗೆಯಲ್ಲಿ ಸಾಗಿದರು. ಗ್ರಾಮವು ವಿವಿಧ ಬಗೆಯ ವಿದ್ಯುತ್ ದೀಪಗಳಿಂದ ಸಿಂಗಾರಗೊಂಡಿತು.

ಗ್ರಾಮದ ಯಜಮಾನ ಬಿ ನಾಗರಾಜು, ಕುಮಾರ್, ಜಯರಾಜ್, ದೊರೆಸ್ವಾಮಿ ಮುಖಂಡ ಸಿದ್ದರಾಜು, ಪತ್ರಕರ್ತ ಪ್ರಸನ್ನಕುಮಾರ್, ಕೃಷ್ಣ, ಮಧು, ಕೆಸ್ತೂರು, ನಾಗರಾಜು, ಎಂ.ನಾಗೇಶ್ ಬಿ.ಕೆ. ಚಿನ್ನಸ್ವಾಮಿ, ನವೀನ್, ಕೇಶವಮೂರ್ತಿ, ರಾಜು, ಶಾಂತರಾಜು, ಗ್ರಾಪಂ ಸದಸ್ಯರಾದ ಗುರುಲಿಂಗಯ್ಯ, ಪ್ರಸಾದ್, ಮಹೇಂದ್ರ, ಅಂಬೇಡ್ಕರ್ ಯುವಕ ಸಂಘದ ಅಧ್ಯಕ್ಷ ಸಚಿನ್ ಬಿ. ಕಾರ್ಯದರ್ಶಿ ಮಹೇಂದ್ರ, ಕಿರಣ್ ಜೆ, ಸಂಜಯರಾಜು ಜೆ, ವಿಶ್ವ, ರಾಘವ ದರ್ಶನ್, ಶಿವಶಂಕರ್ ಮೊದಲಾದವರು ಹಾಜರಿದ್ದರು.

ಬ್ಯಾಂಕ್ ಜನಾರ್ಧನ್ ನಿಧನ

ಕಂಬನಿ ಮಿಡಿದ ಚಿತ್ರರಂಗ



ಬೆಂಗಳೂರು: ಕನ್ನಡ ಚಿತ್ರರಂಗದ ಅಪರೂಪದ ಕಲಾವಿದ, ಹಾಸ್ಯ ನಟ ಬ್ಯಾಂಕ್ ಜನಾರ್ಧನ್(77) ಇಂದು ನಿಧನರಾದರು.

ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದ ಬ್ಯಾಂಕ್ ಜನಾರ್ಧನ್ ಮಧ್ಯರಾತ್ರಿ ಬೆಂಗಳೂರಿನ ಮಣಿಪಾಲ್ ಆಸ್ಪತ್ರೆ ಯಲ್ಲಿ ಕೊನೆಯುಸಿರೆಳೆದರು. ಇಂದು ಬೆಳಗ್ಗೆ 10 ಗಂಟೆಗೆ ನಟ ಬ್ಯಾಂಕ್ ಜನಾರ್ಧನ್ ಅವರ ಮನೆ ಬಳಿ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿತ್ತು.

ವಯೋಸಹಜ ಕಾಯಿಲೆ ಹಿನ್ನೆಲೆ ಕುಟುಂಬಸ್ಥರು ಬೆಂಗಳೂರಿನ ಮಣಿಪಾಲ್ ಆಸ್ಪತ್ರೆಗೆ ದಾಖಲಿಸಿದ್ದು, ಮಧ್ಯರಾತ್ರಿ ಕೊನೆಯುಸಿರೆಳೆದಿದ್ದಾರೆ. ಬ್ಯಾಂಕ್ ಜನಾರ್ಧನ್, ತಮ್ಮ ಅದ್ಭುತ ಹಾಸ್ಯದಿಂದ ಜನರನ್ನು ರಂಜಿಸುವ ಮೂಲಕ ಭಾರೀ ಜನಮನ್ನಣೆ ಪಡೆದವರಾಗಿದ್ದರು. ಕನ್ನಡ ಚಿತ್ರಗಂಗದಲ್ಲಿ ಪೋಷಕ ನಟನಾಗಿಯೇ ಗುರುತಿಸಿಕೊಂಡು 500ಕ್ಕೂ ಹೆಚ್ಚು ಸಿನಿಮಾಗಳಲ್ಲಿ ನಟನೆ ಮಾಡಿದವರಾಗಿದ್ದಾರೆ. 2023ರ ಸೆಪ್ಟೆಂಬರ್ 26ರಂದು ಹೃದಯಾಘಾತ ಆಗಿತ್ತು. ಬಳಿಕ ಚಿಕಿತ್ಸೆಯು ಪಡೆದುಕೊಂಡು ಚೇತರಿಸಿಕೊಂಡಿದ್ದರು. 1948ರಲ್ಲಿ ಬ್ಯಾಂಕ್ ಜನಾರ್ಧನ್ ಅವರು ಬೆಂಗಳೂರಿನಲ್ಲಿ ಜನಿಸಿದರು. 1985ರಲ್ಲಿ ಪಿತಾಮಹ ಚಿತ್ರದ ಮೂಲಕ ಅವರು ಚಿತ್ರರಂಗಕ್ಕೆ ಕಾಲಿಟ್ಟರು. ಉಪೇಂದ್ರ ನಿರ್ದೇಶನದ ಶ್, ತರ್ಲೆ ನನ್ ಮಗ, ಬೆಳ್ಳಿಯಪ್ಪ ಬಂಗಾರಪ್ಪ, ಜೀ ಬೂಂಬಾ, ಗಣೇಶ ಸುಬ್ರಮಣ್ಯ, ಕೌರವ ಸೇರಿದಂತೆ 500ಕ್ಕೂ ಅಧಿಕ ಸಿನಿಮಾಗಳಲ್ಲಿ ನಟಿಸಿದ್ದಾರೆ.

ಅಲ್ಲದೆ, ಬೆಟ್ಟದ ತಾಯಿ, ಪೊಲೀಸ್ ಹೆಂಡತಿ, ತರ್ಲೆ ನನ್ಮಗ ಹೀಗೆ ಹಲವು ಚಿತ್ರಗಳಲ್ಲಿ ನಟಿಸಿದರು. 2016ರಿಂದ ಕೆಲಕಾಲ ಅವರು ಚಿತ್ರರಂಗದಲ್ಲಿ ಕಾಣಿಸಿಕೊಂಡಿರಲಿಲ್ಲ. 2022ರ ಮಠ ಹಾಗೂ 2023ರ ಉಂಡೇನಾಮ ಚಿತ್ರದಲ್ಲಿ ನಟಿಸಿ ದ್ದರು. ಹಿರಿತೆರೆ ಜೊತೆ ಕಿರುತೆರೆಯಲ್ಲಿಯೂ ಬ್ಯಾಂಕ್ ಜನಾರ್ಧನ್ ಕೆಲಸ ಮಾಡಿದ್ದಾರೆ. ಪಾಪ ಪಾಂಡು, ಜೋಕಾಲಿ, ರೋಬೋ ಫ್ಯಾಮಿಲಿ, ಮಾಂಗಲ್ಯ ಧಾರಾವಾಹಿಗಳಲ್ಲಿಯೂ ಕೂಡ ಬ್ಯಾಂಕ್ ಜನಾರ್ಧನ್ ಅವರು ನಟನೆ ಮಾಡಿದ್ದಾರೆ.

ಇವರು ದೊಡ್ಡಣ್ಣ, ಟೆನ್ನಿಸ್ ಕೃಷ್ಣ ಅವರೊಂದಿಗೆ ಅಷ್ಟೇ ಅಲ್ಲದೆ, ನಳಿಕ ಹಾಸ್ಯನಟರಾದ ಸಾಧುಕೋಕಿಲ, ಬುಲೆಟ್ ಪ್ರಕಾಶ್ ಸೇರಿದಂತೆ ಹಲವರೊಂದಿಗೆ ನಟಿಸಿ ತಮ್ಮ ಛಾಪು ಮೂಡಿಸಿದ್ದರು. ಜನಾರ್ಧನ್ ಅವರಿಗೆ ಬ್ಯಾಂಕ್ ಜನಾರ್ಧನ್ ಎಂದು ಹೆಸರು ಬರಲು ಕಾರಣ, ಅವರು ಚಿತ್ರದುರ್ಗದ ಸಮೀಪದ ಹೊಳಲ್ಕೆರೆ ಬಳಿಯ ಬ್ಯಾಂಕ್‌ವೊಂದರಲ್ಲಿ ಕೆಲಸ ಮಾಡಿಕೊಂಡಿದ್ದರು. ಆಗಲೇ, ಅವರಿಗೆ ಕಲೆಯ ಬಗ್ಗೆ ಆಸಕ್ತಿ ಇತ್ತು. ಆದ್ದರಿಂದ ನಾಟಕಗಳನ್ನು ಮಾಡಿಕೊಂಡಿದ್ದರು. ಅವರ ನಾಟಕವನ್ನು ನೋಡಿ ಧೀರೇಂದ್ರ ಗೋಪಾಲ್ ಅವರು ತುಂಬಾ ಇಷ್ಟಪಟ್ಟಿದ್ದರು. ಅಲ್ಲದೆ, ಅವರನ್ನು ಬೆಂಗಳೂರಿಗೆ ಬರುವಂತೆ ಅವರು ಹೇಳಿದ್ದರು. ಒಂದೂವರೆ ವರ್ಷ ಬಿಟ್ಟು ಜನಾರ್ಧನ್ ಅವರು ಬೆಂಗಳೂರಿಗೆ ಬಂದು ಊರಿಗೆ ಉಪಕಾರಿ ಸಿನಿಮಾದಲ್ಲಿ ವಜ್ರಮುನಿ ಬಾಡಿಗಾರ್ಡ್ ಪಾತ್ರ ಮಾಡಿದರು. ಹೀಗೆ ಮೊದಲಿಗೆ ಸಣ್ಣಪುಟ್ಟ ಪಾತ್ರಗಳನ್ನು ಮಾಡಿಕೊಂಡಿದ್ದ ಅವರು ದಿನಕಳೆದಂತೆ ದೊಡ್ಡಮಟ್ಟದಲ್ಲಿ ತಮ್ಮ ಅದ್ಭುತ ನಟನೆ ಮೂಲಕ ಗುರುತಿಸಿಕೊಳ್ಳುತ್ತಾ ಹೋದರು. ಈ ಮೂಲಕ ಅವರಿಗೆ ಬೇಡಿಕೆಯೂ ಹೆಚ್ಚಾಗುತ್ತಾ ಹೋಯಿತು.

ಹೈದರಾಲಿ ರಸ್ತೆಯಲ್ಲಿ ಮರಗಳ ಮಾರಣ ಹೋಮಕ್ಕೆ ವಿವಿಧ ಪರಿಸರ ಸಂಘಟನೆಗಳಿಂದ ವ್ಯಾಪಕ ಖಂಡನೆ

●ಉದ್ದೇಶಿತ ರಸ್ತೆ ಅಗಲೀಕರಣಕ್ಕೆ ಅವಕಾಶ ನೀಡದೇ ಅದೇ ಸ್ಥಳದಲ್ಲಿ ಗಿಡಗಳ ನೆಡಲು ನಿರ್ಧಾರ ●ಏ.17 ರಂದು ಬೃಹತ್ ಪ್ರತಿಭಟನೆ, ಕಾನೂನು ಹೋರಾಟ

ಮೈಸೂರು, ಏ.14(ಎಂಕೆ)– ನಗರದ ಹೈದರಾಲಿ ರಸ್ತೆಯ ಕಾಳಿಕಾಂಬ ದೇವಸ್ಥಾನದಿಂದ ಎಸ್‌ಪಿ ಕಚೇರಿ ವೃತ್ತದವರೆಗೆ 40 ಮರಗಳ ಕಡಿದಿರುವುದನ್ನು ಖಂಡಿಸಿ ಮೈಸೂರಿನ ವಿವಿಧ ಪರಿಸರ ಸಂಘಟನೆಗಳಿಂದ ಏ.17 ರಂದು ಕ್ಯಾಂಡಲ್ ಲೈಟ್ ಮೆರವಣಿಗೆ ಮೂಲಕ ಮರಗಳಿಗೆ ಶ್ರದ್ಧಾಂಜಲಿ ಸಲ್ಲಿಸಿ, ಹೊಸದಾಗಿ ಗಿಡಗಳನ್ನು ನೆಡುವ ಮೂಲಕ ಬೃಹತ್ ಪ್ರತಿಭಟನೆ ನಡೆಸಲು ನಿರ್ಧರಿಸಲಾಗಿದೆ. ಜೊತೆಗೆ ಮರಗಳ ಮಾರಣಹೋಮಕ್ಕೆ ಕಾರಣರಾದ ಅಧಿಕಾರಿ–ಸಿಬ್ಬಂದಿ ವಿರುದ್ಧ ಕಾನೂನು ಹೋರಾಟ ನಡೆಸಲು ಒಕ್ಕೊರಲ ನಿರ್ಧಾರ ಕೈಗೊಳ್ಳಲಾಯಿತು.



ಮೈಸೂರಿನ ಚೆಲುವಾಂಬ ಪಾರ್ಕ್‌ನಲ್ಲಿ ಸೋಮವಾರ ನಡೆದ ವಿವಿಧ ಪರಿಸರ ಸಂಘಟನೆಗಳ ಸಭೆಯಲ್ಲಿ ಪರಿಸರ ಬಳಗದ ಸಂಸ್ಥಾಪಕ ಸದಸ್ಯ ಪರಶುರಾಮೇಗೌಡ ಮಾತನಾಡುತ್ತಿರುವುದು.

ಮೈಸೂರಿನ ಚೆಲುವಾಂಬ ಪಾರ್ಕ್‌ನಲ್ಲಿ ಸೋಮವಾರ ಸಭೆ ನಡೆಸಿದ ವಿವಿಧ ಪರಿಸರ ಸಂಘಟನೆಗಳ ಮುಖಂಡರು, ಮೈಸೂರಿನ ಪಾರಂಪರಿಕತೆ ಜೀವಂತವಾಗಿರುವುದೇ ಹಸಿರಿನ ಮರಗಳಿಂದ. ಮೈಸೂರನ್ನು ಕಾಂಕ್ರೀಟ್ ನಗರವನ್ನಾಗಿಸುವ ಮುನ್ನವೇ ಎಚ್ಚೆತ್ತುಕೊಳ್ಳಬೇಕು. ರಸ್ತೆ ಅಗಲೀಕರಣಕ್ಕಾಗಿ ಹೈದರಾಲಿ ರಸ್ತೆಯಲ್ಲಿ ನಡೆಸಿರುವ ಮರಗಳ ಮಾರಣಹೋಮ ಇಂದಿಗೆ ಕೊನೆಯಾಗಬೇಕಾದರೆ ಒಗ್ಗಟ್ಟಿನ ಹೋರಾಟದ ಅಗತ್ಯವಿದೆ. ರಸ್ತೆ ಅಗಲೀಕರಣಕ್ಕೆ ಅವಕಾಶ ನೀಡದೆ, ಕಡಿದಿರುವ ಮರಗಳ ಜಾಗದಲ್ಲೇ ಇನ್ನೂ ಹೆಚ್ಚಿನ ಗಿಡಗಳನ್ನು ನೆಟ್ಟು ಪೋಷಣೆ ಮಾಡಬೇಕು. ಮರ ಕಡಿದವರಿಗೆ ಪ್ರತಿಭಟನೆ ಬಿಸಿ ಮುಟ್ಟಿಸುವುದರ ಜೊತೆಗೆ ಮೈಸೂರಿನಲ್ಲಿ ಒಂದು ಸಣ್ಣ ಮರ ಕಡಿಯಬೇಕಾದರು ಪರಿಸರ ಸಂಘಟನೆಗಳ ಒಪ್ಪಿಗೆ ಪಡೆಯುವಂತಾಗುವವರೆಗೂ ಹೋರಾಟ ನಡೆಸಬೇಕು ಎಂದು ನಿರ್ಧರಿಸಲಾಯಿತು.

ಸಭೆಯ ಆರಂಭದಲ್ಲಿ ಮಾತನಾಡಿದ ಪರಿಸರ ಬಳಗದ ಸಂಸ್ಥಾಪಕ ಸದಸ್ಯ ಪರಶುರಾಮೇಗೌಡ, ಇತ್ತೀಚೆಗೆ ಸುಪ್ರೀಂಕೋರ್ಟ್, ಮರಗಳನ್ನು ಕಡಿಯುವುದು ಮನುಷ್ಯರನ್ನು ಕೊಲ್ಲುವುದಕ್ಕಿಂತಲೂ ಹೇಯ ಕೃತ್ಯ ಎಂದೇಳಿತ್ತು. ಮನುಷ್ಯರನ್ನು ಕೊಂದವರಿಗೆ ಜೀವಾವಧಿ ಶಿಕ್ಷೆ ವಿಧಿಸುವುದಾದರೆ, ಮರಗಳನ್ನು ಕಡಿದವರಿಗೆ ಯಾವ ಮಟ್ಟದ ಶಿಕ್ಷೆಯನ್ನು ವಿಧಿಸಬೇಕು ಎಂಬುದನ್ನು ಆಲೋಚಿಸಬೇಕಿದೆ ಇಂತಹ ಹೇಯ ಕೃತ್ಯವೆಸಗಿದವರಿಗೆ ಶಿಕ್ಷೆಯಾಗಲೇಬೇಕು ಎಂದು ಗುಡುಗಿದರು.

ರಸ್ತೆ ಅಗಲೀಕರಣಕ್ಕೆ ಅವಕಾಶ ಬೇಡ: ಪರಿಸರ ಬಳಗದ ಸದಸ್ಯೆ, ಲೇಖಕಿ ಕುಸುಮಾ ಆಯರಹಳ್ಳಿ ಮಾತನಾಡಿ, ಶಾಂತಿಯ ಸಮಯವಲ್ಲವಿದು. ಬೆಂಕಿ ಬಿದ್ದಾಗ ಬಾವಿ ತೋಡುವ ಪರಿಸ್ಥಿತಿ ನಮಗೆ ಬಂದಿದೆ. ಮುಟ್ಟಿ ನೋಡಿಕೊಳ್ಳುವಂತಹ ಪಾಠ ಕಲಿಸಬೇಕು. ಮುಂದೆ ಒಂದು ಮರ ಕಡಿಯಬೇಕಾದರೂ ಹತ್ತು ಸಲ ಯೋಚಿಸುವಂತೆ ನಿರ್ಣಯ ಕೈಗೊಳ್ಳಬೇಕು. ಯಾವುದೇ ಕಾರಣಕ್ಕೂ ರಸ್ತೆ ವಿಸ್ತರಣೆಗೆ ಅವಕಾಶ ನೀಡಬಾರದು. ಅದೇ ಜಾಗದಲ್ಲಿಯೇ ಮರಗಳನ್ನು ನೆಡಬೇಕು ಎಂದು ಆಗ್ರಹಿಸಿದರು.

ಅದೇ ಸ್ಥಳದಲ್ಲಿ ಗಿಡ ನೆಡಬೇಕು: ವನ್ಯಜೀವಿ ಛಾಯಾಗ್ರಾಹಕ ಶೈಲಜೇಶ ಮಾತನಾಡಿ, 50ಕ್ಕಿಂತ ಕಡಿಮೆ ಮರಗಳು ಇದ್ದಿದ್ದರಿಂದ ಸಾರ್ವಜನಿಕರ ಅಭಿಪ್ರಾಯಕ್ಕೆ ಅವಕಾಶವಿಲ್ಲವೆಂದು ಅರಣ್ಯ ಇಲಾಖೆ ಅಧಿಕಾರಿಗಳು ಕಡಿಯಲು ಅನುಮತಿ ನೀಡಿದ್ದಾರೆ. ಅವರಿಗೂ ಕಳೆದ 8 ತಿಂಗಳಿನಿಂದ ರಾಜಕೀಯ ಒತ್ತಡವಿತ್ತಂತೆ. ರಸ್ತೆ ವಿಸ್ತರಣೆಗೆ ಅವಕಾಶ ನೀಡದೆ ಅದೇ ಸ್ಥಳದಲ್ಲಿ ಗಿಡಗಳನ್ನು ನೆಡಬೇಕು. ಮರಗಳನ್ನು ಕಡಿದ ಅಧಿಕಾರಿ–ಸಿಬ್ಬಂದಿ ವಿರುದ್ಧ ಕಾನೂನು ಹೋರಾಟ ನಡೆಸಲು ಸಿದ್ಧ ಎಂದರು.

ಜೀವವೈವಿಧ್ಯ ತಾಣಗಳಾದ ಕಾರಂಜಿ ಕೆರೆ ಹಾಗೂ ಮೃಗಾಲಯ ಸಮೀಪದಲ್ಲಿಯೇ ಇವೆ. ಒಂದು ಮರ ಕಡಿಯಲೂ ಪರಿಸರ ಸಂಘಟನೆಗಳಿಂದಾದ ಕಮಿಟಿಯ ಅನುಮತಿಯನ್ನು ಆಡಳಿತ ವ್ಯವಸ್ಥೆ ಪಡೆಯುವಂತಾಗಬೇಕು. ಅದಕ್ಕಾಗಿ ಹೋರಾಟ ನಡೆಸಬೇಕು. 10 ಲಕ್ಷ ಜನರಿರುವ ನಗರದಲ್ಲಿ ಆ ರಸ್ತೆಯನ್ನು ಬಳಸುವವರು ಕೆಲವು ಮಂದಿಯಷ್ಟೇ. ಮರ ಕಡಿದಿದ್ದರಿಂದ ಅದರ ಪರಿಣಾಮ ಎಲ್ಲ ಜನರ ಮೇಲೂ ಆಗುತ್ತದೆ ಎಂದು ಹೇಳಿದರು.

ನಿಯಮಾವಳಿ ಪಾಲಿಸಿಲ್ಲ, ಟ್ರೀ ಕಮಿಟಿಯಲ್ಲಿ ಪಬ್ಲಿಕ್ ಸದಸ್ಯರಿಲ್ಲ: ಮೈಸೂರು ಗ್ರಾಹಕ ಪರಿಷತ್ ಸದಸ್ಯ ಹಾಗೂ ನಿವೃತ್ತ ಮೇಜರ್ ಜನರಲ್ ಸುಧೀರ್ ಒಂಬತ್ಕೆರೆ ಮಾತನಾಡಿ, ಯೋಜಿತ ರೀತಿಯಲ್ಲಿ ಬೆಳೆಸಿದ ಮರಗಳನ್ನು ಸಾಮೂಹಿಕ ಹನನಕ್ಕೆ ಸಾರ್ವಜನಿಕರ ಅಭಿಪ್ರಾಯವನ್ನೂ ತೆಗೆದುಕೊಳ್ಳಬೇಕೆಂದು ನಿಯಮವೇ ಹೇಳುತ್ತದೆ. ಇಲ್ಲಿ ನಿಯಮಾವಳಿ ಪಾಲಿಸಿಲ್ಲ. ಮರಗಳ ಸಮಿತಿ(ಟ್ರೀ ಕಮಿಟಿ)ಯಲ್ಲಿ ಮೊದಲು ಸಾರ್ವಜನಿಕರೊಬ್ಬರು ಸದಸ್ಯರಿರುತ್ತಿದ್ದರು. ಅವರನ್ನು ತೆಗೆದುಹಾಕಲಾಗಿದೆ. ನಾಗರಿಕ ಕ್ರಿಯಾ ಯೋಜನೆ ರೂಪಿಸಬೇಕು. ಮರಗಳು ನಮ್ಮ ಪರಂಪರೆ. ಮರ ಸಂಸ್ಕೃತಿ ಉಳಿಸಬೇಕು ಎಂದು ಆಗ್ರಹಿಸಿದರು.

ಗಿಡಗಳ ಪೋಷಣೆ ನನ್ನದು: ಪರಿಸರ ಪ್ರೇಮಿ ಸಲೀಂ ಮಾತನಾಡಿ, ಹೈದರಾಲಿ ರಸ್ತೆಯನ್ನು ಅಗಲೀಕರಣ ಮಾಡುವ ಅಗತ್ಯ ಮತ್ತು ಅನಿವಾರ್ಯತೆಯೂ ಇರಲಿಲ್ಲ ಆದೂ ಮರಗಳನ್ನು ಕಡಿಯಲಾಗಿದೆ. ಮರಗಳನ್ನು ಕಡಿದ ಸ್ಥಳದಲ್ಲಿ ಗಿಡಗಳನ್ನು ನೆಟ್ಟರೆ ಅವುಗಳ ಸಂಪೂರ್ಣ ಪೋಷಣೆ ಜವಾಬ್ದಾರಿಯನ್ನು ನೋಡಿಕೊಳ್ಳುವುದಾಗಿ ತಿಳಿಸಿದರು.

ಟೀಂ ಮೈಸೂರ್‌ನ ರಾಮ್ ಪ್ರಸಾದ್, ಮನೋಹರ್, ಮೈಸೂರು ಗ್ರಾಹಕ ಪರಿಷತ್‌ನ ವಿಶ್ವನಾಥ್, ವಕೀಲ ತಿಮ್ಮಯ್ಯ, ಯಾದವಗಿರಿ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ಎಸ್.ಕೆ.ದಿನೇಶ್, ಪರಿಸರ ಬಳಗದ ಹೊರೆಯಾಲ ದೊರೆಸ್ವಾಮಿ, ಪ್ರೊ.ಕಾಳಚೆನ್ನೇಗೌಡ, ಲೀಲಾ ಶಿವಕುಮಾರ್, ಭಾಗ್ಯ ಶಂಕರ್, ಪ್ರಭಾ ನಂದೀಶ್, ಪಿಯುಸಿಎಲ್‌ನ ಮನ್ಸೂರ್ ಅಹಮದ್, ಕಮಲ್ ಗೋಪಿನಾಥ್, ಸಮಾಜ ರಕ್ಷಾ ಸೇನೆ ಸಿಂಧೂಹಳ್ಳಿ ಅಕ್ಬರ್, ಯುವ ಬ್ರಿಗೇಡ್‌ನ ಮಹೇಂದ್ರ ಯೂತ್ ಫಾರ್ ಸೇವಾ ಸಂಘಟನೆಯ ಉದೀತ್ ಗೌಡ, ಆರ್ಯವೈಶ್ಯ ಅಭಿವೃದ್ಧಿ ಸಮಿತಿ ದಿನೇಶ್, ಕನ್ನಡದ್ ಕನ್ನಡಿಯ ಗಣೇಶ್ ಪ್ರಸಾದ್, ಮೈಸೂರು ಹೃದಯವಂತ ಕನ್ನಡಿಗರ ಬಳಗ ಡಿ.ಪಿ.ಕೆ.ಪರಮೇಶ್, ಮೈಸೂರು ಮೀಮ್ಸ್‌ನ ರವಿಕೀರ್ತಿ, ಚೇತನ್ ಮತ್ತಿತರರಿದ್ದರು.

ಕೇಸ್ ಹಾಕಿ ಅಲೆದಾಡಿಸಬೇಕು...

ಮೈಸೂರು ಚೆನ್ನಾಗಿದ್ದರೆ ಮಾತ್ರವೇ ನಾವೆಲ್ಲರೂ ವ್ಯಾಪಾರ, ವ್ಯವಹಾರ ನಡೆಸಲು ಸಾಧ್ಯ. ಅಧಿಕಾರಿಗಳಲ್ಲಿ ಭಯ ಇಲ್ಲದಿರುವುದರಿಂದಲೇ ಮನಸೋ ಇಚ್ಛೆ ಮರಗಳನ್ನು ಕಡಿಯುತ್ತಿದ್ದಾರೆ. ಅಂತಹ ಅಧಿಕಾರಿಗಳ ವಿರುದ್ಧ ಕೇಸ್ ದಾಖಲಿಸಿ, ಕೋರ್ಟ್‌ಗೆ ಅಲೆದಾಡಿಸಬೇಕು. ಶಿಕ್ಷೆಗೆ ಗುರಿಪಡಿಸಬೇಕು. ಮೈಸೂರನ್ನು ಕಾಂಕ್ರೀಟ್ ನಗರವನ್ನಾಗಿಸಲು ಬಿಡಬಾರದು. ಈ ನಿಟ್ಟಿನಲ್ಲಿ ಒಗ್ಗಟ್ಟಿನ ಹೋರಾಟ ಅಗತ್ಯವಿದೆ.

- ಜಿ.ಎಸ್.ಪ್ರಶಾಂತ್, ಲೆಟ್ಸ್ ಡೂ ಇಟ್

ಅಧಿಕಾರಿಗಳೇ ಪರಿಸರ ವಿರೋಧಿಗಳು...!

ಸಂವಿಧಾನದ 51 ಎ ವಿಧಿಯ ಪ್ರಕಾರ ಪರಿಸರ ಉಳಿಸುವುದು ಪ್ರತಿಯೊಬ್ಬ ನಾಗರಿಕನ ಸಾಂವಿಧಾನಿಕ ಕರ್ತವ್ಯವಾಗಿದೆ. ಇಲ್ಲಿ ಅಧಿಕಾರಿಗಳೇ ಪರಿಸರ ವಿರೋಧಿ ಕೃತ್ಯದಲ್ಲಿ ತೊಡಗಿ ಕರ್ತವ್ಯ ಲೋಪ ಎಸಗಿದ್ದಾರೆ.

- ಸುಧೀರ್ ಒಂಬತ್ಕೆರೆ, ನಿವೃತ್ತ ಮೇಜರ್ ಜನರಲ್

ಕಠಿಣ ಹೋರಾಟದ ಅಗತ್ಯವಿದೆ...

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಕೆಲವೊಮ್ಮೆ ಕಠಿಣ ಹೋರಾಟದ ಅಗತ್ಯವಿದೆ. ಕಾನೂನು ಹೋರಾಟ ನಡೆಸಿ, ನ್ಯಾಯ ಪಡೆಯುವಷ್ಟರಲ್ಲಿ ಮರಗಳ ತಿಥಿಯೇ ಆಗಿರುತ್ತದೆ. ಕದ್ದುಮುಚ್ಚಿ ಮರ ಕಡಿಯುವುದರ ಜೊತೆಗೆ ನೆಟ್ಟ ಗಿಡಗಳನ್ನು ಕಿತ್ತು ಬಿಸಾಡುತ್ತಿದ್ದಾರೆ. ಆದ್ದರಿಂದ ಪ್ರತಿಭಟನೆ ಬಿಸಿ ಮುಟ್ಟಿಸಲೇಬೇಕು.

- ಗೋಕುಲ್ ಗೋವರ್ಧನ್, ಟೀಂ ಮೈಸೂರು

ಮನೆ ಲಾಕ್ ಮುರಿದು ಚಿನ್ನಾಭರಣ, ನಗದು ಕಳವು

ಮೈಸೂರು, ಏ.14(ಎಸ್‌ಬಿಡಿ)– ಬಾಲ್ಕನಿ ಬಾಗಿಲಿನ ಲಾಕ್ ಮುರಿದು ಮನೆಯಲ್ಲಿದ್ದ ಚಿನ್ನಾಭರಣ ಹಾಗೂ ನಗದನ್ನು ಕಳ್ಳತನ ಮಾಡಿರುವ ಘಟನೆ ಮೈಸೂರಿನ ದಟ್ಟಗಳ್ಳಿಯಲ್ಲಿ ನಡೆದಿದೆ.

ದಟ್ಟಗಳ್ಳಿ ಮೂರನೇ ಹಂತ, ಎ ಬ್ಲಾಕ್ ನಿವಾಸಿ, ಟೈಲರ್ ಬಿ.ಎಸ್.ಪುಟ್ಟತಾಯಮ್ಮ ಅವರ ಮನೆಗೆ ನುಗ್ಗಿರುವ ಖದೀಮರು, 40 ಸಾವಿರ ನಗದು, 6 ಗ್ರಾಂ ಚಿನ್ನದ ಸರ ಹಾಗೂ ಬೆಳ್ಳಿ ಪದಾರ್ಥ ಸೇರಿದಂತೆ 1.10 ಲಕ್ಷ ರೂ. ಮೌಲ್ಯದ ವಸ್ತುಗಳು ಮತ್ತು ಬ್ಯಾಂಕ್ ಬಾಂಡ್‌ಗಳನ್ನು ಕದ್ದೊಯ್ದಿದ್ದಾರೆ.

ಮಂಡ್ಯ ಜಿಲ್ಲೆ, ಬೋಳಾರೆ ಗ್ರಾಮದಲ್ಲಿ ಬಿ.ಎಸ್.ಪುಟ್ಟತಾಯಮ್ಮ ಅವರ ತಂದೆಯ ಕಾರ್ಯವಿದ್ದ ಕಾರಣ ಏ.10ರಂದು ಮನೆಯವರೆಲ್ಲರೂ ಹೋಗಿದ್ದರು. ಆ ವೇಳೆ ಮನೆಯ ಕೀಯನ್ನು ನೆರೆ ಮನೆಗೆ ಕೊಟ್ಟಿದ್ದರು. ಏ.13ರಂದು ಮಧ್ಯಾಹ್ನ ವಾಪಸ್ ಬಂದಾಗ ತಮ್ಮ ಬಳಿ ಇದ್ದ ಮತ್ತೊಂದು ಕೀಯಲ್ಲಿ ಬೀಗ ತೆಗೆದು ಒಳಹೋದಾಗ ದೇವರ ಕೋಣೆಯಲ್ಲಿದ್ದ ಬೆಳ್ಳಿ ಪದಾರ್ಥಗಳು ಇರಲಿಲ್ಲ. ಗಾಬರಿಯಿಂದ ಕೊಠಡಿಗೆ ಹೋಗಿ ಪರಿಶೀಲಿಸಿದಾಗ ಬೀರುವಿನ ಲಾಕ್ ಮುರಿದಿತ್ತು. ಅದರಲ್ಲಿದ್ದ ನಗದು 40 ಸಾವಿರ ರೂ. 6 ಗ್ರಾಂ ಚಿನ್ನದ ಸರ ಹಾಗೂ ಬ್ಯಾಂಕ್ ಬಾಂಡ್‌ಗಳು ಇರಲಿಲ್ಲ. ಎಲ್ಲಾ ಕಡೆ ನೋಡುವಾಗ ಬಾಲ್ಕನಿ ಬಾಗಿಲಿನ ಲಾಕ್ ಮುರಿದಿತ್ತು.

ಈ ಸಂಬಂಧ ಪುಟ್ಟತಾಯಮ್ಮ ನೀಡಿದ ದೂರಿನನ್ವಯ ಕುವೆಂಪುನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಗಾಂಧಿನಗರದಿಂದ ಪುರಭವನದವರೆಗೆ ವಿಶ್ವ ಜ್ಞಾನಿಯ ಸ್ತಬ್ಧಚಿತ್ರ ಮೆರವಣಿಗೆ



ಮೈಸೂರು, ಏ.14(ಆರ್‌ಕೆ)–ಸಂವಿಧಾನ ಶಿಲ್ಪಿ ಡಾ. ಬಿ.ಆರ್.ಅಂಬೇಡ್ಕರ್ ಅವರ 134ನೇ ಜನ್ಮದಿನದ ಅಂಗವಾಗಿ ಮೈಸೂರಿನ ಗಾಂಧಿನಗರದಿಂದ ಪುರಭವನದವರೆಗೆ ವಿಶ್ವಜ್ಞಾನಿಯ ಜೀವನ ಚರಿತ್ರೆ ಸಾರುವ ಸ್ತಬ್ಧ ಚಿತ್ರದ ಭವ್ಯ ಮೆರವಣಿಗೆ ಇಂದು ನಡೆಯಿತು.

ಗಾಂಧಿನಗರದ ಪಾರ್ಕ್ ಬಳಿ ಆರಂಭವಾದ ಮೆರವಣಿಗೆಯು, ಪ್ರಮುಖ ರಸ್ತೆಗಳಲ್ಲಿ ಸಾಗಿ ಎನ್.ಆರ್.ಮೊಹಲ್ಲಾದ ಮಾರುತಿ ಸರ್ಕಲ್ ತಲುಪಿದಾಗ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಸ್ತಬ್ಧಚಿತ್ರದ ಡಾ. ಬಿ.ಆರ್.ಅಂಬೇಡ್ಕರ್ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿದರು.

ಎನ್.ಆರ್.ಮೊಹಲ್ಲಾದ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ಮೂಲಕ ಎಫ್‌ಟಿಎಸ್ ಸರ್ಕಲ್‌ಗೆ ತೆರಳಿ ಅಲ್ಲಿನ ಡಾ. ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಬಲೂನುಗಳನ್ನು ಹಾರಿಸಿ, ಪಟಾಕಿ ಸಿಡಿಸಿದ ಗಾಂಧಿ ನಗರ ನಾಗರಿಕ ಹಿತ ರಕ್ಷಣಾ ಸಮಿತಿ ಸಿಹಿ ಹಂಚಿ ಸಂಭ್ರಮಿಸಿದರು. ಅದೇ ವೇಳೆ ಶಾಸಕ ಟಿ.ಎಸ್.ಶ್ರೀವತ್ಸ ಅವರು ಬಾಬಾ ಸಾಹೇಬ್ ಡಾ. ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು.

ನಂತರ ಅಶೋಕ ರಸ್ತೆ ಮೂಲಕ ಸಾಗಿದ ಮೆರವಣಿಗೆಯು ಮಧ್ಯಾಹ್ನ ಪುರಭವನದ ಬಳಿ ಅಂತ್ಯಗೊಂಡಿತು. ಈ ವೇಳೆ ಮಾಜಿ ಸಂಸದ ಪ್ರತಾಪ್ ಸಿಂಹ ಅವರು ಮೆರವಣಿಗೆಯಲ್ಲಿ ಭಾಗವಹಿಸಿದರು.

ಗಾಂಧಿನಗರ ನಾಗರಿಕ ಹಿತ ರಕ್ಷಣಾ ಸಮಿತಿ ಅಧ್ಯಕ್ಷ ಶರತ್, ಪದಾಧಿಕಾರಿಗಳಾದ ಸುರೇಶ್, ದೇವರಾಜ್, ವಿಜಯ್, ಶರಣ್, ರಾಜು, ಮಂಜುನಾಥ್, ಕುಮಾರ್, ಮುರಳಿ, ಸೋಮಣ್ಣ ಅಶೋಕ್ ಸೇರಿದಂತೆ ಸಾವಿರಾರು ಮಂದಿ ಮೆರವಣಿಗೆಯಲ್ಲಿ ಭಾಗವಹಿಸಿದ್ದರು.

ವಧುವರರ ಸಮಾವೇಶ

ಮೈಸೂರು, ಏ. 14– ಜೆಎಸ್‌ಎಸ್ ವಿವಾಹ ವೇದಿಕೆಯ ಆಶ್ರಯದಲ್ಲಿ ಏ. 20ರ ಬೆಳಗ್ಗೆ 10 ರಿಂದ ಮಧ್ಯಾಹ್ನ 1 ರವರೆಗೆ ಜೆಎಸ್‌ಎಸ್ ಆಸ್ಪತ್ರೆ ಆವರಣದಲ್ಲಿರುವ ಶ್ರೀ ಶಿವರಾತ್ರಿ ರಾಜೇಂದ್ರ ಭವನದ ಸಭಾಂಗಣದಲ್ಲಿ ವಧುವರರ ಸಮಾವೇಶ ಏರ್ಪಡಿಸಲಾಗಿದೆ. ಜೆಎಸ್‌ಎಸ್ ವಿವಾಹ ವೇದಿಕೆಯಲ್ಲಿ ನೋಂದಾಯಿಸಿಕೊಂಡವರಿಗೆ ಮಾತ್ರ ಪ್ರವೇಶವಿರುತ್ತದೆ. ಈವರೆಗೆ ನೋಂದಾಯಿಸಿಕೊಂಡಿಲ್ಲದವರು ವಧುವರರ ಸಮಾವೇಶದ ದಿನದಂದು ಕೂಡ ನೊಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗೆ ದೂ. 0821–2430322, ಮೊ. 8310121328 ಸಂಪರ್ಕಿಸಬಹುದು.

ಒಡನಾಡಿಯಲ್ಲಿ ಅಂಬೇಡ್ಕರ್ ಜಯಂತಿ



ಮೈಸೂರಿನ ಒಡನಾಡಿ ಸೇವಾ ಸಂಸ್ಥೆಯ 'ಮಡಿಲು' ಹಾಗೂ 'ಒಡಲು' ಪುನರ್ವಸತಿ ಕೇಂದ್ರಗಳಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ 134ನೇ ಜನ್ಮ ಜಯಂತಿ ಆಚರಿಸಲಾಯಿತು.

ಮೈಸೂರು, ಏ.14– ಮೈಸೂರಿನ ಒಡನಾಡಿ ಸೇವಾ ಸಂಸ್ಥೆಯ 'ಮಡಿಲು' ಹಾಗೂ 'ಒಡಲು' ಪುನರ್ವಸತಿ ಕೇಂದ್ರಗಳಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ 134ನೇ ಜನ್ಮ ಜಯಂತಿ ಆಚರಿಸಲಾಯಿತು.

ಡಾ.ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮೂಲಕ ನಮನ ಸಲ್ಲಿಸಿ ಮಾತನಾಡಿದ ಸಂಸ್ಥೆಯ ನಿರ್ದೇಶಕ ಪರಶುರಾಮ್, ಅಂಬೇಡ್ಕರ್ ಅವರು ಅಸ್ಪೃಶ್ಯತೆ ನಿವಾರಣೆ ಹಾಗೂ ಸಾಮಾಜಿಕ ಸಮಾನತೆಗಾಗಿ ಹೋರಾಡಿದ ಮಹಾನ್ ವ್ಯಕ್ತಿ. ಮಾನವೀಯ ಮಮಕಾರದೊಡನೆ ಬದುಕಿನುದ್ದಕ್ಕೂ ಶೋಷಿತರ ಒಳಿತಿಗಾಗಿ ಮಿಡಿದವರು. ಎಲ್ಲರಂತೆ ಗೌರವದ ಬದುಕು ರೂಪಿಸಿ ಕೊಡಲು ಶ್ರಮಿಸಿದವರು. ಎಲ್ಲರಿಗೂ ಈ ಮಣ್ಣಿನಿಂದ ಸಮಾನತೆಯ ಹೂ ಅರಳಿಸಿದವರು ಎಂದು ಬಣ್ಣಿಸಿದರು.


ಸಮ–ಸಮಾಜದ ನಿರ್ಮಾಣದ ಕನಸನ್ನ ಕಂಡಿದ್ದ ಡಾ.ಬಿ.ಆರ್.ಅಂಬೇಡ್ಕರ್ ಅವರು, ಅಸಮಾನತೆ, ಶೋಷಣೆ ವಿರುದ್ಧ ನಿಂತು ಅನಿಷ್ಟ ಪದ್ಧತಿಗಳನ್ನು ಹೋಗಲಾಡಿಸುವಲ್ಲಿ ಶ್ರಮಿಸಿದ್ದಾರೆ. ಆದರೆ ಇತ್ತೀಚಿನ ದಿನಗಳಲ್ಲಿ ಮುಂದುವರೆದ ಜನರೂ ತಮ್ಮನ್ನು ಶೋಷಿತ ಸಮುದಾಯದವರೆಂದು ಹೇಳಿಕೊಳ್ಳುತ್ತಿರುವುದು ವಿಷಾದನೀಯ. ವಿಚಾರವಂತರಾಗಿದ್ದ ಅಂಬೇಡ್ಕರ್ ಅವರನ್ನು ಅರಿತುಕೊಂಡು ಅವರ ಆಶಯಗಳನ್ನು ಅನುಸರಿಸುವ ಪ್ರಯತ್ನ ಮಾಡಬೇಕು. ನೊಂದವರ, ಅಶಕ್ತರ ಧ್ವನಿಯಾಗಿ ನೀವೆಲ್ಲರೂ ಅಂಬೇಡ್ಕರ್ ಹಾದಿಯಲ್ಲಿ ಸಾಗಬೇಕು ಎಂದು ಮಕ್ಕಳಿಗೆ ತಿಳಿ ಹೇಳಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಸಹಭಾಗಿಗಳು, ಮಹಿಳೆಯರು ಮತ್ತು ಮಕ್ಕಳು ಹಾಜರಿದ್ದರು.

ಉನ್ನತ ಶ್ರೇಣಿಯಲ್ಲಿ ತೇರ್ಗಡೆ



ಮೈಸೂರು, ಏ.14–ಮೈಸೂರಿನ ರೂಪಾ ನಗರದಲ್ಲಿರುವ ದೀಪಾ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿ ಎಂ.ಎಸ್.ನಯನ್‌ಗೌಡ ದ್ವಿತೀಯ ಪಿಯುಸಿಯಲ್ಲಿ 494 ಅಂಕ ಗಳಿಸಿ ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ಈತ ಜನತಾ ನಗರದ ಎಂ.ಎಸ್.ಸಂದೀಪ್ ಬಾಬು, ಎಂ.ಸಿ.ಸರಳಾ ದಂಪತಿ ಪುತ್ರ

ಪಂಚಕರ್ಮ ಆಸ್ಪತ್ರೆಯಲ್ಲಿ ಡಾ.ಅಂಬೇಡ್ಕರ್ ಜಯಂತಿ...



ಮೈಸೂರಿನ ಸರ್ಕಾರಿ ಆಯುರ್ವೇದ ಹೈ–ಟೆಕ್ ಪಂಚಕರ್ಮ ಆಸ್ಪತ್ರೆಯಲ್ಲಿ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ 134ನೇ ಜಯಂತಿಯನ್ನು ಆಚರಿಸಲಾಯಿತು. ಮೈಸೂರು ಮಹಾನಗರ ಪಾಲಿಕೆ ಮಾಜಿ ಸದಸ್ಯ ಎಸ್‌ಬಿಎಂ ಮಂಜು ಮುಖ್ಯ ಅತಿಥಿಯಾಗಿ ಭಾಗವಹಿಸಿ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು. ಈ ವೇಳೆ ಪಂಚ ಕರ್ಮ ಆಸ್ಪತ್ರೆಯ ಮುಖ್ಯಸ್ಥೆ ಡಾ.ವಾಣಿಶ್ರೀ, ಡಾ.ಸುಕೇಶ್, ಡಾ.ರೂಪ, ಅಧಿಕಾರಿ ವರ್ಗದ ಚಂದ್ರಶೇಖರ್, ಶಿವರಾಜ್, ನಾಗೇಂದ್ರ ಮತ್ತಿತರರು ಉಪಸ್ಥಿತರಿದ್ದರು.

ಶಿಕ್ಷಣದಲ್ಲಿ ಮಕ್ಕಳಿಗೆ ದೊರಕದ ಬದುಕುವ ಕಲೆ

ರಂಗಾಯಣ ಚಿಣ್ಣರ ಮೇಳಕ್ಕೆ ಚಾಲನೆ ನೀಡಿ ವನ್ಯಜೀವಿ ತಜ್ಞ ಕೃಪಾಕರ ಬೇಸರ

ಮೈಸೂರು,ಏ.14(ಪಿಎಂ)– ನಮ್ಮ ಸಮಾಜದಲ್ಲಿ ಅಗತ್ಯವಾಗಿ ಬೇಕಾಗಿರುವ ಬದುಕುವ ಕಲೆ ಶಿಕ್ಷಣದಲ್ಲಿ ಮಕ್ಕಳಿಗೆ ದೊರೆಯದಾಗಿದೆ ಎಂದು ವನ್ಯಜೀವಿ ತಜ್ಞ ಕೃಪಾಕರ ಬೇಸರ ವ್ಯಕ್ತಪಡಿಸಿದರು.

ಮೈಸೂರಿನ ರಂಗಾಯಣದ ವನರಂಗದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಸಮಾರಂಭದಲ್ಲಿ ಮೇ 10ರವರೆಗೆ ರಂಗಾಯಣದಿಂದ ಆಯೋಜಿಸಿರುವ ಚಿಣ್ಣರ ಮೇಳ–2025 ಅನ್ನು ಡಾ.ಬಿ.ಆರ್.ಅಂಬೇಡ್ಕರ್ ಅವರ ಜಯಂತಿ ಪ್ರಯುಕ್ತ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಪ್ರಸ್ತುತ ಇಡೀ ನಮ್ಮ ಶಿಕ್ಷಣ ಪದ್ಧತಿಯಲ್ಲಿ ಸೂಕ್ಷ್ಮತೆ ಮತ್ತು ಸಂವೇದನಾಶೀಲತೆ ಕಡಿಮೆಯಾಗುತ್ತಿದೆ ಎನ್ನಿಸುತ್ತದೆ. ಎಲ್‌ಕೆಜಿಯಿಂದಲೇ ಕೂಲಿ ಕೆಲಸ ಮಾಡುವವರಂತೆ ಬೆನ್ನಿನ ಮೇಲೆ ಲೆಕ್ಕವೇ ಇಲ್ಲದಷ್ಟು ಪುಸ್ತಕಗಳನ್ನು ಹೊತ್ತುಕೊಳ್ಳುವ ಪರಿಸ್ಥಿತಿಗೆ ಮಕ್ಕಳನ್ನು ದೂಡಲಾಗಿದೆ. ಆ ಮಕ್ಕಳ ವಯಸ್ಸಿಗೆ ಇದು ಬಹಳ ಹೊರೆ. ಆ ವಯಸ್ಸಿನಲ್ಲಿ ಅವರ ಮೆದುಳು ಅಷ್ಟರ ಮಟ್ಟಿಗೆ ಅಭಿವೃದ್ಧಿ ಹೊಂದಿರುವುದಿಲ್ಲ ಎಂದರು.

ಇಂತಹ ಶಿಕ್ಷಣದ ವ್ಯವಸ್ಥೆಯಿಂದ ಉರು ಹೊಡೆದು ಉತ್ತರ ಬರೆಯಬೇಕು ಅಷ್ಟೆ, ಇದರಿಂದ ಮತ್ತೇನೂ ಸಾಧ್ಯವಿಲ್ಲ. ಈ ರೀತಿಯ ಚಟುವಟಿಕೆ ವ್ಯರ್ಥ. ಜಪಾನ್‌ನಲ್ಲಿ ಶಿಕ್ಷಣ ವ್ಯವಸ್ಥೆಯಲ್ಲಿ 10 ವರ್ಷಗಳವರೆಗೆ ಪಠ್ಯ ಚಟುವಟಿಕೆ ಇರುವುದಿಲ್ಲ. ಅದಾಗ್ಯೂ ಆ ದೇಶ ವೇನೂ ಹಿಂದುಳಿದಿಲ್ಲ. ದೇಶಾಭಿಮಾನ, ಪ್ರತಿಭೆ, ಸಾಧನೆ ಸೇರಿದಂತೆ ಎಲ್ಲಾ ವಿಚಾರದಲ್ಲೂ ಅವರು ನಮ್ಮಗಿಂತ ಬಹಳ ಮುಂದಿದ್ದಾರೆ ಎಂದು ತಿಳಿಸಿದರು.

ಜರ್ಮನಿ ಹಾಗೂ ಯುರೋಪ್ ದೇಶಗಳಲ್ಲೂ ಶಾಲೆ ಆವರಣ, ಶೌಚಾಲಯ ಸೇರಿದಂತೆ ಸುತ್ತಮುತ್ತಲ ವಾತಾವರಣವನ್ನು ಸ್ವಚ್ಛವಾಗಿ ಇಟ್ಟುಕೊಳ್ಳುವ ಬಗ್ಗೆ ಪ್ರಾಥಮಿಕ ಹಂತದಲ್ಲೇ ಮಕ್ಕಳಿಗೆ ಹೇಳಿಕೊಡಲಾಗುತ್ತದೆ. ಸಾಮಾಜೀಕರಣ, ಹೊಣೆಗಾರಿಕೆಯಂತಹ ಮಹತ್ತರ ವಿಚಾರಗಳನ್ನು ಅಲ್ಲಿ ಮಕ್ಕಳಿಗೆ ತಿಳಿಸಿಕೊಡಲಾಗುತ್ತದೆ. ಜರ್ಮನಿಯಲ್ಲಿ ಮಕ್ಕಳನ್ನು ಕರೆದುಕೊಂಡು ಹೋಗಿ ಸಿಗ್ನಲ್‌ನಲ್ಲಿ ರಸ್ತೆ ದಾಟುವ ಬಗ್ಗೆ ಶಿಕ್ಷಣ ನೀಡಲಾಗುತ್ತದೆ. ಯಾವ್ಯಾವ ಸಿಗ್ನಲ್ ಏನು ಸೂಚಿಸುತ್ತವೆ ಎಂಬ ಬಗ್ಗೆಯೇ ಒಂದು ಪಾಠವಿದೆ. ಇದು ಬದುಕಿಗೆ ಸಂಬಂಧಿಸಿದ್ದನ್ನು ನೇರವಾಗಿ ಕಲಿಸುವ ವಿಧಾನ ಎಂದರು.



ಮೈಸೂರಿನ ರಂಗಾಯಣದಲ್ಲಿ ಸೋಮವಾರ ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಚಿಣ್ಣರ ಮೇಳಕ್ಕೆ ಚಾಲನೆ ನೀಡಲಾಯಿತು.

ಇಂದು ಸೋಷಿಯಲ್ ಮೀಡಿಯಾಗಳಾದ ವಾಟ್ಸಪ್, ಇನ್ಸ್ಟಾಗ್ರಾಂ ಮೊದಲಾದವುಗಳಲ್ಲಿ ಜನ ಕಳೆದು ಹೋಗುತ್ತಿದ್ದಾರೆ. ಅವರಿಗೆ ತಾವು ಎಲ್ಲಿದ್ದೇವೆ? ಏನು ಮಾಡುತ್ತಿದ್ದೇವೆ? ಎಂಬ ಪರಿವೇ ಇಲ್ಲವಾಗುತ್ತಿದೆ. ಜೊತೆಗೆ ಮಕ್ಕಳನ್ನು ಬುದ್ಧಿವಂತರು ಮತ್ತು ದಡ್ಡರು ಎಂದು ವಿಂಗಡಿಸುವುದೇ ಸರಿಯಲ್ಲ. ಮುಂದುವರೆದ ದೇಶಗಳಲ್ಲಿ ಶಿಕ್ಷಕರು, ಯಾವ್ಯಾವ ಮಕ್ಕಳಿಗೆ ಯಾವುದರಲ್ಲಿ ಆಸಕ್ತಿ ಇದೆಯೆಂದು ಗುರುತಿಸಿ, ಆ ದಿಕ್ಕಿನಲ್ಲಿ ಮುಂದುವರೆಸುತ್ತಾರೆ. ಆದರೆ ನಮ್ಮಲ್ಲಿ ಕೇವಲ ಉದ್ಯೋಗ ಹೊಂದಬೇಕು ಎಂಬುದೊಂದೇ ಶಿಕ್ಷಣದ ಗುರಿಯಾಗುತ್ತಿದೆ. ಆ ಮೂಲಕ ನಾವು ಒಂದು ರೀತಿಯಲ್ಲಿ ಕ್ವಾಲಿಫೈಡ್ (ಅರ್ಹತೆ ಪಡೆದ) ಕಾರ್ಮಿಕರನ್ನು ತಯಾರು ಮಾಡುತ್ತಿದ್ದೇವೆ ಎಂದು ವಿಷಾದಿಸಿದರು.

ರಂಗಾಯಣದಲ್ಲಿ ನಡೆಯುವ ಚಿಣ್ಣರ ಮೇಳದಲ್ಲಿ 350ಕ್ಕೂ ಹೆಚ್ಚು ಮಕ್ಕಳು ಪಾಲ್ಗೊಂಡಿದ್ದು, ಪ್ರತಿದಿನ ಬೆಳಗ್ಗೆ 10ರಿಂದ ಸಂಜೆ 5ರವರೆಗೆ ವಿವಿಧ ಚಟುವಟಿಕೆಗಳಲ್ಲಿ ಮಕ್ಕಳು ಭಾಗಿಯಾಗಲಿದ್ದಾರೆ. ಪರಿಸರ ತಜ್ಞ ಕೆ.ಮನು, ಕರ್ನಾಟಕ ನಾಟಕ ಅಕಾಡೆಮಿ ಸದಸ್ಯೆ ಡಾ.ಎಂ.ಎ.ಜಾಹಿದಾ, ಶಿಬಿರದ ನಿರ್ದೇಶಕ ಅನಿಲ ರೇವೂರ, ರಂಗ ಸಮಾಜದ ಸದಸ್ಯ ಸುರೇಶ್‌ಬಾಬು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್.ಮಲ್ಲಿಕಾರ್ಜುನ ಸ್ವಾಮಿ, ರಂಗಾಯಣ ನಿರ್ದೇಶಕ ಸತೀಶ್ ತಿಪಟೂರು, ಉಪನಿರ್ದೇಶಕ ಡಾ.ಎಂ.ಡಿ.ಸುದರ್ಶನ್, ಮುಖಂಡ ಅಹಿಂದ ಜವರಪ್ಪ, ಚಿಣ್ಣರ ಮೇಳದ ಸಮನ್ವಯಕಾರ ಅರಸೀಕೆರೆ ಯೋಗಾನಂದ ಮತ್ತಿತರರು ಹಾಜರಿದ್ದರು.

ಸಲಗ ಪಳಗಿಸುವ ಪೋರನದ್ದೇ ನೈಜ ಪ್ರತಿಭೆ

ನಮ್ಮಲ್ಲಿ ಬಹುತೇಕ ಪೋಷಕರು ತಮ್ಮ ಮಕ್ಕಳು ಮೊಬೈಲ್ ಫೋನ್ ಆಪರೇಟ್ ಮಾಡುವುದನ್ನೇ ಬುದ್ಧಿವಂತಿಕೆ ಎನ್ನುತ್ತಾರೆ. ಅದೊಂದು ಸಣ್ಣ ಸಾಧನ. ಯಾರೂ ಬೇಕಾದರು ಅದರ ಆಪರೇಟ್ ಕಲಿಯಬಹುದು. ಮದುಮಲೈ ಮತ್ತು ಬಂಡೀಪುರ ಕಾಡಿನಲ್ಲಿ ದೊಡ್ಡ ಸಲಗವನ್ನು ಬುಡಕಟ್ಟು ಸಮುದಾಯದ 8 ವರ್ಷದ ಹುಡುಗ ಪಳಗಿಸುತ್ತಾನೆ. ನಿಜಕ್ಕೂ, ಇದನ್ನು ಕೌಶಲ್ಯ ಹಾಗೂ ಪ್ರತಿಭೆ ಎನ್ನಬಹುದು.

-ಕೃಪಾಕರ

ಸಮಾಜ ಸುಧಾರಕ, ದಲಿತರ ಹಕ್ಕುಗಳ ರಕ್ಷಕ ಡಾ.ಅಂಬೇಡ್ಕರ್

ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ಸಂಘದ ಅಧ್ಯಕ್ಷ ಕರೋಹಟ್ಟಿ ಮಹದೇವಯ್ಯ



ಡಾ.ಬಿ.ಆರ್.ಅಂಬೇಡ್ಕರ್ ಜಯಂತಿಯನ್ನು ತಹಸೀಲ್ದಾರ್ ಟಿ.ಜೆ.ಸುರೇಶಾಚಾರ್ ಉದ್ಘಾಟಿಸಿದರು.

ತಿ.ನರಸೀಪುರ, ಏ.14– ಡಾ.ಭೀಮರಾವ್ ಅಂಬೇಡ್ಕರ್ ಅವರು ಭಾರತೀಯ ಸಂವಿಧಾನದ ಶಿಲ್ಪಿ, ಮಹಾನ್ ಸಮಾಜ ಸುಧಾರಕ ಮತ್ತು ದಲಿತರ ಹಕ್ಕುಗಳ ರಕ್ಷಕ. ಅವರು ತಮ್ಮ ಜೀವನದ ಉದ್ದಕ್ಕೂ ಜಾತಿವಾದ, ತಾರತಮ್ಯ ಮತ್ತು ಸಾಮಾಜಿಕ ಅನ್ಯಾಯದ ವಿರುದ್ಧ ಹೋರಾಡಿದರು. ಅಲ್ಲದೇ ಎಲ್ಲಾ ನಾಗರಿಕರಿಗೂ ಸಮಾನ ಹಕ್ಕುಗಳನ್ನು ನೀಡಲು ಸಂವಿಧಾನಕ್ಕೆ ಮಹತ್ವದ ಕೊಡುಗೆ ನೀಡಿದರು ಎಂದು ತಾಲೂಕು ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ಸಂಘದ ಅಧ್ಯಕ್ಷ ಕರೋಹಟ್ಟಿ ಮಹದೇವಯ್ಯ ತಿಳಿಸಿದರು.

ತಾಲೂಕು ಆಡಳಿತ, ತಾಪಂ, ಪುರಸಭೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಯೋಗದೊಂದಿಗೆ ಪಟ್ಟಣದ ತಾಪಂ ಸಭಾಂಗಣದಲ್ಲಿ ನಡೆದ ಡಾ.ಬಿ.ಆರ್.ಅಂಬೇಡ್ಕರ್ ಅವರ 134ನೇ ಜಯಂತಿಯಲ್ಲಿ ಮಾತನಾಡಿದ ಅವರು, ಸಮಾಜದಲ್ಲಿ ಶಿಕ್ಷಣ, ಸಮಾನತೆ ಮತ್ತು ಮಾನವ ಹಕ್ಕುಗಳನ್ನು ಸ್ಥಾಪಿಸುವ ನಿಟ್ಟಿನಲ್ಲಿ ಡಾ.ಅಂಬೇಡ್ಕರ್ ಅನೇಕ ಪ್ರಮುಖ ನಿರ್ಧಾರ ತೆಗೆದುಕೊಂಡರು. ಅಂಬೇಡ್ಕರ್ ಜಯಂತಿ ಅವರ ಆದರ್ಶ ಮತ್ತು ಆಲೋಚನೆಗಳನ್ನು ಅಳವಡಿಸಿಕೊಳ್ಳುವ ಮೂಲಕ ಸಮಾನ ಮತ್ತು ನ್ಯಾಯಯುತ ಸಮಾಜದತ್ತ ಸಾಗಲು ನಮಗೆ ಸ್ಫೂರ್ತಿ ನೀಡುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ತಹಸೀಲ್ದಾರ್ ಟಿ.ಜೆ.ಸುರೇಶಾಚಾರ್, ಅಂಬೇಡ್ಕರ್ ದೇಶಕ್ಕೆ ಸಂವಿಧಾನ ರೂಪಿಸುವ ಮೂಲಕ ಪ್ರತಿ ಸಮುದಾಯಕ್ಕೂ ಹಕ್ಕು ಮತ್ತು ಸ್ವಾತಂತ್ರ್ಯ ನೀಡಿ ಪ್ರಜಾಪ್ರಭುತ್ವ ವ್ಯವಸ್ಥೆಯ ಮೂಲಕ ಸಮ ಸಮಾಜ ನಿರ್ಮಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು ಎಂದರು.

ಅಂಬೇಡ್ಕರ್ ಸಾಮಾಜಿಕ ಅಸಮಾನತೆ, ಜಾತಿ ಪದ್ಧತಿ, ನಿರುದ್ಯೋಗ, ಬಡತನ ಹೋಗಲಾಡಿಸಲು ಬಹಳಷ್ಟು ಶ್ರಮಿಸಿದ್ದಾರೆ. ಅಂಬೇಡ್ಕರ್ ಕೇವಲ ವ್ಯಕ್ತಿಯಲ್ಲ. ಪ್ರತಿಯೊಬ್ಬರಿಗೂ ಬಹುದೊಡ್ಡ ಶಕ್ತಿಯಾಗಿದ್ದಾರೆ. ವಿಶ್ವದ ಭವ್ಯ ಭವಿಷ್ಯಕ್ಕಾಗಿ ತಮ್ಮನ್ನು ತಾವು ಸಮರ್ಪಿಸಿಕೊಂಡು ಉರಿಯುವ ಕರ್ಪೂರದಂತೆ ಬೆಳಗಿದ ಅಂಬೇಡ್ಕರ್ ಅವರ ವಿಚಾರಧಾರೆಗಳನ್ನು ಇಂದಿನ ಸಮಾಜಕ್ಕೆ ತಲುಪಿಸುವ ಕೆಲಸ ಮಾಡಬೇಕಿದೆ. ಮೂಢನಂಬಿಕೆ, ಕಂದಾಚಾರ ದೇಶದ ಪ್ರಗತಿಯನ್ನು ಹಿಂದಕ್ಕೆ ತಳ್ಳುತ್ತಿರುವುದು ವಿಪರ್ಯಾಸ. ಮಹಾತ್ಮರ ವಿಚಾರಗಳನ್ನು ಆಚರಣೆಗೆ ತರುವ ಮೂಲಕ ಅವರ ಕನಸಿನ ಭಾರತ ಕಟ್ಟಬೇಕಾಗಿದೆ ಎಂದರು.

ಮುಖ್ಯ ಭಾಷಣ ಮಾಡಿದ ವಕೀಲ ಬಿ.ಆರ್.ರಂಗಸ್ವಾಮಿ, ಅಸ್ಪೃಶ್ಯತೆಯ ಜೊತೆಗೆ ಜಾತಿ ವ್ಯವಸ್ಥೆ ನಿರ್ಮೂಲನೆಗೂ ಬಾಬಾ ಸಾಹೇಬರು ಕೊಡುಗೆ ನೀಡಿದರು. ಅವರ ಸಾಟಿಯಿಲ್ಲದ ಕೆಲಸ ಮತ್ತು ದಲಿತ ಬೌದ್ಧ ಚಳವಳಿ ಪ್ರಾರಂಭಕ್ಕಾಗಿ ಇಡೀ ದೇಶ ಅವರನ್ನು ನೆನಪಿಸಿಕೊಳ್ಳುತ್ತದೆ. ಸಂವಿಧಾನ ಶಿಲ್ಪಿಯಾಗಿ ದೇಶದ ಕಾನೂನು ಸಚಿವರಾಗಿದ್ದ ಅವರ ಅತ್ಯುನ್ನತ ಸಾಧನೆಗಾಗಿ 1990ರಲ್ಲಿ ಭಾರತ ರತ್ನ ಪ್ರಶಸ್ತಿ ನೀಡಲಾಯಿತು ಎಂದರು.

ಡಾ.ಬಿ.ಆರ್.ಅಂಬೇಡ್ಕರ್ ಭಾರತದ ಹೆಮ್ಮೆಯ ಪುತ್ರ. ದೇಶ ಕಂಡ ಶ್ರೇಷ್ಠ ನಾಯಕರಲ್ಲಿ ಅಂಬೇಡ್ಕರ್ ಅವರು ಕೂಡಾ ಪ್ರಮುಖರು. ಅಂಬೇಡ್ಕರ್ ಅವರ ವಿಚಾರಧಾರೆಗಳು ಇಂದಿಗೂ ಪ್ರಸ್ತುತವಾಗಿವೆ. ಅವರ ತತ್ವ ಆದರ್ಶಗಳು ಸುಂದರ ಸಮಾಜ ನಿರ್ಮಿಸುವಂತಿವೆ ಎಂದರು.

ಕಾರ್ಯಕ್ರಮದಲ್ಲಿ ಪುರಸಭಾಧ್ಯಕ್ಷೆ ವಸಂತ ಶ್ರೀಕಂಠ, ಸಾಮಾಜಿಕ ಸ್ಥಾಯಿ ಸಮಿತಿ ಅಧ್ಯಕ್ಷ ಸಿ.ಪ್ರಕಾಶ್, ಪುರಸಭಾ ಮಾಜಿ ಅಧ್ಯಕ್ಷರಾದ ಟಿ.ಎಂ.ನಂಜುಂಡಸ್ವಾಮಿ, ಎನ್.ಸೋಮು, ಸದಸ್ಯ ಮಂಜು ಬಾದಾಮಿ, ಜಿಪಂ ಮಾಜಿ ಅಧ್ಯಕ್ಷ ಸಿದ್ಧಾರ್ಥ, ಮಾಜಿ ಸದಸ್ಯ ಹೊನ್ನನಾಯಕ, ಎಸ್ಸಿ ಎಸ್ಟಿ ಹಿತರಕ್ಷಣ ಸಮಿತಿ ಸದಸ್ಯ ಮಹದೇವಸ್ವಾಮಿ, ತಾಪಂ ಮಾಜಿ ಉಪಾಧ್ಯಕ್ಷ ಬಿ.ಮರಯ್ಯ, ತಾಲೂಕು ಕುರುಬರ ಸಂಘದ ಅಧ್ಯಕ್ಷ ಮನ್ನೇಹುಂಡಿ ಮಹೇಶ್, ಬಾಬೂಜಿ ಸಂಘದ ಅಧ್ಯಕ್ಷ ಪುಟ್ಟಯ್ಯ, ಮಾಜಿ ಅಧ್ಯಕ್ಷರಾದ ಶಂಕರ್, ಸಿದ್ದರಾಜು, ತಾಪಂ ಮಾಜಿ ಅಧ್ಯಕ್ಷರಾದ ಕುಕ್ಕೂರು ಗಣೇಶ್, ರಾಮಲಿಂಗಯ್ಯ, ಸೋಸಲೆ ಶಶಿಕಾಂತ್, ಶಿವಕುಮಾರ್ (ಬಡ್ಡು), ನಂಜುಂಡಯ್ಯ, ರಾಜಶೇಖರ್, ಕಿಸಾನ್ ಸಂಘದ ಅಧ್ಯಕ್ಷ ಶಿವಕುಮಾರ್, ಡಿಎಸ್‌ಎಸ್ ರಾಜು, ಮರಿಸ್ವಾಮಿ, ರಜನಿ, ಮಹದೇವಮ್ಮ, ಬಿಇಓ ಶಿವಮೂರ್ತಿ, ಸಮಾಜ ಕಲ್ಯಾಣಾಧಿಕಾರಿ ಸಿದ್ದಲಿಂಗು, ಸಿಪಿಐ ಧನಂಜಯ, ಎಇಇಗಳಾದ ವೀರೇಶ್, ಸತೀಶ್ ಚಂದ್ರನ್, ಟಿಹೆಚ್‌ಓ ಡಾ.ರವಿಕುಮಾರ್, ಆರೋಗ್ಯ ನಿರೀಕ್ಷಣಾ ಧಿಕಾರಿ ರಾಜಣ್ಣ, ಸಿಡಿಪಿಓ ಗೋವಿಂದರಾಜು, ಸಹಾಯಕ ನಿರ್ದೇಶಕ ರಾಜಣ್ಣ, ತಾಲೂಕು ಯೋಜನಾಧಿಕಾರಿ ರಂಗಸ್ವಾಮಿ, ಬಿಆರ್‌ಸಿ ನಾಗೇಶ್, ರಾಜಕಾಂತ್ ಇದ್ದರು.

ನಾಯಕ ಸಮುದಾಯದಿಂದ ಅಂಬೇಡ್ಕರ್ ಜಯಂತಿ




ನಗರ್ಲೆಯಲ್ಲಿ ಅಂಬೇಡ್ಕರ್ ಜಯಂತಿ ಆಚರಿಸಲಾಯಿತು.

ನಂಜನಗೂಡು, ಏ.14– ತಾಲೂಕಿನ ನಗರ್ಲೆ ಗ್ರಾಮದಲ್ಲಿ ನಾಯಕ ಸಮುದಾಯದಿಂದ ಅಂಬೇಡ್ಕರ್ ಜಯಂತಿ ಆಚರಿಸಲಾಯಿತು.

ವರುಣ ಕ್ಷೇತ್ರದ ಬಿಜೆಪಿ ಅಧ್ಯಕ್ಷ ಮಹದೇವಸ್ವಾಮಿ ಮಾತನಾಡಿ, ಡಾ.ಬಿ.ಆರ್.ಅಂಬೇಡ್ಕರ್ ಅವರ ಹೋರಾಟದಿಂದಾಗಿ ಶೋಷಿತ ಸಮುದಾಯಗಳು ಮತ್ತು ಹಿಂದುಳಿದ ವರ್ಗಗಳು ಮೀಸಲಾತಿ ಪಡೆಯುತ್ತಿವೆ. ಆದರೂ ಸಹ ಶೋಷಿತ ಸಮಾಜಗಳ ಮಧ್ಯೆ ಭಿನ್ನಾಭಿಪ್ರಾಯ ವ್ಯಕ್ತವಾಗುವುದು ಸರಿಯಲ್ಲ. ಎಲ್ಲಾ ಸಮಾಜಗಳಿಗೂ ಅಂಬೇಡ್ಕರ್ ಅವರು ಕೊಡುಗೆ ನೀಡಿದ್ದಾರೆ. ಆದ್ದರಿಂದ ಎಲ್ಲಾ ಸಮುದಾಯಗಳು ಅವರಿಗೆ ಗೌರವ ಸಲ್ಲಿಸಬೇಕು. ಗ್ರಾಮದಲ್ಲಿ ಕಳೆದ ವರ್ಷ ಎಸ್‌ಸಿ ಮತ್ತು ಎಸ್‌ಟಿ ಸಮುದಾಯಗಳ ಮಧ್ಯೆ ಭಿನ್ನಾಭಿಪ್ರಾಯ ಉಂಟಾಗಿತ್ತು. ಅದನ್ನು ನಿವಾರಿಸುವ ಸಲುವಾಗಿ ಈ ವರ್ಷ ನಾಯಕ ಸಮುದಾಯದ ವತಿಯಿಂದ ಅಂಬೇಡ್ಕರ್ ಜಯಂತಿ ಆಯೋಜಿಸಿ ಆಚರಣೆ ಮಾಡುವ ಮೂಲಕ ಅಂಬೇಡ್ಕರ್ ಅವರಿಗೆ ಗೌರವ ಸಲ್ಲಿಸಿ ಸಮಾಜಕ್ಕೆ ಸಂದೇಶ ರವಾನಿಸಲಾಗಿದೆ ಎಂದರು.

ಈ ವೇಳೆ ವಾಲ್ಮೀಕಿ ಸಂಘದ ಅಧ್ಯಕ್ಷ ಶ್ರೀನಿವಾಸ್, ಸುರೇಂದ್ರ, ಮೋಹನ್, ಗ್ರಾಪಂ ಸದಸ್ಯರಾದ ಸಂಧ್ಯಾ, ಪ್ರಭು, ಧರ್ಮೇಂದ್ರ, ಮಹದೇವ ನಾಯಕ, ಭದ್ರನಾಯಕ, ಶಿವರಾಮ, ನಿರಂಜನ್, ನಾಗರಾಜ, ಪ್ರಜ್ವಲ್ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

ದೇಶಕ್ಕೆ ಅಂಬೇಡ್ಕರ್ ಕೊಡುಗೆ ಅಪಾರ



ಅಂಬೇಡ್ಕರ್ ಪ್ರತಿಮೆಗೆ ಸಿ.ರಮೇಶ್ ಮಾಲಾರ್ಪಣೆ ಮಾಡಿದರು.

ತಿ.ನರಸೀಪುರ, ಏ.14– ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸ್ವಾತಂತ್ರ್ಯ ಭಾರತದ ಪ್ರಥಮ ಕಾನೂನು ಮಂತ್ರಿಯಾಗಿ ದೇಶದ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡಿದ್ದಾರೆ ಎಂದು ಬಾಬು ಜಗಜೀವನರಾಂ ಸಮತಾ ಆಂದೋಲನದ ರಾಜ್ಯಾಧ್ಯಕ್ಷ ಸಿ.ರಮೇಶ್ ತಿಳಿಸಿದರು.

ಪಟ್ಟಣದ ತಾಲೂಕು ಕಚೇರಿ ಮುಂಭಾಗ ಅಂಬೇಡ್ಕರ್ ಜಯಂತಿ ಅಂಗವಾಗಿ ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಮಾತನಾಡಿದ ಅವರು, ಸಂವಿಧಾನ ರಚಿಸುವಲ್ಲಿ ಅಂಬೇಡ್ಕರ್ ಹಗಲಿರುಳು ಶ್ರಮಿಸಿದ್ದಾರೆ. ಭಾರತದ ಎಲ್ಲಾ ವರ್ಗದ ಕಟ್ಟ ಕಡೆಯ ಜನರಿಗೂ ಸಂವಿಧಾನದ ಸೌಲಭ್ಯ ಗಳು ತಲುಪುವಲ್ಲಿ ಶ್ರಮಿಸಿದ್ದಾರೆ ಎಂದರು.

ಅಂಬೇಡ್ಕರ್ ಅವರ ಸಾರ್ಥಕ ಬದುಕಿನ ಬಗ್ಗೆ ಪ್ರತಿಯೊಬ್ಬರೂ ತಿಳಿದುಕೊಳ್ಳುವಂತಾಗಬೇಕು. ಶೋಷಿತ ಸಮುದಾಯಗಳ ಏಳಿಗೆಗೆ ಇಡೀ ಜೀವನವನ್ನೇ ತ್ಯಾಗ ಮಾಡಿದ್ದಾರೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಯೊಬ್ಬರೂ ಸಮಾನವಾಗಿ ಬದುಕಿ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು. ಆ ನಿಟ್ಟಿನಲ್ಲಿ ಅಭಿವೃದ್ಧಿ ಸಾಧಿಸಬೇಕು ಎಂದು ತಿಳಿಸಿದರು.

ಮಹಿಳೆಯರಿಗೆ ಸಮಾನ ಹಕ್ಕು, ಕಾರ್ಮಿಕರ ಕಲ್ಯಾಣ, ಶಿಕ್ಷಣ ಹಾಗೂ ಸ್ವಾತಂತ್ರ್ಯದ ಹಕ್ಕಿಗಾಗಿ ಹೋರಾಡಿದ್ದಾರೆ. ದೇಶಕ್ಕೆ ಸಶಕ್ತ ಸಂವಿಧಾನ ನೀಡುವ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಗೆ ಒಂದು ಮೂರ್ತರೂಪ ನೀಡಿದರು. ವಿಶ್ವಕ್ಕೆ ಮಾದರಿಯಾದ ಭಾರತದ ಸಂವಿಧಾನ, ಸಮಾನತೆ, ಭ್ರಾತೃತ್ವ, ಸೌಹಾರ್ದತೆಯನ್ನು ಸಾರುತ್ತದೆ ಎಂದರು.

ಸರಗೂರಲ್ಲಿ ಅಂಬೇಡ್ಕರ್ ಜಯಂತಿ

ಸರಗೂರು, ಏ.14– ಪಟ್ಟಣದ ತಾಲೂಕು ಕಚೇರಿ ಆವರಣದಲ್ಲಿ ತಾಲೂಕು ಆಡಳಿತ, ತಾಪಂ, ಪಪಂ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಿಸಲಾಯಿತು.

ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಶಾಸಕ ಅನಿಲ್, ಅಂಬೇಡ್ಕರ್ ಶೋಷಿತ ಸಮುದಾಯಗಳ ಏಳಿಗೆಗೆ ನಿರಂತರವಾಗಿ ಶ್ರಮಿಸಿದರು. ಜಾಗೃತಿ ಮತ್ತು ಜ್ಞಾನದ ದೀಪವಾಗಿ ಈ ದೇಶದ ಅಭಿವೃದ್ಧಿಗೆ ದಾರಿಯಾದರು. ದೇಶಕ್ಕೆ ಅವರ ಕೊಡುಗೆ ಅಪಾರ. ಅವರ ತತ್ವಾದರ್ಶಗಳನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು ಎಂದರು.

ಸಾಹಿತಿ ಡಾ.ವೈ.ಡಿ.ರಾಜಣ್ಣ ಮಾತನಾಡಿ, ಅಂಬೇಡ್ಕರ್ ದಲಿತರು, ಎಲ್ಲಾ ವರ್ಗದ ಜನರು ಸೇರಿದಂತೆ ಕೋಟ್ಯಾಂತರ ಭಾರತೀಯರ ಬದುಕು ಹಸನಾಗಿಸಿದ ಮಹಾಚೇತನ. ಸಂವಿಧಾನ ಆಶಯಗಳು ಜನರ ಬದುಕಿಗೆ ಭದ್ರ ಬುನಾದಿ ಹಾಕಿವೆ. ಆ ಕಾರಣಕ್ಕೆ ಅಂಬೇಡ್ಕರ್ ಅವರನ್ನು ದಲಿತ ನಾಯಕ ಎನ್ನುವುದರ ಬದಲು ಎಲ್ಲಾ ವರ್ಗದ ನಾಯಕ. ಬಹುಜನರ ನಾಯಕರು ಎಂದು ಗೌರವಿಸಬೇಕಿದೆ ಎಂದು ಅಭಿಪ್ರಾಯಪಟ್ಟರು.



ಕಾರ್ಯಕ್ರಮದಲ್ಲಿ ಸಾಹಿತಿ ಡಾ.ವೈ.ಡಿ.ರಾಜಣ್ಣ ಮಾತನಾಡಿದರು.

ತಹಸೀಲ್ದಾರ್ ಮೋಹನ್ ಕುಮಾರಿ ಮಾತನಾಡಿ, ಅಂಬೇಡ್ಕರ್ ಅವರ ಮಹಿಳಾಪರ ನಿಲುವುಗಳು ಇಂದಿಗೂ ಶ್ಲಾಘನೀಯ. ವಿಶ್ವದಲ್ಲೇ ಮೊಟ್ಟ ಮೊದಲ ಬಾರಿಗೆ ಮಹಿಳೆಯರಿಗೆ ಮತದಾನದ ಹಕ್ಕು ಕೊಟ್ಟ ಕೀರ್ತಿ ಅಂಬೇಡ್ಕರ್ ಅವರಿಗೆ ಸಲ್ಲುತ್ತದೆ ಎಂದರು.

ಚಿಂತಕ ರಘೋತ್ತಮ ಮುಖ್ಯ ಭಾಷಣ ಮಾಡಿದರು. ಕಾರ್ಯಕ್ರಮದಲ್ಲಿ ಎಪಿಎಂಸಿ ಕಾರ್ಯದರ್ಶಿ ವಸಂತಕುಮಾರ್, ಇಓ ಪ್ರೇಮ್ ಕುಮಾರ್, ಸಮಾಜ ಕಲ್ಯಾಣ ಅಧಿಕಾರಿ ರಾಮಸ್ವಾಮಿ, ಪಪಂ ಮುಖ್ಯಾಧಿಕಾರಿ ಎಸ್.ಕೆ.ಸಂತೋಷ್ ಕುಮಾರ್, ಅಧ್ಯಕ್ಷೆ ರಾಧಿಕಾ, ಉಪಾಧ್ಯಕ್ಷ ಶಿವಕುಮಾರ್, ಸದಸ್ಯರಾದ ಶ್ರೀನಿವಾಸ್, ನೂರಾಳಸ್ವಾಮಿ, ಚಲುವಕೃಷ್ಣ, ಚಂದ್ರಕಲಾ, ಸಣ್ಣತಾಯಮ್ಮ, ಆದಿಕರ್ನಾಟಕ ಮಹಾಸಭಾ ತಾಲೂಕು ಅಧ್ಯಕ್ಷ ಶಿವಣ್ಣ, ಮುಖಂಡರಾದ ಶಂಭುಲಿಂಗನಾಯಕ, ಜಿಪಂ ಮಾಜಿ ಉಪಾಧ್ಯಕ್ಷೆ ಭಾಗ್ಯಲಕ್ಷ್ಮಿ, ಎಪಿಎಂಸಿ ಮಾಜಿ ಅಧ್ಯಕ್ಷ ಸಿದ್ದರಾಜು, ಎಂ.ಕೆಂಡಗಣ್ಣಸ್ವಾಮಿ, ಮಹೇಶ್, ಅಕ್ರಮ ಸಕ್ರಮ ಸದಸ್ಯರಾದ ಎಸ್.ಎಸ್.ಪ್ರಭು ಸ್ವಾಮಿ, ಶಿವಶಂಕರ್, ಜಿ.ಗೋಪಾಲಸ್ವಾಮಿ, ಪರಶಿವಮೂರ್ತಿ, ವೆಂಕಿ, ಮಲ್ಲೇಶ್, ಬೆಟ್ಟಸ್ವಾಮಿ, ಮಂಜುನಾಥ್, ರಾಜಣ್ಣ, ನಾಗಣ್ಣ, ಬಿಲ್ಲೇಶ್, ಮೂರ್ತಿ, ಪಪಂ ಮಾಜಿ ಸದಸ್ಯ ರಮೇಶ್, ಗೋವಿಂದರಾಜು, ಸಿಪಿಐ ಪ್ರಸನ್ನಕುಮಾರ್, ಎಸ್‌ಐ ಕಿರಣ್ ಕುಮಾರ್, ಅಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

ಸಂವಿಧಾನದ ಮೂಲಕ ಅಂಬೇಡ್ಕರ್ ಜೀವಂತ



ಖಾಸಗಿ ಬಸ್ ನಿಲ್ದಾಣದ ಬಳಿ ಅಂಬೇಡ್ಕರ್ ಜಯಂತಿ ನಡೆಯಿತು.

ನಂಜನಗೂಡು, ಏ.14– ಡಾ.ಬಿ.ಆರ್.ಅಂಬೇಡ್ಕರ್ ದೈಹಿಕವಾಗಿ ನಮ್ಮನ್ನು ಅಗಲಿದ್ದರೂ, ಸಂವಿಧಾನವೆಂಬ ಮಹಾಗ್ರಂಥದ ಮೂಲಕ ಜೀವಂತವಾಗಿದ್ದಾರೆ. ಅವರ ತತ್ವಾದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಶಾಸಕ ದರ್ಶನ್ ಹೇಳಿದರು.

ಡಾ.ಬಿ.ಆರ್.ಅಂಬೇಡ್ಕರ್ ಅವರ 134ನೇ ಜನ್ಮ ದಿನೋತ್ಸವದ ಅಂಗವಾಗಿ ನಗರದ ಖಾಸಗಿ ಬಸ್ ನಿಲ್ದಾಣದ ಬಳಿಯ ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಮಾತನಾಡಿದ ಅವರು, ಅಂಬೇಡ್ಕರ್ ಅವರು ಶೋಷಣೆ ಸಹಿಸಿ, ಸಮಾಜದ ಪರಿವರ್ತನೆಗಾಗಿ ಜೀವನದ ಉದ್ದಕ್ಕೂ ಹೋರಾಟದ ಬದುಕು ನಡೆಸಿ ಶೋಷಿತ ಸಮಾಜಗಳಿಗೆ ಬೆಳಕಿನ ಹಣತೆಯಾಗಿದ್ದಾರೆ. ನಾವೆಲ್ಲರೂ ಸಂವಿಧಾನದ ಹಕ್ಕು ಮತ್ತು ಕರ್ತವ್ಯಗಳನ್ನು ಅರಿತು ಅವರು ಹಾಕಿಕೊಟ್ಟ ದಾರಿಯಲ್ಲಿ ನಡೆಯಬೇಕು. ಕಾಂಗ್ರೆಸ್ ಸರ್ಕಾರ ಬಾಬಾ ಸಾಹೇಬರ ಸಂವಿಧಾನದಿಂದ ಪ್ರೇರಣೆ ಪಡೆದು 5 ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಿದೆ. ಜೊತೆಗೆ ಸಂವಿಧಾನ ಜಾಥಾ ಮತ್ತು ಸಂವಿಧಾನ ಪೀಠಿಕೆಗಳ ಓದು ಕಾರ್ಯಕ್ರಮ ರೂಪಿಸುವ ಮೂಲಕ ಜನಸಾಮಾನ್ಯರಿಗೆ ಸಂವಿಧಾನದ ಬಗ್ಗೆ ಅರಿವು ಮೂಡಿಸುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಸಂವಿಧಾನ ಪೀಠಿಕೆ ಓದಲಾಯಿತು. ಈ ವೇಳೆ ಮಾಜಿ ಶಾಸಕ ಕೇಶವಮೂರ್ತಿ, ವಾಲ್ಮೀಕಿ ನಿಗಮದ ಮಾಜಿ ಅಧ್ಯಕ್ಷ ಎಸ್.ಸಿ.ಬಸವರಾಜು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹೇಶ್, ಸಿ.ಎಂ.ಶಂಕರ್, ನಗರಸಭಾಧ್ಯಕ್ಷ ಶ್ರೀಕಂಠಸ್ವಾಮಿ, ಗ್ಯಾರಂಟಿ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ಕೆ.ಮಾರುತಿ, ತಾಪಂ ಮಾಜಿ ಅಧ್ಯಕ್ಷ ನಾಗೇಶ್‌ರಾಜ್, ದಸಂಸ ಸಂಚಾಲಕರಾದ ಮಲ್ಲೇಶ್, ಸುರೇಶ್, ನಾರಾಯಣ, ವಿಜಯ್‌ಕುಮಾರ್, ನಗರಸಭಾ ಸದಸ್ಯರಾದ ಗಂಗಾಧರ್, ಕೆ.ಎಂ.ಬಸವರಾಜು, ಜಿಪಂ ಮಾಜಿ ಸದಸ್ಯ ಶಶಿರೇಖಾ, ತಹಸೀಲ್ದಾರ್ ಶಿವಕುಮಾರ್ ಕಾಸ್ನೂರು, ತಾಪಂ ಇಓ ಜೆರಾಲ್ಡ್ ರಾಜೇಶ್, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಸಿದ್ಧಲಿಂಗ ಸೇರಿದಂತೆ ಹಲವರಿದ್ದರು.

ಅಂಬೇಡ್ಕರ್ ಚಿಂತನೆಗಳನ್ನು ಎಲ್ಲರೂ ಪಾಲಿಸಬೇಕು

ತಿ.ನರಸೀಪುರ ಪುರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಸಿ.ಪ್ರಕಾಶ್



ತಿ.ನರಸೀಪುರ ಪುರಸಭೆಯಲ್ಲಿ ಅಂಬೇಡ್ಕರ್ ಜಯಂತಿ ಆಚರಿಸಲಾಯಿತು.

ತಿ.ನರಸೀಪುರ, ಏ.14– ದೇಶದ ಪ್ರತಿಯೊಬ್ಬರಿಗೂ ಸಮಾನತೆ ನೀಡಿದ ಅಂಬೇಡ್ಕರ್ ಚಿಂತನೆಗಳನ್ನು ಎಲ್ಲರೂ ಪಾಲಿಸಬೇಕು ಎಂದು ಸ್ಥಾಯಿ ಸಮಿತಿ ಅಧ್ಯಕ್ಷ ಸಿ.ಪ್ರಕಾಶ್ ತಿಳಿಸಿದರು.

ಪಟ್ಟಣ ಪುರಸಭೆ ಕಚೇರಿಯಲ್ಲಿ ಸೋಮವಾರ ನಡೆದ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿಯಲ್ಲಿ ಮಾತನಾಡಿದ ಅವರು, ಪ್ರಪಂಚದಾದ್ಯಂತ ಸಂಚರಿಸಿ, ಅಪಾರ ಅಧ್ಯಯನ ನಡೆಸಿದ ಅಂಬೇಡ್ಕರ್ ಭಾರತೀಯರಿಗೆ ಶ್ರೇಷ್ಠ ಸಂವಿಧಾನ ನೀಡುವ ಮೂಲಕ ಪ್ರತಿಯೊಬ್ಬರಿಗೂ ಸಮಾನತೆ, ವಾಕ್ ಸ್ವಾತಂತ್ರ್ಯ ಕಲ್ಪಿಸಿದ್ದಾರೆ. ಅಂಬೇಡ್ಕರ್ ಅವರ ದೀರ್ಘಕಾಲದ ಅಧ್ಯಯನ, ಅನೇಕ ವಿಚಾರಗಳು ಇಂದಿಗೂ ಜೀವಂತವಾಗಿದ್ದು, ಅವರ ಚಿಂತನೆಗಳು, ವಿಚಾರಗಳನ್ನು ನಾವುಗಳು ಜೀವನದಲ್ಲಿ ಪಾಲನೆ ಮಾಡಬೇಕಿದೆ ಎಂದರು.

ಪುರಸಭಾಧ್ಯಕ್ಷೆ ವಸಂತ ಶ್ರೀಕಂಠ ಮಾತನಾಡಿ, ಡಾ.ಬಿ.ಆರ್.ಅಂಬೇಡ್ಕರ್ ಅವರು ಇಡೀ ವಿಶ್ವವೇ ಮೆಚ್ಚುವ ಶ್ರೇಷ್ಠ ಸಂವಿಧಾನವನ್ನು ಭಾರತೀಯರಿಗೆ ನೀಡಿದ್ದಾರೆ. ಅಂಬೇಡ್ಕರ್ ಅವರು ಭಾರತ ಕಂಡ ಅತ್ಯುನ್ನತ ಹಾಗೂ ಮಾನವರಿಗೆ ಸಮಾನತೆ ನೀಡಿದ ದೈವಿ ಪುರುಷರಾಗಿದ್ದು, ಅವರ ಜನ್ಮದಿನವನ್ನು ವಿಶ್ವ ಜ್ಞಾನ ದಿನವನ್ನಾಗಿ ಆಚರಿಸಬೇಕು ಎಂದರು.

ಮಾಜಿ ಅಧ್ಯಕ್ಷರಾದ ಟಿ.ಎಂ.ನಂಜುಂಡಸ್ವಾಮಿ, ಎನ್.ಸೋಮಣ್ಣ, ಎಸ್.ಕೆ.ಕಿರಣ್, ಬಾದಾಮಿ ಮಂಜು, ಸಿಸ್ಟಮ್ ಸಿದ್ದು, ರೂಪಶ್ರೀ ಪರಮೇಶ್, ಮುಖ್ಯಾಧಿಕಾರಿ ಬಿ.ಕೆ.ವಸಂತಕುಮಾರಿ, ತಾ.ಪಂ ಮಾಜಿ ಉಪಾಧ್ಯಕ್ಷ ಬಿ.ಮರಯ್ಯ, ಕಚೇರಿ ವ್ಯವಸ್ಥಾಪಕ ಮಹೇಂದ್ರ, ಆರೋಗ್ಯ ಅಧಿಕಾರಿ ಮಧು, ಸಮುದಾಯ ಸಂಘಟಕ ಮಹದೇವ, ಮುಖಂಡರಾದ ಪುಳ್ಳಾರಿ ಮಾದೇಶ, ಶ್ರೀಕಂಠ, ಹೇಮಂತ್ ಕುಮಾರ್ ಹಾಗೂ ಸಿಬ್ಬಂದಿ ಇದ್ದರು.

ಅಂಬೇಡ್ಕರ್ ಹೋರಾಟದ ಬದುಕು ಎಲ್ಲರಿಗೂ ದಾರಿದೀಪ



ನಂಜನಗೂಡು, ಏ.14– ಅಂಬೇಡ್ಕರ್ ಅವರ ಹೋರಾಟದ ಬದುಕು, ತ್ಯಾಗದ ಜೀವನ ಎಲ್ಲರಿಗೂ ದಾರಿದೀಪವಾಗಿದೆ ಎಂದು ಶ್ರೀಕಂಠೇಶ್ವರಸ್ವಾಮಿ ದೇವಾಲಯದ ವ್ಯವಸ್ಥಾಪನಾ ಸಮಿತಿ ಮಾಜಿ ಅಧ್ಯಕ್ಷ ಹೆಜ್ಜಿಗೆ ಇಂಧನಬಾಬು ತಿಳಿಸಿದರು.

ಡಾ.ಬಿ.ಆರ್.ಅಂಬೇಡ್ಕರ್ ಅವರ 134ನೇ ಜನ್ಮದಿನದ ಅಂಗವಾಗಿ ನಗರದ ಖಾಸಗಿ ಬಸ್ ನಿಲ್ದಾಣದಲ್ಲಿರುವ ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಮಾತನಾಡಿದ ಅವರು, ಅಂಬೇಡ್ಕರ್ ಅವರು ವಿವಿಧ ಧರ್ಮ, ಭಾಷೆ, ಸಂಸ್ಕೃತಿ ಇರುವ ಭಾರತಕ್ಕೆ ಸಂವಿಧಾನವೆಂಬ ಮಹಾಗ್ರಂಥ ರಚಿಸಿದ್ದರಿಂದ ಎಲ್ಲರೂ ಸಮಾನತೆಯಿಂದ ಜೀವನ ನಡೆಸುವಂತಾಗಿದೆ. ಅದರಲ್ಲೂ ಶತಮಾನಗಳಿಂದ ಶೋಷಣೆಗೆ ಒಳಗಾಗಿದ್ದ ಶೋಷಿತ ಸಮಾಜಗಳಿಗೆ ಅಸ್ಪೃಶ್ಯತೆಯಿಂದ ಮುಕ್ತಿ ನೀಡಿ ಶೋಷಿತರ ಪಾಲಿನ ದೇವರಾಗಿದ್ದಾರೆ. ಅವರ ತತ್ವಾದರ್ಶಗಳನ್ನು ಮೈಗೂಡಿಸಿಕೊಂಡು ಅವರು ಹಾಕಿಕೊಟ್ಟ ದಾರಿಯಲ್ಲಿ ನಾವೆಲ್ಲರೂ ನಡೆಯುವುದೇ ಅವರಿಗೆ ಕೊಡುವ ಗೌರವ ಎಂದರು. ಈ ವೇಳೆ ಮುಖಂಡರಾದ ಎನ್.ಟಿ.ಗಿರೀಶ್, ನಾಗರಾಜು, ಕುರುಬರ ಸಂಘದ ಅಧ್ಯಕ್ಷ ಕೆಂಪಣ್ಣ, ಜಿಪಂ ಮಾಜಿ ಸದಸ್ಯರಾದ ಚೋಳರಾಜು, ಕೆ.ಬಿ.ಸ್ವಾಮಿ ಸೇರಿದಂತೆ ಹಲವರಿದ್ದರು.

ಕಿತ್ತೂರಲ್ಲಿ ಅಂಬೇಡ್ಕರ್ ಜಯಂತಿ



ಪಿರಿಯಾಪಟ್ಟಣ ತಾಲೂಕಿನ ಕಿತ್ತೂರು ಗ್ರಾಮದ ಹಾರಂಗಿ ಬಲದಂಡ ನಾಲಾ ಉಪವಿಭಾಗದ ಕಚೇರಿಯಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಿಸಲಾಯಿತು. ಈ ವೇಳೆ ಸಹಾಯಕ ಅಭಿಯಂತರ ಕೆ.ಎಸ್.ಮಂಜುನಾಥ, ಕಿರಿಯ ಅಭಿಯಂತರರಾದ ಚಂದ್ರಶೇಖರ್, ವಿಜೇಂದ್ರ, ನಿವೃತ್ತ ಗ್ರಾಮ ಆಡಳಿತಾಧಿಕಾರಿ ಮಹದೇವಪ್ಪ, ಮುಖಂಡರಾದ ಡಿ.ಜೆ.ಮಲ್ಲೇಗೌಡ, ಪತ್ರಕರ್ತ ರಾಮೇಗೌಡ, ಸಿಬ್ಬಂದಿಗಳಾದ ಸುಮಿತ್, ವಿನೋದ್, ಕೃಷ್ಣ, ರವಿ, ನಾಗಣ್ಣ, ಮೋಹನ್ ಹಾಜರಿದ್ದರು.

ಅಂಬೇಡ್ಕರ್ ಸಂವಿಧಾನ ಜಗತ್ತಿಗೆ ಮಾದರಿ



ಡಾ.ಬಿ.ಆರ್.ಅಂಬೇಡ್ಕರ್ ಜಯಂತಿಯನ್ನು ಶಾಸಕ ಡಿ.ರವಿಶಂಕರ್ ಉದ್ಘಾಟಿಸಿದರು.

ಕೆ.ಆರ್.ನಗರ, ಏ.14– ದೇಶದ ಜನರು ನೆಮ್ಮದಿಯ ಬದುಕು ಸಾಗಿಸಲು ಶ್ರೇಷ್ಠ ಸಂವಿಧಾನ ನೀಡಿದ ಡಾ.ಬಿ.ಆರ್.ಅಂಬೇಡ್ಕರ್ ಅಜರಾಮರ ಎಂದು ಶಾಸಕ ಡಿ.ರವಿಶಂಕರ್ ಹೇಳಿದರು.

ಪಟ್ಟಣದ ಹಾಸನ–ಮೈಸೂರು ರಸ್ತೆಯಲ್ಲಿರುವ ಪ್ರತಿಮೆ ಆವರಣದಲ್ಲಿ ತಾಲೂಕು ನಾಡಹಬ್ಬಗಳ ಆಚರಣಾ ಸಮಿತಿ ವತಿಯಿಂದ ನಡೆದ ಡಾ.ಬಿ.ಆರ್.ಅಂಬೇಡ್ಕರ್ ಅವರ ಜಯಂತಿಯಲ್ಲಿ ಮಾತನಾಡಿದ ಅವರು ಜಗತ್ತಿನ ಹಲವು ದೇಶಗಳ ಸಂವಿಧಾನ ಅಧ್ಯಯನ ಮಾಡಿ, ತಜ್ಞರೊಂದಿಗೆ ಸಮಾಲೋಚಿಸಿ ಅವರು ರಚಿಸಿದ ಸಂವಿಧಾನ ಜಗತ್ತಿಗೆ ಮಾದರಿ ಎಂದರು.

ಪಟ್ಟಣದ ಹೊರವಲಯದಲ್ಲಿ ನಿರ್ಮಾಣ ಹಂತದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಭವನಕ್ಕೆ ಈಗಾಗಲೇ 2 ಕೋಟಿ ಮಂಜೂರಾಗಿದ್ದು, ಮುಂದುವರೆದ ಕಾಮಗಾರಿಗೆ ಮತ್ತೆ 5 ಕೋಟಿ ಕೊಡಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅವರಿಗೆ ಮನವಿ ಸಲ್ಲಿಸಲಾಗಿದೆ ಎಂದರು.

ಮುಂದಿನ ದಿನಗಳಲ್ಲಿ ಡಾ.ಬಿ.ಆರ್.ಅಂಬೇಡ್ಕರ್, ಡಾ.ಬಾಬು ಜಗಜೀವನರಾಂ ಮತ್ತು ರಾಷ್ಟ್ರಪಿತ ಮಹಾತ್ಮಾ ಗಾಂಧೀಜಿ ಅವರ ಪ್ರತಿಮೆಗಳನ್ನು ನಿರ್ಮಿಸಿ ಅನಾವರಣಗೊಳಿಸಲಾಗುವುದು. ನಿರ್ಮಾಣ ಹಂತದಲ್ಲಿರುವ ಡಾ.ಬಾಬು ಜಗಜೀವನರಾಂ ಸಮುದಾಯ ಭವನಕ್ಕೆ ಅಗತ್ಯವಿರುವ ಅನುದಾನವನ್ನು ಸರ್ಕಾರದಿಂದ ಕೊಡಿಸುವುದಾಗಿ ಘೋಷಿಸಿದರು.

ಕಾರ್ಯಕ್ರಮ ಮುನ್ನಾ ಶಾಸಕ ಡಿ.ರವಿಶಂಕರ್, ತಹಸೀಲ್ದಾರ್ ಜಿ.ಸುರೇಂದ್ರ ಮೂರ್ತಿ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಹೆಚ್.ಎಲ್.ಶಂಕರಮೂರ್ತಿ ಮತ್ತು ಇತರರು ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಪುಷ್ಪ ನಮನ ಸಲ್ಲಿಸಿದರು.

ಗೊರಗುಂಡಿ ಸುರೇಶ್ ಮತ್ತು ಸ್ನೇಹಿತರು ಭೀಮ ಗೀತೆಗಳನ್ನು ಹಾಡಿ ಕಾರ್ಯಕ್ರಮದ ಮೆರುಗು ಹೆಚ್ಚಿಸಿದರು. ಪುರಸಭಾಧ್ಯಕ್ಷ ಡಿ.ಶಿವಕುಮಾರ್, ಜಿಪಂ ಮಾಜಿ ಅಧ್ಯಕ್ಷ ಸಿದ್ದಪ್ಪ, ಕೆಪಿಸಿಸಿ ಸದಸ್ಯ ಎ.ಆರ್.ಕಾಂತರಾಜು, ಮುಖಂಡರಾದ ಸಿದ್ದಯ್ಯ, ರಾಜಯ್ಯ, ನಾಗರಾಜು, ಎಂ.ಲೋಕೇಶ್, ತಾಪಂ ಮಾಜಿ ಅಧ್ಯಕ್ಷ ಎಂ.ಹೆಚ್.ಸ್ವಾಮಿ, ಶಾಂತಿರಾಜಯ್ಯ ಮಾತನಾಡಿದರು.

ಪುರಸಭೆ ಸದಸ್ಯರಾದ ಶಂಕರ್, ಪ್ರಕಾಶ್, ಕೆ.ಎಸ್.ಶಂಕರ್, ಮಾಜಿ ಅಧ್ಯಕ್ಷ ಡಿ.ಕಾಂತರಾಜು, ಮುಖ್ಯಾಧಿಕಾರಿ ಬಿ.ವಿ.ವೆಂಕಟೇಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಎಸ್.ಮಹದೇವ್, ಉದಯಶಂಕರ್, ಎಸ್‌ಸಿ ಘಟಕದ ಅಧ್ಯಕ್ಷ ಡಿ.ವಿ.ಗುಡಿನಂದೀಶ್, ಕಂಠಿಕುಮಾರ್, ವಕ್ತಾರ ಸೈಯದ್ ಜಾಬೀರ್, ತಾಪಂ ಮಾಜಿ ಸದಸ್ಯ ನಂಜುಂಡ, ಶ್ರೀನಿವಾಸ ಪ್ರಸಾದ್, ಆರಕ್ಷಕ ನಿರೀಕ್ಷಕ ಎಸ್.ಶಿವಪ್ರಕಾಶ್, ವಕೀಲ ಬಿ.ಎಂ.ಮೂರ್ತಿ, ಡಾ.ಡಿ.ನಟರಾಜು, ಸಿ.ಇ.ಉಮೇಶ್, ಬಿಇಓ ಆರ್.ಕೃಷ್ಣಪ್ಪ, ಮುಖಂಡರಾದ ಮಹೇಶ್, ಚಲುವರಾಜು, ನಂಜಯ್ಯ ಹಾಜರಿದ್ದರು.

ಅಂಬೇಡ್ಕರ್ ವಿಶ್ವನಾಯಕ: ಶಾಸಕ ಅನಿಲ್ ಬಣ್ಣನೆ



ಡಾ.ಬಿ.ಆರ್.ಅಂಬೇಡ್ಕರ್ ಜಯಂತಿಯನ್ನು ಶಾಸಕ ಅನಿಲ್ ಉದ್ಘಾಟಿಸಿದರು.

ಹೆಚ್.ಡಿ.ಕೋಟೆ, ಏ.14– ಡಾ.ಬಿ.ಆರ್.ಅಂಬೇಡ್ಕರ್ ಒಂದು ವರ್ಗಕ್ಕೆ ಸೀಮಿತರಲ್ಲ. ಅವರು ಇಡೀ ವಿಶ್ವಕ್ಕೆ ಬೇಕಾದ ವಿಶ್ವನಾಯಕ ಎಂದು ಶಾಸಕ ಅನಿಲ್ ಬಣ್ಣಿಸಿದರು.

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಸಮುದಾಯ ಭವನದಲ್ಲಿ ತಾಲೂಕು ಆಡಳಿತ, ತಾಪಂ, ಪುರಸಭೆ ಹಾಗೂ ಸಮಾಜ ಕಲ್ಯಾಣ ಇಲಾಖೆಯಿಂದ ಹಮ್ಮಿಕೊಂಡಿದ್ದ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಉದ್ಘಾಟಿಸಿ, ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಅವರು, ಅಂಬೇಡ್ಕರ್ ವಿಚಾರಧಾರೆಗಳನ್ನು ಒಂದು ದಿನ ಮಾತನಾಡಿದರೆ ಸಾಲದು. ಬದಲಿಗೆ ವರ್ಷಪೂರ್ತಿ ಮಾತನಾಡುವ ಮೂಲಕ ಅರ್ಥಪೂರ್ಣವಾಗಿ ಅವರ ಜಯಂತಿ ಆಚರಣೆ ಮಾಡಬೇಕು. ಅಂಬೇಡ್ಕರ್ ಒಂದು ವರ್ಗಕ್ಕೆ ಮೀಸಲಾತಿ ನೀಡಿಲ್ಲ. ದೇಶದ ಪ್ರತಿಯೊಂದು ಜಾತಿಗೂ ಮೀಸಲಾತಿ ನೀಡಿದ್ದಾರೆ ಎಂದರು.

ಮಹಿಳೆಯರಿಗೆ ಕಡ್ಡಾಯ ಶಿಕ್ಷಣ, ಸಮಾನತೆಯ ಹಕ್ಕು ನೀಡಿ ಎಂದು ಪ್ರತಿಪಾದಿಸಿದ್ದ ಅಂಬೇಡ್ಕರ್ ಅವರು, ಟೀ ಮಾರುವ ವ್ಯಕ್ತಿ ಕೂಡ ದೇಶದ ಪ್ರಧಾನಿಯಾಗಲು ಸಂವಿಧಾನದ ಮೂಲಕ ಅವಕಾಶ ನೀಡಿದರು ಎಂದರು.

> ಅಂಬೇಡ್ಕರ್‌ರಂತಹ ಮಹಾನ್ ವ್ಯಕ್ತಿ ಪಡೆದ ನಾವೇ ಅದೃಷ್ಟವಂತರು. ಅಸ್ಪೃಶ್ಯತೆಯ ನೋವಿನಲ್ಲೂ ದೇಶದ ಪ್ರಗತಿಗಾಗಿ ದುಡಿದ ಅಂಬೇಡ್ಕರ್ ಅವರು ಭಾರತಕ್ಕೆ ಸಂವಿಧಾನ ನೀಡುವಲ್ಲಿ ಅವರ ಪಾತ್ರ ಪ್ರಮುಖವಾಗಿತ್ತು. ಸಂವಿಧಾನ ಜಾರಿಯಾಗದಿದ್ದರೇ, ನಾವು ಇಂದು ಇಂತಹ ಉತ್ತಮ ಸ್ಥಿತಿಯಲ್ಲಿ ಇರಲು ಸಾಧ್ಯವಾಗುತ್ತಿರಲಿಲ್ಲ. ಹೀಗಾಗಿ ಸಂವಿಧಾನ ಮಹತ್ವವನ್ನು ಪ್ರತಿಯೊಬ್ಬರೂ ಅರಿಯಬೇಕು. ಇಡೀ ವಿಶ್ವದಲ್ಲೇ ನಮ್ಮ ಸಂವಿಧಾನ ಶ್ರೇಷ್ಠವಾದದು. ಅಂಬೇಡ್ಕರ್ ಅವರ ತತ್ವಾದರ್ಶ, ಚಿಂತನೆಯನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಆ ಮೂಲಕ ಅವರನ್ನು ನಿತ್ಯ ನೆನಪಿಸಿಕೊಳ್ಳುವ ಕೆಲಸವಾಗಬೇಕು. – ಶ್ರೀನಿವಾಸ್, ತಹಸೀಲ್ದಾರ್.

ಕಾರ್ಯಕ್ರಮದಲ್ಲಿ ಇಓ ಧರಣೇಶ್, ಇನ್ಸ್‌ಪೆಕ್ಟರ್ ಗಂಗಾಧರ್, ಮುಖಂಡರಾದ ಪುಟ್ಟಯ್ಯ, ತಿಮ್ಮಯ್ಯ, ಪುರಸಭಾ ಸ್ಥಾಯಿ ಸಮಿತಿ ಅಧ್ಯಕ್ಷ ಮಧು ಕುಮಾರ್, ಸದಸ್ಯ ಹೆಚ್.ಸಿ.ನರಸಿಂಹ ಮೂರ್ತಿ, ಬಿಇಓ ಅನಂತರಾಜು, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ರಾಮಸ್ವಾಮಿ, ಗ್ರೇಟ್–2 ತಹಸೀಲ್ದಾರ್ ಶ್ರೀಧರ್, ಮೈಮುಲ್ ನಿರ್ದೇಶಕ ಈರೇಗೌಡ, ಕುರುಬ ಸಮಾಜದ ತಾಲೂಕು ಅಧ್ಯಕ್ಷ ಮಾಲೇಗೌಡ, ಪರಶಿವಮೂರ್ತಿ, ಶಿವರಾಜು, ಸೌಮ್ಯ, ಅನುಷ, ಜವರಯ್ಯ, ಬಸವರಾಜು, ಕೆಂಡಗಣ್ಣೇಗೌಡ, ನಾಗರಾಜು, ಅಶೋಕ್, ಬಸವರಾಜು, ಸೋಮೇಶ್, ಕೆಂಡಗಣ್ಣ, ಕಾಳಿಂಗೇಗೌಡ, ಶ್ರೀಧರ್, ಶಿವರಾಜು, ಮಹದೇವಯ್ಯ, ಭಾನುಪ್ರಕಾಶ, ನಾಗರಾಜು, ಚಿಕ್ಕಣ್ಣ, ರಾಜು, ದೇವರಾಜು, ಕಾಳಪ್ಪಾಜಿ, ಸಣ್ಣ ಕುಮಾರ್, ಶಿವಯ್ಯ, ಅಧಿಕಾರಿಗಳಾದ ಡಾ.ರವಿಕುಮಾರ್, ವಸಂತ್ ಕುಮಾರ್, ಸಿಡಿಪಿಓ ದೀಪ, ನೇತ್ರಾವತಿ, ಶಶಿಕಲಾ, ರಾಮೇಗೌಡ, ಮಂಜು, ಸುರೇಶ್ ಇದ್ದರು.



ಕೊನೆಗೂ ಗೆಲುವಿನ ಟ್ರ್ಯಾಕ್‌ಗೆ ಮರಳಿದ ಸಿಎಸ್‌ಕೆ



ಲಕ್ನೋ, ಏ.14– ನಾಯಕ ಮಹೇಂದ್ರ ಸಿಂಗ್ ಧೋನಿ ಹಾಗೂ ಶಿವಂ ದುಬೆ ಅವರ ಬಿರುಸಿನ ಬ್ಯಾಟಿಂಗ್ ನೆರವಿನಿಂದ ಚೆನ್ನೈ ಸೂಪರ್ ಕಿಂಗ್ಸ್ ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ 5 ವಿಕೆಟ್‌ಗಳ ಜಯ ದಾಖಲಿಸಿದೆ. ಆ ಮೂಲಕ ಸತತ 5 ಸೋಲುಗಳಿಂದ ಕಂಗೆಟ್ಟಿದ್ದ ಸಿಎಸ್‌ಕೆ ಕೊನೆಗೂ ಗೆಲುವಿನ ಟ್ರ್ಯಾಕ್‌ಗೆ ಮರಳಿದೆ.

ಇಲ್ಲಿನ ಭಾರತ ರತ್ನ ಶ್ರೀ ಅಟಲ್ ಬಿಹಾರಿ ವಾಜಪೇಯಿ ಏಕನಾ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಲಕ್ನೋ ಸೂಪರ್ ಜೈಂಟ್ಸ್ 20 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 166 ರನ್ ಗಳಿಸಿತು. ನಂತರ ಗುರಿ ಬೆನ್ನಟ್ಟಿದ ಚೆನ್ನೈ ಸೂಪರ್ ಕಿಂಗ್ಸ್ 19.3 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 168 ರನ್ ಗಳಿಸಿ ಜಯದ ನಗೆ ಬೀರಿತು.

ಎಲ್‌ಎಸ್‌ಜಿ ಪರ ಬ್ಯಾಟಿಂಗ್ ಆರಂಭಿಸಿದ ಐಡನ್ ಮಾಕ್ರಮ್ 6 ರನ್ ಗಳಿಸಿ ಹೊರ ನಡೆದರೇ, ನಂತರ ಬಂದ ನಿಕೋಲಸ್ ಪೂರನ್ 8 ರನ್ ಗಳಿಸಿ ನಿರ್ಗಮಿಸಿದರು. ಈ ವೇಳೆ ಜೊತೆಯಾದ ಮಿಚೆಲ್ ಮಾರ್ಷ್ ಹಾಗೂ ರಿಷಬ್ ಪಂತ್ 3ನೇ ವಿಕೆಟ್‌ಗೆ 50 ರನ್ ಜೊತೆಯಾಟವಾಡಿದರು. ಈ ವೇಳೆ 30 ರನ್ ಗಳಿಸಿ ಮಾರ್ಷ್ ಔಟಾದರು. ಮತ್ತೊಂದೆಡೆ ತಾಳ್ಮೆ, ಜವಾಬ್ದಾರಿಯುತ ಆಟವಾಡಿದ ನಾಯಕ ರಿಷಬ್ ಪಂತ್ ತಲಾ 4 ಸಿಕ್ಸರ್, ಬೌಂಡರಿ ಒಳಗೊಂಡ 63 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಉಳಿದಂತೆ ಆಯುಷ್ ಬದೋನಿ 22, ಅಬ್ದುಲ್ ಸಮದ್ 20 ರನ್ ಗಳಿಸಿದರು. ಸಿಎಸ್‌ಕೆ ಪರ ಮತೀಶ ಪತಿರಾಣಾ, ರವೀಂದ್ರ ಜಡೇಜಾ ತಲಾ 2, ಖಲೀಲ್ ಅಹಮ್ಮದ್, ಅನ್ಶುಲ್ ಕಾಂಬೋಜ್ ತಲಾ ಒಂದೊಂದು ವಿಕೆಟ್ ಪಡೆದರು.

ನಂತರ ಬ್ಯಾಟಿಂಗ್ ಮಾಡಿದ ಚೆನ್ನೈಗೆ ರಚಿನ್ ರವೀಂದ್ರ ಹಾಗೂ ಶೇಖ್ ರಶೀದ್ ಮೊದಲ ವಿಕೆಟ್‌ಗೆ 52 ರನ್ ಜೊತೆಯಾಟವಾಡಿ ಉತ್ತಮ ಆರಂಭ ಒದಗಿಸಿದರು. ಈ ವೇಳೆ 27 ರನ್ ಗಳಿಸಿದ್ದ ಶೇಖ್ ರಶೀದ್ ನಿರ್ಗಮಿಸಿದರು. ಮತ್ತೊಂದೆಡೆ ಉತ್ತಮವಾಗಿ ಆಡುತ್ತಿದ್ದ ರಚಿನ್ ರವೀಂದ್ರ 37 ರನ್ ಗಳಿಸಿ ಔಟಾದರೆ, ನಂತರ ಬಂದ ರಾಹುಲ್ ತ್ರಿಪಾಠಿ 9, ರವೀಂದ್ರ ಜಡೇಜಾ 7, ವಿಜಯ್ ಶಂಕರ್ 9 ರನ್ ಗಳಿಸಿ ಔಟಾದರು. ಈ ವೇಳೆ ಜೊತೆಗೂಡಿದ ಶಿವಂ ದುಬೆ ಹಾಗೂ ನಾಯಕ ಧೋನಿ ಬಿರುಸಿನ ಬ್ಯಾಟಿಂಗ್ ಮೂಲಕ ತಂಡಕ್ಕೆ ಜಯ ತಂದುಕೊಟ್ಟರು. ದುಬೆ 2 ಸಿಕ್ಸರ್, 3 ಬೌಂಡರಿ ಒಳಗೊಂಡ ಅಜೇಯ 43, ಧೋನಿ 11 ಎಸೆತಗಳಲ್ಲಿ 1 ಸಿಕ್ಸರ್, 4 ಬೌಂಡರಿ ಒಳಗೊಂಡ 26 ರನ್ ಗಳಿಸಿ ಅಜೇಯರಾಗಿ ಉಳಿದರು. ಲಕ್ನೋ ಪರ ರವಿ ಬಿಷ್ಣೋಯಿ 2, ಐಡನ್ ಮಾಕ್ರಮ್, ಆವೇಶ್ ಖಾನ್, ದಿಗ್ವೇಶ್ ಸಿಂಗ್ ರಥಿ ತಲಾ ಒಂದೊಂದು ವಿಕೆಟ್ ಪಡೆದರು. ಧೋನಿ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು.

ತಂಡದ ಅಂಕಪಟ್ಟಿ ವಿವರ

ತಂಡ	ಪಂದ್ಯಗಳು	ಗೆಲುವು	ಸೋಲು	ಡ್ರಾ	ಅಂಕ
ಗುಜರಾತ್	6	4	2	0	8
ಡೆಲ್ಲಿ	5	4	1	0	8
ಬೆಂಗಳೂರು	6	4	2	0	8
ಲಕ್ನೋ	7	4	3	0	8
ಕೋಲ್ಕತ್ತಾ	6	3	3	0	6
ಪಂಜಾಬ್	5	3	2	0	6
ಮುಂಬೈ	6	2	4	0	4
ರಾಜಸ್ಥಾನ್	6	2	4	0	4
ಹೈದರಾಬಾದ್	6	2	4	0	4
ಚೆನ್ನೈ	7	2	5	0	4

ಇಂದಿನ ಪಂದ್ಯ

ಪಂಜಾಬ್ ಕಿಂಗ್ಸ್
V/S
ಕೊಲ್ಕತ್ತಾ ನೈಟ್ ರೈಡರ್ಸ್
ಸಮಯ: ಸಂಜೆ 7.30
ಸ್ಥಳ : ಯಾದವೀಂದ್ರ ಸಿಂಗ್ ಕ್ರೀಡಾಂಗಣ, ಚಂಡೀಗಢ

ಮೈಸೂರಿನಲ್ಲಿ ಡಾ.ಅಂಬೇಡ್ಕರ್ ಜಯಂತಿ ಅದ್ದೂರಿ, ಅರ್ಥಪೂರ್ಣ ಆಚರಣೆ

ಅಂಬೇಡ್ಕರ್ ಭವನಗಳು ವಿದ್ಯಾ ದೇಗುಲಗಳಾಗಿ ವಿದ್ಯಾರ್ಥಿಗಳಿಗೆ ವೃತ್ತಿಪರ ಶಿಕ್ಷಣ ನೀಡಬೇಕು; ಶಾಸಕ ಕೆ.ಹರೀಶ್‌ಗೌಡ ಸಲಹೆ





ಮೈಸೂರು ನಗರದ ಪುರಭವನದಲ್ಲಿ ಆಯೋಜಿಸಿದ್ದ ಡಾ.ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಎಂಎಲ್ಸಿಗಳಾದ ಮಂಜೇಗೌಡರು, ಡಾ॥ ತಿಮ್ಮಯ್ಯ, ಜಿಲ್ಲಾಧಿಕಾರಿ ಜಿ.ಲಕ್ಷ್ಮಿ ಕಾಂತರೆಡ್ಡಿ ಸೇರಿದಂತೆ ಹಲವು ಅಧಿಕಾರಿಗಳು ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು. (ಬಲಚಿತ್ರ) ಮಹಿಳೆಯರ ಪೂರ್ಣಕುಂಭ ಸ್ವಾಗತದೊಂದಿಗೆ ಆಕರ್ಷಕ ಸ್ತಬ್ಧಚಿತ್ರಗಳ ಮೆರವಣಿಗೆ ಪುರಭವನದಿಂದ ಕಲಾಮಂದಿರದವರೆಗೆ ಸಾಗಿತು. ಈ ವೇಳೆ ಜಿ.ಟಿ.ದೇವೇಗೌಡ ಇತರರು ಸಾಗಿದರು.

ಮೈಸೂರು, ಏ.14(ಬಿಎಲ್‌ಯು)– ಮೈಸೂರು ಸೇರಿದಂತೆ ರಾಜ್ಯದಲ್ಲಿರುವ ಎಲ್ಲಾ ಅಂಬೇಡ್ಕರ್ ಭವನಗಳು ವಿದ್ಯಾ ದೇಗುಲಗಳಾಗಿ ಪರಿವರ್ತನೆಗೊಳ್ಳಬೇಕು. ವಿದ್ಯಾರ್ಥಿಗಳು ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಅಲ್ಲಿ ವೃತ್ತಿಪರ ಶಿಕ್ಷಣ ನೀಡಬೇಕು ಎಂದು ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ ಸಲಹೆ ನೀಡಿದರು.

ನಗರದ ಕಲಾಮಂದಿರದಲ್ಲಿ ಇಂದು ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 134 ನೇ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಅಂಬೇಡ್ಕರ್ ಭವನಗಳಲ್ಲಿ ಡಿಜಿಟಲ್ ಲೈಬ್ರರಿಗಳನ್ನು ತೆರೆಯಬೇಕು. ಐಎಎಸ್, ಐಪಿಎಸ್, ಐಎಫ್‌ಎಸ್ ಸೇರಿದಂತೆ ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ವಿದ್ಯಾರ್ಥಿಗಳನ್ನು ಅಣಿಗೊಳಿಸುವ ವಿದ್ಯಾದೇಗುಲವಾಗಬೇಕು ಎಂದು ಹೇಳಿದರು.

ಮಾನಸ ಗಂಗೋತ್ರಿಯ ಅಧ್ಯಾಪಕರು ವಾರದಲ್ಲಿ ಕನಿಷ್ಠ ಎರಡು ದಿನ ಶಿಕ್ಷಣ ನೀಡಬೇಕು. ಈ ಮೂಲಕ ವಿದ್ಯಾರ್ಥಿಗಳ ಜ್ಞಾನ ವೃದ್ಧಿಸಬೇಕು. ಇದರಿಂದ ಡಾ.ಅಂಬೇಡ್ಕರ್ ಅವರ ಆಶಯ ಸಾಕಾರಗೊಳ್ಳುತ್ತದೆ ಎಂದು ಹರೀಶ್‌ಗೌಡ ಅಭಿಪ್ರಾಯಪಟ್ಟರು.

ಜಾತಿ, ಧರ್ಮ, ಮತ ಭೇದ ಭಾವವಿಲ್ಲದೆ ಎಲ್ಲರೂ ಸ್ವತಂತ್ರರಾಗಿ ಸಮಾನತೆಯಿಂದ ಬದುಕುವ ಅವಕಾಶವನ್ನು ಸಂವಿಧಾನ ನೀಡಿದೆ. ಆದರೆ ಇದನ್ನು ಸರಿಯಾಗಿ ಬಳಕೆ ಮಾಡಿಕೊಳ್ಳುತ್ತಿಲ್ಲ. ಈ ಹಿನ್ನಲೆ ಸಂವಿಧಾನದ ವಿಚಾರಧಾರೆಗಳ ಬಗ್ಗೆ ಅಧ್ಯಯನ ಮಾಡಿ ಸರ್ಕಾರದ ಸೌಲಭ್ಯ ಬಳಸಿಕೊಂಡು ಬದುಕಬೇಕು ಎಂದು ಕಿವಿಮಾತು ಹೇಳಿದರು.

ಡಾ.ಅಂಬೇಡ್ಕರ್ ಅವರು ರಾಜ್ಯಶಾಸ್ತ್ರದ ಜೊತೆಗೆ ಅರ್ಥಶಾಸ್ತ್ರ ಸೇರಿದಂತೆ ಹಲವು ವಿಚಾರಗಳಲ್ಲಿ ಪರಿಣತಿ ಹೊಂದಿದ್ದರು. ಇಂತಹ ಮಹಾನ್ ವ್ಯಕ್ತಿ ನಮ್ಮ ದೇಶಕ್ಕೆ ಸಂವಿಧಾನ ನೀಡಿರುವುದು ನಮ್ಮ ಹೆಮ್ಮೆ ಎಂದು ಪ್ರತಿಪಾದಿಸಿದರು.

ಅಸ್ಪೃಶ್ಯತೆ ಹೋಗಲಾಡಿಸಿ ದಬ್ಬಾಳಿಕೆ ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಡಾ.ಅಂಬೇಡ್ಕರ್ ಅವರು ದೊಡ್ಡ ಚಳವಳಿ ಆರಂಭಿಸಿದರು. ಈ ಮೂಲಕ ಸಮ ಸಮಾಜ ನಿರ್ಮಾಣಕ್ಕೆ ಡಾ.ಅಂಬೇಡ್ಕರ್ ಸಂವಿಧಾನದಲ್ಲಿ ಹಲವು ಕಾನೂನು ರೂಪಿಸಿದರು. ಇದನ್ನು ಅರಿತು ಮೀಸಲಾತಿ ಸೌಲಭ್ಯವನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದು ಹರೀಶ್ ಗೌಡ ಮತ್ತೊಮ್ಮೆ ಸಲಹೆ ನೀಡಿದರು.

ಅತೀ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಯಿತು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಂಯುಕ್ತವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅರ್ಥಪೂರ್ಣವಾಗಿ ಅಂಬೇಡ್ಕರ್ ಜಯಂತಿ ಆಚರಿಸಲಾಯಿತು.

ಈ ಕಾರ್ಯಕ್ರಮಕ್ಕೂ ಮೊದಲು ನಗರದ ಪುರಭವನದಲ್ಲಿರುವ ಡಾ.ಅಂಬೇಡ್ಕರ್ ಅವರ ಪ್ರತಿಮೆಗೆ ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ ಸೇರಿದಂತೆ ಹಲವು ಅಧಿಕಾರಿಗಳು ಮಾಲಾರ್ಪಣೆ ಮಾಡಿದರು.

ಸಾರೋಟ್‌ನಲ್ಲಿ ಡಾ.ಅಂಬೇಡ್ಕರ್ ಭಾವಚಿತ್ರದ ಸ್ತಬ್ಧಚಿತ್ರವಿರುವ ಮೆರವಣಿಗೆ ಪುರಭವನದಿಂದ ಆರಂಭವಾಯಿತು. ಡಾ.ಅಂಬೇಡ್ಕರ್ ಅವರ ಜೀವಿತಾವಧಿಯ ಹಲವು ಭಾವಚಿತ್ರಗಳನ್ನು ಸ್ತಬ್ಧಚಿತ್ರದಲ್ಲಿ ಪ್ರದರ್ಶಿಸಲಾಗಿತ್ತು. ಮಹಿಳೆಯರು ಪೂರ್ಣಕುಂಭದೊಂದಿಗೆ ಮೆರವಣಿಗೆಯ ಮುಂಚೂಣಿಯಲ್ಲಿ ಸಾಗಿದರು. ಜಾನಪದ ಕಲಾತಂಡಗಳ ನೃತ್ಯ ಮೆರವಣಿಗೆಗೆ ಮೆರುಗು ನೀಡಿತು. ಚಾಮರಾಜ ಒಡೆಯರ್ ವೃತ್ತ, ಆಲ್ಬರ್ಟ್ ವಿಕ್ಟರ್ ರಸ್ತೆ, ಕೆ.ಆರ್.ರಸ್ತೆ, ದೇವರಾಜ ಅರಸ್ ರಸ್ತೆ, ಜೆಎಲ್‌ಬಿ ರಸ್ತೆ ವಿನೋಬಾ ರಸ್ತೆ ಮೂಲಕ ಸಾಗಿ ಬಂದ ಮೆರವಣಿಗೆ ಕಲಾಮಂದಿರ ತಲುಪಿತು.

ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತ ರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್.ಯುಕೇಶ್ ಕುಮಾರ್, ನಗರ ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸಿಫ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಷ್ಣು ವರ್ಧನ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಬಿ.ರಂಗೇಗೌಡ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಸಂವಿಧಾನ ಇಲ್ಲದಿದ್ದರೆ ಶೋಷಿತರಿಗೆ ಸಮಾನತೆ ಬದುಕು ಅಸಾಧ್ಯವಾಗಿತ್ತು

ಡಾ. ಅಂಬೇಡ್ಕರ್ ಅವರು ನೀಡಿರುವ ಸಂವಿಧಾನ ಅಸ್ತಿತ್ವದಲ್ಲಿ ಇಲ್ಲದಿದ್ದರೆ ಹಿಂದುಳಿದ ಹಾಗೂ ಶೋಷಣೆಗೊಳಗಾಗಿದ್ದ ಜನರು ಪ್ರಜಾಪ್ರಭುತ್ವದಲ್ಲಿ ಸಮಾನತೆಯಿಂದ ಬದುಕಲು ಸಾಧ್ಯವಾಗುತ್ತಿರಲಿಲ್ಲ ಎಂದು ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರು ಅಭಿಪ್ರಾಯಪಟ್ಟರು.

18 ವರ್ಷ ತುಂಬಿದ ಪ್ರತಿಯೊಬ್ಬ ವ್ಯಕ್ತಿಗೆ ಮತದಾನದ ಹಕ್ಕು ನೀಡಿರುವ ಸಂವಿಧಾನ, ಸರ್ಕಾರ ನಡೆಸಲು ಒಳ್ಳೆಯ ವ್ಯಕ್ತಿ ಆಯ್ಕೆ ಮಾಡುವ ಅವಕಾಶ ನೀಡಿದೆ ಎಂದು ಹೇಳಿದರು.

ಡಾ.ಅಂಬೇಡ್ಕರ್ ಅವರು ಒಬ್ಬ ವ್ಯಕ್ತಿಯಲ್ಲ, ಶಕ್ತಿ ಎಂದು ಪ್ರತಿಪಾದಿಸಿದ ಜಿ.ಟಿ.ದೇವೇಗೌಡರು, ಶಿಕ್ಷಣಕ್ಕೆ ಮೊದಲ ಆದ್ಯತೆ ನೀಡಿರುವ ಅಂಬೇಡ್ಕರ್ ಅವರು ಅನ್ಯಾಯದ ವಿರುದ್ಧ ಹೋರಾಟ ಮಾಡುವ ಶಕ್ತಿ ನೀಡಿದ್ದಾರೆ. ಬುದ್ಧ, ಬಸವ, ಗಾಂಧೀಜಿ ಅವರಿಗಿಂತಲೂ ಮೀರಿದ ಸಮಾನತೆ, ಸಾಮಾಜಿಕತೆ ಹಾಗೂ ಆರ್ಥಿಕ ಶಕ್ತಿ ನೀಡಿದವರು ಡಾ.ಅಂಬೇಡ್ಕರ್ ಎಂದು ಬಣ್ಣಿಸಿದರು.

ಸಾಮಾಜಿಕ ನ್ಯಾಯದ ತೇರನ್ನು ಏಕಾಂಗಿಯಾಗಿ ಇಷ್ಟು ದೂರ ತಂದಿದ್ದೇನೆ. ನಿಮಗೆ ನಂಬಿಕೆ ಇದ್ದರೆ ಇಲ್ಲಿಂದ ಮುಂದಕ್ಕೆ ಎಳೆಯಿರಿ. ಇಲ್ಲದೆ ಹೋದರೆ ಹಿಂದಕ್ಕೆ ತಳ್ಳುವಂತಹ ಕೆಲಸ ಮಾಡಬೇಡಿ ಎಂದು ಡಾ.ಅಂಬೇಡ್ಕರ್ ಹೇಳಿದ ಅರ್ಥಗರ್ಭಿತ ಮಾತನ್ನು ಜಿ.ಟಿ.ದೇವಗೇಡರು ನೆನಪು ಮಾಡಿದರು.

ತರುವಾಯ ಮಾತನಾಡಿದ ವಿಧಾನಪರಿಷತ್ ಸದಸ್ಯ ಡಾ.ತಿಮ್ಮಯ್ಯ, ಕತ್ತಲೆಯಲ್ಲಿ ಬದುಕುತ್ತಿದ್ದ ಜನರಿಗೆ ಡಾ.ಅಂಬೇಡ್ಕರ್ ಬೆಳಕು ನೀಡಿದ್ದಾರೆ. ಸಂವಿಧಾನದ ಮೂಲಕ ಶೋಷಣೆಗೊಳಗಾದವರಿಗೆ ಕಾನೂನಿನ ಶಕ್ತಿ ನೀಡಿದ್ದಾರೆ ಎಂದು ಅಭಿಪ್ರಾಯಪಟ್ಟರು.

ನಂತರ ಮಾತನಾಡಿದ ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ಶಿಕ್ಷಣ, ಸಮಾನತೆ, ಭ್ರಾತೃತ್ವ ಎಂಬ ಮೂರು ಆಧಾರಸ್ತಂಭಗಳನ್ನು ಡಾ.ಅಂಬೇಡ್ಕರ್ ನೀಡಿದ್ದಾರೆ. ಈ ಹಿನ್ನೆಲೆ ಅವರ ವಿಚಾರಧಾರೆಗಳನ್ನು ನಾವು ಅಳವಡಿಸಿಕೊಳ್ಳಬೇಕು ಎಂದು ಸಲಹೆಯಿತ್ತರು.

ಕರ್ನಾಟಕ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಪುಷ್ಪಾ ಅಮರನಾಥ್ ಮಾತನಾಡಿ, ಸಾಮಾಜಿಕ, ರಾಜಕೀಯ, ಆರ್ಥಿಕ ಸಮಾನತೆಯ ನ್ಯಾಯ ಯಾವಾಗ ಪಡೆದುಕೊಳ್ಳುತ್ತೇವೆಯೊ ಆಗ ಅಂಬೇಡ್ಕರ್ ಅವರ ವಿಚಾರಧಾರೆಗಳಿಗೆ ಅರ್ಥ ಬರುತ್ತದೆ ಎಂದು ಅಭಿಪ್ರಾಯಪಟ್ಟರು.


ಜ್ಞಾನ ಸಂಪತ್ತಿನಿಂದ ವಿಶ್ವ ನಾಯಕರಾದ ಡಾ.ಬಿ.ಆರ್.ಅಂಬೇಡ್ಕರ್

ಮಾಜಿ ಸಚಿವ ಪಿಜಿಆರ್ ಸಿಂಧ್ಯಾ ಅಭಿಮತ

ಮೈಸೂರು,ಏ.14(ಎಂಟಿವೈ)– ವಿಶ್ವದಲ್ಲಿಯೇ ಶ್ರೇಷ್ಠ ಸಂವಿಧಾನವನ್ನು ಭಾರತಕ್ಕೆ ಕೊಡುಗೆ ನೀಡಿರುವ ಡಾ.ಬಿ.ಆರ್.ಅಂಬೇಡ್ಕರ್ ತಮ್ಮಲ್ಲಿರುವ ಅಪಾರ ಜ್ಞಾನ ಸಂಪತ್ತಿನಿಂದಾಗಿ ವಿಶ್ವನಾಯಕರಾಗಿದ್ದಾರೆ ಎಂದು ಮಾಜಿ ಸಚಿವ ಪಿ.ಜಿ.ಆರ್.ಸಿಂಧ್ಯಾ ತಿಳಿಸಿದ್ದಾರೆ.

ಮೈಸೂರಿನ ಕಾಂಗ್ರೆಸ್ ಕಚೇರಿಯಲ್ಲಿ ಸೋಮವಾರ ನಡೆದ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಅಂಬೇಡ್ಕರ್ ಅವರು ಕೇವಲ ರಾಷ್ಟ್ರನಾಯಕರಲ್ಲ. ಅಪಾರವಾದ ಜ್ಞಾನ ಸಂಪತ್ತು, ವಿದ್ವತ್‌ನಿಂದಾಗಿ ಅವರು ವಿಶ್ವಕ್ಕೆ ನಾಯಕರಾಗಿದ್ದಾರೆ. ಅವರ ಚಿಂತನೆ, ಸಾಮಾಜಿಕ ಕಾಳಜಿ, ಅಪಾರ ವಿದ್ವತ್ ಜ್ಞಾನದಿಂದಾಗಿ ಅವರಿಗೆ ಸಂವಿಧಾನ ರಚನೆ ಮಾಡುವ ಸುವರ್ಣ ಅವಕಾಶ ಒದಗಿ ಬಂದಿತ್ತು. ಅದನ್ನು ಸದುಪಯೋಗ ಮಾಡಿಕೊಂಡು ವಿಶ್ವ ಮೆಚ್ಚುವಂತಹ ಸಂವಿಧಾನವನ್ನು ನೀಡಿದ್ದಾರೆ.

ಸಂವಿಧಾನದಿಂದ ಮಾತ್ರ ನಾವು ಇಂದು ಸಮಾಜದಲ್ಲಿ ಎಲ್ಲ ಸೌಲಭ್ಯವನ್ನು ಪಡೆಯುತ್ತಿದ್ದೇವೆ. ದೇಶದ ಸಂವಿಧಾನದಿಂದ ಸಮಾನತೆಯ ಅಂಶವನ್ನು ಇಡೀ ಪ್ರಪಂಚವೇ ಒಪ್ಪಿಕೊಂಡಿದೆ. ಇತ್ತೀಚಿನ ದಿನಗಳಲ್ಲಿ ಮೀಸಲಾತಿಯನ್ನು ಅಲುಗಾಡಿಸುವ ಹುನ್ನಾರವನ್ನು ಬಿಜೆಪಿ ಮಾಡುತ್ತಿದೆ. ಹಂತ ಹಂತವಾಗಿ ಸಂವಿಧಾನವನ್ನು ತೆಗೆದುಹಾಕುವ ಬಿಜೆಪಿಯವರ ಸಂಚನ್ನು ಫಲಪ್ರದವಾಗಲು ಬಿಡಬಾರದು. ಅದರ ವಿರುದ್ಧ ಹೋರಾಟ ನಿರಂತರವಾಗಿ ನಡೆಯಬೇಕು. ಡಾ.ಅಂಬೇಡ್ಕರ್ ಅವರ ವಿಚಾರಗಳು ಸಾರ್ವಕಾಲಿಕ ಒಪ್ಪುವಂತಹದ್ದು. ಅವರ ವಿಚಾರವನ್ನು ಚೆನ್ನಾಗಿ ಓದಿ ತಿಳಿದುಕೊಳ್ಳಬೇಕು. ಆಗ ಮಾತ್ರ ಅವರನ್ನು ಸಂಪೂರ್ಣವಾಗಿ ಅರ್ಥಮಾಡಿಕೊಳ್ಳಲು ಸಾಧ್ಯ ಎಂದು ತಿಳಿಸಿದರು.



ಮೈಸೂರಿನ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಡಾ.ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಮಾಜಿ ಸಚಿವ ಪಿ.ಜಿ.ಆರ್.ಸಿಂಧ್ಯಾ ಅಂಬೇಡ್ಕರ್ ಪುತ್ಥಳಿಗೆ ಪುಷ್ಪನಮನ ಸಲ್ಲಿಸಿದರು

ಇದೇ ವೇಳೆ ನ್ಯಾಯವಾದಿ ಸುದೀರ್ ಕುಮಾರ್ ಮೊರಳ್ಳಿ ಮಾತನಾಡಿ, ಡಾ.ಅಂಬೇಡ್ಕರ್ ಅವರು ನಿಧನರಾದ ದಿನ ಇಡೀ ಪ್ರಪಂಚವೇ ಸಂತಾಪ ವ್ಯಕ್ತಪಡಿಸಿತ್ತು. ಅವರ ಕುಟುಂಬ ವರ್ಗ ಅವರನ್ನು ಅವರ ಕರ್ಮಭೂಮಿಗೆ ಕೊಂಡೊಯ್ಯಬೇಕೋ ಅಥವಾ ದೆಹಲಿಯಲ್ಲೇ ಅಂತ್ಯ ಸಂಸ್ಕಾರ ನಡೆಸಬೇಕೋ ಎಂದು ನಡೆಸಿದ ಚರ್ಚೆಯನ್ನು ಈಗ ಬಿಜೆಪಿ ತಿರುಚಿ ಹೇಳುತ್ತಿದೆ. ಭೂತದ ಬಾಯಲ್ಲಿ ಭಗವದ್ಗೀತೆ ಎಂಬಂತೆ ಬಿಜೆಪಿ ಈಗ ಸಂವಿಧಾನ ಪುಸ್ತಕವನ್ನು ಹಿಡಿದು ಕಾರ್ಯಾಗಾರಗಳನ್ನು ನಡೆಸುತ್ತಿದೆ. ಗಾಂಧಿಯನ್ನು ಕೊಂದಾಗ ಸಂಭ್ರಮಿಸಿದವರು, ಅಂಬೇಡ್ಕರ್ ಅವರು ತೀರಿ ಹೋದಾಗಲೂ ಸಂಭ್ರಮಿಸಿದ್ದರು. ಇಂತಹ ಮನಸ್ಥಿತಿ ಇರುವವರನ್ನು ಸಮಾಜ ಎಂದಿಗೂ ಒಪ್ಪಿಕೊಳ್ಳಬಾರದು ಎಂದರು.

ಈ ಕಾರ್ಯಕ್ರಮದಲ್ಲಿ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್, ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಮಾಜಿ ಶಾಸಕ ಡಾ॥ ಭಾರತಿ ಶಂಕರ್, ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ, ರಾಜ್ಯ ಗ್ಯಾರಂಟಿ ಸಮಿತಿ ಉಪಾಧ್ಯಕ್ಷೆ ಡಾ.ಪುಷ್ಪ ಅಮರನಾಥ್, ನಗರ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಪುಷ್ಪಲತಾ ಚಿಕ್ಕಣ್ಣ, ಗ್ರಾಮಾಂತರ ಜಿಲ್ಲಾ ಸಮಿತಿ ಅಧ್ಯಕ್ಷೆ ಲತಾ ಸಿದ್ದಶೆಟ್ಟಿ, ಗ್ರಾಮಾಂತರ ಕಾಂಗ್ರೆಸ್ ಉಪಾಧ್ಯಕ್ಷ ಹೆಡತಲೆ ಮಂಜುನಾಥ್, ಪ್ರಧಾನ ಕಾರ್ಯದರ್ಶಿ ಎಂ.ಶಿವಣ್ಣ ಗುಡ್ಡಪ್ಪ ಶಿವಪ್ರಸಾದ್ ಎಂ, ಪರಿಶಿಷ್ಟ ಜಾತಿ ಘಟಕದ ಅಧ್ಯಕ್ಷ ಸಿದ್ದರಾಜು, ರಮೇಶ್, ಜಿ.ಪಂ ಮಾಜಿ ಅಧ್ಯಕ್ಷ ಬಿ.ಎಂ.ರಾಮು, ಮಾಜಿ ಮೇಯರ್ ಬಿ.ಕೆ.ಪ್ರಕಾಶ್, ಟಿ.ಬಿ.ಚಿಕ್ಕಣ್ಣ, ಮುಖಂಡರಾದ ಉತ್ತನಹಳ್ಳಿ ಶಿವಣ್ಣ, ನಜರ್‌ಬಾದ್ ನಟರಾಜ್, ಹುಣಸೂರು ಬಸವಣ್ಣ, ಗಿರೀಶ್, ಯೋಗೇಶ್, ಈಶ್ವರ್ ಚಕ್ಕಡಿ, ಲೋಕೇಶ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ರತ್ನಂ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಗುಡ್ ಬ್ಯಾಡ್ ಅಗ್ಲಿ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಸಿಕಂದರ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಡಾಕೂ ಮಹಾರಾಜ್ (ತೆ)	4 ಪ್ರದರ್ಶನಗಳು
ಗಾಯಿತ್ರಿ	
ವಿದ್ಯಾಪತಿ (ಕ)	4 ಪ್ರದರ್ಶನಗಳು
ರಾಜಕಮಲ್	
ಜಾಕ್ (ತೆ)	4 ಪ್ರದರ್ಶನಗಳು
ಸಂಗಂ	
ವಾಮನ (ಕ)	4 ಪ್ರದರ್ಶನಗಳು
ಲಿಡೋ	
ಅಜ್ಞಾತವಾಸಿ (ಕ) ಜಾಟ್ (ಹಿಂ)	2+2 ಪ್ರದರ್ಶನಗಳು
ತಿಬ್ಬಾದೇವಿ	
ಭಗೀರಥ (ಕ)	4 ಪ್ರದರ್ಶನಗಳು
ಪ್ರಭಾ	
ಭಗೀರಥ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

- ಸ್ಕ್ರೀನ್ 1 ಗುಡ್ ಬ್ಯಾಡ್ ಅಗ್ಲಿ (ತ): ಬೆ.10.30ಕ್ಕೆ, ಮ.1.25ಕ್ಕೆ, ಸಂ.4.20ಕ್ಕೆ, ರಾ.7.15ಕ್ಕೆ, ರಾ.10.15ಕ್ಕೆ.
- ಸ್ಕ್ರೀನ್ 2 ಅಲಪ್ಪುಳ ಜಿಮ್ಖಾನ (ಮ): ಬೆ.10.20ಕ್ಕೆ, ಜಾಕ್ (ತೆ): ಮ.1.20ಕ್ಕೆ, ಸಂ.4.15ಕ್ಕೆ, ಅಜ್ಞಾತವಾಸಿ (ಕ): ರಾ.7.15ಕ್ಕೆ, ಬಜೂಕ (ಮ): ರಾ.9.55ಕ್ಕೆ.
- ಸ್ಕ್ರೀನ್ 3 ದಿ ಅಮಚೂರ್ (ಇಂ): ಬೆ.10.40ಕ್ಕೆ, ರಾ.7.15ಕ್ಕೆ, ಅಲಪ್ಪುಳ ಜಿಮ್ಖಾನ (ಮ): ಮ.1.20ಕ್ಕೆ, ರಾ.10ಕ್ಕೆ. ಜಾಟ್ (ಹಿಂ): ಸಂ.4.10ಕ್ಕೆ.
- ಸ್ಕ್ರೀನ್ 4 ವಿದ್ಯಾಪತಿ (ಕ): ಬೆ.10.30ಕ್ಕೆ, ರಾ.7.05ಕ್ಕೆ, ವಾಮನ (ಕ): ಮ.1.20ಕ್ಕೆ, ಸಂ.4.15ಕ್ಕೆ, ಜಾಟ್ (ಹಿಂ): ರಾ.9.55ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

- ಸ್ಕ್ರೀನ್ 1 ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
- ಸ್ಕ್ರೀನ್ 2 ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
- ಸ್ಕ್ರೀನ್ 3 ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
- ಸ್ಕ್ರೀನ್ 4 ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

- ಸ್ಕ್ರೀನ್ 1 ವಿದ್ಯಾಪತಿ (ಕ): ಬೆ.10.45ಕ್ಕೆ, ಸಂ.4.15ಕ್ಕೆ, ಸಂ.6.45ಕ್ಕೆ, ಮನದ ಕಡಲು (ಕ): ಮ.1.15ಕ್ಕೆ, ರಾ.9.15ಕ್ಕೆ.
- ಸ್ಕ್ರೀನ್ 2 ಗುಡ್ ಬ್ಯಾಡ್ ಅಗ್ಲಿ (ತ): ಬೆ.10.30ಕ್ಕೆ, ಸಂ.4ಕ್ಕೆ, ವಾಮನ (ಕ): ಮ.1.15ಕ್ಕೆ, ಸಂ.6.50ಕ್ಕೆ, ರಾ.9.30ಕ್ಕೆ.
- ಸ್ಕ್ರೀನ್ 3 ವಾಮನ (ಕ): ಬೆ.10.40ಕ್ಕೆ, ಸಂ.4.05ಕ್ಕೆ, ಗುಡ್ ಬ್ಯಾಡ್ ಅಗ್ಲಿ (ತ): ಮ.1.20ಕ್ಕೆ, ಸಂ.6.45ಕ್ಕೆ, ರಾ.9.30ಕ್ಕೆ.
- ಸ್ಕ್ರೀನ್ 4 ಎಂಪುರನ್ 2 (ಕ): ಮ.12.30ಕ್ಕೆ, ಬಜೂಕ (ಮ): ಮ.3.50ಕ್ಕೆ, ಸಂ.6.40ಕ್ಕೆ, ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139


ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.


ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ



ಮೈಸೂರಿನ ರಾಮಕೃಷ್ಣ ನಗರದ ರಾಮಕೃಷ್ಣ ವಿದ್ಯಾಕೇಂದ್ರ ಮತ್ತು ಆರ್.ಕೆ.ವಿ.ಕೆ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಆಚರಿಸಲಾಯಿತು. ಆರ್‌ಕೆವಿಕೆ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಸಿ. ಶಿವಪ್ಪ ಕಾರ್ಯಕ್ರಮ ಉದ್ಘಾಟಿಸಿದರು. ಶ್ರೀ ರಾಮಕೃಷ್ಣ ಸೇವಾ ಸಂಘದ ಅಧ್ಯಕ್ಷ ಎಂ.ಪಾಪೇಗೌಡ, ಕಾರ್ಯನಿರ್ವಾಹಕ ಅಧಿಕಾರಿ ಪ್ರೊ॥ ಜಿ. ಚಂದ್ರಶೇಖರ್, ಪ್ರಾಂಶುಪಾಲ ಸಿ. ಶಿವಪ್ಪ, ಮುಖ್ಯೋಪಾಧ್ಯಾಯ ಜಿ.ಎನ್. ವಿಶ್ವನಾಥ್, ಮುಖ್ಯೋಪಾಧ್ಯಾಯಿನಿ ಶ್ರೀಮತಿ ವೀಣಾ ಕೆ. ಹೆಗಡೆ ಹಾಗೂ ಶಾಲಾ ಕಾಲೇಜಿನ ಅಧ್ಯಾಪಕ–ಅಧ್ಯಾಪಕೇತರರು ಉಪಸ್ಥಿತರಿದ್ದರು.



ಮೈಸೂರಿನ ಡಿಎಆರ್‌ನಲ್ಲಿ ಸೋಮವಾರ ಡಾ. ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಿಸಲಾಯಿತು. ಡಿವೈಎಸ್ಪಿ ವೀರಣ್ಣ, ಇನ್ಸ್‌ಪೆಕ್ಟರ್ ದೇವಿಪ್ರಸಾದ್ ಹಾಗೂ ಇತರರನ್ನು ಚಿತ್ರದಲ್ಲಿ ಕಾಣಬಹುದು.



ಮೈಸೂರು ಮಹಾನಗರ ಪಾಲಿಕೆ ಗುತ್ತಿಗೆದಾರರ ಸಂಘದ ವತಿಯಿಂದ ಮೈಸೂರಿನ ಎಫ್‌ಟಿಎಸ್ ಸರ್ಕಲ್‌ನ ಡಾ. ಬಿ.ಆರ್.ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ಪೌರಕಾರ್ಮಿಕರಿಗೆ ಸಮವಸ್ತ್ರ ವಿತರಿಸಲಾಯಿತು. ಸಂಘದ ಅಧ್ಯಕ್ಷ ಉದಯ ಕುಮಾರ್, ಪ್ರಸಾದ್‌ಕುಮಾರ್, ಹೇಮಚಂದ್ರ, ರಾಜೇಶ್, ಶೇಖರ್, ನಂಜುಂಡ ಹಾಗೂ ಇತರರನ್ನು ಚಿತ್ರದಲ್ಲಿ ಕಾಣಬಹುದು.


ಗುಂಗ್ರಾಲ್ ಛತ್ರ ಗ್ರಾ.ಪಂ. ಮಾಜಿ ಅಧ್ಯಕ್ಷರು
ಮಾಜಿ ಉಪಾಧ್ಯಕ್ಷರು ಹಾಲಿ ಸದಸ್ಯರು
ಇಲವಾಲ ಜಿಲ್ಲಾ ಪಂಚಾಯಿತಿ ಆಕಾಂಕ್ಷಿಯಾದ
ಇ.ಪಿ.ರವಿ
ರವರಿಗೆ
ಜನ್ಮದಿನದ ಶುಭಾಶಯಗಳು
ಶುಭಕೋರುವವರು
ದುರ್ಗಾ ಗ್ರೂಪ್ಸ್
VISMAYA ADVERTISERS
8050302424